ಸಂಪುಟ: 04 ಸಂಚಿಕೆ: 92 ಪುಟಗಳು: 08 ಶನಿವಾರ 15 ಜೂನ್ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಬದುಕುವ ಆಸೆ ಇದ್ದರೆ ನಿನ್ನ ಶತ್ರುಗಳ ಕಣ್ಣೆದುರಲ್ಲೇ ಬದುಕು ಅವರು ನಿನ್ನ ಎದುರು ಸುಳಿದಾಗೆಲ್ಲಾ ನಿನ್ನಲ್ಲಿ ಬದುಕುವ ಛಲ ಹೆಚ್ಚುತ್ತದೆ

# ಬಿಎಸ್‌ವೈಗೆ ಬಿಗ್ ರಿಲೀಫ್

1. ಪೋಕ್ಸೋ ಪ್ರಕರಣದಲ್ಲಿ ಬಿಎಸ್ ಯಡಿಯೂರಪ್ಪ ಅವರನ್ನು ಬಂಧಿಸದಂತೆ ಹೈಕೋರ್ಟ್ ಆದೇಶ.
2. ವಾರಂಟ್ ಜಾರಿಯಾಗಿ ಬಂಧನ ಭೀತಿಯಲ್ಲಿದ್ದ ಮಾಜಿ ಸಿಎಂಗೆ ತುಸು ನಿರಾಳ.
3. ಆರೋಗ್ಯ ಸಮಸ್ಯೆಗಳಿರುತ್ತವೆ. ಹೀಗಾಗಿ ಬಂಧಿಸಿ ತನಿಖೆಗೊಳಪಡಿಸುವ ಅಗತ್ಯವಿಲ್ಲ ಎಂದ ಹೈಕೋರ್ಟ್.



- ಬಿಎಸ್ ಯಡಿಯೂರಪ್ಪ ಬಂಧನ ಮಾಡದಂತೆ ಹೈಕೋರ್ಟ್
- ತಡೆ ಜೂನ್ 17 ಕ್ಕೆ ಪ್ರಕರಣದ ವಿಚಾರಣೆಗೆ ಹಾಜರಾಗುವಂತೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಪೋಕ್ಸೋ ಪ್ರಕರಣದಲ್ಲಿ ಬಿಎಸ್ ಯಡಿಯೂರಪ್ಪ ಅವರನ್ನು ಬಂಧಿಸದಂತೆ ಹೈಕೋರ್ಟ್ ಆದೇಶ ಹೊರಡಿಸಿದೆ. ಈ ಮೂಲಕ ಬಂಧನ ಭೀತಿಯಲ್ಲಿದ್ದ ಮಾಜಿ ಸಿಎಂಗೆ ತುಸು ನಿರಾಳವಾಗಿದೆ.

ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಬಿಎಸ್ ಯಡಿಯೂರಪ್ಪ ಅವರ ಮೇಲಿತ್ತು. ಸಿಐಡಿ ಈ ಬಗ್ಗೆ ತನಿಖೆ ನಡೆಸುತ್ತಿತ್ತು. ಹಲವು ಬಾರಿ ನೋಟಿಸ್ ನೀಡಿದರು ಆರೋಪಿ ಹಾಜರಾಗುತ್ತಿಲ್ಲವೆಂದು ಸಿಐಡಿ ಕೋರ್ಟ್ ಮೊರೆ ಹೋಗಿತ್ತು. ಗುರುವಾರ ಬೆಂಗಳೂರು ವಿಶೇಷ ನ್ಯಾಯಾಲಯವು ಬಂಧನಕ್ಕೆ ವಾರೆಂಟ್ ಜಾರಿ ಮಾಡಲು ಆದೇಶಿಸಿತ್ತು. ಆದರೆ, ಶುಕ್ರವಾರ ಹೈಕೋರ್ಟ್‌ನಲ್ಲಿ ಬಂಧನ ಮಾಡದಂತೆ ಬಿಎಸ್ ಯಡಿಯೂರಪ್ಪ ಅರ್ಜಿ ಸಲ್ಲಿಸಿದ್ದರು. ಸದ್ಯ ವಿಚಾರಣೆ ನಡೆಸಿದ ಹೈಕೋರ್ಟ್, ಬಂಧನ ಮಾಡದಂತೆ ಹಾಗೂ ಜೂನ್ 17ಕ್ಕೆ ತಪ್ಪದೆ ತನಿಖೆಗೆ ಹಾಜರಾಗುವಂತೆ ಸೂಚನೆ ನೀಡಿದೆ.

**ಬಂಧನ ಬೇಡ ಎಂದ ಕೋರ್ಟ್:** ಹೈಕೋರ್ಟ್‌ನ ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರ ಏಕಸದಸ್ಯ ಪೀಠವು ಈ ಆದೇಶ ಹೊರಡಿಸಿದೆ. ಮುಂದಿನ ವಿಚಾರಣೆಯವರೆಗೆ ಅವರನ್ನು ಬಂಧಿಸುವಂತಿಲ್ಲ ಎಂದಿದೆ. ಬಿಎಸ್ ಯಡಿಯೂರಪ್ಪ ಅವರು ಜೂನ್ 17ರಂದು ವಿಚಾರಣೆಗೆ ಹಾಜರಾಗುವುದಾಗಿ ಹೇಳಿದ್ದಾರೆ. ಹೀಗಾಗಿ ಅವರನ್ನು ಬಂಧಿಸುವುದು ಬೇಡ ಎಂದು ಉಚ್ಚ ನ್ಯಾಯಾಲಯದ ಪೀಠ ಹೇಳಿದೆ. ಬಿ.ಎಸ್.ಯಡಿಯೂರಪ್ಪ ಅವರ ಪರವಾಗಿ ಹಿರಿಯ ವಕೀಲ ಸಿ.ವಿ. ನಾಗೇಶ್ ಅವರು ವಾದ ಮಂಡಿಸಿದರು. ಪೋಕ್ಸೊ ಕೇಸ್‌ಗೆ ಸಂಬಂಧಿಸಿದಂತೆ ಎರಡು ಅರ್ಜಿಗಳನ್ನು ಸಲ್ಲಿಸಲಾಗಿದೆ. ಒಂದು ಪ್ರಕರಣವನ್ನು ರದ್ದುಗೊಳಿಸುವಂತೆ ಹಾಗೂ ಇನ್ನೊಂದು ನಿರೀಕ್ಷಣಾ ಜಾಮೀನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಲಾಗಿದೆ.

ಪ್ರಕರಣದಲ್ಲಿ ದೂರುದಾರೆಗೆ ಬ್ಲ್ಯಾಕ್‌ಮೇಲ್ ಮಾಡುವುದೇ ಕೆಲಸ ವಾಗಿದೆ. ಪ್ರಕರಣದಲ್ಲಿ ಸಂತ್ರಸ್ತೆಯ ತಾಯಿ ದೂರು ನೀಡಿದ್ದಾರೆ. ಆಕೆಯ ವೃತ್ತಿಯೇ ಬೇರೆಯವರ ವಿರುದ್ಧ ಕೇಸ್ ದಾಖಲಿಸುವುದಾಗಿದೆ. ಇದುವರೆಗೆ ಮಹಿಳೆಯು ಸುಮಾರು 53 ಪ್ರಕರಣಗಳನ್ನು ದಾಖಲಿಸಿದ್ದಾರೆ. ಇಲ್ಲಿ ಭಾವನಾತ್ಮಕ ಅಂಶಗಳಿಗಿಂತ ವಾಸ್ತವಾಂಶಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ಹೇಳಿದರು. ಯಡಿಯೂರಪ್ಪ ಅವರಿಗೆ ವಯಸ್ಸಾಗಿದ್ದು ಸಹಜವಾಗಿಯೇ ಆರೋಗ್ಯ ಸಮಸ್ಯೆಗಳಿರುತ್ತವೆ. ಹೀಗಾಗಿ ಬಂಧಿಸಿ ತನಿಖೆಗೊಳಪಡಿಸುವ ಅಗತ್ಯವಿಲ್ಲ ಎಂದು ಹೈಕೋರ್ಟ್ ತಿಳಿಸಿದೆ.

**ರಾಜಕೀಯ ಷಡ್ಯಂತ್ರ ಎಂದ ಪುತ್ರ;** ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣದ ಬಗ್ಗೆ ಮೊದಲ ಬಾರಿಗೆ ಮಾತನಾಡಿರುವ ಸಂಸದ ಬಿ.ವೈ.ರಾಘವೇಂದ್ರ ಇದೊಂದು ರಾಜಕೀಯ ಷಡ್ಯಂತ್ರ ಎಂದು ಆಪಾದಿಸಿದ್ದಾರೆ.

ಏನೂ ಪುರಾವೆ ಇಲ್ಲದ ಪ್ರಕರಣದಲ್ಲಿ ಈ ರೀತಿಯ ಬೆಳವಣಿಗೆಯಾಗಿರುವುದು ಆಶ್ಚರ್ಯ ತಂದಿದೆ. ಬಿ ರಿಪೋರ್ಟ್ ಹಾಕಬಹುದಾದ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿ ರಾಜಕಾರಣ ಮಾಡಲಾಗುತ್ತಿದೆ. ಎಐಸಿಸಿ ನಾಯಕ ರಾಹುಲ್ ಗಾಂಧಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಮೇಲಿನ ಪ್ರಕರಣಗಳು ಮತ್ತು ವಾಲ್ಮೀಕಿ ನಿಗಮದ ಭ್ರಷ್ಟಾಚಾರವನ್ನು ಜನರ ಮನಸ್ಸಿನಿಂದ ಮರೆಮಾಚಿಸುವ ಸಲುವಾಗಿ ಈ ಘಟನೆಯನ್ನು ಮುನ್ನೆಲೆಗೆ ತಂದಿದ್ದಾರೆ ಎಂದು ಆಪಾದಿಸಿದರು.

ಈ ಹಿಂದೆ ಸಹ ನಮ್ಮ ಕುಟುಂಬವನ್ನು ವಾಲಿಬಾಲ್, ಫುಟ್ಬಾಲ್ ರೀತಿ ಬಳಸಿಕೊಳ್ಳುವ ಪ್ರಯತ್ನ ನಡೆದಿತ್ತು. ಯಡಿಯೂರಪ್ಪ ಹಾಗೂ ಕುಟುಂಬದವರ ಮನಸ್ಥಿತಿ ಕುಗ್ಗಿಸಲು ರಾಜಕಾರಣ ಮಾಡಲಾಗುತ್ತಿದೆ. ಹಿಂದಿನ ಎಲ್ಲಾ ಪ್ರಕರಣಗಳಂತೆ ಇಲ್ಲೂ ನಮಗೆ ನ್ಯಾಯ ಸಿಗುತ್ತದೆ ಎಂದರು.

## ದ್ವೇಷದ ರಾಜಕಾರಣಕ್ಕೆ ಬೆಲೆ ತೆರಬೇಕಾಗುತ್ತದೆ...



ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದ ಹಿಂದೆ ಬಹಳ ದೊಡ್ಡ ರಾಜಕೀಯ ಷಡ್ಯಂತ್ರ ಇದೆ. ಕಾಂಗ್ರೆಸ್ ಸರ್ಕಾರ ಈಗ ಇಕ್ಕಟ್ಟಿನಲ್ಲಿದೆ. ಸಚಿವ ನಾಗೇಂದ್ರ ಅವರು ಹಗರಣದ ಆರೋಪದ ಕಾರಣದಿಂದ ರಾಜೀನಾಮೆ ನೀಡಿದ್ದಾರೆ. ಇಂತಹ ತಪ್ಪುಗಳನ್ನು ಮುಚ್ಚಿಕೊಳ್ಳಲು ದೊಡ್ಡ ನಾಯಕರ ವಿರುದ್ಧ ಪ್ರಕರಣ ದಾಖಲಿಸುವ ಕ್ರಮಕ್ಕೆ ಕಾಂಗ್ರೆಸ್ ಮುಂದಾಗಿದೆ. ಯಡಿಯೂರಪ್ಪ ವಿರುದ್ಧ ಈಗ ದಾಖಲಾಗಿರುವ ಪೋಕ್ಸೊ ಎರಡು ತಿಂಗಳ ಹಿಂದಿನ ಪ್ರಕರಣ. ಆಗ ಸ್ವತಃ ಗೃಹಸಚಿವರೇ ಈ ದೂರಿಗೆ ಅರ್ಥವಿಲ್ಲ ಎಂದು ಹೇಳಿದ್ದರು. ಆದರೆ ಈಗ ಎರಡು ದಿನಗಳಿಂದ ಇದಕ್ಕೆ ಬಹಳ ತೀವ್ರವಾದ ಮಹತ್ವ ನೀಡಿರುವುದು ರಾಜಕೀಯ ದ್ವೇಷದ ಸಂಶಯಕ್ಕೆ ಕಾರಣವಾಗಿದೆ. ಬಿಜೆಪಿಯವರು ರಾಹುಲ್ ಗಾಂಧಿ, ಸಿದ್ದರಾಮಯ್ಯ ಹಾಗೂ ಡಿ ಕೆ ಶಿವಕುಮಾರ ವಿರುದ್ಧ ದೂರು ದಾಖಲು ಮಾಡಿದ್ದರು. ಅದಕ್ಕೆ ಅನುಗುಣವಾಗಿ ಅವರು ನ್ಯಾಯಾಲಯಕ್ಕೆ ವಿಚಾರಣೆಗೆ ಹಾಜರಾಗಿದ್ದರು. ಆದರೆ ವಿಚಾರಣೆಗೆ ಹಾಜರಾಗಿ ಎರಡು ದಿನಗಳ ನಂತರ ಯಡಿಯೂರಪ್ಪ ವಿರುದ್ಧದ ಪ್ರಕರಣಕ್ಕೆ ತೀವ್ರತೆ ಕೊಟ್ಟಿರುವದು ಸಂಶಯಕ್ಕೆ ಕಾರಣವಾಗಿದೆ. ಈ ರೀತಿಯ ದ್ವೇಷದ ರಾಜಕಾರಣ ಮಾಡುವುದನ್ನು ಕಾಂಗ್ರೆಸ್ ಬಿಡಬೇಕು. ಇಲ್ಲದಿದ್ದರೆ ಮುಂದೆ ಇದಕ್ಕೆ ಬೆಲೆ ತೆರಬೇಕಾಗುತ್ತದೆ ಎಂದು ಜಗದೀಶ್ ಶೆಟ್ಟರ್ ಎಚ್ಚರಿಕೆ ನೀಡಿದರು.

## ಬಿಎಸ್‌ವೈ ವಿರುದ್ಧ ಸುಳ್ಳು ದೂರು

ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತನ್ನ ರಾಜಕೀಯಕ್ಕೆ ಬಳಸಿಕೊಂಡಿದೆ. ಈ ಕೇಸ್ ಮೂರು ತಿಂಗಳು ಇಲ್ಲದ್ದು ಈಗ ಹೇಗೆ ಮತ್ತೆ ಸುದ್ದಿಯಾಗಿದೆ. ಈ ಪ್ರಕರಣದಲ್ಲಿ ಏಕಾಏಕಿ ಪರಕಾಯ ಪ್ರವೇಶ ಮಾಡಿ ಕೇಸ್‌ಗೆ ಜೀವ ಕೊಟ್ಟವರು ಯಾರು?ಎಂದು ಗೊತ್ತಾಗಬೇಕು. ಪರಮೇಶ್ವರ್ ಅಂದಿನ ಹೇಳಿಕೆ ದೂರುದಾರರ ವ್ಯಕ್ತಿತ್ವ ಅನಾವರಣಗೊಳಿಸುವಂತಿತ್ತು. ಈಗ ಅಗತ್ಯ ಬಿದ್ದರೆ ಬಂಧಿಸುತ್ತೇವೆ ಅಂತಾರೆ. ಇದಕ್ಕೆ ಲೋಕಸಭಾ ಚುನಾವಣೆ ಸೋಲು ಇದಕ್ಕೆ ಕಾರಣವಾಯ್ತಾ? ವಾಲ್ಮೀಕಿ ಹಗರಣ ಕೈಗೆತ್ತಿಕೊಂಡು ಸಚಿವರ ರಾಜೀನಾಮೆ ಆಗಿದ್ದೇ ಕಾರಣವಾಯ್ತಾ? ಎಂದು ಸಿಟಿ ರವಿ ಆಕ್ರೋಶ ಹೊರಹಾಕಿದ್ದಾರೆ.



ರಾಜ್ಯ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ. ಯಡಿಯೂರಪ್ಪ ಅವರ ಇಷ್ಟು ವರ್ಷದ ರಾಜಕೀಯ ಜರ್ನಿಯಲ್ಲಿ ಈ ರೀತಿಯಾದ ಆರೋಪಗಳು ಕೇಳಿ ಬಂದಿರಲಿಲ್ಲ. ಇದು ರಾಜ್ಯ ಸರ್ಕಾರದ ಷಡ್ಯಂತ್ರ ಎಂದಿದ್ದಾರೆ. ಈ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರದ ಪಾತ್ರವೇನು..? ಎಂಬುದು ನನಗೆ ಗೊತ್ತಿಲ್ಲ? ಕಾಂಗ್ರೆಸ್ ಸರ್ಕಾರ ಎಲ್ಲರ ಮೇಲೆ ಕೇಸ್ ಹಾಕಿಸುತ್ತಿದೆ

**-ಶೋಭಾ ಕರಂದ್ಲಾಜೆ, ಕೇಂದ್ರ ಸಚಿವೆ**

## ವಾರಂಟ್ ಜಾರಿಯಾಗಿದೆ; ಬೇಗ ಬಂದ್ರೆ ಒಳ್ಳೆಯದು



ಬಿ.ಎಸ್.ಯಡಿಯೂರಪ್ಪ ವಿರುದ್ಧ ವಾರಂಟ್ ಜಾರಿಯಾಗಿದೆ. ಹಾಗಾಗಿ ಅವರು ಬೇಗ ಬಂದ್ರೆ ಒಳ್ಳೆಯದು ಯಡಿಯೂರಪ್ಪ ದೆಹಲಿಯಲ್ಲಿದ್ದಾರೆ ಎನ್ನುತ್ತಿದ್ದಾರೆ. ಸೋಮವಾರ ಬರೋದಾಗಿ ಅವರು ಹೇಳಿದ್ದಾರೆ. ಯಡಿಯೂರಪ್ಪ ಆದಷ್ಟು ಬೇಗ ಬಂದ್ರೆ ಒಳ್ಳೆಯದು. ಇಲ್ಲದಿದ್ದರೆ ಪೊಲೀಸರು ಅವರನ್ನು ಕರೆದುಕೊಂಡು ಬರುತ್ತಾರೆ. ಪ್ರಕರಣ ಸಂಬಂಧ ಪೊಲೀಸರು ಯಡಿಯೂರಪ್ಪರಿಂದ ಮಾಹಿತಿ ಪಡೆದುಕೊಳ್ಳುತ್ತಾರೆ. ಬಳಿಕವೇ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

## ಪೋಕ್ಸೋ ಕೇಸ್ ರಾಜಕೀಯ ವೈಷಮ್ಯ

ರಾಜ್ಯ ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಆಡಳಿತ ದುರುಪಯೋಗ ಪಡಿಸಿಕೊಳ್ಳುತ್ತಿದೆ. ಇದು ರಾಜಕೀಯ ವೈಷಮ್ಯ. ಲೋಕಸಭಾ ಚುನಾವಣೆಯಲ್ಲಿ ಸೋಲುಂಡ ಕಾಂಗ್ರೆಸ್ ಅದನ್ನು ಜೀರ್ಣಿಸಿಕೊಳ್ಳಲಾಗದೇ ಆಡಳಿತ ದುರುಪಯೋಗ ಮಾಡಿ ಮನಬಂದಂತೆ ಷಡ್ಯಂತ್ರ ಮಾಡುತ್ತಿದೆ. ದೂರುದಾರ ಮಹಿಳೆ ಮಾನಸಿಕ ಅಸ್ವಸ್ಥಳಾಗಿದ್ದು, ದುರುದ್ದೇಶದಿಂದ ದೂರು ನೀಡಿದ್ದಾಳೆ. ಆಕೆ ಈಗಾಗಲೇ ಐಎಎಸ್, ಐಪಿಎಸ್ ಅಧಿಕಾರಿಗಳು ಸೇರಿದಂತೆ ರಾಜಕಾರಣಿಗಳ ಮೇಲೂ 60ಕ್ಕೂ ಹೆಚ್ಚು ಕೇಸ್‌ಗಳನ್ನು ದಾಖಲಿಸಿದ್ದಾಳೆ ಎಂದು ಖುದ್ದು ಗೃಹಮಂತ್ರಿಗಳೇ ಈ ಹಿಂದೆ ಹೇಳಿದ್ದರು. ಈಗ ನಿಮ್ಮ ದುರಾಡಳಿತ ಮರೆಮಾಚಲು 81 ವರ್ಷದ ಬಿಜೆಪಿ ವರಿಷ್ಠ ಬಿ.ಎಸ್.ಯಡಿಯೂರಪ್ಪ ವಿರುದ್ಧ ಇಲ್ಲಸಲ್ಲದ ಪ್ರಕರಣ ಎಳೆಯುತ್ತಿರುವುದು ರಾಜ ಕೀಯ ವೈಷಮ್ಯವಷ್ಟೇ. ನಿಮ್ಮ ಈ ದುರ್ಬುದ್ಧಿಗೆ ನೀವು ತಕ್ಕ ಪಾಠ ಕಲಿಯಲಿದ್ದೀರಿ ಎಂದು ಪ್ರಹ್ಲಾದ್ ಜೋಶಿ ಎಚ್ಚರಿಸಿದ್ದಾರೆ.

## ದರ್ಶನ್ ಕಣಕ್ಕಿಳಿಸಲು ಪ್ಲಾನ್ ಮಾಡಿದ್ದ ಡಿಕೆ ಬ್ರದರ್ಸ್: ಸಿಪಿವೈ

• ಉದಯವಾಹಿನಿ, ಬೆಂಗಳೂರು

ಉಪಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಅಚ್ಚರಿ ಅಭ್ಯರ್ಥಿ ಹಾಕುತ್ತೇವೆ ಎಂದು ಡಿ.ಕೆ.ಸುರೇಶ್ ಹೇಳಿದ್ದರು. ಆದರೆ ಆ ಅಚ್ಚರಿ ಅಭ್ಯರ್ಥಿ ಈಗ ಜೈಲುಪಾಲಾಗಿದ್ದಾರೆ ಎಂದು ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಈ ಒಂದು ಹೇಳಿಕೆ ನೋಡಿದರೆ ದರ್ಶನ್ ಅವರೇ ಚನ್ನಪಟ್ಟಣ ಕ್ಷೇತ್ರದ ಅಭ್ಯರ್ಥಿಯಾಗಿದ್ದಾರೆ ಎಂಬ ಅನುಮಾನಗಳು ಈಗ ದಟ್ಟವಾಗಿವೆ. ಹೌದು ಈ ಹಿಂದೆ ಮಾಜಿ ಸಂಸದ ಡಿಕೆ ಸುರೇಶ ರವರು ಚನ್ನಪಟ್ಟಣ ಕ್ಷೇತ್ರದಿಂದ ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಿಳಿಸುತ್ತೇವೆ ಎಂದು ಸಭೆಯೊಂದರಲ್ಲಿ ಹೇಳಿಕೆ ನೀಡಿದರು ಒಂದು ಹೇಳಿಕೆಗೆ ಸಿಪಿ ಯೋಗೇಶ್ವರ ಸ್ಫೋಟಕ ಹೇಳಿಕೆ ನೀಡಿದ್ದು ಆ ಒಂದು ಅಚ್ಚರಿಯ ಅಭ್ಯರ್ಥಿ ಇದೀಗ ಜೈಲು ಪಾಲಾಗಿದ್ದಾರೆ ಎಂದು ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

## ದರ್ಶನ್ ಎಲ್ಲಾ ಸಿನಿಮಾ ಬ್ಯಾನ್ ಮಾಡಿ ರೇಣುಕಾಚಾರ್ಯ ಆಗ್ರಹ

• ಉದಯವಾಹಿನಿ,ದಾವಣಗೆರೆ

ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಅವರ ಹತ್ಯೆಗೆ ನ್ಯಾಯ ದೊರೆಯಬೇಕು ಅಂತ ಆದ್ರೇ, ಅದು ನಟ ದರ್ಶನ್ ಕನ್ನಡ ಚಿತ್ರರಂಗಳನ್ನು ಬ್ಯಾನ್ ಮಾಡಿದಾಗ ಮಾತ್ರವೇ ಆಗಿದೆ. ಅಲ್ಲದೇ ನಟ ದರ್ಶನ್ ಅವರನ್ನು ಸ್ಯಾಂಡಲ್ ವುಡ್ ನಿಂದ ನಿಷೇಧ ಮಾಡಬೇಕು ಎಂಬುದಾಗಿ ಮಾಜಿ ಶಾಸಕ ಎಂ.ಪಿ ರೇಣುಕಾಚಾರ್ಯ ಆಗ್ರಹಿಸಿದ್ದಾರೆ. ನಗರದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು, ಹತ್ಯೆಗೀಡಾದಂತ ದರ್ಶನ್ ಅವರ ಕುಟುಂಬಕ್ಕೆ ಒಂದು ಕೋಟಿ ಪರಿಹಾರ ನೀಡಬೇಕು. ಈ ನೆಲದ ಕಾನೂನಿಡಿ ಆರೋಪಿಯಾಗಿರುವಂತ ನಟ ದರ್ಶನ್ ಗೆ ಶಿಕ್ಷೆಯಾಗಬೇಕು ಎಂದರು. ನಟ ದರ್ಶನ್ ಕಾನೂನು ಕೈಗೆತ್ತಿಕೊಂಡಿದ್ದು ತಪ್ಪು. ಸಿಟ್ಟು ಬಂದಿದ್ದರೇ ಎರಡು ಹೊಡೆದಿದ್ದರೇ ಆಗಿತ್ತು. ಅದರ ಬದಲಿಗೆ ಹೀಗೆ ಹತ್ಯೆ ಮಾಡಿದ್ದು ಕ್ರೂರತನವಾಗಿದೆ. ಇಂತಹ ನಟ ದರ್ಶನ್ ತಪ್ಪು ಮಾಡಿದ್ರೇ ಸೂಕ್ತ ಕಾನೂನು ಕ್ರಮ ಆಗಲಿ ಎಂದರು. ಇದೇ ಸಂದರ್ಭದಲ್ಲಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಕೇಸ್ ಬಗ್ಗೆ ಮಾತನಾಡಿದಂತ ಅವರು, ಲೋಕಸಭಾ ಚುನಾವಣೆಯಲ್ಲಿ ಸೋತ ಹತಾಶೆಯಿಂದ ಈ ರೀತಿ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ದೂರು ನೀಡಿದ ಆಕೆಯ ಸಹೋದರ ಅವರ ಜೊತೆ ಇರಲಿಲ್ಲ. ಆದರೆ ಕಾಂಗ್ರೆಸ್ ನಾಯಕರು ಆಕೆಯ ಸಹೋದರನಿಗೆ ಅಮಿಷ ಒಡ್ಡಿ ದೂರು ದಾಖಲು ಮಾಡಿಸಿದ್ದಾರೆ. ಯಡಿಯೂರಪ್ಪನವರು ತಲೆಮರೆಸಿಕೊಂಡಿಲ್ಲ. ಜೂನ್.17 ಕ್ಕೆ ಸಿಐಡಿ ಮುಂದೆ ಹಾಜರಾಗುತ್ತಾರೆ ಎಂದು ಹೇಳಿದರು.

## ನಾವು ಕರ್ನಾಟಕದಲ್ಲಿದ್ದೇವೆಯೇ ಹೊರತು ಜಮ್ಮು, ಕಾಶ್ಮೀರದಲ್ಲಿಲ್ಲ

• ಉದಯವಾಹಿನಿ, ಬೆಂಗಳೂರು

ಚಿತ್ರನಟ ದರ್ಶನ್ ಪೊಲೀಸರಿಗೆ ದೂರು ನೀಡಿ ರೇಣುಕಾಸ್ವಾಮಿಗೆ ತಿಳಿ ಹೇಳಿಸಬಹುದಿತ್ತು. ಅದು ಬಿಟ್ಟು ಕಾನೂನು ಕೈಗೆ ತೆಗೆದುಕೊಂಡು ಕೊಂದಿದ್ದರೆ ಅದು ದೊಡ್ಡ ತಪ್ಪು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾನೂನಿಗಿಂತ ಯಾರೂ ದೊಡ್ಡವರಲ್ಲ. ಈ ಘಟನೆಯನ್ನು ನಾನು ಖಂಡಿಸುತ್ತೇನೆ. ಹಾಗೆಯೇ ಪೊಲೀಸರು ಸೂಕ್ತವಾಗಿ ತನಿಖೆ ಮಾಡಬೇಕೆಂದು ಆಗ್ರಹಿಸುತ್ತೇನೆ ಎಂದರು. ರಾಜ್ಯದಲ್ಲಿ ಅಪರಾಧ ಚಟುವಟಿಕೆ ಹೆಚ್ಚಿದೆ. ಚನ್ನಗಿರಿಯಲ್ಲಿ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಲಾಗಿದೆ. ಪೊಲೀಸರಿಗೆ ಕಪಾಳ ಮೋಕ್ಷವಾಗಿದೆ. ಕಾನೂನು ಪೊಲೀಸರ ಹಿಡಿತದಲ್ಲೇ ಇಲ್ಲ. ಆದ್ದರಿಂದ ಪೊಲೀಸ್ ಠಾಣೆಗೆ ಶಾಮಿಯಾನ ಹಾಕಿ ಮುಚ್ಚುಮರೆ ಮಾಡುತ್ತಿದ್ದಾರೆ.

## ನಾನು ಒಳ್ಳೆಯವರಿಗೆ ಮಾತ್ರ ಕಾಣುವುದು, ವಿರೋಧಿಗಳಿಗಲ್ಲ

• ಉದಯವಾಹಿನಿ, ಮಂಗಳೂರು

ಕ್ಷೇತ್ರದಲ್ಲಿ ಸರ್ವಧರ್ಮದ ಜನರು ಸೌಹಾರ್ದದಿಂದ ವಾಸವಾಗಿದ್ದಾರೆ. ಕೆಲವು ಯುವಕರಿಂದಾಗಿ ಕ್ಷೇತ್ರಕ್ಕೆ ಕೆಟ್ಟ ಹೆಸರು ಬಂದಿದೆ. ಬೋಳಿಯಾರ್ ನಡೆದ ಘಟನೆಯ ಬಳಿಕ ಸ್ಥಳೀಯರೆ ಮುಂದೆ ನಿಂತು ಅಲ್ಲಿ ಸೌಹಾರ್ದ ನೆಲೆಸುವಂತೆ ಮಾಡಿದ್ದಾರೆ. ಹೊರಗಿನವರು ಅಲ್ಲಿಗೆ ಹೋಗಿ ಶಾಂತಿ ಕೆಡಿಸುವ ಕೆಲಸ ಮಾಡುವುದು ಬೇಡ ಎಂದು ಕ್ಷೇತ್ರದ ಶಾಸಕ, ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕಾರಣ ಮಾಡದೆ ಎಲ್ಲರೂ ನೆಮ್ಮದಿಯಿಂದ ಇರಲು ಅವಕಾಶ ಮಾಡಿಕೊಡಬೇಕು. ಕ್ಷೇತ್ರದ ಶೇ.99ರಷ್ಟು ಒಳ್ಳೆಯವರನ್ನು ನೋಡುವ ಜವಾಬ್ದಾರಿ ನನ್ನದು. ಉಳಿದ ಶೇ.1ರಷ್ಟು ಸಮಸ್ಯೆ ಸೃಷ್ಟಿಸುವವರನ್ನು ಪೊಲೀಸರು ನೋಡಿಕೊಳ್ಳುತ್ತಾರೆ. ಆಸ್ಪತ್ರೆಯಲ್ಲಿದ್ದವರು ಒಳ್ಳೆಯವರಾಗಿದ್ದರೆ ಹೋಗಿ ನೋಡುತ್ತಿದೆ.

## ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಹಸಿರೀಕರಣ ಕಾರ್ಯಕ್ರಮಕ್ಕೆ ಡಿಸಿಎಂ ಚಾಲನೆ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯನ್ನು ಮತ್ತಷ್ಟು ಹಸಿರಾಗಿಸೋ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಕ್ರಮವಹಿಸಿದೆ. ಇದರ ಅಂಗವಾಗಿ ಇಂದು ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಹಸಿರೀಕರಣ ಕಾರ್ಯಕ್ರಮಕ್ಕೆ ಡಿಸಿಎಂ ಡಿ.ಕೆ ಶಿವಕುಮಾರ್ ಚಾಲನೆ ನೀಡಿದರು.

ಇಂದು ವಿಶ್ವ ಪರಿಸರ ದಿನಾಚರಣೆ-2024ರ ಅಂಗವಾಗಿ ಕಬ್ಬನ್ ಪಾರ್ಕ್ ನ ಜವಹಾರ್ ಬಾಲ ಭವನದಲ್ಲಿ ಹಮ್ಮಿಕೊಂಡಿದ್ದ ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಹಸಿರೀಕರಣ ಕಾರ್ಯಕ್ರಮಕ್ಕೆ ಉಪ ಮುಖ್ಯಮಂತ್ರಿ ಹಾಗೂ ನಗರಾಭಿವೃದ್ಧಿ ಸಚಿವರಾದ ಡಿ.ಕೆ ಶಿವಕುಮಾರ್ ರವರು ಚಾಲನೆ ನೀಡಿದರು.

ಈ ವೇಳೆ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ ಹರ್ಷದ್, ಆಡಳಿತಗಾರರಾದ ಉಮಾಶಂಕರ್, ಮುಖ್ಯ ಆಯುಕ್ತರಾದ ತುಷಾರ್



ಗಿರಿ ನಾಥ್, ಅರಣ್ಯ, ಪರಿಸರ, ಹವಾಮಾನ ವೈಪರೀತ್ಯ ನಿರ್ವಹಣೆಯ ವಿಶೇಷ ಆಯುಕ್ತರಾದ ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಕರೀಗೌಡ, ವಿನೋತ್ ಪ್ರಿಯಾ, ಸ್ನೇಹಲ್, ದೀಪಕ್, ರಮ್ಯಾ, ಉಪ ಮುಖ್ಯಮಂತ್ರಿಗಳ ಕಾರ್ಯದರ್ಶಿಯಾದ ರಾಜೇಂದ್ರ ಚೋಳನ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯದ ಜನ ಕಾಂಗ್ರೆಸ್‌ಗೆ ಸರಿಯಾದ ಉತ್ತರ ಕೊಟ್ಟಿದ್ದಾರೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಹೆಚ್.ಡಿ. ಕುಮಾರಸ್ವಾಮಿ ಅವರು ಮೊದಲ ಬಾರಿಗೆ ಇಂದು ಬೆಂಗಳೂರಿಗೆ ಆಗಮಿಸಿದ್ದು, ಭರ್ಜರಿ ರೋಡ್ ಶೋ ನಡೆಸಿದ್ದಾರೆ. ಈ ವೇಳೆ ಮಾತನಾಡಿದ ಹೆಚ್ ಡಿಕೆ, ಕರ್ನಾಟಕದ ಜನರು ಕಾಂಗ್ರೆಸ್‌ಗೆ ತಕ್ಕ ಉತ್ತರ ನೀಡಿದೆ, ನಮ್ಮ ಜನರೇ ನನ್ನ ಶಕ್ತಿ ಹೀಗಾಗಿ ರಾಜ್ಯಕ್ಕೆ ಮಾತ್ರವಲ್ಲದೇ ಇಡೀ ದೇಶದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು. ಇಂದು ಸ್ವಯಂಪ್ರೇರಣೆಯಿಂದ ಜನರು ನನ್ನನ್ನು ಪ್ರೀತಿಯಿಂದ ಬರಮಾಡಿಕೊಳ್ಳಲು ಬಂದಿದ್ದಾರೆ, ಪ್ರಧಾನಿ ಮೋದಿ ಸಂಪುಟದಲ್ಲಿ ಕೆಲಸ ಮಾಡುವ ಅವಕಾಶ ಸಿಕ್ಕಿದೆ. ಕೇಂದ್ರ ಸಚಿವನಾದ ಬಳಿಕ ನನ್ನ ಕರ್ಮಭೂಮಿಗೆ ಬಂದಿದ್ದೇನೆ. ಈ ವೇಳೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೆಚ್ ಡಿಕೆ ಹೇಳಿದರು.



ಜನರು ಕಾಂಗ್ರೆಸ್‌ಗೆ ತಕ್ಕ ಉತ್ತರ

ಜೆಡಿಎಸ್ ಬಗ್ಗೆ ಹಲವಾರು ಜನ ಮಾತನಾಡಿದ್ದಾರೆ, ನನಗೆ ಅದು ಮುಖ್ಯವಲ್ಲ ನನಗೆ ಬೇಕಾಗಿದ್ದು ರಾಜಕೀಯ ಅಲ್ಲ, ರಾಜ್ಯದ ಜನರ ಸಮಸ್ಯೆಗೆ ಪರಿಹಾರ. ನರೇಂದ್ರ ಮೋದಿ ನನಗೆ ಎರಡು ದೊಡ್ಡ ಖಾತೆಗಳನ್ನು ಕೊಟ್ಟಿದ್ದಾರೆ. ಅದನ್ನು ಸರಿಯಾಗಿ ನಿಭಾಯಿಸುತ್ತೇನೆ ಎಂದು ಭರವಸೆ ನೀಡಿದರು.

### ಎಚ್‌ಡಿಕೆಗೆ ಅದ್ಧೂರಿ ಸ್ವಾಗತ..!

ಕೇಂದ್ರ ಸಚಿವರಾದ ಮೇಲೆ ಮೊದಲ ಬಾರಿಗೆ ರಾಜ್ಯಕ್ಕೆ ಬಂದ ಹೆಚ್ ಡಿ ಕುಮಾರಸ್ವಾಮಿಗೆ ಅದ್ದೂರಿ ಸ್ವಾಗತ ಸಿಕ್ಕಿದೆ. ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರು ಹೆಚ್ಡಿಕೆ ಅದ್ದೂರಿ ಸ್ವಾಗತ ಕೋರಿದರು. ಇಂದು ಮಧ್ಯಾಹ್ನ ಕೆಂಪೇಗೌಡ ಏರ್ ಪೋರ್ಟ್‌ಗೆ ಆಗಮಿಸಿದ ಕುಮಾರಸ್ವಾಮಿ ಅವರನ್ನು ಜೆಡಿಎಸ್‌ನ ಮುಖಂಡರು ಸ್ವಾಗತಿಸಿದರು. ಜೆಪಿ ಭವನದ ಜೆಡಿಎಸ್ ಕಚೇರಿಗೆ ಕುಮಾರಸ್ವಾಮಿ ಆಗಮಿಸಿದರು. ಹೆಚ್ಡಿಕೆಗೆ ಗೌರವ ಸಮರ್ಪಣೆ ಮಾಡಲಾಯಿತು. ಈ ವೇಳೆ ಜಿ.ಟಿ ದೇವೇಗೌಡ, ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವರು, ಶಾಸಕರು, ಪಕ್ಷದ ಮುಖಂಡರು ಮತ್ತಿತರರಿದ್ದರು.

## ಆಡಳಿತದಲ್ಲಿ ಬಿಗಿ ಹಿಡಿತಕ್ಕೆ ಸಿಎಂ ಪಾಠ; ಸಚಿವರು, ಅಧಿಕಾರಿಗಳಿಗೆ ಚುರುಕು


### ನಮ್ಮ ವ್ಯವಸ್ಥೆ ಜನಸ್ನೇಹಿ, ಜನಪರ ಆಗಬೇಕು. ಮುಖ್ಯವಾಗಿ ವಿಳಂಬ ಆಗುವುದನ್ನು ನಿರ್ಲಕ್ಷ್ಯಿಸಕೂಡದು ಎಂದು ತಾಕೀತು

• ಉದಯವಾಹಿನಿ, ಬೆಂಗಳೂರು

ಮುಖ್ಯವಾಗಿ ಗ್ಯಾರಂಟಿ ಯೋಜನೆ ಅನುಷ್ಠಾನ ಹಾಗೂ ಕೇಂದ್ರ ಸರ್ಕಾರದಿಂದ ತೆರಿಗೆ ಅನ್ಯಾಯ ಎಂದು ಮನವರಿಕೆ ಮಾಡಿಕೊಡಲು ಅಭಿಯಾನ ನಡೆಸಿದರೂ ಜನ ಓಗೊಟ್ಟಿಲ್ಲ ಎಂಬುದು ಲೋಕಸಭೆ ಚುನಾವಣೆಯ ಫಲಿತಾಂಶದಲ್ಲಿ ಪ್ರತಿಫಲನವಾಗಿದೆ. ಜತೆಗೆ ಮಹರ್ಷಿ ವಾಲ್ಮೀಕಿ ಹಾಗೂ ಅಂಬೇಡ್ಕರ್ ನಿಗಮದಲ್ಲಿನ ಹಗರಣವು ಸರ್ಕಾರದ ಇಮೇಜ್‌ಗೆ ಧಕ್ಕೆ ತಂದಿರುವುದರಿಂದ ಸಿಎಂ ಸಹಜವಾಗಿ ತಮ್ಮ ಆಲೋಚನಾ ಲಹರಿಯನ್ನು ಆಡಳಿತ ವ್ಯವಸ್ಥೆ ಬಿಗಿಗೊಳಿಸಲು ಸಚಿವರ ಜವಾಬ್ದಾರಿ ಬಗ್ಗೆ ಎಚ್ಚರಿಸಿದ್ದಾರೆ.

**ವಿಳಂಬವನ್ನು ನಿರ್ಲಕ್ಷಿಸಬೇಡಿ:** ವಾಲ್ಮೀಕಿ, ಅಂಬೇಡ್ಕರ್ ನಿಗಮದಲ್ಲಿನ ಬೆಳವಣಿಗೆ ಉದಾಹರಿಸುತ್ತಲೇ ಸಚಿವರು ಹಾಗೂ ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ಹಾಗೂ ಮಾರ್ಗದರ್ಶನ ಮಾಡಿದ ಸಿಎಂ, ಆಡಳಿತವನ್ನು ಇನ್ನಷ್ಟು ಸುಧಾರಿಸುವಂತೆ ಮಾಡಲು ನೀವುಗಳು ಬಿಗುವಾಗಬೇಕು. ನಮ್ಮ ವ್ಯವಸ್ಥೆ ಜನಸ್ನೇಹಿ, ಜನಪರ ಆಗಬೇಕು. ಮುಖ್ಯವಾಗಿ ವಿಳಂಬ ಆಗುವುದನ್ನು ನಿರ್ಲಕ್ಷ್ಯಿಸಕೂಡದು ಎಂದು ತಾಕೀತು ಮಾಡಿದರು.

**ಹಗರಣದ ಬಗ್ಗೆ ವ್ಯಥೆ:** ಮಹರ್ಷಿ ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಗರಣವನ್ನು ಗಂಭೀರವಾಗಿ ಪರಿಗಣಿಸಿದ್ದಾಗಿ ಸಿಎಂ ಸಭೆಯಲ್ಲಿ ತಿಳಿಸಿದ್ದಾರೆ ಎಂದು ಮೂಲಗಳು ಹೇಳಿವೆ.



ನಿಗಮದ ಹಣವನ್ನು ಪೂರ್ಣ ಪ್ರಮಾಣದಲ್ಲಿ ವಾಪಸ್

ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೂ ಇಲ್ಲ. ಅಲ್ಲದೇ ನಿಗಮದ ಹಣವನ್ನು ಪೂರ್ಣ ಪ್ರಮಾಣದಲ್ಲಿ ವಾಪಸ್ ತರಿಸುವ ಕೆಲಸ ಮಾಡಲಾಗುತ್ತದೆ ಎಂದು ಸಿಎಂ ವಾಗ್ದಾನ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಹಾಗೆಯೇ, ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ರಾಜೀನಾಮೆ ಬಳಿಕ ಸಿಎಂ ಬಳಿ ಇರುವ ಪರಿಶಿಷ್ಟ ಪಂಗಡ ಕಲ್ಯಾಣ ಖಾತೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಿಗೆ ವಹಿಸುವ ಬಗ್ಗೆ ಸಭೆಯಲ್ಲಿ ಚರ್ಚೆಯಾಗಿದೆ. ತಂಗಡಗಿ ಖಾತೆ ಬೇಡವೆಂದು ನಿವೇದಿಸಿಕೊಂಡಿದ್ದಾರೆ.

ಜುಲೈನಲ್ಲಿ ಅಧಿವೇಶನ ಮಳೆಗಾಲದ ಅಧಿವೇಶನ ನಡೆಸಲು ಸರ್ಕಾರ ಸಜ್ಜಾಗಿದ್ದು, ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಯಿತಾದರೂ ಯಾವುದೇ ನಿರ್ಧಾರಕ್ಕೆ ಬಂದಿಲ್ಲ. ಮುಂದಿನ ಸಂಪುಟ ಸಭೆಯಲ್ಲಿ ದಿನಾಂಕವನ್ನು ಪ್ರಸ್ತಾಪಿಸುವ ಸಾಧ್ಯತೆ ಇದೆ. ಮಾಹಿತಿಗಳ ಪ್ರಕಾರ ಜುಲೈ 8 ಅಥವಾ 15ರಿಂದ 10 ದಿನ ಕಲಾಪ ನಡೆಸಲು ಉದ್ದೇಶಿಸಲಾಗಿದೆ. ಟೆಂಡರ್ ಪ್ರಕ್ರಿಯೆ ನಿಧಾನಕ್ಕೆ ಗರಂ ಕಳೆದ ಸಚಿವ ಸಂಪುಟ ಸಭೆಯಲ್ಲಿ 147 ಟೆಂಡರ್‌ಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿತ್ತು. ಈ ಪೈಕಿ ಎಷ್ಟು ಟೆಂಡರ್ ಕರೆದು ಕೆಲಸ ಪ್ರಾರಂಭವಾಗಿದೆ ಎಂದು ಅವಲೋಕಿಸಲಾಯಿತು. ಆಡಾಳಿತಾತ್ಮಕ ಮಂಜೂರಾತಿ ನೀಡಿರುವ ಎಲ್ಲಾ ಟೆಂಡರ್‌ಗಳಿಗೆ ಮುಂದಿನ ಒಂದು ತಿಂಗಳೊಳಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ಮುಖ್ಯಮಂತ್ರಿ ಸೂಚಿಸಿದರು.

### ಎಲ್ಲಾ ಟೆಂಡರ್‌ಗಳಿಗೆ ಮುಂದಿನ ತಿಂಗಳೊಳಗೆ ಅಗತ್ಯ ಕ್ರಮಗಳು

ಉಳಿದ ಸಚಿವರೂ ನೀವೇ ಇಟ್ಟುಕೊಳ್ಳಿ ಎಂದು ಸಿಎಂಗೆ ಸಲಹೆ ನೀಡಿದರು.

ಉದ್ಯಮಗಳು ಹಾಗೂ ಬಂಡವಾಳ ಆಕರ್ಷಣೆಗಾಗಿ ರಾಜ್ಯ ಸರ್ಕಾರದ ಜತೆಗೆ ಜ್ಞಾನ ಹಂಚಿಕೆಯ ಸಹಭಾಗಿತ್ವವನ್ನು ಬೋಸ್ಟನ್ ಸಲಹಾ ಸಮೂಹಕ್ಕೆ ಗುತ್ತಿಗೆ ನೀಡಲಾಗಿದೆ. ಭಾರತದ್ದೇ ಖಾಸಗಿ ಸಂಸ್ಥೆ ಇದಾಗಿದ್ದು, ಸಮಾವೇಶದ ರೂಪರೇಷೆ, ಬಂಡವಾಳ ಆಕರ್ಷಣೆಗೆ ಏನೆಲ್ಲ ವಸ್ತು-ವಿಷಯ ಒಳಗೊಂಡಿರಬೇಕು ಇತ್ಯಾದಿ ವಿಷಯಗಳ ಬಗ್ಗೆ ಸರ್ಕಾರಕ್ಕೆ ಮಾರ್ಗದರ್ಶನ ಮಾಡಲಿದೆ ಎಂದು ಸಚಿವರು ವಿವರಿಸಿದರು. ಫಲಪ್ರದ ಉದ್ದೇಶ ವಾರ್ಷಿಕೋತ್ಸವ ರೀತಿಯಲ್ಲಿ ಹೂಡಿಕೆದಾರರ ಸಮಾವೇಶ ನಡೆಸುವುದು ಅರ್ಥಹೀನ. ಬಿಡುವಿಲ್ಲದ ವೇಳಾಪಟ್ಟಿ, ವಿವಿಧ ರಾಜ್ಯಗಳ ಪೈಪೋಟಿ ಪರಿಣಾಮ ಬಹುತೇಕ ಕಂಪನಿಗಳು, ಪ್ರತಿನಿಧಿಗಳು ಇಲ್ಲವೇ ಕೆಳಹಂತದ ಅಧಿಕಾರಿಗಳನ್ನು ಕಳುಹಿಸಿ ಕೈತೊಳೆದುಕೊಳ್ಳುತ್ತಿವೆ.

ದೇಶ-ವಿದೇಶಗಳಿಗೆ ಹೋಗಿ ಪ್ರತಿಷ್ಠಿತ ಉದ್ಯಮ, ಹೂಡಿಕೆದಾರರಿಗೆ ಕರ್ನಾಟಕದ ಸಾಮರ್ಥ್ಯ ತಿಳಿಸಿ, ಆಹ್ವಾನಿಸುವುದು ಪರಿಣಾಮಕಾರಿಯಾಗುತ್ತದೆ. ಬಹುರಾಷ್ಟ್ರೀಯ ಸೇರಿ ಪ್ರತಿಷ್ಠಿತ ಕಂಪನಿಗಳು, ಹೂಡಿಕೆ ಕ್ಷೇತ್ರದ ದಿಗ್ಗಜರು ಪಾಲ್ಗೊಳ್ಳಲು ಸಾಧ್ಯವಾಗಲಿದ್ದು, ಉದ್ದೇಶ ಸಫಲವಾಗಲಿದೆ ಎಂಬ ಕಾರಣಕ್ಕೆ 2-3 ವರ್ಷಗಳಿಗೊಮ್ಮೆ ಇಂತಹ ಸಮಾವೇಶ ಏರ್ಪಡಿಸಬೇಕು ಎನ್ನುವುದು ಸರ್ಕಾರದ ನಿಲುವು. ಬಿಜೆಪಿ ಸರ್ಕಾರ 2022ರ ನವೆಂಬರ್‌ನಲ್ಲಿ 'ಸಾಹಸೋದಯ' ಪರಿಕಲ್ಪನೆಯಡಿ ಈ ಸಮಾವೇಶ ಏರ್ಪಡಿಸಿತ್ತು. ಇದೀಗ ಎರಡು ವರ್ಷ ಮೂರು ತಿಂಗಳ ನಂತರ ಸಮಾವೇಶ ನಡೆಸಲು ಮುಂದಾಗಿದೆ.

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,189/Gram(24ct) ₹6,590/Gram(22ct) | ಬೆಳ್ಳಿ: ₹90.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ವಿವಿಧ ಪ್ರತಿಭಾಸಕ ರೂಪಿಂದ

ನಿಜಗುಣರ ಪರಮಾರ್ಥ ಗೀತೆಯ ಮಾತು. ನೀನು ಚೈತನ್ಯ, ಸರ್ವರೂಪಿ ಸರ್ವವ್ಯಾಪಿ. ನೀನು ಮಾತ್ರ ನಿಜ, ಬಾಕಿ ಎಲ್ಲ ಕಲ್ಪಿತ. ಈ ಎಲ್ಲ ಕಲ್ಪಿತಗಳು ನಿನ್ನ ನಿಜಸ್ವರೂಪದಲ್ಲಿ ತೋರಿವೆ. ಕಾಡು ಸಾಗರ ನದಿ ಬೆಟ್ಟ ದೇವತೆ ರಾಕ್ಷಸ ಮಾನವ ಪಶು ಪಕ್ಷಿ ಹುಳುಹುಪ್ಪಡಿ ಅದಿದೆಲ್ಲ ಚಿತ್ರ ವಿಚಿತ್ರ ನಿಜದಂತೆ ತೋರುತ್ತಿದೆ. ಆದರೆ ಇದಾವುದೂ ನಿನ್ನ ಹೊರತಲ್ಲ. ಒಂದೇ ಬಂಗಾರದಿಂದ ಆದ ವಿವಿಧ ಆಕಾರದ ಬಗೆ ಬಗೆಯ ಆಭರಣಗಳಂತೆ ಇವೆಲ್ಲ ನಿನ್ನಿಂದಲೇ ರೂಪುಗೊಂಡಿವೆ. ಪ್ರಾಪಂಚಿಕ ಸತ್ಯತ್ವದೃಷ್ಟಿಯಿಂದ ನೋಡಿದರೆ ಉಂಟೆನಿಸುವುದು. ಪಾರಮಾರ್ಥಿಕ ಆಧ್ಯಾತ್ಮಿಕ ದೃಷ್ಟಿಯಿಂದ ಕಂಡಾಗ ಇದೆಲ್ಲ ಇಲ್ಲ ಶೂನ್ಯವೆನಿಸುವುದು. ಒಬ್ಬ ಕೃಷ್ಣ ಯುವತಿಯರಿಗೆ ಮನ್ಮಥನಂತೆ, ಬಡಬಗ್ಗರಿಗೆ ಕಾಮಧೇನುವಿನಂತೆ, ಶತ್ರುಗಳಿಗೆ ಯಮನಂತೆ ಕಂಡಂತೆ ಈ ಲೋಕ ಅವರವರ ತಿಳುವಳಿಕೆಗೆ ತಕ್ಕಂತೆ ವಿಭಿನ್ನ ಕಾಣುವುದು. ತಿಳುವಳಿಕೆಗೆ ತಕ್ಕಂತೆ ಅವರವರ ನಡಾವಳಿಯೂ ವಿಭಿನ್ನ. ಈ ಎಲ್ಲಕ್ಕೂ ಮೂಲ ಮನಸ್ಸು. ಮನಸ್ಸಿನಂತೆ ಜಗತ್ತು, ಮನಸ್ಸಿನಂತೆ ಮಹಾದೇವ!

## ಪೋಕ್ಸೋ ಕೇಸ್‌ನಲ್ಲಿ ಬಿಎಸ್ ಯಡಿಯೂರಪ್ಪಗೆ ಜೈಲಾ ಅಥವಾ ಬೇಲಾ!

■ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ ಬಂಧನ ■ 2,30ಕ್ಕೆ ನ್ಯಾ.ಕೃಷ್ಣ ಎಸ್. ದೀಕ್ಷಿತ್ ಏಕಸದಸ್ಯಪೀಠದ ಮುಂದೆ ವಿಚಾರಣೆ

• **ಉದಯವಾಹಿನಿ, ಬೆಂಗಳೂರು**

ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ ಬಂಧನ ಭೀತಿಯಲ್ಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪಗೆ ಜೈಲಾ ಅಥವಾ ಬೇಲಾ ಎಂಬುದು ಇಂದು ನಿರ್ಧಾರವಾಗಲಿದೆ. ಅವರು ನಿರೀಕ್ಷಣಾ ಜಾಮೀನು ಕೋರಿ ಸಲ್ಲಿಸಿರುವ ಅರ್ಜಿ ಇಂದು ಮಧ್ಯಾಹ್ನ 2,30ಕ್ಕೆ ನ್ಯಾ.ಕೃಷ್ಣ ಎಸ್. ದೀಕ್ಷಿತ್ ಅವರಿದ್ದ ಏಕಸದಸ್ಯ ಪೀಠದ ಮುಂದೆ ವಿಚಾರಣೆಗೆ ಬರಲಿದೆ.


ಹಾಗಾಗಿ ಎಲ್ಲರ ಕಣ್ಣು ಇದೀಗ ನ್ಯಾಯಾಲಯದತ್ತ ನೆಟ್ಟಿದೆ. ಜನಪ್ರತಿನಿಧಿಗಳ ವಿರುದ್ಧದ ವಿಶೇಷ ನ್ಯಾಯಪೀಠದ ಮುಂದೆ ಬಿಎಸ್ ವೈ, ತಮ್ಮ ವಿರುದ್ಧ ಪ್ರಕರಣ ರದ್ದು ಮತ್ತು ನಿರೀಕ್ಷಣಾ ಜಾಮೀನು ಕೋರಿರುವ ಎರಡೂ ಅರ್ಜಿಗಳು ವಿಚಾರಣೆಗೆ ಬರಲಿವೆ. ಬಿಎಸ್ ಯಡಿಯೂರಪ್ಪ ತಮ್ಮ ಅರ್ಜಿಯಲ್ಲಿ ವಿರೋಧ ಪಕ್ಷದ ಕೆಲ ರಾಜಕೀಯ ಮುಖಂಡರು ದೊಡ್ಡಮಟ್ಟದ ಸಂಚು ರೂಪಿಸಿ ಯಾವುದೇ ಸಾಕ್ಷ್ಯಾಧಾರಗಳಿಲ್ಲದಿದ್ದರೂ ತನ್ನ ವಿರುದ್ಧ ಪೋಕ್ಸೋ ಪ್ರಕರಣ ದಾಖಲು ಮಾಡಿ ಘನತೆಗೆ ಧಕ್ಕೆ ತರುವ ಕಾರ್ಯ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಅಲ್ಲದೆ, ಈಗಾಗಲೇ ತನಿಖಾಧಿಕಾರಿಗಳ ಮುಂದೆ ವಿಚಾರಣೆಗೆ ಹಾಜರಾಗಿದ್ದು, ಮತ್ತೆ ವಿಚಾರಣೆಗೆ ಹಾಜರಾಗುವಂತೆ ನೀಡಿದ್ದ ನೋಟಿಸ್ ಒಂದು ದಿನ ಮಾತ್ರ ಅವಕಾಶ ನೀಡಿದ್ದು, ಆದರೆ, ಅರ್ಜಿದಾರರು ಸಭೆಯೊಂದರಲ್ಲಿ ಭಾಗಿಯಾಗಲು ದೆಹಲಿಯಲ್ಲಿ ಉಳಿದಿದ್ದಾರೆ. ಅಲ್ಲದೆ, ಜೂನ್ 12ರ ಬದಲಿಗೆ 17ರಂದು ವಿಚಾರಣೆಗೆ ಹಾಜರಾಗುವುದಾಗಿ ಭರವಸೆ ನಿಡಿದ್ದಾರೆ. ಪ್ರಕರಣ ಸಂಬಂಧ ತನಿಖಾಧಿಕಾರಿಗಳು 2024ರ ಮಾರ್ಚ್ 28ರಂದು ತನಿಖೆಗೆ ಹಾಜರಾಗುವಂತೆ ಸೂಚಿಸಿದ್ದು, ಅದರಂತೆ ಏಪ್ರಿಲ್ 12ರಂದು ತನಿಖೆಗೆ ಹಾಜರಾಗಲಾಗಿದೆ. ಈ ವೇಳೆ ಯಾವುದೇ ಹೇಳಿಕೆಗಳನ್ನು ದಾಖಲಿಸಿಕೊಳ್ಳದ ತನಿಖಾಧಿಕಾರಿಗಳು ಕೇವಲ ಧ್ವನಿ ಮಾದರಿಯನ್ನು ಮಾತ್ರದ ಪಡೆದು ತನಿಖಾಧಿಕಾರಿಗಳು ಕಳುಹಿಸಿದ್ದಾರೆ. ಆದರೆ, ಅರ್ಜಿದಾರರು ವಿಚಾರಣೆಗೆ ಹಾಜರಾಗಿಲ್ಲ ಎಂದು ತಿಳಿಸಿ ಅವರ ವಿರುದ್ಧ ಬಂಧನ ವಾರೆಂಟ್ ಪಡೆಯಲಾಗಿದೆ. ಅರ್ಜಿದಾರರು 81 ವರ್ಷ ವಯಸ್ಸಿನವರಾಗಿದ್ದು, ಹಲವು ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದಾರೆ. ಜತೆಗೆ, ಕಾಲ ಕಾಲಕ್ಕೆ ವೈದ್ಯರ ಭೇಟಿ ಮಾಡುವುದು ಔಷಧಗಳನ್ನು ಪಡೆದುಕೊಳ್ಳಬೇಕಾಗುತ್ತದೆ.

ಅಲ್ಲದೆ, ಅರ್ಜಿದಾರರ ವಿರುದ್ಧ ಮರಣದಂಡನೆಯಂತೆ ಆರೋಪ ಇಲ್ಲ. ಕೇವಲ ಏಳು ವರ್ಷಗಳ ಶಿಕ್ಷೆಯಾಗುವಂತಹ ಆರೋಪವಿದ್ದು, ವಿಚಾರಣಾ ಸಂದರ್ಭದಲ್ಲಿ ಬಂಧನ ಮಾಡುವಂತಿಲ್ಲ ಎಂಬುದಾಗಿ ಸುಪ್ರೀಂಕೋರ್ಟ್ ಹಲವು ಪ್ರಕರಣಗಳಲ್ಲಿ ತಿಳಿಸಿದೆ. ದೂರುದಾರ ಮಹಿಳೆಗೆ ಸಂಬಂಧಿಕರು ಸೇರಿದಂತೆ ಸರ್ಕಾರಿ ಅಧಿಕಾರಿಗಳು ಮತ್ತಿಯರರ ವಿರುದ್ಧ ವಿರುದ್ಧ ವಿನಾ ಕಾರಣ ದೂರು ದಾಖಲಿಸುವುದು ಹವ್ಯಾಸವಾಗಿದೆ. ಅದೇ ರೀತಿಯಲ್ಲಿ ಈ ಪ್ರಕರಣವನ್ನು ದಾಖಲಿಸಲಾಗಿದೆ. ಮತ್ತು ಅರ್ಜಿದಾರ ಯಡಿಯೂರಪ್ಪನವರನ್ನು ಅಪರಾಧ ಕೃತ್ಯದಲ್ಲಿ ತಪ್ಪಾಗಿ ಸಿಲುಕಿಸುವ ಸಲುವಾಗಿ ಸಂಘಟಿತ ಪ್ರಯತ್ನ ನಡೆದಿದೆ.

**ಅರ್ಜಿದಾರರು ತನಿಖೆಗೆ ಸಂಪೂರ್ಣ ಸಹಕಾರ**

**ಜತೆಗೆ, ಅರ್ಜಿದಾರರಿಗೆ ಕಿರುಕುಳ ನೀಡುವ ಉದ್ದೇಶದಿಂದ ಈ ದೂರು ದಾಖಲಾಗಿದೆ. ಅಲ್ಲದೆ, ಘಟನೆ ನಡೆದ ಒಂದೂರವರೆ ತಿಂಗಳ ಬಳಿಕ ದೂರು ದಾಖಲಿಸಲಾಗಿದೆ. ದೂರು ದಾಖಲಿಸುವ ಮುನ್ನ ದೂರುದಾರೆ ಅರ್ಜಿದಾರರ ಮನೆಗೆ ಭೇಟಿ ನೀಡಿದ್ದರೂ, ಮಗಳ ಮೇಲೆ ಲೈಂಗಿಕ ಕಿರುಕುಳದ ಕುರಿತು ಮಾತನಾಡಿಲ್ಲ ಎಂದು ತಿಳಿಸಲಾಗಿದೆ. ಅರ್ಜಿದಾರರು ತನಿಖೆಗೆ ಸಂಪೂರ್ಣ ಸಹಕಾರ ನೀಡಲಿದ್ದಾರೆ. ಈ ನಿಟ್ಟನಲ್ಲಿ ಜಾಮೀನು ಮಂಜೂರು ಮಾಡಬೇಕು ಎಂದು ಕೋರಲಾಗಿದೆ.**



### ಪೋಕ್ಸೋ ಆರೋಪದಲ್ಲಿ ಪ್ರಕರಣ ದಾಖಲೆ

**ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ 2024ರ ಮಾರ್ಚ್ 3 ರಂದು ಅರ್ಜಿದಾರರ ವಿರುದ್ಧ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಆರೋಪದಲ್ಲಿ ಪ್ರಕರಣ ದಾಖಲಿಸಿದ್ದರು. ದೂರನ್ನು ಆಧರಿಸಿ ಎಫ್ಐಆರ್ ದಾಖಲಾಗಿದೆ. ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ದೂರಿನ ಗಂಭೀರತೆ ಪರಿಗಣಿಸಿದ್ದ ಸರ್ಕಾರ ಪ್ರಕರಣವನ್ನು ಸಿಐಡಿಗೆ ವರ್ಗಾವಣೆ ಮಾಡಿತ್ತು. ಇತ್ತೀಚೆಗೆ ಸಿಐಡಿ ಅಧಿಕಾರಿಗಳ ಯಡಿಯೂರಪ್ಪನವರಿಗೆ ನೋಟಿಸ್ ನೀಡಿ ವಿಚಾರಣೆಗೆ ಹಾಜರಾಗಲು ಎರಡನೇ ಬಾರಿ ಸೂಚನೆ ನೀಡಿತ್ತು.**

## ಜೂ.20ರಂದು ರಾಜ್ಯ ಸರ್ಕಾರದ ಮಹತ್ವದ ಸಚಿವ ಸಂಪುಟ ಸಭೆ ನಿಗದಿ

• **ಉದಯವಾಹಿನಿ, ಬೆಂಗಳೂರು**

ಜೂ.20 ರಂದು ರಾಜ್ಯ ಸರ್ಕಾರದ ಮಹತ್ವದ ಸಚಿವ ಸಂಪುಟ ಸಭೆ ನಿಗದಿಯಾಗಿದೆ.ನಿನ್ನೆಯಷ್ಟೇ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆದಿತ್ತು, ಈ ಬೆನ್ನಲ್ಲೇ ಜೂ.20 ರಂದು ಮತ್ತೊಂದು ಸಭೆ ನಿಗದಿಯಾಗಿದೆ. ದಿನಾಂಕ: 20.06.2024, ಗುರುವಾರ ಬೆಳಿಗ್ಗೆ 11:00 ಗಂಟೆಗೆ ಸಚಿವ ಸಂಪುಟದ 2024ನೇ ಸಾಲಿನ 10ನೇ ಸಭೆಯನ್ನು ವಿಧಾನಸೌಧದ ಸಚಿವ ಸಂಪುಟ ಸಭಾಮಂದಿರದಲ್ಲಿ ಕರೆಯಲಾಗಿದೆ.ಸಭೆಯ ಕಾರ್ಯಸೂಚಿಯನ್ನು ಪ್ರತ್ಯೇಕವಾಗಿ ಕಳುಹಿಸಲಾಗುವುದು ಎಂದು ಸರ್ಕಾರದ ಜಂಟಿ ಕಾರ್ಯದರ್ಶಿ ಆರ್.ಚಂದ್ರಶೇಖರ್ ತಿಳಿಸಿದ್ದಾರೆ.

## ಬೆಂಗಳೂರು ರೇವ್ ಪಾರ್ಟಿ ಪ್ರಕರಣ ಜೈಲಿನಿಂದ ನಟಿ ಹೇಮಾ ಬಿಡುಗಡೆ!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ನಡೆದ ರೇವ್ ಪಾರ್ಟಿ ಪ್ರಕರಣದಲ್ಲಿ ಬಂಧಿತರಾಗಿದ್ದ ತೆಲುಗು ನಟಿ ಹೇಮಾ ಅವರಿಗೆ ಜಾಮೀನು ಮಂಜೂರು ಮಾಡಲಾಗಿದ್ದು, 2 ದಿನಗಳ ಬಳಿಕ ಇಂದು ಅವರು ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಬೆಂಗಳೂರಿನಲ್ಲಿ ನಡೆದ ರೇವ್ ಪಾರ್ಟಿ ಪ್ರಕರಣದಲ್ಲಿ ನಟಿ ಹೇಮಾ ಅವರನ್ನು ಪೊಲೀಸರು ಬಂಧಿಸಿದ್ದರು. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಜಿ.ಆರ್. ಫಾರ್ಮ್ ಹೌಸ್‌ನಲ್ಲಿ ನಡೆದಿದ್ದ ರೇವ್ ಪಾರ್ಟಿ ಪ್ರಕರಣದಲ್ಲಿ ಪೊಲೀಸರು ಹೇಮಾ ಅವರನ್ನು ಬಂಧಿಸಿದ್ದರು. ಜೂನ್ 3ರಂದು ಹೇಮಾ ಅವರನ್ನು ಬಂಧಿಸಲಾಗಿತ್ತು. ನಂತರ ಅವರಿಗೆ ಜಾಮೀನು ಮಂಜೂರಾಗಿತ್ತು. ಜಾಮೀನು ಸಿಕ್ಕ 2 ದಿನಗಳ ಬಳಿಕ ಜೈಲಿನಿಂದ ಬಿಡುಗಡೆ ಆಗಿ ತಮ್ಮ ಸಹೋದರ ಶ್ರೀನಿವಾಸ್ ಜೊತೆ ಹೋಗಿದ್ದಾರೆ.



## ಫೆ. 12 ರಿಂದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ -2025

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ಫೆ. 12 ರಿಂದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ಆರಂಭವಾಗಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಸಿಎಂ ' ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಡಿ 2025 ಫೆಬ್ರವರಿ 12 ರಿಂದ 14ರವರೆಗೆ "Invest Karnataka -2025 ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಲು ನನ್ನ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯು ಸಮ್ಮತಿಸಿದೆ. ಈಗಾಗಲೇ 75 ಕೋಟಿ ರೂ.ಗಳನ್ನು ಒದಗಿಸಲಾಗಿದ್ದು, ಹೆಚ್ಚುವರಿ 15 ಕೋಟಿ ರೂ.ಗಳನ್ನು ಒದಗಿಸಲು ಸಚಿವ ಸಂಪುಟ ಒಪ್ಪಿದೆ' ಎಂದಿದ್ದಾರೆ. ಹಾಗೂ ಉತ್ತರ ಕನ್ನಡ ಜಿಲ್ಲೆಯ ಭಟ್ಕಳದಲ್ಲಿ 12 ಕೋಟಿ ರೂ.ಗಳ ವೆಚ್ಚದಲ್ಲಿ ನ್ಯಾಯಾಲಯ ಕಟ್ಟಡ ನಿರ್ಮಾಣ ಮಾಡಲು ನನ್ನ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯು ಆಡಳಿತಾತ್ಮಕ ಮಂಜೂರಾತಿ ನೀಡಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

## ಆಸ್ಪತ್ರೆಗೆ ದಾಖಲಾಗಿರುವ ಭೂಗತ ಪಾತಕಿ ರವಿ ಪೂಜಾರಿ!

• **ಉದಯವಾಹಿನಿ, ಬೆಂಗಳೂರು**

ಭೂಗತ ಪಾತಕಿ ರವಿ ಪೂಜಾರಿ ಬೆಂಗಳೂರಿನಲ್ಲಿ ಆಸ್ಪತ್ರೆಗೆ ದಾಖಲಾಗಿದ್ದಾನೆ. ಹರ್ನಿಯಾ ಹಿನ್ನೆಲೆ ಶಸ್ತ್ರ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಯ ಮಲ್ಟಿಸ್ಪೆಷಾಲಿಟಿ ಘಟಕಕ್ಕೆ ದಾಖಲಾಗಿದ್ದಾನೆ. 60ಕ್ಕೂ ಹೆಚ್ಚು ಕ್ರಿಮಿನಲ್ ಕೇಸ್ ಗಳಲ್ಲಿ ಭಾಗಿಯಾಗಿರುವ ರವಿ ಪೂಜಾರಿ ಮೇಲೆ ಕರ್ನಾಟಕ, ಮಹಾರಾಷ್ಟ್ರ, ಕೇರಳ ಸೇರಿ ಹಲವೆಡೆ ಕೇಸ್ ದಾಖಲಾಗಿದ್ದವು. ಭೂಗತವಾಗಿದ್ದುಕೊಂಡೇ ಕ್ರಿಮಿನಲ್ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ರವಿ ಪೂಜಾರಿಯನ್ನು ಅರೆಸ್ಟ್ ಮಾಡಲು ಭಾರತದ ತನಿಖಾ ಸಂಸ್ಥೆಗಳು ಸೆನೆಗಲ್ ದೇಶದೊಂದಿಗೆ ಸಂಪರ್ಕದಲ್ಲಿದ್ದವು. ಈ ಹಿನ್ನಲೆಯಲ್ಲಿ 2019 ರಲ್ಲಿ ಸೆನೆಗಲ್ ಪೊಲೀಸರು ರವಿ ಪೂಜಾರಿಯನ್ನು ಬಂಧಿಸಲಾಗಿತ್ತು. ವಿಚಾರಣೆ ಬಳಿಕ ಪರಪ್ಪನ ಅಗ್ರಹಾರ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿದ್ದ.

## ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಪ್ರಗತಿ ಪರಿಶೀಲನಾ ಸಭೆ!

• **ಉದಯವಾಹಿನಿ, ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಅತ್ಯಂತ ಮಹತ್ವದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯ ಪ್ರಗತಿ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ, ರಹೀಂ ಖಾನ್, ಈಶ್ವರ್ ಖಂಡ್ರೆ, ಜಮೀರ್ ಅಹಮದ್ ಖಾನ್, ಶರಣಬಸಪ್ಪ ದರ್ಶನಾಪೂರ, ಎನ್.ಎಸ್. ಭೋಸರಾಜು, ಶಿವರಾಜ್ ತಂಗಡಗಿ, ಡಿ. ಸುಧಾಕರ್, ಕೆ.ಕೆ. ಆರ್.ಡಿ.ಬಿ. ಅಧ್ಯಕ್ಷ ಡಾ. ಅಜಯ್ ಸಿಂಗ್, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಹಾಗೂ ಸರ್ಕಾರದ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

## ಶಿಕ್ಷಣ ಇಲಾಖೆಯಿಂದ ಉನ್ನತೀಕರಿಸಿದ ಪಟ್ಟಿ ಬಿಡುಗಡೆ!

• **ಉದಯವಾಹಿನಿ, ಬೆಂಗಳೂರು**

**ಶಾಲಾ ಶಿಕ್ಷಣ ಇಲಾಖೆ**

ಸರ್ಕಾರಿ ಶಾಲೆಗಳ ಬಲವರ್ಧನೆಗಾಗಿ 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ (6-7/8ನೇ ತರಗತಿ) ಪ್ರಾರಂಭಿಸಲು ಮತ್ತು ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗಳನ್ನು ಪ್ರಾರಂಭಿಸುವ ಕುರಿತಂತೆ ಪ್ರಸ್ತಾವನೆಗಳನ್ನು ಆಹ್ವಾನಿ ಸಲಾಗಿರುತ್ತದೆ.

ಸದರಿ ಸ್ವೀಕೃತ ಪ್ರಸ್ತಾವನೆಗಳನ್ನು ತಾಲ್ಲೂಕು/ಜಿಲ್ಲಾ/ವಿಭಾಗ ಹಂತದ eve ಪರಿಶೀಲನಾ ಸಮಿತಿಗಳು ನಿಗಧಿಪಡಿಸಿದ ಮಾನದಂಡಗಳಂತೆ ಪರಿಶೀಲಿಸಿ ಅಗತ್ಯ ಶಿಫಾರಸ್ಸಿನ ಮೂಲಕ ಪ್ರಸ್ತಾವನೆಗಳನ್ನು ಈ ಕಛೇರಿಗೆ ಸಲ್ಲಿಸಲಾಗಿರುತ್ತದೆ. ಉಲ್ಲೇಖ-3ರನ್ವಯ ಸದರಿ ತಾಲ್ಲೂಕು/ಜಿಲ್ಲಾ/ವಿಭಾಗ ಹಂತದ ಸಮಿತಿಗಳು ಸಲ್ಲಿಸಿದ ಪ್ರಸ್ತಾವನೆಗಳನ್ನು ಈ ಕಚೇರಿಯಿಂದ ಪುನರ್ ಪರಿಶೀಲಿಸಿ ಪ್ರಥಮ ಆಧ್ಯತೆ ಮೇಲೆ ಎಲ್ಲಾ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ, ಮಕ್ಕಳ ಸಂಖ್ಯೆ ಗಣನೀಯವಾಗಿ ಹೆಚ್ಚಿರುವ, ಬೋಧನೆಗೆ ಶಿಕ್ಷಕರ ಲಭ್ಯತೆ ಇರುವಖ ಇಲಾಖೆ/ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗದಂತೆ ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಅರ್ಹವಿರುವ ಶಾಲೆಗಳನ್ನು ಪರಿಶೀಲಿಸಿ, ಪರಿಗಣಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ಏಕ ಕಡತದ ಮೂಲಕ ಈ ಕೆಳಕಂಡಂತೆ ಸರ್ಕಾರದ ಅನುಮೋದನೆ ಕೋರಲಾಗಿರುತ್ತದೆ. ಉಲ್ಲೇಖ-4ರನ್ವಯ 2024-25ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿ ಉನ್ನತ್ತೀಕರಿಸಿ ಪ್ರಾರಂಭಿಸಲು ಸರ್ಕಾರವು ಆಡಳಿತಾತ್ಮಕ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಠಿಯಿಂದ ಅನುಮೋದನೆ ನೀಡಿರುವ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಆದೇಶಿಸಿದೆ.

## ವೈವಾಹಿಕ ಜೀವನಕ್ಕೆ ಕಾಲಿಟ್ಟ ಬಿಗ್‌ಬಾಸ್-10ರ ಸ್ಪರ್ಧಿ ಸಿರಿ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

**ರಿಯಲ್ ಲೈಫ್‌ನಲ್ಲಿ ವೈವಾಹಿಕ ಜೀವನ**

ಕನ್ನಡ ಕಿರುತೆರೆಯ ಖ್ಯಾತ ನಟಿ, ಬಿಗ್‌ಬಾಸ್ ಸೀಸನ್-10ರ ಸ್ಪರ್ಧಿ ಸಿರಿ ಅವರ ಮದುವೆ ಯಾವಾಗ ಎಂಬ ಪ್ರಶ್ನೆ ಆಗಿಂದಾಗೆ ಕಾರ್ಯಕ್ರಮಗಳಲ್ಲಿ ಕೇಳಿ ಬರುತ್ತಿತ್ತು. ಈ ಬಗ್ಗೆ ನಟಿ ಸಿರಿ ಅಷ್ಟಾಗಿ ಮಾತನಾಡಲು ಹೋಗಿರಲಿಲ್ಲ. ಇದೀಗ ಕೇಳಿ ಬಂದಿರುವ ಮಾಹಿತಿ ಪ್ರಕಾರ ನಟಿ ಸಿರಿ ಅತಿ ಸರಳವಾಗಿ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಎರಡು ದಿನಗಳ ಹಿಂದೆ ಸಿರಿ ಅವರಿಗೆ ಮೈತುಂಬ ಅರಿಷಿಣ ಹಚ್ಚಿರುವ ವಿಡಿಯೋ ವೈರಲ್ ಆಗಿತ್ತು. ಇದು ಸಿನಿಮಾ ಅಥವಾ ಧಾರಾವಾಹಿ ಶೂಟಿಂಗ್ ಇರಬಹುದು ಎಂದು ಎಲ್ಲರೂ ಭಾವಿಸಿದ್ದರು. ಆದರೆ ಸಿರಿ ಅವರು ರಿಯಲ್ ಲೈಫ್‌ನಲ್ಲಿ ವೈವಾಹಿಕ ಜೀವನಕ್ಕೆ ಕಾಲಿಡುವ ಮೂಲಕ ಹಲವರಿಗೆ ಅಚ್ಚರಿಯನ್ನುಂಟು ಮಾಡಿದ್ದಾರೆ. ಗುರು ಹಿರಿಯರು ನಿಶ್ಚಯಿಸಿದ ಮದುವೆ ಇದಾಗಿದ್ದು, ಜೂನ್ 13ರಂದು ಸರಳವಾಗಿ ಮದುವೆ ನಡೆದಿದೆ. ಸದ್ಯ ನಟಿಯ ಮದುವೆ ಸುದ್ದಿ ಕೇಳಿ ಅಭಿಮಾನಿಗಳು ಸಾಮಾಜಿಕ ಜಾಲತಾಣದಲ್ಲಿ ಶುಭಕೋರುತ್ತಿದ್ದಾರೆ.

**ಉದ್ಯಮಿ ಪ್ರಭಾಕರ್ ಬೋರೇಗೌಡ ಎಂಬುವವರ ಜೊತೆ ಸಿರಿ ಸಪ್ತಪದಿ ತುಳಿದಿದ್ದಾರೆ. ಮಂಡ್ಯ ಮೂಲದವರಾದ ಪ್ರಭಾಕರ್ ಬೆಂಗಳೂರಿನಲ್ಲಿ ಕುಟುಂಬಸ್ಥರೊಂದಿಗೆ ನೆಲೆಸಿದ್ದಾರೆ. ಚಿಕ್ಕಬಳ್ಳಾರಪುರ ಬಳಿ ಇರುವ ಭೋಗ ನಂದೀಶ್ವರ ದೇವಾಲಯದಲ್ಲಿ ಮದುವೆ ನೆರವೇರಿದ್ದು, ಕುಟುಂಬಸ್ಥರು ಸೇರಿದಂತೆ ಕೆಲವೇ ಕೆಲವು ಆಪ್ತರು ಭಾಗಿಯಾಗಿದ್ದಾರೆ. ಆದರೆ, ಮದುವೆ ಆಗಿರುವ ಬಗ್ಗೆ ನಟಿ ಸಾಮಾಜಿಕ ಜಾಲತಾಣದ ಮೂಲಕ ತಿಳಿಸಿದ್ದಾರೆ.**

## ಮಿತಿ ಮೀರಿದ ಡೆಂಗ್ಯೂ ಹಾವಳಿ: 10 ದಿನಗಳಲ್ಲಿ 1,026 ಪ್ರಕರಣ ಪತ್ತೆ!

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಡೆಂಗ್ಯೂ ಹಾವಳಿ ಮಿತಿ ಮೀರಿದ್ದು, 10 ದಿನಗಳಲ್ಲಿ 1,026 ಪ್ರಕರಣ ಪತ್ತೆಯಾಗಿದೆ. ಕಳೆದ 10 ದಿನಗಳಲ್ಲಿ ಬರೋಬ್ಬರಿ 1,026 ಡೆಂಗ್ಯೂ, 137 ಚಿಕೂನ್ ಗುನ್ಯಾ ಪಾಸಿಟಿವ್ ಬಂದಿದ್ದು ಆತಂಕ ಮೂಡಿಸಿದೆ. ರಾಜ್ಯದಲ್ಲಿ ಪ್ರಸಕ್ತ ವರ್ಷ 4,414 ಡೆಂಗ್ಯೂ, 778 ಚಿಕುನ್ಗುನ್ಯಾ ಪ್ರಕರಣಗಳು ಪತ್ತೆ ಆಗಿವೆ. ಮುಂಗಾರು ಮಳೆಯ ಆರ್ಭಟದ ಜೊತೆಗೆ ಚಿಕನ್ ಗುನ್ಯಾ, ಡೆಂಗ್ಯೂ ಸೇರಿದಂತೆ ಹಲವು ಖಾಯಿಲೆಗಳು ಜನರನ್ನು ಕಾಡುತ್ತಿದೆ. ಆಸ್ಪತ್ರೆಗಳಿಗೆ ದಾಖಲಾಗುವ ರೋಗಿಗಳ ಸಂಖ್ಯೆ ಕೂಡ ಹೆಚ್ಚಳವಾಗುತ್ತಿದೆ.

ಡೆಂಗ್ಯು, ಚಿಕೂನ್ ಗುನ್ಯಾ ರೋಗ ನಿಯಂತ್ರಣಕ್ಕಾಗಿ, ಬಳಕೆಗೆ ನೀರು ತುಂಬುವ ಪರಿಕರಗಳಿಗೆ ಸರಿಯಾಗಿ ಮುಚ್ಚಳ ಮುಚ್ಚುವ ಮೂಲಕ ಸಾರ್ವಜನಿಕರು ಸೊಳ್ಳೆ ಉತ್ಪತ್ತಿಯಾಗದಂತೆ ನಿಗಾವಹಿಸಬೇಕು ಎಂದು ಆರೋಗ್ಯ ಇಲಾಖೆ ತಿಳಿಸಿದೆ. ಮನೆಗೆ ಬಳಸಲು ನೀರು ಅತ್ಯಗತ್ಯವಾಗಿದ್ದು, ನೀರು ತುಂಬುವ ಪರಿಕರಗಳಾದ ಡ್ರಮ್, ಬ್ಯಾರಲ್, ಸಿಮೆಂಟ್ ತೊಟ್ಟಿ, ಮಣ್ಣಿನ ಮಡಿಕೆಗಳಿಗೆ ನೀರು ತುಂಬಿದ ನಂತರ ಸರಿಯಾಗಿ ಮುಚ್ಚಳ ಮುಚ್ಚುವ ಮೂಲಕ ಸೊಳ್ಳೆಗಳು ಮೊಟ್ಟಯಿಡಲು ನೀರು ಸಿಗದಂತೆ ಜಾಗ್ರತೆ ವಹಿಸಬೇಕು .



ಉದಯವಾಹಿನಿ ಚಿತ್ರ

**ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ಡೆಂಗ್ಯು, ಚಿಕನ್ಗುನ್ಯಾ ಸೇರಿದಂತೆ ಮಲೇರಿಯಾ, ಆನೆಕಾಲು ಮುಂತಾದ ರೋಗಗಳ ನಿಯಂತ್ರಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.ಮುಂಜಾಗ್ರತಾ ಕ್ರಮವಾಗಿ ಮನೆ ಸುತ್ತಮುತ್ತ ಸ್ವಚ್ಛತೆಯನ್ನು ಕಾಪಾಡಬೇಕು, ನೀರು ನಿಲ್ಲುವ ತಾಣಗಳನ್ನು ಮಣ್ಣು ಹಾಕಿ ಮುಚ್ಚಬೇಕು, ನೀರು ನಿಲ್ಲುವ ಟೈರ್, ಟಿನ್, ಪ್ಲಾಸ್ಟಿಕ್ ಕಪ್ಪಗಳನ್ನು ಸೂಕ್ತ ವಿಲೇವಾರಿ ಮಾಡಬೇಕು ಎಂದು ಆರೋಗ್ಯ ಇಲಾಖೆ ಸೂಚಿಸಿದೆ.**

## ವಾಲ್ಮೀಕಿ ನಿಗಮದಲ್ಲಿ ಅಕ್ರಮ ಪ್ರಕರಣ

• **ಉದಯವಾಹಿನಿ, ಬೆಂಗಳೂರು**

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ಪ್ರಕರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. 18 ನಕಲಿ ಬ್ಯಾಂಕ್ ಖಾತೆಗಳನ್ನು ತೆರೆದಿದ್ದ ಆರೋಪಿ ಸತ್ಯನಾರಾಯಣ ವರ್ಮಾನನ್ನು ಎಸ್‌ಐಟಿ ಪೊಲೀಸರು ಹೈದರಾಬಾದ್‌ನಲ್ಲಿ ಬಂಧಿಸಿದ್ದು, ತೀವ್ರ ವಿಚಾರಣೆ ನಡೆಸಿದ್ದಾರೆ.

ವಿಚಾರಣೆ ವೇಳೆ ಇನ್ನಷ್ಟು ಸ್ಫೋಟಕ ಮಾಹಿತಿಗಳು ಬಹಿರಂಗವಾಗಿವೆ.94.73 ಕೋಟಿ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ 18 ನಕಲಿ ಖಾತೆಗಳಿಗೆ ವರ್ಗಾವಣೆಯಾಗಿದ್ದ ಹಣವನ್ನು ಮದ್ಯದ ಅಂಗಡಿಗಳು, ಬಾರ್, ಚಿನ್ನಾಭರಣ ಮಾರಾಟ ಮಳಿಗೆಗಳು, ಸಣ್ಣ ಕಂಪನಿಗಳಿಗೆ ವರ್ಗಾಯಿಸಿಕೊಂಡು ನಗದು ಹಣ ಪಡೆದಿರುವುದು ತನಿಖೆಯಲ್ಲಿ ಬಯಲಾಗಿದೆ.

ಇದೇ ರೀತಿ 400ಕ್ಕೂ ಹೆಚ್ಚು ಖಾತೆಗಳಿಗೆ ಆರೋಪಿ ಸತ್ಯನಾರಾಯಣ ಹಣ ವರ್ಗಾವಣೆ ಮಾಡಿ ಬಳಿಕ ನಗದು ರೂಪದಲ್ಲಿ ಹಣ ಪಡೆದಿದ್ದಾನೆ. ಸತ್ಯನಾರಾಯಣ ಸಂಬಂಧಿಕರ ಮನೆಯಲ್ಲಿ 8.21 ಕೋಟಿ ಹಣ ಪತ್ತೆಯಾಗಿದೆ. ಈ ಹಣವನ್ನು 4 ಸೂಟ್ ಕೇಸ್ ಗಳಲ್ಲಿ ತುಂಬಿ ಸಂಬಂಧಿಕರ ಮನೆಯಲ್ಲಿ ಇಡಲಾಗಿತ್ತು. ಈ ಹಣವನ್ನು ಸೀಜ್ ಮಾಡಿರುವ ಎಸ್‌ಐಟಿ, ಸತ್ಯನಾರಾಯಣನ ಐಷಾರಾಮಿ ಲ್ಯಂಬೋರ್ಗಿನಿ ಕಾರನ್ನು ಜಪ್ತಿ ಮಾಡಿದೆ. 94.75 ಕೋಟಿ ಹಣದಲ್ಲಿ ಸುಮಾರು 11.83 ಕೋಟಿ ನಗದು ಹಣವನ್ನು ಎಸ್‌ಐಟಿ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಉದಯವಾಹಿನಿ ಚಿತ್ರ

## ಫೇಸ್‌ಬುಕ್‌ನಲ್ಲಿ 8 ತಿಂಗಳ ಹಿಂದೆಯೇ ಕೊಲೆ ಬೆದರಿಕೆ: ಸಚಿವರ ಸಂಧಾನಕ್ಕೂ ಬಗ್ಗದ ಗ್ಯಾಂಗ್

• **ಉದಯವಾಹಿನಿ, ಬೆಂಗಳೂರು**

ರಾಜಧಾನಿ ಬೆಂಗಳೂರಿನಲ್ಲಿ ರೌಡಿಗಳ ಅಟ್ಟಹಾಸ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ರೌಡಿಗಳ ಗುಂಪೇ ಮತ್ತೊಂದು ರೌಡಿಯನ್ನು ಹತ್ಯೆ ಮಾಡಿರುವ ಘಟನೆ ಜ್ಞಾನ ಭಾರತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

8 ತಿಂಗಳ ಹಿಂದೆ ಫೇಸ್ ಬುಕ್ ನಲ್ಲಿ ರೌಡಿ ನಾಗ ಎಂಬಾತ ರೌಡಿ ವೆಂಕಟೇಶ್ ಎಂಬಾತನಿಗೆ ಕೊಲೆ ಬೆದರಿಕೆ ಹಾಕಿದ್ದ.

ನಿನ್ನ ಕೊಲೆ ಮಾಡುವೆ ಇದನ್ನು ಸೇವ್ ಮಾಡಿಟ್ಟುಕೋ ಶಿಷ್ಯ. ಬದುಕಬೇಕು ಎಂದ್ರೆ ಕ್ಷಮೆ ಕೇಳು. ಇಲ್ಲ ಕೊಲೆ ಮಾಡುವೆ' ಎಂದು ಬೆದರಿಕೆಯೊಡ್ಡಿದ್ದ. ಇದಾದ ಬಳಿಕ ಸಚಿವ ಜಮೀರ್ ಅಹ್ಮದ್ ಸಮ್ಮುಖದಲ್ಲಿ ಸಂಧಾನ ಕೂಡ ನಡೆದಿತ್ತು ಎನ್ನಲಾಗಿದೆ. ಇಷ್ಟೆಲ್ಲ ಆದರೂ ಪೊಲೀಸರು ಮಾತ್ರ ಏನೂ ಗೊತ್ತಿಲ್ಲದವರಂತೆ ಕೈಕಟ್ಟಿ ಕುಳಿತಿದ್ದಾರಾ ಎಂಬ ಅನುಮಾನವ್ಯಕ್ತವಾಗಿದೆ.

ಅಂದು ಸಾಮಾಜಿಕ ಜಾಲತಾಣದಲ್ಲಿ ಬೆದರಿಕೆ ಹಾಕಿದ್ದ ರೌಡಿ ನಾಗ ಹಾಗೂ ಗ್ಯಾಂಗ್ ಈಗ ರೌಡಿ ವೆಂಕಟೇಶ್ ನನ್ನು ಬರ್ಬರವಾಗಿ ಹತ್ಯೆ ಮಾಡಿದೆ. ಹಳೇ ದ್ವೇಷವೇ ಕೊಲೆಗೆ ಕಾರಣ ಎಂದು ಹೇಳಲಾಗುತ್ತಿದೆ.

ರೌಡಿಯೊಬ್ಬ ಸಾಮಾಜಿಕ ಜಾಲತಾಣಗಳಲ್ಲಿ ರಾಜಾರೋಷವಾಗಿ ಬೆದರಿಕೆ ಹಾಕಿದ್ದರೂ ಪೊಲೀಸರು ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದ್ದು, ಬೆಂಗಳೂರು ನಗರದಲ್ಲಿ ಕಾನೂನು ಸುವ್ಯವಸ್ಥೆ ಬಗ್ಗೆ ಸಾಕಷ್ಟು ಅನುಮಾನ ಹುಟ್ಟಿಸುತ್ತಿದೆ. ಜನರು ಆತಂಕದಲ್ಲಿ ಬದುಕುವ ಸ್ಥಿತಿ ಇದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಬದುಕಬೇಕು ಎಂದ್ರೆ ಕ್ಷಮೆ ಕೇಳು**



ಉದಯವಾಹಿನಿ ಚಿತ್ರ

## ಪ್ರಮುಖ ಜಲಾಶಯಗಳ ನೀರಿನ ಮಟ್ಟ ಎಷ್ಟು

■ ರಾಜ್ಯಾದ್ಯಂತ ಉತ್ತಮ ಮಳೆಯಾಗುವ ಸಾಧ್ಯತೆಯಿದೆ: ಹವಾಮಾನ ಇಲಾಖೆ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಸೇರಿದಂತೆ ಭಾರತದ ದಕ್ಷಿಣ ಭಾಗಗಳಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ಕೃಷ್ಣಾ, ಘಟಪ್ರಭಾ, ಮಲಪ್ರಭಾ ನದಿಗಳು ತುಂಬಿ ಹರಿಯುತ್ತಿವೆ. ರಾಜ್ಯದ್ಯಾಂತ ಉತ್ತಮ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಇನ್ನು, ರಾಜ್ಯಾದ್ಯಂತ ಹಲವು ಜಿಲ್ಲೆಗಳಲ್ಲಿ ಮಳೆಯಾದ ಹಿನ್ನೆಲೆ ಜಲಾಶಯಕ್ಕೆ ಒಳಹರಿವು ಹೆಚ್ಚಳವಾಗಿದೆ.

ಹಾಗಾದರೆ ಕೆಆರ್‌ಎಸ್ ಡ್ಯಾಂ, ತುಂಗಭದ್ರಾ, ಮಲಪ್ರಭಾ ಸೇರಿದಂತೆ ಕರ್ನಾಟಕ ಜೂನ್ 14 ರಂದು ಪ್ರಮುಖ ಜಲಾಶಯಗಳಲ್ಲಿ ಪ್ರಮುಖ ಜಲಾಶಯಗಳ ನೀರಿನ ಪ್ರಮಾಣ ಎಷ್ಟಿದೆ ಜಲಾಶಯಕ್ಕೆ ಒಳಹರಿವು ಎಷ್ಟಿದೆ ಹೊರಹರಿವು ಎಷ್ಟಿದೆ .

**ಆಲಮಟ್ಟಿ ಜಲಾಶಯ:** ಗರಿಷ್ಠ ನೀರಿನ ಮಟ್ಟ- 519.60 ಮೀಟರ್ ಇಂದಿನ ನೀರಿನ ಮಟ್ಟ - 24.45 ಟಿಎಂಸಿ ಒಳಹರಿವು -4654 ಕ್ಯೂಸೆಕ್ ಹೊರಹರಿವು - 430 ಕ್ಯೂಸೆಕ್

**ತುಂಗಭದ್ರಾ ಜಲಾಶಯ:** ಗರಿಷ್ಠ ನೀರಿನ ಮಟ್ಟ - 497.71 ಮೀಟರ್ ಇಂದಿನ ನೀರಿನ ಮಟ್ಟ- 5.29 ಟಿಎಂಸಿ ಒಳಹರಿವು - 3533 ಕ್ಯೂಸೆಕ್ ಹೊರಹರಿವು -44 ಕ್ಯೂಸೆಕ್

**ಮಲಪ್ರಭಾ ಜಲಾಶಯ:** ಗರಿಷ್ಠ ನೀರಿನ ಮಟ್ಟ - 633.80 ಮೀಟರ್ ಇಂದಿನ ನೀರಿನ ಮಟ್ಟ - 6.57 ಟಿಎಂಸಿ ಒಳಹರಿವು - 0 ಕ್ಯೂಸೆಕ್ ಹೊರಹರಿವು - 194 ಕ್ಯೂಸೆಕ್

**ಲಿಂಗನಮಕ್ಕಿ ಜಲಾಶಯ:** ಗರಿಷ್ಠ ನೀರಿನ ಮಟ್ಟ - 554.44 ಮೀಟರ್ ಇಂದಿನ ನೀರಿನ ಮಟ್ಟ - 14.78 ಟಿಎಂಸಿ ಒಳಹರಿವು - 3450 ಕ್ಯೂಸೆಕ್ ಹೊರಹರಿವು - 1507 ಕ್ಯೂಸೆಕ್


**ಕಬಿನಿ ಜಲಾಶಯ:** ಗರಿಷ್ಠ ನೀರಿನ ಮಟ್ಟ - 696.13 ಮೀಟರ್ ಇಂದಿನ ನೀರಿನ ಮಟ್ಟ - 8.54 ಟಿಎಂಸಿ ಒಳಹರಿವು -1835 ಕ್ಯೂಸೆಕ್ ಹೊರಹರಿವು - 300 ಕ್ಯೂಸೆಕ್

**ಭದ್ರಾ ಜಲಾಶಯ:** ಗರಿಷ್ಠ ನೀರಿನ ಮಟ್ಟ - 657.73 ಮೀಟರ್ ಇಂದಿನ ನೀರಿನ ಮಟ್ಟ - 14.85 ಟಿಎಂಸಿ ಒಳಹರಿವು - 1603 ಕ್ಯೂಸೆಕ್ ಹೊರಹರಿವು - 342 ಕ್ಯೂಸೆಕ್

**ಘಟಪ್ರಭಾ ಜಲಾಶಯ:** ಗರಿಷ್ಠ ನೀರಿನ ಮಟ್ಟ - 662.91 ಮೀಟರ್ ಇಂದಿನ ನೀರಿನ ಮಟ್ಟ -8.09 ಟಿಎಂಸಿ ಒಳಹರಿವು -348 ಕ್ಯೂಸೆಕ್ ಹೊರಹರಿವು - 1933 ಕ್ಯೂಸೆಕ್

**ಹೇಮಾವತಿ ಜಲಾಶಯ:** ಗರಿಷ್ಠ ನೀರಿನ ಮಟ್ಟ -890.58 ಮೀಟರ್ ಇಂದಿನ ನೀರಿನ ಮಟ್ಟ - 10.31 ಟಿಎಂಸಿ ಒಳಹರಿವು -1516 ಕ್ಯೂಸೆಕ್ ಹೊರಹರಿವು - 250 ಕ್ಯೂಸೆಕ್

**ಸೂಫಾ ಜಲಾಶಯ:** ಗರಿಷ್ಠ ನೀರಿನ ಮಟ್ಟ- 564.00 ಮೀಟರ್ ಇಂದಿನ ನೀರಿನ ಮಟ್ಟ- 32.05ಟಿಎಂಸಿ ಒಳಹರಿವು- 778 ಕ್ಯೂಸೆಕ್ ಹೊರಹರಿವು- 2748 ಕ್ಯೂಸೆಕ್



ಉದಯವಾಹಿನಿ ಚಿತ್ರ

| ಕೆಆರ್‌ಎಸ್ ಜಲಾಶಯ | |
|---|---|
| ಗರಿಷ್ಠ ನೀರಿನ ಮಟ್ಟ | 38.04 ಮೀಟರ್ |
| ಇಂದಿನ ನೀರಿನ ಮಟ್ಟ | 13.64 ಟಿಎಂಸಿ |
| ಒಳಹರಿವು | 2365 ಕ್ಯೂಸೆಕ್ |
| ಹೊರಹರಿವು | 453 ಕ್ಯೂಸೆಕ್ |

| ಹಾರಂಗಿ ಜಲಾಶಯ | |
|---|---|
| ಗರಿಷ್ಠ ನೀರಿನ ಮಟ್ಟ | 871.38 ಮೀಟರ್ |
| ಇಂದಿನ ನೀರಿನ ಮಟ್ಟ | 3.17 ಟಿಎಂಸಿ |
| ಒಳಹರಿವು | 520 ಕ್ಯೂಸೆಕ್ |
| ಹೊರಹರಿವು | 200 ಕ್ಯೂಸೆಕ್ |

## ದರ್ಶನ್ ಹೆಸರು ಬರದಂತೆ ಡೀಲ್ ಮಾಡಿದ್ದ 30 ಲಕ್ಷ ಹಣ ಜಪ್ತಿ

• **ಉದಯವಾಹಿನಿ, ಬೆಂಗಳೂರು**

ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಹತ್ಯೆ ಪ್ರಕರಣ ದಿನದಿಂದ ದಿನಕ್ಕೆ ಹೊಸ ತಿರುವು ಪಡೆಯುತ್ತಿದೆ. ಕೊಲೆ ಕೇಸ್ ನಲ್ಲಿ ನಟ ದರ್ಶನ್ ಹೆಸರು ಹೊರಬರದಂತೆ ಡೀಲ್ ಮಾಡಿದ್ದ ಹಣವನ್ನು ಪೊಲೀಸರು ಸೀಜ್ ಮಾಡಿದ್ದಾರೆ ಎಂದು ತಿಳಿದುಬಂದಿದೆ.ರೇಣುಕಾಸ್ವಾಮಿ ಕೊಲೆ ಕೇಸ್ ನಲ್ಲಿ ನಟ ದರ್ಶನ್ ಹೆಸರು ಹೊರಬರದಂತೆ ಆರೋಪಿಗಳು 30 ಲಕ್ಷ ಡೀಲ್ ಮಾಡಿ ಹಣ ಪಡೆದಿದ್ದರು ಎನ್ನಲಾಗಿದೆ. ದರ್ಶನ್ ಆಪ್ತನೊಬ್ಬನ ಮನೆ ಮೇಲೆ ದಾಳಿ ನಡೆಸಿರುವ ಪೊಲೀಸರು ಈ ಹಣವನ್ನು ವಶಕ್ಕೆ ಪಡೆದಿದ್ದಾರೆ.

ದರ್ಶನ್ ಕೊಟ್ಟಿದ್ದ 30 ಲಕ್ಷ ಹಣ ದರ್ಶನ್ ಆಪ್ತನ ಮನೆಯಲ್ಲಿತ್ತು. ಆರೋಪಿಗಳು ವಿಚಾರಣೆ ವೇಳೆ ಬಾಯ್ಬಿಟ್ಟಿದ್ದು, ಈ ಹಿನ್ನೆಲೆಯಲ್ಲಿ ದಾಳಿ ನಡೆಸಿದ ಪೊಲೀಸರು ಹಣ ಜಪ್ತಿ ಮಾಡಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣವನ್ನು ಒಪ್ಪಿಕೊಳ್ಳಲು ಮೃತದೇಹ ಸಾಗಿಸಲು ಹಾಗೂ ದರ್ಶನ್ ಹೆಸರು ಬಾಯಿಬಿಡದಂತೆ ಬಂಧಿತರ ಪೈಕಿ ಐವರಿಗೆ 30 ಲಕ್ಷ ಡೀಲ್ ನೀಡಲಾಗಿತ್ತು. ಮೃತದೇಹವನ್ನು ಯಾರಿಗೂ ಗೊತ್ತಾಗದಂತೆ ಸಾಗಿಸಲು ಮೂವರು ಆರೋಪಿಗಳಿಗೆ ಮುಂಗಡವಾಗಿ 5 ಲಕ್ಷ ಸಂದಾಯವಾಗಿತ್ತು.

ಉಳಿದ ಇಬ್ಬರು ಆರೋಪಿಗಳು ಜೈಲು ಸೇರಿದ ಬಳಿಕ ಅವರ ಮನೆಯವರಿಗೆ ಹಣ ತಲುಪಿಸುವುದಾಗಿ ಹೇಳಲಾಗಿತ್ತು. ಈ ವಿಚಾರವನ್ನು ಆರೋಪಿಗಳು ಪೊಲೀಸರ ವಿಚಾರಣೆ ವೇಳೆ ಬಾಯಿಬಿಟ್ಟಿದ್ದಾರೆ ಎನ್ನಲಾಗಿದೆ.



ಉದಯವಾಹಿನಿ ಚಿತ್ರ

ಅಂತರಾಳದಿಂದ.. EDITORIAL

## ರೆಪೊ ದರದಲ್ಲಿ ಯಥಾಸ್ಥಿತಿ

# ನಿರೀಕ್ಷಿತವೂ ಹೌದು, ಸರಿಯೂ ಹೌದು


ಉದಯವಾಹಿನಿ ಚಿತ್ರ

ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಹಣಕಾಸು ನೀತಿ ಸಮಿತಿಯು (ಎಂಪಿಸಿ) ರೆಪೊ ದರದಲ್ಲಿ ಯಾವುದೇ ಬದಲಾವಣೆ ಮಾಡುವುದಿಲ್ಲ ಎಂಬುದು ನಿರೀಕ್ಷಿತವೇ ಆಗಿತ್ತು. ನಿರೀಕ್ಷೆಗೆ ಅನುಗುಣವಾಗಿಯೇ ಎಂಪಿಸಿ ನಡೆದುಕೊಂಡಿದೆ. ಕೇಂದ್ರೀಯ ಬ್ಯಾಂಕ್‌ನ ಎಂಪಿಸಿಯು ಕಳೆದ ವಾರ ನಡೆದ ಸಭೆಯಲ್ಲಿ, ಸತತ ಎಂಟನೆಯ ಬಾರಿ ರಸ್ತೆ ದರವನ್ನು ಯಥಾಸ್ಥಿತಿಯಲ್ಲಿ ಉಳಿಸಿಕೊಳ್ಳುವ ಕೆಲಸ ಮಾಡಿದೆ. ರಸ್ತೆ ದರದಲ್ಲಿ ಯಥಾಸ್ಥಿತಿಯನ್ನು ಮುಂದುವರಿಸುವ ಹಾಗೂ ಹೊಂದಾಣಿಕೆಯ ನಿಲುವನ್ನು ಹಿಂಪಡೆಯುವ ಧೋರಣೆಯನ್ನು ಕಾಯ್ದುಕೊಳ್ಳುವ ವಿಚಾರವಾಗಿ ಎಂಪಿಸಿಯು ಬಹುಮತದ ನಿರ್ಧಾರ ಕೈಗೊಂಡಿದೆ. ವಾಣಿಜ್ಯ ಬ್ಯಾಂಕ್‌ಗಳಿಗೆ ಆರ್‌ಬಿಐ ನೀಡುವ ಸಾಲದ ಮೇಲಿನ ಬಡ್ಡಿದರವು (ರಷ್ಯ) ಶೇಕಡ 6.5ರ ಮಟ್ಟದಲ್ಲಿ ಮುಂದುವರಿಯಲಿದೆ. ರಸ್ತೆ ದರದ ವಿಚಾರವಾಗಿ ಯಾವುದೇ ತೀರ್ಮಾನ ಕೈಗೊಳ್ಳುವ ಸಂದರ್ಭದಲ್ಲಿ ಎಂಪಿಸಿ ಪರಿಶೀಲಿಸುವ ಕೆಲವು ವಿದ್ಯಮಾನಗಳು ಈ ತೀರ್ಮಾನ ತೆಗೆದುಕೊಳ್ಳುವುದಕ್ಕೆ ಪೂರಕವಾಗಿ ಇದ್ದವು. ಆದರೆ ಇಲ್ಲಿ ಇನ್ನೂ ಒಂದು ಸಂಗತಿಯನ್ನು ಉಲ್ಲೇಖಿಸಬಹುದು. ಅಂದರೆ, ಹೊಸದಾಗಿ ರಚನೆ ಆಗಿರುವ ಸರ್ಕಾರಕ್ಕೆ, ಆರಂಭದಲ್ಲಿಯೇ ಬಡ್ಡಿದರದಲ್ಲಿ ಬದಲಾವಣೆ ಆಗುವುದರಿಂದ ಸೃಷ್ಟಿಯಾಗುವ ಪರಿಸ್ಥಿತಿಯನ್ನು ನಿಭಾಯಿಸಬೇಕಾದ ಅನಿವಾರ್ಯ ಇರುವುದಿಲ್ಲ. ಬೆಲೆಗಳಲ್ಲಿ ಸ್ಥಿರತೆಯನ್ನು ತರುವ ಅಗತ್ಯದ ಕಾರಣಕ್ಕಾಗಿ ಎಂಪಿಸಿಯು ರೆಪೊ ದರದಲ್ಲಿ ಬದಲಾವಣೆ ಮಾಡದೆ ಇರುವ ತೀರ್ಮಾನ ಕೈಗೊಂಡಿದೆ. ಚಿಲ್ಲರೆ ಹಣದುಬ್ಬರ ದರವನ್ನು ಶೇಕಡ 4ರಲ್ಲಿ ನಿಯಂತ್ರಿಸುವ ಹೊಣೆಯು ಆರ್‌ಬಿಐ ಮೇಲೆ ಇದೆ. ಆದರೆ ಚಿಲ್ಲರೆ ಹಣದುಬ್ಬರ ದರವು ಶೇ 4ಕ್ಕಿಂತಲೂ ಹೆಚ್ಚಿನ ಮಟ್ಟದಲ್ಲಿಯೇ ಉಳಿದಿದೆ. ಹೀಗಾಗಿ, ತಾನು ನಿಭಾಯಿಸ ಬೇಕಿರುವ ಹೊಣೆಗಾರಿಕೆಯ ದೃಷ್ಟಿಯಿಂದ ಕಂಡಾಗ ಅರ್‌ಬಿಐ ಮುಂದೆ ಹೆಚ್ಚಿನ ಆಯ್ಕೆಗಳೇನೂ ಇರಲಿಲ್ಲ. ಪ್ರಸಕ್ತ ಹಣಕಾಸು ವರ್ಷದಲ್ಲಿ ಚಿಲ್ಲರೆ ಹಣದುಬ್ಬರ ದರವು ಶೇ 4.5ರಷ್ಟು ಇರಲಿದೆ ಎಂದು ಈ ಹಿಂದೆ ಮಾಡಿದ್ದ ಅಂದಾಜನ್ನು ಅವರು ಪರಿಷ್ಕರಿಸಿಲ್ಲ. ಈ ಅಂದಾಜು ಕೂಡ ಆರ್‌ಬಿಐ ನಿಗದಿ ಮಾಡಿಕೊಂಡಿರುವ ಮಿತಿಗಿಂತ ಹೆಚ್ಚಿನದು ಎಂಬುದನ್ನು ಗಮನಿಸಬೇಕು. ಆಹಾರ ವಸ್ತುಗಳ ಬೆಲೆ ಏರಿಕೆ ಪ್ರಮಾಣವು ಇನ್ನೂ ಹೆಚ್ಚಿದೆ. ಮುಂಗಾರು ಮಳೆಯು ಈ ವರ್ಷ ಚೆನ್ನಾಗಿ ಆಗಲಿದೆ ಎಂಬ ಮುನ್ಸೂಚನೆ ಇದ್ದರೂ ಮುಂಗಾರು ಮಳೆಯು ಚೆನ್ನಾಗಿ ಆಗಿ ಬೆಲೆ ಇಳಿಕೆ ಆಗಬಹುದು ಎಂಬ ಅಂದಾಜನ್ನು ಇರಿಸಿಕೊಳ್ಳಬಹುದಾಗಿದ್ದರೂ ಆರ್‌ಬಿಐ ಹೆಚ್ಚಿನ ಅಪಾಯವನ್ನು ಮೈಮೇಲೆ ಎಳೆದುಕೊಳ್ಳುವ ಕೆಲಸಕ್ಕೆ ಕೈಹಾಕಿಲ್ಲ.

> ಹಿಂದಿನ ವರ್ಷಗಳಲ್ಲಿ ಹೆಚ್ಚಿನ ಮಟ್ಟದಲ್ಲಿ ಉಳಿದಿದ್ದ ಚಿಲ್ಲರೆ ಹಣದುಬ್ಬರ ಪ್ರಮಾಣವು ಈ ವರ್ಷದಲ್ಲಿ ತುಸು ಕಡಿಮೆ ಆಗಿದೆ ಎಂಬುದು ನಿಜವಾದರೂ ಹಣದುಬ್ಬರದ ಪ್ರಮಾಣ ಇಳಿಕೆ ಆಗುತ್ತಿರುವ ಗತಿಯು ನಿಧಾನವಾಗಿಯೇ ಇದೆ. ಫೆಬ್ರುವರಿಯಲ್ಲಿ ಶೇ 5.8ರಷ್ಟು ಇದ್ದ ಚಿಲ್ಲರೆ ಹಣದುಬ್ಬರ ಪ್ರಮಾಣವು ಮೇ ತಿಂಗಳಲ್ಲಿ ಶೇ 4.75ಕ್ಕೆ ತಗ್ಗಿದೆ. ಹಣದುಬ್ಬರದ ವಿಚಾರದಲ್ಲಿ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ಅವರು ಬಹಳ ಎಚ್ಚರಿಕೆಯಿಂದ ಇದ್ದಾರೆ. ಈಗಿನ ತ್ರೈಮಾಸಿಕ ದಲ್ಲಿ ಜಾಗತಿಕ ಮಟ್ಟದಲ್ಲಿ ಸರಕುಗಳ ಬೆಲೆಯು ಹೆಚ್ಚಾಗಿಯೇ ಇದೆ ಎಂದು ಅವರು ಹೇಳಿದ್ದಾರೆ.

ಇದೇ ವೇಳೆ ಆರ್‌ಬಿಐ, ಆರ್ಥಿಕ ಬೆಳವಣಿಗೆಯ ವಿಚಾರವಾಗಿ ಕೆಲವು ಭರವಸೆಗಳನ್ನು ಕೂಡ ವ್ಯಕ್ತ ಪಡಿಸಿದೆ. ಈ ಭರವಸೆಗಳು ಆಧಾರಸಹಿತವಾಗಿವೆ ಪ್ರಸಕ್ತ ಹಣಕಾಸು ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ದರವು ಶೇ 7.2ರಷ್ಟು ಇರಲಿದೆ ಎಂದು ಆರ್‌ಬಿಐ ಅಂದಾಜಿಸಿದೆ. ಹಿಂದೆ ಮಾಡಿದ್ದ ಅಂದಾಜಿನ ಆಧಾರದಲ್ಲಿ ಆರ್‌ಬಿಐ, ಬೆಳವಣಿಗೆ ದರ ಶೇ 7ರಷ್ಟು ಇರಲಿದೆ ಎಂದು ಹೇಳಿತ್ತು, ಬೆಳವಣಿಗೆಯ ವೇಗಕ್ಕೆ ಧಕ್ಕೆ ಆಗುವುದಿಲ್ಲ ಎನ್ನಲು ವಿಶ್ವಾಸಾರ್ಹ ಸೂಚನೆಗಳು ಕಂಡಿವೆ ಎಂದು ಅದು ಹೇಳಿದೆ. ಮುಂಗಾರು ಮಳೆಯು ಈ ವರ್ಷ ವಾಡಿಕೆಗಿಂತ ಹೆಚ್ಚು ಇರಲಿದೆ ಎಂಬ ಅಂದಾಜು ಇದೆ. ಇದು ದೇಶದ ಗ್ರಾಮೀಣ ಪ್ರದೇಶಗಳಲ್ಲಿ ಕಂಡುಬರುವ ಬೇಡಿಕೆಯ ದೃಷ್ಟಿಯಿಂದ ಹಾಗೂ ಕೃಷಿ ವಲಯದ ಚಟುವಟಿಕೆಗಳ ದೃಷ್ಟಿಯಿಂದ ಒಳ್ಳೆಯ ಸುದ್ದಿ ತಯಾರಿಕೆ ಹಾಗೂ ಸೇವಾ ವಲಯಗಳಲ್ಲಿ ಬೆಳವಣಿಗೆ ದರವು ತಗ್ಗುವ ಅಂದಾಜು ಇಲ್ಲ. ಈ ಎರಡು ವಲಯಗಳಲ್ಲಿನ ಬೆಳವಣಿಗೆಯು ದೇಶದ ಮಾರುಕಟ್ಟೆಗಳಲ್ಲಿ ಬೇಡಿಕೆಯನ್ನು ಜಾಸ್ತಿ ಮಾಡಬಹುದು. 'ಬ್ಯಾಂಕ್ ಹಾಗೂ ಕಾರ್ಪೊರೇಟ್ ಕಂಪನಿಗಳ ಹಣಕಾಸಿನ ಸ್ಥಿತಿ ಚೆನ್ನಾಗಿರುವ ಕಾರಣಕ್ಕೆ, ಸರ್ಕಾರವು ಮೂಲಸೌಕರ್ಯ ವಲಯದ ಮೇಲೆ ವೆಚ್ಚ ಮಾಡುವುದನ್ನು ಮುಂದುವರಿಸಲಿರುವ ಕಾರಣಕ್ಕೆ ಹಾಗೂ ಉದ್ಯಮ ವಲಯದಲ್ಲಿ ಆಶಾವಾದ ಇರುವ ಕಾರಣಕ್ಕೆ ಹೂಡಿಕೆ ಚಟುವಟಿಕೆಗಳು ನಿರೀಕ್ಷೆಯಂತೆಯೇ ಚೆನ್ನಾಗಿರಲಿವೆ' ಎಂದು ಕೇಂದ್ರೀಯ ಬ್ಯಾಂಕ್ ಹೇಳಿದೆ. ಹೀಗಾಗಿ, ಆರ್ಥಿಕ ಬೆಳವಣಿಗೆಯು ಚೆನ್ನಾಗಿ ಇರುವ ನಿರೀಕ್ಷೆ ಇರುವಾಗ, ರಪೊ ದರವನ್ನು ತಗ್ಗಿಸುವ ಅಗತ್ಯವೂ ಇರಲಿಲ್ಲ.

# ಅಪ್ಪ ಎಂದರೆ ಭರವಸೆಯ ಬೆಳಕು



**ವಿಶ್ವಾಸ್.ಡಿ.ಗೌಡ**
• ಉದಯವಾಹಿನಿ, ವಿಶೇಷ


ಉದಯವಾಹಿನಿ ಚಿತ್ರ

ಅಪ್ಪ ಗೋಡೆ ಹಿಡಿದುಕೊಂಡು ಹೋಗುತ್ತಿದ್ದರು. ಅಪ್ಪ ಕೈಯಿಟ್ಟಲ್ಲೆಲ್ಲ ಗೋಡೆಯ ಬಣ್ಣ ಸ್ವಲ್ಪ ಸ್ವಲ್ಪವೇ ಮಸುಕಾಗುತ್ತಿತ್ತು.ಇದನ್ನು ಕಂಡು ಹೆಂಡತಿಯ ಮುಖಭಾವ ಬದಲಾಗುತ್ತಿದ್ದುದನ್ನು ನಾನು ಗಮನಿಸಿದೆ.ಅದೊಂದು ದಿನ ಅಪ್ಪ ಎಂದಿನಂತೆಯೇ ಗೋಡೆಯ ಮೇಲೆ ಕೈ ಇಟ್ಟಿದ್ದರು.ಮಂಡಿ ನೋವಿಗೆ ಎಣ್ಣೆ ಹಚ್ಚಿದ್ದರೋ ಏನೋ ಕೈ ಗುರುತು ಗೋಡೆ ಮೇಲೆ ಗಾಢವಾಗಿ ಅಂಟಿಕೊಂಡಿತು.ಹೆಂಡತಿ ಒಳಗೆ ಬಂದು ನನ್ನೊಡನೆ ರೇಗಿಯೇ ಬಿಟ್ಟಳು. ನನಗೂ ಅಂದು ಏನಾಯಿತೋ ಏನೋ.ಅಪ್ಪನ ರೂಮಿಗೆ ಹೋದೆ.ಅಪ್ಪಾ ನಡೆಯುವಾಗ ಗೋಡೆ ಹಿಡಿಯದೆ ನಡೆಯಲು ಪ್ರಯತ್ನಿಸಬಾರದೇ ಎಂದೆ..ಧ್ವನಿಯಲ್ಲಿದ್ದ ಅಸಹನೆ ಅತಿಯಾಯಿತೇನೋ ಅನಿಸಿತು.

ಅಪ್ಪ ನನ್ನೆಡೆಗೆ ನೋಡಿದರು.80 ವರ್ಷದ ಅಪ್ಪನ ಮುಖ ಚಿಕ್ಕ ಮಗು ತಪ್ಪು ಮಾಡಿದಂತಿತ್ತು.ಅಪ್ಪ ಮೌನವಾಗಿ ತಲೆತಗ್ಗಿಸಿದರು. ಛೇ ನಾನು ಹಾಗನ್ನಬಾರದಿತ್ತು ಎಂದೆನಿಸಿತು. ಸ್ವಾಭಿಮಾನಿಯಾಗಿದ್ದ ಅಪ್ಪ ಮುಂದೆ ಮೌನಿಯಾದರು. ಆ ಮೇಲೆ ಗೋಡೆ ಹಿಡಿದು ನಡೆಯಲಿಲ್ಲ. ಅದೊಂದು ದಿನ ಅಪ್ಪ ಆಯತಪ್ಪಿ ಬಿದ್ದು ಹಾಸಿಗೆ ಹಿಡಿದರು. ಮತ್ತೆರಡು ದಿನದಲ್ಲಿ ಇಹಲೋಕವನ್ನು ತ್ಯಜಿಸಿದರು.ಗೋಡೆಯಲ್ಲಿ ಮೂಡಿದ್ದ ಅಪ್ಪನ ಕೈ ಗುರುತು ಕಾಣುವಾಗ ಎದೆಯೊಳಗೆ ಏನೋ ಸಿಕ್ಕಿದಂತಾಗುತ್ತಿತ್ತು.

> "ಅಪ್ಪಾ ನಡೆಯುವಾಗ ಗೋಡೆ ಹಿಡಿಯದೆ ನಡೆಯಲು ಪ್ರಯತ್ನಿಸಬಾರದೇ"

ದಿನಗಳು ಉರುಳುತ್ತಿತ್ತು.ಅದೊಂದು ದಿನ ಹೆಂಡತಿ ಎಲ್ಲಾ ಗೋಡೆಗಳಿಗೆ ಬಣ್ಣ ಹೊಡೆಯಬೇಕೆಂದಳು.ಬಣ್ಣ ಹೊಡೆಯುವವರೂ ಬಂದರು.ನನ್ನ ಐದು ವರ್ಷದ ಮಗ ಜೀತ್ ಗೆ ತಾತನೆಂದರೆ ಪ್ರಾಣ.ಏನು ಮಾಡಿದರೂ ತಾತನ ಕೈಯ ಗುರುತನ್ನು ಅಳಿಸಲು ಅವನು ಬಿಡಲೇ ಇಲ್ಲ. ಅವನ ರಂಪಾಟ ಕಂಡು ಬಣ್ಣ ಬಳಿಯುವವರು, 'ಸರ್ ಆ ಕೈ ಗುರುತಿನ ಸುತ್ತ ಪೇಂಟ್ ಮೂಲಕ ಡಿಸೈನ್ ಮಾಡಿ ಸುಂದರವಾಗಿ ಮಾಡಿ ಕೊಡುತ್ತೇವೆ. ನೀವೂ ಇಷ್ಟ ಪಡುತ್ತೀರಿ' ಎಂದರು. ಮಗನ ಹಟಕ್ಕೆ ಮಣಿಯಬೇಕಾಯಿತು. ನಿಜವಾಗಿಯೂ ಬಣ್ಣ ಬಳಿಯುವವರು ಅದಕ್ಕೊಂದು ಹೊಸ ರೂಪ ನೀಡಿದ್ದರು.

ಅದು ಮನೆಗೆ ಬಂದವರ ಗಮನ ಸೆಳೆಯುತ್ತಿತ್ತು. ಎಲ್ಲರೂ ಅದರ ಬಗ್ಗೆ ಸಂತಸ ವ್ಯಕ್ತಪಡಿಸುತ್ತಿದ್ದರು. ಮುಂದೆ ಪ್ರತಿ ಬಾರಿ ಬಣ್ಣ ಬಳಿಯುವಾಗಲೂ ಆ ಜಾಗವನ್ನು ಮಾತ್ರಾ ವಿಶೇಷವಾಗಿ ಪೇಯಿಂಟ್ ಮಾಡಲಾಗುತ್ತಿತ್ತು ಮೊದಮೊದಲು ಮಗನ ಒತ್ತಾಯಕ್ಕಾಗಿದ್ದರೂ ಈಗೀಗ ಅದರ ಮೇಲೆ ವ್ಯಾಮೋಹ ಬೆಳೆದಿತ್ತು. ವರುಷಗಳುರುಳುತ್ತಿದ್ದವು. ಮಗನಿಗೆ ಮದುವೆಯಾಗಿದೆ. ಅಂದು ಅಪ್ಪ ಇದ್ದ ಸ್ಥಾನದಲ್ಲಿ ಈಗ ನಾನಿದ್ದೆ.ಅವರಷ್ಟು ವಯಸ್ಸಾಗಿರದಿದ್ದರೂ 70ರ ಆಸುಪಾಸಿನಲ್ಲಿದ್ದ ನನಗೆ ಆಗಲೇ ನಡೆಯುವಾಗ ಗೋಡೆಗೊಂದು ಕೈಕೊಟ್ಟು ನಡೆಯಬೇಕೆನಿಸುತ್ತಿತ್ತು.ಆದರೂ ನಾನು ಅಂದು ಸಿಡಿಮಿಡಿಗೊಂಡಿದ್ದು ನೆನಪಾಗುತ್ತಿತ್ತು. ಗೋಡೆಗೆಲ್ಲಿ ಕೈತಾಗುವುದೋ ಎಂದು ಗೋಡೆ ಬಿಟ್ಟು ದೂರದಲ್ಲೇ ನಡೆಯುತ್ತಿದ್ದೆ. ಅದೊಂದು ದಿನ ನನ್ನ ರೂಮಿನಿಂದ ಹೊರಗೆ ಬಂದು ಎರಡು ಹೆಜ್ಜೆ ಇಡುವಷ್ಟರಲ್ಲಿ ಮೈವಾಲಿತ್ತು.ಆಧಾರಕ್ಕಾಗಿ ಕೈಚಾಚಿದ್ದೆ. ನಿಮಿಷದಲ್ಲಿ ಓಡಿ ಬಂದ ಮಗನ ತೋಳಿನಲ್ಲಿ ನಾನಿದ್ದೆ.'ಅಪ್ಪಾ ಹೊರಗೆ ಬರುವಾಗ ಗೋಡೆ ಹಿಡಿದುಕೊಂಡು ಮೆಲ್ಲನೆ ಬರಬಾರದೇ ನೋಡಿ ಈಗ ಬಿದ್ದು ಬಿಡ್ತಾ ಇದ್ರಿ,' ಎಂದು ನುಡಿದಾಗ ಅಚ್ಚರಿಯಿಂದ ಅವನ ಮುಖ ನೋಡಿದೆ. ಅವನ ಮುಖದಲ್ಲಿ ಆತಂಕ ವಿತ್ತು. ಸ್ವಲ್ಪವೂ ಅಸಹನೆಯಿರಲಿಲ್ಲ.

ಅಪ್ಪನ ಕೈ ಗುರುತು ಅಲ್ಲೇ ಸ್ವಲ್ಪ ದೂರದ ಗೋಡೆಯಲ್ಲಿತ್ತು.ನೋಡಿದೆ. ಅಪ್ಪನ ಮುಖ ಕಣ್ಣಮುಂದೆ ಬಂತು. ನಾನು ಅಪ್ಪನಿಗೆ ಅಂದು ಗದರದೆ ಇದ್ದಿದ್ದರೆ ಅಪ್ಪ ಇನ್ನೂ ಸ್ವಲ್ಪ ದಿನ ಬದುಕುತ್ತಿದ್ದರೇನೋ ಅನಿಸಿತು. ಕಣ್ಣು ತುಂಬುತ್ತಿತ್ತು.ಓಡಿ ಬಂದ 8 ವರ್ಷದ ಮೊಮ್ಮಗಳು ತಾತ ನನ್ನ ಹೆಗಲು ಹಿಡ್ಕೊಂಡು ನಡೆಯಿರಿ ಎಂದು ನನ್ನ ಕೈಯನ್ನು ಅವಳ ಹೆಗಲ ಮೇಲೆ ಇರಿಸಿಕೊಂಡು ಮುದ್ದಾಗಿ ನಕ್ಕಳು.

ಹಾಲ್ ನಲ್ಲಿ ಸೋಫಾ ಮೇಲೆ ಕುಳಿತೆ. ಮೊಮ್ಮಗಳು ಅವಳ ಡ್ರಾಯಿಂಗ್ ಪುಸ್ತಕ ತಂದು ತಾತ ಇವತ್ತು ಕ್ಲಾಸಲ್ಲಿ ಡ್ರಾಯಿಂಗ್ ಅಲ್ಲಿ ನಂಗೆ ಫಸ್ಟ್ ಪ್ರೈಸ್ ಬಂತು. ಎಂದಳು. ಹೌದಾ ಯಾವ ಚಿತ್ರ ಬರೆದೆ ತೋರಿಸು.. ಎಂದೆ ತೆರೆದು ತೋರಿಸಿದಳು. ಗೋಡೆಯ ಮೇಲೆ ಅಪ್ಪನ ಕೈ ಗುರುತಿಗೆ ಸುಂದರವಾಗಿ ಡಿಸೈನ್ ಮಾಡಿದ ಚಿತ್ರವನ್ನು ಮೊಮ್ಮಗಳು ಗೋಡೆಯಲಿದ್ದಂತೆ ಬರೆದಿದ್ದಳು.

ಮೊಮ್ಮಗಳು ಮತ್ತೆ ಹೇಳಿದಳು, 'ತಾತ, ಮಿಸ್ ಕೇಳಿದ್ರು ಇದು ಏನು ಅಂತ. ಅದಕ್ಕೆ ನಾನಂದೆ ಇದು ನನ್ನ ತಾತನ ಕೈ ಗುರುತು ಅಂತ'. ನಮ್ಮ ಮನೆ ಗೋಡೆ ಮೇಲೆ ಈಗಲೂ ಇದೆ ಎಂದೆ. ಅದಕ್ಕೆ ಮಿಸ್, 'ಮಕ್ಕಳು ಚಿಕ್ಕವರಿರುವಾಗ ಮನೆಯ ಗೋಡೆಯಲ್ಲೆಲ್ಲಾ ಗೀಚಿದ ಗೆರೆಗಳು, ಚಿತ್ರಗಳು, ಹೆಜ್ಜೆ ಗುರುತು, ಕೈ ಗುರುತು.ಇವುಗಳನ್ನೆಲ್ಲಾ ನೋಡಿ ನಮ್ಮ ಅಪ್ಪ-ಅಮ್ಮ ಪ್ರೀತಿಯಿಂದ ಸಂಭ್ರಮ ಪಡುತ್ತಾರೆ. ಹಾಗೆಯೇ ನಾವು ಅವರಿಗೆ ವಯಸ್ಸಾದ ನಂತರ ಅವರನ್ನು ಅದೇ ರೀತಿ ಪ್ರೀತಿಸಬೇಕು.ಎಂದು ಎಲ್ಲಾ ಮಕ್ಕಳಿಗೆ ಹೇಳಿಕೊಟ್ಟರು. ನಂಗೆ ವೆರಿ ಗುಡ್ ಶ್ರೇಯಾ ಎಂದರು.

ಮುದ್ದು ಮುದ್ದಾಗಿ ನುಡಿದಳು. ಮಗ ಮೊಮ್ಮಗಳ ಮುಂದೆ ತೀರ ಚಿಕ್ಕವನಾದಂತೆ ಎನಿಸಿತು ರೂಮಿಗೆ ಬಂದೆ. ಬಾಗಿಲುಮುಚ್ಚಿ 'ಅಪ್ಪಾ ನನ್ನ ಕ್ಷಮಿಸಿ ಬಿಡಿ ಅಪ್ಪಾ' ಎಂದು ಮನಸ್ಸು ಹಗುರಾಗುವವರೆಗೂ ಅತ್ತೆ. ನೆನಪಾದಾಗಲೆಲ್ಲಾ ಅಳುತ್ತಿರುತ್ತೇನೆ.

## ವಿಶ್ವ ರಕ್ತದಾನಿಗಳ ದಿನ 2024ರ ಕಾರ್ಯಕ್ರಮಕ್ಕೆ ಸಚಿವ ದಿನೇಶ್ ಗುಂಡೂರಾವ್ ಚಾಲನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಕರ್ನಾಟಕ ರಾಜ್ಯ ರಕ್ತಚಾಲನ ಪರಿಷತ್ ವತಿಯಿಂದ ಜಿಲ್ಲಾ ಏಡ್ಸ್ ತಡೆಗಟ್ಟುವ, ನಿಯಂತ್ರಣ ಘಟಕ, ಲಯನ್ಸ್ ರಕ್ತ ನಿಧಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಾಯದೊಂದಿಗೆ ಆಯೋಜಿಸಲಾಗಿದ್ದ 20ನೇ ವರ್ಷದ ರಕ್ತದಾನದ ಸಂಭ್ರಮಾಚರಣೆ , ವಾಕಥಾನ್ ಕಾರ್ಯಕ್ರಮಕ್ಕೆ ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್ ರವರು ಚಾಲನೆ ನೀಡಿದರು. ಇಲಾಖೆಯ ಆಯುಕ್ತರಾದ ರಣ್ ದೀಪ್ ರವರು ಸಚಿವರೊಟ್ಟಿಗೆ ರಕ್ತದಾನ ಜಾಗೃತಿ ಮೂಡಿಸುವ ಬಿತ್ತಿಪತ್ರಗಳನ್ನು ಬಿಡುಗಡೆಗೊಳಿಸಿದರು ವಿಧಾನಸೌಧ ಮುಂಭಾಗದಿಂದ ಪ್ರಾರಂಭವಾದ ವಾಕಥಾನ್ ಕಂಠೀರವ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡಿತು.

ಈ ವೇಳೆ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ರಕ್ತದಾನಿಗಳಿಗಾಗಿ ಈ ದಿನವನ್ನು ಮೀಸಲಿಟ್ಟು ರಕ್ತದಾನಿಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ವಾಕಥಾನ್ ಕಾರ್ಯಕ್ರಮವನ್ನು ಆಯೋಜಿಸುವ ಮುಖೇನ ವಿಶ್ವ ರಕ್ತದಾನ ದಿನಾಚರಣೆಯನ್ನು ಆಯೋಜಿಸಲಾಗುತ್ತಿದೆ. ಒಬ್ಬರ ಜೀವ ಉಳಿಸಲು ವೈದ್ಯರೇ ಬೇಕಾಗಿಲ್ಲ ರಕ್ತದಾನ ಮಾಡುವ ಮೂಲಕ ಒಬ್ಬರ ಜೀವವನ್ನು ಉಳಿಸಬಹುದು. ರಕ್ತದಾನ ಮಾಡುವುದು ಅತ್ಯಂತ ಮಹತ್ವವಾದ ಕೆಲಸ ರಕ್ತದಾನ ಮಹಾದಾನ ರಕ್ತದಾನದಿಂದ ಬಹಳಷ್ಟು ಜನರ ಜೀವವನ್ನು ಉಳಿಸಬಹುದು. ರಕ್ತದ ಬೇಡಿಕೆ ಹೆಚ್ಚಿರುವ ಕಾರಣ ರಕ್ತಕ್ಕಿರುವ ಬೇಡಿಕೆಗಳನ್ನು ಗಮನದಲ್ಲಿಟ್ಟುಕೊಂಡು ನಮ್ಮ ಸರ್ಕಾರ ಹಲವು ಸ್ವಯಂಸೇವಕ ಸಂಘ ಸಂಸ್ಥೆಗಳೊಂದಿಗೆ ರಕ್ತದಾನದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹೆಚ್ಚು ಆಯೋಜಿಸುತ್ತಿದ್ದೆ. ರಕ್ತದಾನ ಮಾಡುವುದರಿಂದ ಬೇರೆಯವರ ಜೀವ ಉಳಿಸುವುದಲ್ಲದೆ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಆದ್ದರಿಂದ ಎಲ್ಲರೂ ರಕ್ತದಾನ ಮಾಡೋಣ ಈ ಮಹತ್ವದ ಕಾರ್ಯಕ್ಕೆ ಎಲ್ಲರೂ ಕೈಜೋಡಿಸೋಣ ಎಂದು ಕರೆ ನೀಡಿದರು. ಯೋಜನಾ ನಿರ್ದೇಶಕರಾದ ನಾಗರಾಜ್ ರವರು ರಕ್ತ ದಾನದ ಪ್ರತಿಜ್ಞಾವಿಧಿಯನ್ನು ಬೋಧಿಸಿದರು, ಉಪನಿರ್ದೇಶಕರಾದ ಡಾ. ಶಕೀಲಾ ಅತಿಥಿಗಳನ್ನು ಸ್ವಾಗತಿಸಿದರು, ಈ ಸಂದರ್ಭದಲ್ಲಿ ಲಯನ್ಸ್ ರಾಜ್ಯಪಾಲರಾದ ಲಯನ್ ಸುರೇಶ್ ರಾಮು, ಲಯನ್ ಮೋಹನ್ ಕುಮಾರ್, ಲಯನ್ ದೀಪಕ್ ಸುಮನ್ ಲಯನ್ ಮನೋಜ್ ಕುಮಾರ್, ರೆಡ್ ಕ್ರಾಸ್ ಅಶೋಕ್, ವಿವೇಕಾನಂದ ಮಂಜುನಾಥ್ ರೆಡ್ಡಿ , ಗಿರೀಶ್ ಬುಡರಕಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಹುಮುಖ ಪ್ರತಿಭೆ ಡಾ. ಸುಶ್ಮಿತಾ ಎನ್. ಶೆಟ್ಟಿ ರಂಗಪ್ರವೇಶ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ



ಖ್ಯಾತ ಹಿರಿಯ ನೃತ್ಯಗುರು ಲೀಲಾ ನಾಟ್ಯ ಕಲಾವೃಂದ' ದ ಸ್ಥಾಪಕಿ-ಹಿರಿಯಗುರು ಲೀಲಾವತಿ ಉಪಾಧ್ಯಾಯ ಅವರಲ್ಲಿ ಪ್ರಥಮ ಹೆಜ್ಜೆಗಳನ್ನು ಕಲಿತು ಅನಂತರ ನಾಟ್ಯಾಚಾರ್ಯ ವಿದ್ವಾನ್. ಟಿ.ಎನ್. ಉದಯಕೃಷ್ಣ ಉಪಾಧ್ಯಾಯ ಅವರ ನುರಿತ ಗರಡಿಯಲ್ಲಿ, ಕಳೆದ ಇಪ್ಪತ್ತೈದು ವರ್ಷಗಳಿಂದ ಸತತ ನೃತ್ಯಾಭ್ಯಾಸವನ್ನು ಬದ್ಧತೆಯಿಂದ ಮಾಡುತ್ತಿರುವ ವೈಶಿಷ್ಟ್ಯ ಡಾ. ಸುಶ್ಮಿತಾಳದು. ಶ್ರೀಮತಿ ಶಶಿಕಲಾ ಎನ್. ಶೆಟ್ಟಿ ಅವರ ಪುತ್ರಿಯಾದ ಇವಳಿಗೆ ನೃತ್ಯ ಬಾಲ್ಯದ ಒಲವು. ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲೂ ಪರಿಶ್ರಮಿಸಿರುವ ಇವಳು ಯೋಗದಲ್ಲೂ ತರಬೇತಿ ಹೊಂದಿದ್ದು, ಕರ್ನಾಟಕ ಸರ್ಕಾರದ ಸೀನಿಯರ್ ಮತ್ತು ವಿದ್ವತ್ ಪೂರ್ವ ಪರೀಕ್ಷೆಗಳಲ್ಲಿ ಉತ್ತಮಾಂಕಗಳಿಂದ ಜಯಶಾಲಿಯಾಗಿದ್ದಾಳೆ. ಸುಶ್ಮಿತಾ ವೃತ್ತಿಯಿಂದ ವೈದ್ಯೆ. ನೃತ್ಯದ ಬಗ್ಗೆ ಅಪಾರ ಬದ್ಧತೆಯುಳ್ಳ ಈಕೆ, ವಿದ್ವತ್ ಅಂತಿಮ ಹಂತವನ್ನು ತಲುಪಿರುವ ಇವಳು, ಇದೇ ತಿಂಗಳ 22 ಶನಿವಾರ ಸಂಜೆ 4 .30 ಕ್ಕೆ ಜೆ.ಸಿ ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡಲಿದ್ದಾಳೆ. ಇವಳ ನೃತ್ಯದ ಸೊಬಗನ್ನು ವೀಕ್ಷಿಸಲು ಎಲ್ಲ ಕಲಾರಸಿಕರಿಗೂ ಆದರದ ಸುಸ್ವಾಗತ.

> ಕಳೆದ ಇಪ್ಪತ್ತೈದು ವರ್ಷಗಳಿಂದ ಸತತ ನೃತ್ಯಭ್ಯಾಸವನ್ನು ಬದ್ಧತೆ

ವೃತ್ತಿ-ಪ್ರವೃತ್ತಿಗಳೆರಡರಲ್ಲೂ ಸಮಾನ ಆಸಕ್ತಿ ಹೊಂದಿರುವ ಸುಶ್ಮಿತಾ ಪ್ರತಿಭಾವಂತೆ. ಶಾಲಾ ಕಾಲೇಜಿನ ಓದಿನಲ್ಲೂ ಮುಂದು. ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ನಿರತೆ. ಕಾಲೇಜಿನಲ್ಲಿ ತನ್ನದೇ ಆದ 'ಧೃತಿ' ಎಂಬ ನೃತ್ಯ ತಂಡ ಕಟ್ಟಿ, ಅದರಲ್ಲಿ ಸಹ ನರ್ತಕಿಯರಿಗೆ ಸೂಕ್ತ ತರಬೇತಿ ನೀಡಿ ಅಂತರ ಕಾಲೇಜಿನ ಎಲ್ಲ ನೃತ್ಯಸ್ಪರ್ಧೆಗಳಲ್ಲೂ ಬಹುಮಾನಗಳಿಸಿದ ಅಗ್ಗಳಿಕೆ. ಪೌರಾಣಿಕ ಕಥೆಗಳನ್ನು ಆಧರಿಸಿ ಅನೇಕ ಅರೆ ಶಾಸ್ತ್ರೀಯ ನೃತ್ಯಗಳ ಪ್ರದರ್ಶನ ನೀಡಿದ್ದಾಳೆ. ಅದರಲ್ಲೂ ಸುಶ್ಮಿತಾ, ರಚಿಸಿ-ನಿರ್ಮಿಸಿದ 'ಸ್ತ್ರೀ' ಎಂಬ ವಿಷಯಾಧಾರಿತ ರೂಪಕದ ನೃತ್ಯಾರ್ಪಣೆ ಅವಳಿಗೆ ಅನೇಕ ಪ್ರಶಸ್ತಿಗಳನ್ನು ತಂದು ಕೊಟ್ಟಿತು ಎಂಬುದು ಅವಳ ಅಸ್ಮಿತೆ.

ಜೊತೆಗೆ ಇವಳು, ಕಥಕ್ ನೃತ್ಯವನ್ನೂ ಗುರು ಮೈಸೂರು ನಾಗರಾಜ್ ಅವರಲ್ಲಿ ಕಲಿತಿದ್ದು, ಯಕ್ಷಗಾನ'ವನ್ನೂ ಕಲಿತು ಅನೇಕ ಪ್ರದರ್ಶನಗಳನ್ನು ನೀಡಿರುವುದು ಇವಳ ವೈಶಿಷ್ಟ್ಯ. ಬಹುಮುಖ ಆಸಕ್ತಿಯ ಸುಶ್ಮಿತಾ ಉತ್ತಮ ಚಿತ್ರ ಕಲಾವಿದೆ ಕೂಡ.

ಚಿಕ್ಕಂದಿನಿಂದ ಸಂಶೋಧನಾ ಕಾರ್ಯಗಳಲ್ಲಿ ಆಸಕ್ತಿ ಹೊಂದಿದ್ದ ಈ ವೈದ್ಯೆ, ಪ್ರಸ್ತುತ ಕ್ಲಿನಿಕಲ್ ರಿಸರ್ಚ್ ಸಂಸ್ಥೆಯೊಂದರಲ್ಲಿ ಸೇವೆ ಸಲ್ಲಿಸುತ್ತಿದ್ದಾಳೆ. ಬೋನ್ ಹೆಲ್ತ್ ಮತ್ತು ಆನ್ಕಾಲಜಿ ಬಗ್ಗೆ ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸಿದ್ದಾಳೆ.

ಅವಳ ಆಧ್ಯಾತ್ಮಿಕ ಆಸಕ್ತಿ, ಯೋಗ-ಕ್ರಿಯೆಗಳನ್ನು ಕಲಿಯುವಂತೆ ಮಾಡಿತು. ಸುಶ್ಮಿತಾಳಿಗೆ ಭವಿಷ್ಯದ ಗುರಿ- ಕನಸುಗಳು ಹಲವಾರು. ಭರತನಾಟ್ಯ ಗುರುಕುಲವೊಂದರ ಸ್ಥಾಪನೆ ಮತ್ತು ಭಾರತೀಯ ಶ್ರೀಮಂತ ಸಂಸ್ಕೃತಿ ಮತ್ತು ಸಂಪ್ರದಾಯದ ರಕ್ಷಣೆಗೆ ಮೀಸಲಾದ ಆಡಿಟೋರಿಯಂ ಒಂದನ್ನು ತನ್ನ ಊರಿನಲ್ಲಿ ನಿರ್ಮಿಸುವ ಅಪರೂಪದ ಹೆಬ್ಬಯಕೆ ಹೊಂದಿದ್ದಾಳೆ.




• ಹಿಂದಿನ ಸಂಚಿಕೆಯಿಂದ

ನಿನಗೆ ಹೆದರಿಕೊಂಡು ನಾನು ರಣರಂಗದಿಂದ ಓಡಿಬರಲಿಲ್ಲ. ತಮ್ಮಂದಿರು. ಮಾವ ಶಕುನಿ ಎಲ್ಲರೂ ಸತ್ತಾಗ, ಮನಸ್ಸು ಕದಡಿ ನನಗೆ ಯೋಚಿಸಲೇ ಆಗಲಿಲ್ಲ. ನಾನು ಕುಳಿತಿದ್ದ ಕುದುರೆ ನನ್ನನ್ನು ದೂರ ಕರೆತಂದಿತು. ಮಧ್ಯದಲ್ಲೇ ಸತ್ತುಹೋದ ಅದನ್ನು ಬಿಟ್ಟು, ನಾನು ಕಾಲುಗಳನ್ನು ಕರೆದೊಯ್ದಲ್ಲಿಗೆ ನಡೆಯತೊಡಗಿದೆ. ಈ ಸರೋವರ ಕಣ್ಣಿಗೆ ಬಿದ್ದಿತು. ಜ್ವರ ಬಂದಂತೆ ಉರಿಯುತ್ತಿದ್ದ ಮೈಯನ್ನು ತಣ್ಣಗೆ ಮಾಡಿಕೊಳ್ಳೋಣವೆಂದು ನೀರಿಗಿಳಿದೆ. ನಾನೇನೂ ಭಯಪಟ್ಟಿಲ್ಲ, ಬದುಕಿ ಉಳಿಯಲು ಆಸೆಪಡುತ್ತಲೂ ಇಲ್ಲ. ನೀನೂ ನಿಮ್ಮವರೂ ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ. ನಾನೂ ಸ್ವಲ್ಪ ವಿಶ್ರಮಿಸಿಕೊಂಡು ಅನಂತರ ನಿಮ್ಮೊಡನೆ ಯುದ್ಧ ಮಾಡುತ್ತೇನೆ ಎಂದನು.

ದುರ್ಯೋಧನನು ರಣರಂಗದಿಂದ ಹೇಡಿಯಂತೆ ಓಡಿಬರಲಿಲ್ಲವೆಂದು ತಿಳಿದು ಯುಧಿಷ್ಠಿರನಿಗೆ ಸಂತೋಷವಾಯಿತು. ಅವನು, ''ನಾವೆಲ್ಲರೂ ಹೋರಾಡಲು ಸಿದ್ಧರಾಗಿದ್ದೇವೆ. ನಿನ್ನನ್ನು ಈವರೆಗೂ ಹುಡುಕುತ್ತಿದ್ದೆವು. ಈಗ ಮೇಲೆದ್ದು ಬಂದು ಯುದ್ಧಮಾಡು ಎನ್ನಲು ದುರ್ಯೋಧನನು, ''ನನಗೇನೂ ಈಗ ರಾಜ್ಯದಾಸೆ ಉಳಿದಿಲ್ಲ. ಯಾರಿಗಾಗಿ ನಾನು ರಾಜ್ಯವನ್ನು ಅಪೇಕ್ಷಿಸಿದ್ದೆನೋ ಅವರೆಲ್ಲ ಈಗ ಸತ್ತಿದ್ದಾರೆ. ನನ್ನ ಸೋದರರೆಲ್ಲರೂ ಸತ್ತರು.; ನನ್ನ ಜೀವದ ಜೀವವಾಗಿದ್ದ ರಾಧೇಯ ಸತ್ತ. ನನ್ನ ಪಾಲಿಗೆ ಲೋಕದ ಆಕರ್ಷಣೆ ಉಳಿದಿಲ್ಲ. ಆದರೆ ನಿನ್ನ ಅಹಂಕಾರವನ್ನು ಮರ್ದಿಸುವುದಕ್ಕಾಗಿ ನಾನು ಯುದ್ಧಮಾಡುತ್ತೇನೆ. ಭೀಷ್ಮ ದ್ರೋಣ ರಾಧೇಯ ಎಲ್ಲರೂ ಹೋದ ಮೇಲೆ ಯುದ್ಧದ ಅವಶ್ಯಕತೆಯೇ ಕಾಣುತ್ತಿಲ್ಲ. ರಾಜ್ಯವನ್ನು ನಾನು ಬೇಕಾದ ಹಾಗೆ ಅನುಭವಿಸಿದ್ದೇನೆ; ಅದೆಂದರೆ ನನಗೀಗ ಒಂದಷ್ಟು ಮಣ್ಣು ಅಷ್ಟೇ. ನನ್ನವರೆಲ್ಲ ಸತ್ತರು; ನೀನದನ್ನು ನನ್ನಿಂದ ಕಸಿದಿರುವೆ. ರಾಜ್ಯವಾಳಲು ನಿನಗೆ ಸುಸ್ವಾಗತ. ಬದುಕಿರಲು ನನಗೆ ಇಚ್ಛೆಯಿಲ್ಲ. ನೀನಿನ್ನು ಈ ಭೂಮಿಯನ್ನು ವೈಭವದಿಂದ ಆಳಬಹುದು. ಇಂದು ಮರುಭೂಮಿಯಂತಾಗಿರುವ ಈ ಕುರು ರಾಜ್ಯವನ್ನು ನಿನಗೆ ಕಾಣಿಕೆಯಾಗಿ ಕೊಡುತ್ತಿದ್ದೇನೆ, ಯುಧಿಷ್ಠಿರ. ಸಮಸ್ತ ಸೌಂದರ್ಯವನ್ನೂ ಕಳೆದುಕೊಂಡಿರುವ ಈ ರಾಜ್ಯದಲ್ಲಿರುವುದಕ್ಕಿಂತ ಕೃಷ್ಣಾಜಿನವನ್ನು ಹೊದ್ದು ಕಾಡಿಗೆ ಹೋಗುವುದೇ ವಾಸಿ. ನೀನೇ ರಾಜ್ಯವಾಳು ಯುಧಿಷ್ಠಿರ! ಎಂದನು.

ಇದನ್ನು ಕೇಳಿ ಯುಧಿಷ್ಠಿರ ಕೋಪ ಮಿತಿಮೀರಿತು. ದಪ್ಪ ದನಿಯಲ್ಲಿ ಗಟ್ಟಿಯಾಗಿ, ''ದುರ್ಯೋಧನ, ನಿನ್ನ ಈ ಹುಚ್ಚು ಹರಟೆ ನನಗೆ ಬೇಕಿಲ್ಲ. ನಿನ್ನ ಮೇಲೆ ನನಗೆ ಸಹಾನುಭೂತಿಯೇನೂ ಉಳಿದಿಲ್ಲ. ಈಗ ನಿನಗೆ ಯಾವ ಹಕ್ಕೂ ಇಲ್ಲದ ಭೂಮಿಯನ್ನು ನನಗೆ ಕಾಣಿಕೆಯಾಗಿ ಕೊಡುತ್ತಿರುವೆಯಲ್ಲವೆ? ಒಂದುವೇಳೆ ನಿನಗೆ ಹಕ್ಕು ಇದ್ದಿದ್ದರೂ, ಕ್ಷತ್ರಿಯನಾದ ನಾನು ಅದನ್ನು ಸ್ವೀಕರಿಸುತ್ತಿರಲಿಲ್ಲ. ಶತ್ರುವು ಉಡುಗೊರೆಯಾಗಿ ಕೊಟ್ಟ ರಾಜ್ಯವನ್ನಾಳಲು ನನಗಿಷ್ಟವಿಲ್ಲ.

ಮುಂದುವರಿಯುವುದು...

## ಅಸೋಚಾಮ್ ಪ್ರತಿಷ್ಠಿತ ಎಚ್‌ಆರ್ ಟ್ರೈಲ್‌ಬ್ಲೇಜರ್ ಪ್ರಶಸ್ತಿ ಸಮಾರಂಭ

• ಉದಯವಾಹಿನಿ, ಬೆಂಗಳೂರು

2024 – ಅಸೋಸಿಯೇಟೆಡ್ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ ಆಫ್ ಇಂಡಿಯಾ (ಅಸೋಚಾಮ್) ತನ್ನ ಎಚ್‌ಆರ್ ಕಾನ್‌ಕ್ಲೇವ್‌ನ ಭಾಗವಾಗಿ ಎಚ್‌ಆರ್ ಟ್ರೈಲ್‌ಬ್ಲೇಜರ್ ಪ್ರಶಸ್ತಿ ಸಮಾರಂಭವನ್ನು ಘೋಷಿಸಲು ಹೆಮ್ಮೆಪಡುತ್ತದೆ. ಜೂನ್ 13, 2024 ರಂದು ಬೆಂಗಳೂರಿನ ಹೋಟೆಲ್ ರಾಡಿಸನ್ ಬ್ಲೂನಲ್ಲಿ ನಡೆದ ಈ ಕಾರ್ಯಕ್ರಮವು ಮಾನವ ಸಂಪನ್ಮೂಲ ಕ್ಷೇತ್ರ ದಲ್ಲಿನ ಅತ್ಯುತ್ತಮ ಸಾಧನೆಗಳು ಮತ್ತು ನವೀನ ಅಭ್ಯಾಸಗಳನ್ನು ಆಚರಿಸುತ್ತದೆ. ಅಸೋಚಮ್ ಸಿಎಚ್‌ಆರ್ ಎಂಪಿ ಸಹಯೋಗದೊಂದಿಗೆ ''ಭಾರತವನ್ನು ಸಬಲೀಕರಣಗೊಳಿಸುವುದು'' ಕುರಿತು ಜ್ಞಾನದ ವರದಿಯನ್ನು ಬಿಡುಗಡೆ ಮಾಡಿತು.

> ಮಾನವ ಸಂಪನ್ಮೂಲ ಕ್ಷೇತ್ರದಲ್ಲಿನ ಅತ್ಯುತ್ತಮ ಸಾಧನೆ

ಪ್ರಶಸ್ತಿ ಪ್ರದಾನ ಸಮಾರಂಭವು ಭಾರತವನ್ನು ಸಬಲೀಕರಣಗೊಳಿಸುವುದು: ಸುಸ್ಥಿರ, ನವೀನ ಜನರ ಅಭ್ಯಾಸಗಳಿಗಾಗಿ ಮಾನವ ಸಂಪನ್ಮೂಲ ದೃಷ್ಟಿ ಎಂಬ ವಿಷಯದ ಒಂದು ದಿನದ ಮಾನವ ಸಂಪನ್ಮೂಲ ಕಾನ್‌ಕ್ಲೇವ್‌ನ ಪರಾಕಾಷ್ಠೆಯಾಗಿದೆ. ಈ ಪ್ರತಿಷ್ಠಿತ ಈವೆಂಟ್ ಅಸಾಧಾರಣ ನಾಯಕತ್ವ, ನವೀನ ಮಾನವ ಸಂಪನ್ಮೂಲ ಅಭ್ಯಾಸಗಳು ಮತ್ತು ಅಂತರ್ಗತ ಮತ್ತು ಕ್ರಿಯಾತ್ಮಕ ಕಾರ್ಯಪಡೆಯನ್ನು ಬೆಳೆಸುವ ಬದ್ಧತೆಯನ್ನು ಪ್ರದರ್ಶಿಸಿದ ಸಂಸ್ಥೆಗಳನ್ನು ಗೌರವಿಸುತ್ತದೆ.



ಉದಯವಾಹಿನಿ ಚಿತ್ರ

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿ ಶ್ರೀ. ಕರ್ನಾಟಕ ಸರ್ಕಾರದ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂ ರಾವ್ ಅವರು ಕಾರ್ಪೊರೇಟ್ ಭಾರತಕ್ಕೆ ಶಿಕ್ಷಣ ಕೌಶಲ್ಯ ಮತ್ತು ಆರೋಗ್ಯದ ಪ್ರಮುಖ ಅಂಶಗಳನ್ನು ಸಹಕರಿಸುವಲ್ಲಿ ಅತ್ಯುತ್ತಮವಾದ ಎಲ್ಲಾ ವಿಜೇತರನ್ನು ಅಭಿನಂದಿಸಿದರು,

''ಭಾರತವು ಅತಿದೊಡ್ಡ ಶಕ್ತಿಯಾಗಿದೆ. ಸರಿಯಾದ ತರಬೇತಿ ಮತ್ತು ಕೌಶಲ್ಯದೊಂದಿಗೆ ಜ್ಞಾನ ಮತ್ತು ಕೌಶಲ್ಯಗಳ ವಿಷಯಕ್ಕೆ ಬಂದಾಗ ಭಾರತವು ಮುಂಬರುವ ಭವಿಷ್ಯದಲ್ಲಿ ಅಜೇಯ ರಾಷ್ಟ್ರವಾಗಲಿದೆ. ಈ ದೇಶದಲ್ಲಿ 140 ಕೋಟಿಗೂ ಅಧಿಕ ಮಾನವರಿದ್ದು, ಅದೇ ದೊಡ್ಡ ಸಂಪನ್ಮೂಲವಾಗಿದೆ. ನಾವು ಸಾಕಷ್ಟು ಸಾಧಿಸಿದ್ದೇವೆ, ಕಳೆದ 40 ವರ್ಷಗಳಲ್ಲಿ ಕಾರ್ಪೊರೇಟ್ ವಲಯವು ಅಗಾಧವಾಗಿ ಬೆಳೆದಿದೆ. ಮುಂಬರುವ ವರ್ಷಗಳಲ್ಲಿ, ನಾವು ವಿಶ್ವಸೂಪರ್ ಪವರ್ ಎಂದು ಪರಿಗಣಿಸಲ್ಪಡುವ ಸಮಯ ಬರುತ್ತದೆ. ಆದರೆ ಇದು ಒಂದು ಪ್ರಕ್ರಿಯೆಯಾಗಿದ್ದು, ನಾವು ಅದರಲ್ಲಿ ಕೆಲಸ ಮಾಡುತ್ತಿರಬೇಕು ಮತ್ತು ನಿಮಗೆ ತಿಳಿದಿರುವಂತೆ, ನಮ್ಮನ್ನು ಸುಧಾರಿಸಿಕೊಳ್ಳುತ್ತಿರಬೇಕು ಮತ್ತು ನಾವೀನ್ಯತೆಯನ್ನು ಇಟ್ಟುಕೊಳ್ಳಬೇಕು ಮತ್ತು ಕಲಿಯುವುದನ್ನು ಮುಂದುವರಿಸಬೇಕು.

# ಪ್ರವಾಸೋದ್ಯಮ ಇಲಾಖೆ ಎಫ್.ಕೆ.ಸಿ.ಸಿಐ ನಿಂದ ಆಯೋಜನೆ

## ■ ಉತ್ಸವದ ಸಿದ್ಧತೆ ಪರಿಶೀಲಿಸಿದ ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಡಾ. ರಾಮ್ ಪ್ರಸಾತ್ ಮನೋಹರ್

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಭಾರತದ ರಾಜ್ಯಗಳ ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರಕ್ಕೆ ಉತ್ತೇಜನ ನೀಡುವ ಮಹತ್ವಾಕಾಂಕ್ಷಿ ಕಾರ್ಯಕ್ರಮ ''ದಕ್ಷಿಣ ಭಾರತ ಉತ್ಸವ 2024'' ಕ್ಕೆ ಸಿದ್ಧತೆಗಳು ಪೂರ್ಣಗೊಂಡಿವೆ.

ಉತ್ಸವ ನಡೆಯುವ ಅರಮನೆ ಮೈದಾನದ ಪ್ರಿನ್ಸಸ್ ಶ್ರೈನ್ ಗೇಟ್ 9 ರಲ್ಲಿ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಾದ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ ಮತ್ತು ಅಧಿಕಾರಿಗಳ ಜೊತೆ ಉತ್ಸವದ ಸಿದ್ದತೆಗಳನ್ನು ಪರಿಶೀಲಿಸಿದರು. ರಾಜ್ಯ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಸಾವಿರ ಕೋಟಿ ರೂಪಾಯಿ ಹೂಡಿಕೆ ನೀರೀಕ್ಷೆ ಹೊಂದಿರುವ ಈ ಮಹತ್ವಾಕಾಂಕ್ಷೆಯ ಸಮಾವೇಶಕ್ಕೆ ಅಂತಿಮ ಸ್ಪರ್ಷ ನೀಡುವ ನಿಟ್ಟಿನಲ್ಲಿ ಸೂಚನೆ ನೀಡಿದರು. ದಕ್ಷಿಣ ಭಾರತದ ಏಳು ರಾಜ್ಯಗಳ ಪ್ರವಾಸೋದ್ಯಮ ಇಲಾಖೆಯ ಪ್ರತಿನಿಧಿಗಳ, ದೇಶ ವಿದೇಶಗಳ ಗಣ್ಯರು,


ಉದಯವಾಹಿನಿ ಚಿತ್ರ

> ದಕ್ಷಿಣ ಭಾರತ ಉತ್ಸವ 2024"

ಬಂಡವಾಳ ಹೂಡಿಕೆದಾರರು ಸೇರಿದಂತೆ 1500 ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ ಮಾತನಾಡಿ, ಜೂನ್ 15 ರಂದು ಬೆಳಿಗ್ಗೆ ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಉದ್ಘಾಟಿಸಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ್, ಭೈರತಿ ಸುರೇಶ್, ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾ ರೆಡ್ಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್, ಇಂಧನ ಸಚಿವರಾದ ಕೆ.ಜೆ. ಜಾರ್ಜ್, ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ, ವಸತಿ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್, ವಿಧಾನಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷರಾದ ಯು.ಟಿ. ಖಾದರ್, ಶಾಸಕರಾದ ಡಾ. ಸಿ.ಎನ್. ಅಶ್ವತ್ಥನಾರಾಯಣ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಡಾ.ಕೆ. ಗೋವಿಂದ್ ರಾಜ್, ನಸೀರ್ ಅಹಮದ್, ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ, ಪ್ರವಾಸೋದ್ಯಮ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಸಲ್ಮಾ ಕೆ ಫಾಹೀಮ್ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿರಲಿದ್ದಾರೆ. ಜೂ.16 ರಂದು ಸಂಜೆ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಎರಡು ದಿನಗಳ ಕಾಲ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮಕ್ಕೆ ಸಂಬಂಧಿಸಿದಂತೆ ಸೆಮಿನಾರ್‌ಗಳನ್ನು ಆಯೋಜಿಸಲಾಗಿದೆ ಎಂದರು.

> ಮಾತನಾಡಿದ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಾದ ಡಾ. ರಾಮ್ ಪ್ರಸಾತ್ ಮನೋಹರ್, ದಕ್ಷಿಣ ಭಾರತದ ಏಳೂ ರಾಜ್ಯಗಳಲ್ಲಿನ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆಗೆ ವಿಪುಲ ಅವಕಾಶಗಳಿವೆ. ಇವುಗಳನ್ನ ಒಂದೇ ವೇದಿಕೆಯ ಅಡಿಯಲ್ಲಿ ತರುವುದು ಹಾಗೂ ಜಾಗತಿಕ ಪ್ರವಾಸೋದ್ಯಮ ಭೂಪಟದಲ್ಲಿ ಉತ್ತಮ ಸ್ಥಾನ ಪಡೆದುಕೊಳ್ಳಲು ಅನುವು ಮಾಡಿಕೊಡುವುದು ಈ ಉತ್ಸವದ ಉದ್ದೇಶವಾಗಿದೆ. 80 ಕ್ಕೂ ಹೆಚ್ಚು ಸ್ಟಾಲ್‌ಗಳಿದ್ದು, ಏಳೂ ರಾಜ್ಯಗಳ ಪ್ರವಾಸೋದ್ಯಮ ಇಲಾಖೆ ಹಾಗೂ ಉದ್ದಿಮೆದಾರರು ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ. ದಕ್ಷಿಣ ಭಾರತದ ರಾಜ್ಯಗಳನ್ನು ಒಂದೇ ವೇದಿಕೆಯ ಅಡಿಯಲ್ಲಿ ತರುವ ಮೂಲಕ ಒಗ್ಗಟ್ಟಾಗಿ ಪ್ರವಾಸೋದ್ಯಮ ಕ್ಷೇತ್ರವನ್ನು ಪ್ರೋತ್ಸಾಹಿಸುವುದು ಉತ್ಸವದ ಗುರಿಯಾಗಿದೆ ಎಂದರು.


# ಜಿಲ್ಲಾ ಘಟಕ : 2.21 ಕೋಟಿ ನಾರಿಯರು ಉಚಿತ ಪ್ರಯಾಣ

## ಚಿತ್ರದುರ್ಗ ವಿಭಾಗಕ್ಕೆ ಮಹಿಳೆಯರಿಗೆ ನೀಡಿರುವ ಶೂನ್ಯ ದರದ ಟಿಕೆಟ್ ನೀಡಿಕೆ ಮೂಲಕ ರೂ.85.71 ಕೋಟಿ ಆದಾಯ

• ಉದಯವಾಹಿನಿ, ಚಿತ್ರದುರ್ಗ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಜಾರಿಯಾಗಿ ವರ್ಷ ತುಂಬಿದೆ. ಈ ಯೋಜನೆಯಡಿ ಕಳೆದ ಒಂದು ವರ್ಷದಲ್ಲಿ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 2.21 ಕೋಟಿ ನಾರಿಯರು ಉಚಿತ ಪ್ರಯಾಣ ಬೆಳೆಸಿರುವುದು ಗಮನಾರ್ಹ.

ಮಹಿಳಾ ಸಬಲೀಕರಣ ಉದ್ದೇಶದಿಂದ ಜಾರಿಗೊಳಿಸಿದ ಮಹಿಳೆಯರಿಗೆ ಉಚಿತ ಸಾರಿಗೆ ಸೇವೆ ನೀಡುವ ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಚಿತ್ರದುರ್ಗ ವಿಭಾಗಕ್ಕೆ ಮಹಿಳೆಯರಿಗೆ ನೀಡಿರುವ ಶೂನ್ಯ ದರದ ಟಿಕೆಟ್ ನೀಡಿಕೆ ಮೂಲಕ ರೂ.85.71 ಕೋಟಿ ಆದಾಯ ಲಭಿಸಿದೆ. ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸೇರಿದಂತೆ ಸಮಸ್ತ ನಾರಿಯರ ಸಂಚಾರಕ್ಕೆ ಶಕ್ತಿಯನ್ನು ನೀಡಿದ ರಾಜ್ಯ ಸರ್ಕಾರದ ಶಕ್ತಿ ಯೋಜನೆ. ಇದರ ಮೂಲಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಗರ ಸಾರಿಗೆ, ಸಾಮಾನ್ಯ ಮತ್ತು ವೇಗದೂತ ಬಸ್ಸುಗಳಲ್ಲಿ


ಉದಯವಾಹಿನಿ ಚಿತ್ರ

ಶಕ್ತಿ ಯೋಜನೆಗೆ ವರ್ಷದ ಸಂಭ್ರಮ

ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ನಾರಿಯರಿಗೆ ಅವಕಾಶ ಲಭಿಸಿದ್ದು, ಜಿಲ್ಲೆಯಲ್ಲಿ ವಾರ್ಷಿಕ ರೂ.85.71 ಕೋಟಿ ಮೌಲ್ಯವಾಗಿ ಯೋಜನೆಯು ಮುಂದುವರೆದಿದ್ದು, ಶಕ್ತಿ ಯೋಜನೆಗೆ ಚಾಲನೆ ನೀಡಿದ 2023 ರ ಜೂನ್ 11 ಮೊದಲ ದಿನದಿಂದಲೂ ಇಂದಿನವರೆಗೂ ಮಹಿಳಾ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯನ್ನು ಬಳಸಿಕೊಳ್ಳುತ್ತಿದ್ದಾರೆ.

ಸರ್ಕಾರದ ಶಕ್ತಿ ಯೋಜನೆಯು ಸಾಮಾಜಿಕ ಕ್ಷೇತ್ರದಲ್ಲಿ ಹಲವು ರೀತಿಯ ಬದಲಾವಣೆಗೆ ಸಾಕ್ಷಿಯಾಗಿದೆ. ಮುಖ್ಯವಾಗಿ ಗ್ರಾಮೀಣ ಭಾಗದಿಂದ ನಗರ ಪಟ್ಟಣಗಳಿಗೆ ತೆರಳಿ ದುಡಿಯುವ ಮಹಿಳೆಯರಿಗೆ ವರದಾನವಾಗಿದೆ. ಖಾಸಗಿ ಹಾಗೂ ಅಸಂಘಟಿತ

> **ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗೆ ವಾರ್ಷಿಕ ಆದಾಯ ಹೆಚ್ಚಾಗಿದೆ. ಮಾರ್ಗಸೂಚಿ ಹಾಗೂ ಬಸ್ ಬೇಡಿಕೆಗಳನ್ನು ಪರಿಗಣಿಸಿ ಹೆಚ್ಚುವರಿ ಮಾರ್ಗಗಳಿಗೆ ಪ್ರಯಾಣ ಜನಸಂದಣಿಗೆ ಅನುಗುಣವಾಗಿ ವಾಹನ ಕಾರ್ಯಾಚರಣೆ ಮಾಡಲು ತಕ್ಷಣ ಕ್ರಮಕೈಗೊಳ್ಳಲಾಗುವುದು**
> -ಸಿದ್ದೇಶ್ವರ ಹೆಬ್ಬಾಳ್, ನಿಯಂತ್ರಣಾಧಿಕಾರಿ

ವಲಯಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸಂಚಾರ ವೆಚ್ಚದಿಂದ ಮುಕ್ತರಾಗಿದ್ದಾರೆ. ಮಹಿಳೆಯರು ಸಾಮಾನ್ಯವಾಗಿ ದುಡಿಯಲೆಂದೆ ತಮ್ಮ ತಿಂಗಳ ಆದಾಯದ ಶೇ.10ರಷ್ಟು ಹಣವನ್ನು ಸಂಚಾರಕ್ಕಾಗಿ ವ್ಯಯಿಸಬೇಕಿತ್ತು. ಇನ್ನು ಶಾಲಾ-ಕಾಲೇಜು ವಿದ್ಯಾರ್ಥಿನಿಯರು ವಾರ್ಷಿಕ ಬಸ್ ಪಾಸ್ ಪಡೆಯಲು ನೀಡಬೇಕಿದ್ದ ಹಣದಲ್ಲಿಯೂ ಉಳಿತಾಯವಾಗಿದೆ. ಉದ್ಯೋಗ, ಶಿಕ್ಷಣ, ಪ್ರವಾಸ ಸೇರಿದಂತೆ ಹಲವು ಚಟುವಟಿಕೆಗಳಿಗೆ ಶಕ್ತಿ ಯೋಜನೆಯಿಂದ ಶಕ್ತಿ ಲಭಿಸಿದೆ. ಕೆಎಸ್‌ಆರ್‌ಟಿಸಿ ಬಸ್‌ಗಳ ಭರ್ತಿಯ ಜೊತೆಗೆ

> **ಶಕ್ತಿ ಯೋಜನೆಯಿಂದ ಬಹಳಷ್ಟು ಅನುಕೂಲ: ಕೆಎಸ್‌ಆರ್‌ಟಿಸಿ ಬಸ್ ಗಳಲ್ಲಿ ಉಚಿತ ಪ್ರಯಾಣ ಇರುವುದರಿಂದ ಬಹಳ ಅನುಕೂಲವಾಗಿದೆ. ಆಧಾರ್ ಕಾರ್ಡ್ ತೋರಿಸಿದರೆ ಸಾಕು ನಯಾಪೈಸೆ ಇಲ್ಲದಿದ್ದರೂ ಬಸ್‌ನಲ್ಲಿ ಪ್ರಯಾಣ ಬೆಳೆಸಬಹುದಾಗಿದೆ. ರಾಜ್ಯ ಸರ್ಕಾರದ ಈ ಯೋಜನೆಯಿಂದ ಮಹಿಳೆಯರಿಗೆ ಬಹಳಷ್ಟು ಅನುಕೂಲವಾಗುತ್ತಿದೆ**
> -ಚಳ್ಳಕೆರೆ ತಾಲ್ಲೂಕಿನ ಕುರುಡಿಹಳ್ಳಿಯ ಗೌರಮ್ಮ

ನಾರಿಯರು ಆದಾಯ ಹೆಚ್ಚಿಸಿದ್ದಾರೆ. ಧಾರ್ಮಿಕ ಕೇಂದ್ರ, ಪ್ರವಾಸಿ ತಾಣಗಳಿಗೂ ಭೇಟಿ ನೀಡುವವರ ಸಂಖ್ಯೆಯೂ ಹೆಚ್ಚಳಕ್ಕೆ ಕಾರಣವಾಗಿದೆ. ಇದರಿಂದ ಧಾರ್ಮಿಕ ಕೇಂದ್ರಗಳಲ್ಲೂ ದೇಣಿಗೆ ಸಂಗ್ರಹವೂ ಸಹ ದುಪ್ಪಟ್ಟಾಗಿದೆ.

**ಬೇಡಿಕೆ ಅನುಸಾರ ವಾಹನ ಕಾರ್ಯಾಚರಣೆಗೆ ಕ್ರಮ:** ಶಕ್ತಿ ಯೋಜನೆ ಜಾರಿಯಾದಾಗಿನಿಂದ ಪ್ರತಿದಿನ ಸರಾಸರಿ 60 ಸಾವಿರಕ್ಕೂ ಹೆಚ್ಚು ಮಹಿಳೆಯರು

**ಇಪ್ಪತ್ತು ಹೆಚ್ಚುವರಿ ಮಾರ್ಗ**

**ಶಕ್ತಿ ಯೋಜನೆ ಜಾರಿಯಾದ ನಂತರ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಜಿಲ್ಲೆಯಾದ್ಯಂತ 20 ಕ್ಕೂ ಹೆಚ್ಚು ಹೆಚ್ಚುವರಿ ಮಾರ್ಗಗಳನ್ನು ಹೆಚ್ಚಿಸಲಾಗಿದ್ದು, ಪ್ರಯಾಣ ಜನಸಂದಣಿಗೆ ಅನುಗುಣವಾಗಿ ಬೇಡಿಕೆಗೆ ಅನುಸಾರವಾಗಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. 30 ಹೊಸ ವಾಹನ ಸೇರ್ಪಡೆ, ಕೆಎಸ್ ಆರ್ಟಿಸಿ ಚಿತ್ರದುರ್ಗ ವಿಭಾಗಕ್ಕೆ ಅಶ್ವಮೇಧ, ವೇಗದೂತ ಸೇರಿದಂತೆ 30 ಹೊಸ ವಾಹನಗಳನ್ನು ಸೇರ್ಪಡೆಮಾಡಲಾಗಿದೆ.**

ಚಿತ್ರದುರ್ಗ ಜಿಲ್ಲೆಯಿಂದ ವಿವಿಧ ಮಾರ್ಗಗಳ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಕಳೆದ ಒಂದು ವರ್ಷದಲ್ಲಿ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 2.21 ಕೋಟಿ ನಾರಿಯರು ಉಚಿತ ಪ್ರಯಾಣ ಮಾಡಿದ್ದು, ರೂ.85.71 ಕೋಟಿ ಆದಾಯ ಲಭಿಸಿದೆ.

# ಜೆಸಿಬಿಯಿಂದ ಹೊಲಗಳೆಲ್ಲ ಸಂಪೂರ್ಣ ಹಾಳು

• ಉದಯವಾಹಿನಿ, ಕೆಂಭಾವಿ

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮುಂಗಾರು ಮಳೆ ಉತ್ತಮವಾದುದರಿಂದ ಇನ್ನೇನು ರೈತರು ಬಿತ್ತನೆ ಕಾರ್ಯ ಆರಂಭಿಸಬೇಕೆನ್ನುವಷ್ಟರಲ್ಲಿ ಜಲಧಾರೆ ಯೋಜನೆಯ ಪೈಪ್ ಅಳವಡಿಕೆ ಕಾರ್ಯವನ್ನು ರೈತರ ಗಮನಕ್ಕೆ ತರಲಾರದೆ ಗುತ್ತಿಗೆದಾರನು ಕಾಮಗಾರಿ ಆರಂಭಿಸಿರುವದು ರೈತರಲ್ಲಿ ಆಕ್ರೋಶ ಮೂಡಿಸಿದೆ.

ಕೆಂಭಾವಿ-ಹುನಗುಂದ ರಾಜ್ಯ ಹೆದ್ದಾರಿಯ ಯಕ್ತಾಪುರಗೆ ಹೋಗುವ ಮಾರ್ಗದಲ್ಲಿ ಬರುವ ಸರ್ವೆ ನಂ.581, 582 ಸೇರಿದಂತೆ ಹಲವು ಹೊಲಗಳಲ್ಲಿ ಜಲಧಾರೆ ಯೋಜನೆಯ ಪೈಪ್ ಅಳವಡಿಸುವ ಕಾರ್ಯವನ್ನು ಶುಕ್ರವಾರ ಆರಂಭಿಸಲಾಗಿದೆ. ಏಪ್ರಿಲ್ ತಿಂಗಳಿನಲ್ಲಿಯೆ ಪೈಪ್ ಅಳವಡಿಕೆಗಾಗಿ ಜೆಸಿಬಿಯಿಂದ ಈ ಪ್ರದೇಶದಲ್ಲಿ ತೋಡಲಾಗಿತ್ತು ಆದರೆ ಬೇಸಿಗೆಯ ಎರಡು ತಿಂಗಳು ಕಳೆದರೂ ಪೈಪ್ ಅಳವಡಿಕೆಯ ಕಾರ್ಯ ಮಾಡದೆ ನಿರಾಸಕ್ತಿ ತೋರಿಸಲಾಗಿತ್ತು. ಶುಕ್ರ


ಉದಯವಾಹಿನಿ ಚಿತ್ರ

> **ಗುತ್ತಿಗೆದಾರನಿಗೆ ನೋಟಿಸ್ ನೀಡಿ ಕಾಮಗಾರಿ ಸ್ಥಗಿತಗೊಳಿಸುವಂತೆ ಸೂಚಿಸಲಾಗುವದು.**
> -ಹಣಮಂತ್ರಾಯಪಾಟೀಲ, ಎಇಇ

ವಾರ ಜೆಸಿಬಿ ಆಗಮಿಸಿ ಪೈಪ್ ಅಳವಡಿಕೆ ಕಾರ್ಯ ಆರಂಭಿಸಿದೆ. ರೈತರೆಲ್ಲ ತಮ್ಮ ತಮ್ಮ ನೇಗಿಲು ಹೊಡೆದು ಇನ್ನೇರಡು ದಿನಗಳಲ್ಲಿ ಬಿತ್ತನೆ ಕಾರ್ಯ ಆರಂಭಿಸಲಿದ್ದರು. ಆದರೆ ಜೆಸಿಬಿಯಿಂದ ಹೊಲಗಳೆಲ್ಲ ಸಂಪೂರ್ಣ ಹಾಳಾಗಿದೆ ಎಂದು ರೈತರು ಅಲವತ್ತುಕೊಂಡಿದ್ದಾರೆ.

ಕಳೆದ ವರ್ಷ ಬರದಿಂದ ಏನೂ ಬಿತ್ತಲಾಗದೆ ಹೈರಾಣಾಗಿದ್ದ ರೈತ ಈ ಬಾರಿಯ ಮಳೆಯಿಂದ ಬಿತ್ತನೆ ಕಾರ್ಯ ಆರಂಭಿಸಬೇಕೆನ್ನುವಷ್ಟರಲ್ಲಿ

> **ಈ ಬಾರಿ ನಮ್ಮ ಭಾಗದಲ್ಲಿ ಉತ್ತಮ ಮಳೆಯಾಗಿದೆ. ರೈತರು ಬಿತ್ತನೆ ಕಾರ್ಯ ಆರಂಭಿಸಬೇಕಾದ ಸಂದರ್ಭದಲ್ಲಿ ಗುತ್ತಿಗೆದಾರ ತನ್ನ ಹಣದ ಆಸೆಗೆ ರೈತರನ್ನು ಬಲಿ ಕೊಡಲು ಹೊರಟಿದ್ದಾನೆ. ಗುತ್ತಿಗೆದಾರನನ್ನು ಕಪ್ಪು ಪಟ್ಟಿಗೆ ಸೇರಿಸಿ ಬಿಲ್ ತಡೆಹಿಡಿಯಬೇಕು. ಅಧಿಕಾರಿಗಳು ರೈತರಿಗೆ ಅನುಕೂಲ ಕಲ್ಪಿಸುವಂತಾಗಲಿ.**
> -ಎಚ್.ಆರ್.ಬಡಿಗೇರ ತಾಲೂಕಾಧ್ಯಕ್ಷ

ಗುತ್ತಿಗೆದಾರನ ಅವೈಜ್ಞಾನಿಕ ಕಾಮಗಾರಿ ಆರಂಭದಿಂದ ಕೈಸುಟ್ಟುಕೊಳ್ಳುವಂತೆ ಆಗಿದೆ. ಕೂಡಲೆ ಕಾಮಗಾರಿಯನ್ನು ಸ್ಥಗಿತಗೊಳಿಸಿ ಗುತ್ತಿಗೆದಾರನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ರೈತರು ಆಗ್ರಹಿಸಿದ್ದಾರೆ.

# ದೇವರ ಎತ್ತುಗಳ ನಿರ್ವಹಣೆ ಟ್ರಸ್ಟ್ ರಚನೆಗೆ ಪ್ರೇರೇಪಿಸಿ

• ಉದಯವಾಹಿನಿ, ಚಿತ್ರದುರ್ಗ

ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ದೇವರ ಎತ್ತುಗಳು ಹೆಚ್ಚಾಗಿವೆ. ಈ ಜಾನುವಾರುಗಳ ನಿರ್ವಹಣೆಗೆ ಟ್ರಸ್ಟ್ ರಚನೆ ಮಾಡಲು ಪ್ರೇರೇಪಿಸುವಂತೆ ಪಶು ಇಲಾಖೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ, ಜಿಲ್ಲಾ ಪ್ರಾಣಿ ದಯಾ ಸಂಘದ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇವರ ಎತ್ತುಗಳ ಗೋಶಾಲೆಗಳಲ್ಲಿ ಇರದ ಕಾರಣ, ಬರಗಾಲದ ಸಂದರ್ಭದಲ್ಲಿ ಇವುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಅನುದಾನ ಒದಗಿಸಲು ಬರುವುದಿಲ್ಲ. ಇದರ ಬದಲು ಗ್ರಾಮಸ್ಥರು 50ಕ್ಕಿಂತಲೂ ಹೆಚ್ಚಿನ ದೇವರ ಎತ್ತುಗಳನ್ನು ಒಳಗೊಂಡತೆ ಟ್ರಸ್ಟ್ ರಚಿಸಿ, ನಿರ್ವಹಣೆ ಹೊಣೆ ವಹಿಸಿಕೊಂಡರೆ, ಸರ್ಕಾರದಿಂದ ಪ್ರತಿ ಗೋವಿಗೂ ವಾರ್ಷಿಕ ನಿರ್ವಹಣೆ ವೆಚ್ಚವಾಗಿ ರೂ.11,000ಗಳ ಅನುದಾನ ಲಭಿಸಲಿದೆ. ಚಳ್ಳಕೆರೆ, ಮೊಳಕಾಲ್ಮೂರು ತಹಶೀಲ್ದಾರ್‌ಗೆ ಈ ಕುರಿತು ಸೂಚನೆ ನೀಡುತ್ತೇನೆ. ಪಶು ಇಲಾಖೆ ಅಧಿಕಾರಿಗಳು


ಉದಯವಾಹಿನಿ ಚಿತ್ರ

ಟ್ರಸ್ಟ್ ರಚನೆ ಪ್ರೇರೇಪಣಾ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ 2023–24ನೇ ಸಾಲಿನ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ, ಕುಮಾರ್ ಮೀನಾ, ಮಕ್ಕಳ ಜಿಲ್ಲಾ ರಕ್ಷಣಾ ಘಟಕದ ಅಧ್ಯಕ್ಷ ಡಾ.ಸಿ.ಪ್ರಭಾಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತ.ಸಿ ಉಪಸ್ಥಿತರಿದ್ದರು.

# ಕೊಬ್ಬರಿ ಖರೀದಿ: 29ರ ವರೆಗೆ ದಿನಾಂಕ ವಿಸ್ತರಣೆ

• ಉದಯವಾಹಿನಿ, ನುಗ್ಗೇಹಳ್ಳಿ

ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಕೊಬ್ಬರಿ ಬೆಳೆಗಾರರಿಂದ ಉಂಡೆ ಕೊಬ್ಬರಿ ಖರೀದಿ ದಿನಾಂಕವನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಲ ಜೂ. 29ರ ವರೆಗೆ ವಿಸ್ತರಣೆ ಮಾಡಿದೆ ಎಂದು ಹೋಬಳಿ ಕೊಬ್ಬರಿ ಖರೀದಿ ಕೇಂದ್ರದ ಅಧಿಕಾರಿ ಯಶವಂತ್ ತಿಳಿಸಿದರು. ಈ ಬಗ್ಗೆ ಮಾಹಿತಿ ನೀಡಿದ ಅವರು, ಜೂ. 14ಕ್ಕೆ ಕೊಬ್ಬರಿ ಖರೀದಿ ಅಂತ್ಯಗೊಳ್ಳಬೇಕಾಗಿತ್ತು. ಈ ಬಗ್ಗೆ ಆದೇಶವನ್ನು ಕೂಡ ಮಹಾಮಂಡಲದ ವತಿಯಿಂದ ಪ್ರಕಟಣೆ ಹೊರಡಿಸಲಾಗಿತ್ತು. ಆದರೆ ಈಗಾಗಲೇ ನೋಂದಣಿ ಮಾಡಿರುವ ಕೊಬ್ಬರಿ ಬೆಳೆಗಾರರ ಒತ್ತಾಯದ ದಿನಾಂಕ ವಿಸ್ತರಣೆ ಮಾಡಿದ್ದು, ಇದರಿಂದ ರೈತರಿಗೆ ಇನ್ನು 15 ದಿನಗಳ ಹೆಚ್ಚಿನ ಕಾಲಾವಕಾಶ ಸಿಗಲಿದೆ ಎಂದರು.

ಹೋಬಳಿ ಖರೀದಿ ಕೇಂದ್ರದಲ್ಲಿ ಸುಮಾರು 1,036 ರೈತರು ಕೊಬ್ಬರಿ ಬಿಡಲು ನೋಂದಣಿ ಮಾಡಿಸಿದ್ದರು. ಈ ಪೈಕಿ ಈಗಾಗಲೇ 1,020 ರೈತರು 12 ಸಾವಿರ ಕ್ವಿಂಟಲ್ ಕೊಬ್ಬರಿ ಖರೀದಿ ಕೇಂದ್ರಕ್ಕೆ ಮಾರಾಟ ಮಾಡಿದ್ದು, ಇನ್ನುಳಿದ 15 ರೈತರಿಂದ 115 ಟನ್ ಕೊಬ್ಬರಿ ಖರೀದಿಸಬೇಕಾಗಿದೆ ಉಳಿದಿರುವ ರೈತರಿಗೆ ಜೂನ್ 17ರಂದು ಕೊಬ್ಬರಿ ಖರೀದಿಸಲು ಟೋಕನ್ ನೀಡಲಾಗಿದೆ. ಈಗಾಗಲೇ ರೈತರಿಂದ ಖರೀದಿಸಿರುವ ಕೊಬ್ಬರಿಗೆ ರೈತರ ಬ್ಯಾಂಕ್ ಖಾತೆಗಳಿಗೆ ಹಣ ಜಮೆ ಮಾಡಲಾಗಿದೆ ಎಂದರು.

ಕೊಬ್ಬರಿ ಮಾರಾಟ ಮಾಡಿರುವ ಜಿಲ್ಲೆಯ ರೈತರಿಗೆ ಕೇಂದ್ರ ಸರ್ಕಾರ ನಿಗದಿ ಮಾಡಿರುವ ಪ್ರತಿ ಕ್ವಿಂಟಲ್‌ಗೆ 12 ಸಾವಿರ ರೈತರ ಬ್ಯಾಂಕ್ ಖಾತೆಗಳಿಗೆ ಜಮಯಾಗಿದ್ದು, ರಾಜ್ಯ ಸರ್ಕಾರದ 1500 ಹಣ ಜಮೆಯಾಗಿಲ್ಲ. ಆದರೆ ಪಕ್ಕದ ತುಮಕೂರು ಜಿಲ್ಲೆಯ ರೈತರಿಗೆ ಹಣ ಬಿಡುಗಡೆಯಾಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಸಹಾಯಧನದ ವಿಚಾರದಲ್ಲಿ ಹಾಸನ ಜಿಲ್ಲೆಯನ್ನು ಕಡೆಗಣಿಸುತ್ತಿದೆ ಎಂದು ಡಿಎಸ್‌ಎಸ್ ಮುಖಂಡ ವಿರುಪಾಕ್ಷಪುರ ಗ್ರಾಮದ ವಿಆರ್ ಪ್ರಕಾಶ್ ಆರೋಪಿಸಿದರು.

ಸರ್ಕಾರ, ರಾಜ್ಯ ಮಾರಾಟ ಮಹಾಮಂಡಲ ಎಚ್ಚೆತ್ತುಕೊಂಡು ರೈತರ ಬ್ಯಾಂಕ್ ಖಾತೆಗಳಿಗೆ ಸಹಾಯಧನದ ಹಣವನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿದರು.

# ಪ್ರಾಣ ಕಳೆದುಕೊಂಡ ಕಾರ್ಮಿಕರಿಗೆ ಸೂಕ್ತ ಭದ್ರತೆ ಪರಿಹಾರ ನೀಡಿ

• ಉದಯವಾಹಿನಿ, ಸಿಂಧನೂರು

ಕುವೈತ್ ಮತ್ತು ನಾಗಪುರಗಳಲ್ಲಿ ಪ್ರಾಣ ಕಳೆದು ಕೊಂಡ ಕಾರ್ಮಿಕರಿಗೆ ಸೂಕ್ತ ಪರಿಹಾರ ಹಾಗೂ ಭದ್ರತೆ ಒದಗಿಸಬೇಕೆಂದು. ಟಿಯುಸಿಐ ದೆಹಲಿ ರಾಷ್ಟ್ರೀಯ ಸಂಚಾಲಕರಾದ ಆರ್ ಮಾನಸಯ್ಯ ಆಗ್ರಹಿಸಿದರು. ಕು ವೈತ್ ಬೆಂಕಿ ದುರಂತದಲ್ಲಿ ಹಾಗೂ ನಾಗಪುರ ಪಟಾಕಿ ಫ್ಯಾಕ್ಟರಿಯಲ್ಲಿ ಪ್ರಾಣ ಕಳೆದುಕೊಂಡ ಕಾರ್ಮಿಕರ ಕುಟುಂಬಗಳ ಪರವಾಗಿ, ನಮ್ಮ ಟ್ರೇಡ್ ಯೂನಿಯನ್ ಸೆಂಟರ್ ಆಫ್ ಇಂಡಿಯಾ ಕೇಂದ್ರ ಸಮಿತಿಯು ತೀವ್ರ ಸಂತಾಪ ಪ್ರಕಟಿಸಿದೆ ಎಂದು ಹೇಳಿದರು.

ಕುವೈತ್ ದೇಶದಲ್ಲಿ ವಾಸಿಸುತ್ತಿರುವ ಭಾರತೀಯರ ಪ್ರಮಾಣ ಅಲ್ಲಿನ ಒಟ್ಟು ಜನಸಂಖ್ಯೆಯ ಪೈಕಿ ಶೇಕಡ 21 ರಷ್ಟಿದೆ. ಒಟ್ಟು 10 ಲಕ್ಷ ಭಾರತೀಯ ಜನರ ಪೈಕಿ 9 ಲಕ್ಷದಷ್ಟು ವಲಸೆ ಕಾರ್ಮಿಕರಿದ್ದಾರೆ. ಹೋಟೆಲ್ ಹಾಗೂ ಮನೆಗೆಲಸದ ವಲಸೆ ಕಾರ್ಮಿಕರಿಗೆ ಯಾವುದು ಕಾನೂನಾತ್ಮಕ ಸುರಕ್ಷೆ ಇಲ್ಲಾ. ದೇಶದಿಂದ



> **ಈ ಕಾರ್ಮಿಕರ ಸಾವಿಗೆ ಈ ದೇಶಗಳ ಸರಕಾರಗಳೂ ಹೊಣೆಯಾಗಿವೆ. ಕಾರ್ಮಿಕರ ಅನಿಯಂತ್ರಿತ ಹಾಗೂ ರಕ್ಷಣೆರಹಿತ ವಲಸೆಯನ್ನು ಟಿಯುಸಿಐ ತೀವ್ರವಾಗಿ ಖಂಡಿಸುತ್ತದೆ**
> -ಆರ್. ಮಾನಸಯ್ಯ, ಸಂಚಾಲಕ

ದೇಶಕ್ಕೆ ಗುತ್ತಿಗೆ ಕಾರ್ಮಿಕರನ್ನು ಸಾಗಣಿಕೆ ಮಾಡುವ ಕಾರ್ಪೊರೇಟ್ ಕಂಪನಿಗಳ ಪರವಾಗಿ ಭಾರತ, ಕುವೈತ್ ಸರಕಾರಗಳು ಕೆಲಸ ಮಾಡುತ್ತಿವೆ.

ಭಾರತ ಹಾಗೂ ಇತರೆ ದೇಶಗಳಲ್ಲಿ ನವ ಉದಾರವಾದಿ ಆರ್ಥಿಕ ನೀತಿಗಳ ಪರಿಣಾಮಗಳಿಂದ ಭೂತಾಕಾರವಾಗಿ ಬೆಳೆಯುತ್ತಿರುವ ನಿರುದ್ಯೋಗದಿಂದಾಗಿ ಅಂತರಾಷ್ಟ್ರೀಯ ಗುಳೆ ಹೆಚ್ಚಿದೆ.

ಭಾರತದ 40 ಕಾರ್ಮಿಕರ ಜೊತೆ ಪಾಕಿಸ್ತಾನ, ಬಾಂಗ್ಲಾದೇಶ, ನೇಪಾಳ ಮುಂತಾದ ದೇಶಗಳ ಕಾರ್ಮಿಕರು ಪ್ರಾಣಕಳೆದುಕೊಂಡಿದ್ದಾರೆ.

ಪಟಾಕಿ ಕಾರ್ಖಾನೆಗಳ ಸರಣಿ ದುರಂತಗಳ ಮುಂದುವರಿಕೆಯೇ ನಾಗಪುರದ 6 ಕಾರ್ಮಿಕರ ಸಾವು ಹಾಗಾಗಿ, ಕೇಂದ್ರ ಸರಕಾರವು ಕುವೈತ್ ಮತ್ತು ನಾಗಪುರ ಕಾರ್ಮಿಕ ಸಂತ್ರಸ್ತರ ಕುಟುಂಬಗಳಿಗೆ ತಲಾ 25 ಲಕ್ಷ ಪರಿಹಾರ ಧನ ನೀಡಬೇಕು. ಹಾಗೂ ಈ ದುರಂತಕ್ಕೆ ಕಾರಣವಾದ ಕಂಪನಿ ಹಾಗೂ ಮ್ಯಾನೇಜ್ಮೆಂಟ್‌ಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಟಿಯುಸಿಐ ಈ ಮೂಲಕ ಒತ್ತಾಯಿಸುತ್ತದೆ.

ಜೊತೆಗೆ, ಉದಾರಿಕರಣ ಹಾಗೂ ಖಾಸಗಿಕರಣಗಳ ಮೂಲಕ ನಿರುದ್ಯೋಗ, ವಲಸೆ ಹಾಗೂ ಗುತ್ತಿಗೆ ಕಾರ್ಮಿಕ ಪದ್ಧತಿಗಳನ್ನು ಕಾಪಾಡುತ್ತಿರುವ ಸರಕಾರಗಳ ವಿರುದ್ಧ ಕಾರ್ಮಿಕರು ಐಕ್ಯತೆಯಿಂದ ಹೋರಾಡಬೇಕೆಂದು ಈ ಪ್ರಕಟಣೆಯ ಮೂಲಕ ಟಿಯುಸಿಐ ದೆಹಲಿ ಸಂಚಾಲಕ ಆರ್ ಮಾನಸಯ್ಯ ಅವರು ಕರೆ ನೀಡಿದರು. ಈ ಸಂದರ್ಭದಲ್ಲಿ ಎಂ ಗಂಗಾಧರ್ ಇದ್ದರು.

# ಕೃಷಿ ಇಲಾಖೆ ರಾಯಭಾರಿಯಾಗಿ ದರ್ಶನ್ ಮುಂದುವರಿಕೆ ಅಸಾಧ್ಯ

• ಉದಯವಾಹಿನಿ, ಹುಬ್ಬಳ್ಳಿ



ಕೊಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ಅವರನ್ನು ಕೃಷಿ ರಾಯಭಾರಿಯಾಗಿ ಮುಂದುವರಿಸಲು ಸಾಧ್ಯವಿಲ್ಲ ಎಂದು ಸಚಿವ ಎಂ.ಬಿ.ಪಾಟೀಲ ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದರ್ಶನ್ ಗೆ ವಿಐಪಿ ಸೌಕರ್ಯ ನೀಡಿಲ್ಲ.

ಆರೋಪ ಸಾಬೀತಾದರೆ ಅವರಿಗೆ ಶಿಕ್ಷೆಯಾಗುತ್ತದೆ ಎಂದರು. ಸರ್ಕಾರದ ಹಸ್ತಕ್ಷೇಪವಿಲ್ಲ ಪೋಕ್ಸೊ ಪ್ರಕರಣದಲ್ಲಿ ಬಿ.ಎಸ್. ಯಡಿಯೂರಪ್ಪ ಬಂಧನಕ್ಕೆ ಜಾಮೀನು ರಹಿತ ವಾರಂಟ್ ಹೊರಡಿಸಲು ನ್ಯಾಯಾಲಯ ಆದೇಶಿಸಿದೆ. ಇದರಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುವ, ರಕ್ಷಣೆ ಮಾಡುವ ಪ್ರಶ್ನೆಯೇ ಇಲ್ಲ ಎಂದರು. ಪೋಸ್ಕೊ ಪ್ರಕರಣ ಅತ್ಯಂತ ಗಂಭೀರವಾದದ್ದು. ಕಾಯ್ದೆ ಅನ್ವಯ ನ್ಯಾಯಾಲಯ ಆದೇಶ ನೀಡಿದೆ. ಅವರು ತಪ್ಪು ಮಾಡಿದ್ದಾರೋ, ಇಲ್ಲವೋ ಎಂದು ನ್ಯಾಯಾಲಯ ತೀರ್ಮಾನ ಮಾಡುತ್ತದೆಯೇ ಹೊರತು ಸರ್ಕಾರ ನಿರ್ಧಾರ ಮಾಡುವುದಿಲ್ಲ ಎಂದರು.ಮೂವರು ಉಪ ಮುಖ್ಯಮಂತ್ರಿ ನೇಮಕ ಮಾಡುವಂತೆ ಸಚಿವ ಕೆ.ಎನ್. ರಾಜಣ್ಣ ಹೇಳಿರುವ ಕುರಿತು ಪಕ್ಷದ ವೇದಿಕೆಯಲ್ಲಿ ಚರ್ಚಿಸುತ್ತೇವೆ. ಅಲ್ಲಿ ನಮ್ಮ ಅಭಿಪ್ರಾಯ ತಿಳಿಸುವೆವು. ಲೋಕಸಭಾ ಚುನಾವಣೆಯನ್ನು ಎಲ್ಲರೂ ಗಂಭಿರವಾಗಿ ಎದುರಿಸಿದ್ದಾರೆ.

ತಲೆದಂಡ ಪ್ರಶ್ನೆ ಉದ್ಭವಿಸದು. ಹಿನ್ನಡೆ ಕುರಿತು ಆತ್ಮಾವಲೋಕನ ಮಾಡಿಕೊಳ್ಳುತ್ತೇವೆ. ಗ್ಯಾರಂಟಿ ಯೋಜನೆಗಳ ಬಗ್ಗೆಯೂ ಚರ್ಚಿಸುತ್ತೇವೆ ಎಂದರು.

> **ಮಹಾರಾಷ್ಟ್ರದಲ್ಲಿ ಸರ್ಕಾರ ಬೀಳುತ್ತಿದ್ದು, ಬಿಜೆಪಿಯವರು ಮೊದಲು ಅದನ್ನು ನೋಡಿಕೊಳ್ಳಲಿ. ಕರ್ನಾಟಕದಲ್ಲಿ ಸರ್ಕಾರ ಉರುಳಿಸಲು ಅವರಿಗೆ 60 ಶಾಸಕರು ಬೆಂಬಲ ಬೇಕು. ಅವರು ರಾಜೀನಾಮೆ ನೀಡಿ, ಚುನಾವಣೆ ಎದುರಿಸಬೇಕು. ನಮ್ಮ ಯಾವ ಶಾಸಕರೂ ಬಿಜೆಪಿಗೆ ಬೆಂಬಲ ನೀಡುವುದಿಲ್ಲ. ಇದೆಲ್ಲ ಹುಡುಗಾಟವಲ್ಲ. ಬಿಜೆಪಿ, ಜೆಡಿಎಸ್ ಶಾಸಕರೇ ನಮ್ಮೊಂದಿಗಿದ್ದಾರೆ ಎಂದು ಹೇಳಿದರು.ಸಿಎಂ ಆಗುವ ಆಸೆ ಎಲ್ಲರಿಗೂ ಇರುತ್ತದೆ. ಆದರೆ, ಅದನ್ನು ಪಕ್ಷದ ವರಿಷ್ಠರು ತೀರ್ಮಾನಿಸುತ್ತಾರೆ. ಸಿಎಂ ಆಗಲು ಶಾಸಕರ ಬೆಂಬಲ ಬೇಕು. ಸದ್ಯಕ್ಕೆ ಆ ಪ್ರಶ್ನೆಯೇ ಇಲ್ಲ. ಸಿಎಂ ಕುರ್ಚಿ ಖಾಲಿ ಇಲ್ಲ**

# ದನದ ಮಾಂಸ ತ್ಯಾಜ್ಯ ಸಾಗಿಸುತ್ತಿದ್ದ ಕ್ಯಾಂಟರ್ ವಶ

• ಉದಯವಾಹಿನಿ, ಹೊಳೆಹೊನ್ನೂರು

ಸಮೀಪದ ಕೂಡ್ಲಿ ಕ್ರಾಸ್ ಬಳಿ ದನದ ಮಾಂಸದ ತ್ಯಾಜ್ಯ ತುಂಬಿದ ಕ್ಯಾಂಟರ್ ಅನ್ನು ಪೊಲೀಸರು ಗುರುವಾರ ಸಂಜೆ ವಶಕ್ಕೆ ಪಡೆದಿದ್ದಾರೆ. 'ಪಟ್ಟಣದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುವ ಕ್ಯಾಂಟರ್ ಲೋಡ್‌ನಿಂದ ಕೆಟ್ಟ ವಾಸನೆ ಬರುವುದನ್ನು ಗಮನಿಸಿದ ಯುವಕರಿಬ್ಬರು ಕ್ಯಾಂಟರ್ ಅನ್ನು ಬೆನ್ನಟಿ ಹಿಡಿಯಲು ಮುಂದಾದಾಗ ಬೈಕ್ ಸವಾರರ ಮೇಲೆ ಕ್ಯಾಂಟರ್ ಹತ್ತಿಸುವ ಪ್ರಯತ್ನ ನಡೆಯಿತು.ಇದರಿಂದ ಕೋಪಗೊಂಡ ಯುವಕರು ವಾಹನವನ್ನು ತಡೆದು ನಿಲ್ಲಿಸಿದರು.

ನಂತರ ಸ್ಥಳಕ್ಕೆ ಧಾವಿಸಿದ ಪೊಲೀಸ್ ಸಿಬ್ಬಂದಿ ವಾಹನವನ್ನು ವಶಕ್ಕೆ ಪಡೆದುಕೊಂಡರು' ಎಂದು ಪೊಲೀಸರು ಮಾಹಿತಿ ನೀಡಿದರು. ದನದ ಮಾಂಸ ತ್ಯಾಜ್ಯ ಸಾಗಣೆ ಸುದ್ದಿ ಹರಡಿ ಕೂಡ್ಲಿ ಕ್ರಾಸ್‌ನಲ್ಲಿ ಜನ ಜಂಗುಳಿ ಉಂಟಾಗಿತ್ತು. ವಾಹನಗಳನ್ನು ನಿಯಂತ್ರಿಸುವಲ್ಲಿ ಪೊಲೀಸರು ಹೈರಾಣಾದರು.ಪಕ್ಕದ ಚನ್ನಗಿರಿಯ ಕಸಾಯಿ ಖಾನೆಗಳಿಂದ ದನದ ಮಾಂಸದ ಕೊಂಬು ಮೂಳೆಗಳನ್ನು ಪ್ಲಾಸ್ಟಿಕ್ ಚೀಲದಲ್ಲಿ ತುಂಬಿ ಮಂಗಳೂರಿನ ಸಂಸ್ಕರಣಾ ಘಟಕಕ್ಕೆ ಸಾಗಿಸಲಾಗುತ್ತಿತ್ತು. ಕ್ಯಾಂಟರ್ ಚಾಲಕ ಕಂಪನಿಗೆ ಸಂಬಂಧಿಸಿದ ಜಿಎಸ್‌ಟಿ ಬಿಲ್‌ಗಳನ್ನು ಪೊಲೀಸರಿಗೆ ನೀಡಿದ್ದು ತಪಾಸಣೆ ನಡೆಸಿದ್ದಾರೆ.

ದನದ ಮೂಳೆಗಳನ್ನು ಪುಡಿ ಮಾಡಿ ರಾಸಾಯನಿಕಗಳಿಗೆ ಬಳಸುವ ಉದ್ದೇಶದಿಂದ ಸಂಗ್ರಹಿಸಲಾಗಿದೆ ಎಂದು ತಿಳಿದುಬಂದಿದೆ. ವಾಹನವನ್ನು ವಶಕ್ಕೆ ಪಡೆದ ಪೊಲೀಸರು ಲಾರಿಯಿಂದ ಕೆಟ್ಟ ವಾಸನೆ ಬರುತ್ತಿರುವ ಕಾರಣ ಪಟ್ಟಣದ ಹೊರವಲಯದ ಭದ್ರಾ ನದಿಯ ಬಳಿ ನಿಲ್ಲಿಸಿದ್ದಾರೆ. ಹೊಳೆಹೊನ್ನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಲೋಕಾಯುಕ್ತ ಅಹವಾಲು ಸ್ವೀಕಾರ 15 ದೂರು

## ಅಧಿಕಾರಿಗಳಿಗೆ ಸರ್ಕಾರಿ ಸಂಬಳ ಸಿಗುತ್ತದೆ ಚೆನ್ನಾಗಿ ಕೆಲಸ ಮಾಡಿ ಜನರ ಸಮಸ್ಯೆ ಪರಿಹರಿಸಿ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಜನರು ಬಹಳಷ್ಟು ಒಳ್ಳೆಯವರಿದ್ದು ಯಾರು ಅಧಿಕಾರಿಗಳ ವಿರುದ್ಧ ದೂರು ಕೊಡುತ್ತಿಲ್ಲಾ,ಇವರ ಒಳ್ಳೆತನಕ್ಕೆ ಅಧಿಕಾರಿಗಳು ಬೆಲೆಕೊಡದೆ ದುರುಪಯೋಗ ಪಡೆದುಕೊಳ್ಳುತ್ತಿದ್ದು ಜನರ ಸಮಸ್ಯೆಗಳಿಗೆ ಸ್ಪಂದನೆ ಕೊಡುತ್ತಿಲ್ಲಾ ಎಂದು ಗೋತ್ತಾಗುತ್ತಿದೆ ಎಂದು ಲೋಕಾಯುಕ್ತ ಡಿವೈಎಸ್ಪಿ ಗೀತಾ ಅಧಿಕಾರಿಗಳಿಗೆ ಚಾಟಿ ಬಿಸಿದರು.

ಪಟ್ಟಣದ ತಹಸೀಲ್ ಸಭಾಂಗಣದಲ್ಲಿ ಬೆಳಿಗ್ಗೆ 11ಗಂಟೆಗೆ ಆಗಮಿಸಿದ ಲೋಕಾಯುಕ್ತ ತಂಡವು ಸಾರ್ವಜನಿಕ ಅರ್ಜಿ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ಸ್ಥಳದಲ್ಲಿ ಯಾರು ಇರುವುದಿಲ್ಲ ಕಲಬುರ್ಗಿ, ಬೀದರ ಜಿಲ್ಲೆಗಳಿಂದ ಆಗಮಿಸಿ ಹೋಗುವುದು ಕಂಡುಬರುತ್ತಿದೆ.

ಅಧಿಕಾರಿಗಳಿಗೆ ಸರ್ಕಾರಿ ಸಂಬಳ ಸಿಗುತ್ತದೆ ಚನ್ನಾಗಿ ಕೆಲಸ ಮಾಡಿ ಜನರ ಸಮಸ್ಯೆ ಪರಿಹರಿಸಿ ನಿಮಗೆ ಸರ್ಕಾರ ಕೊಡುವ ಸಂಬಳಕ್ಕೆ ಬೆಲೆ ಬರುತ್ತದೆ.

ಜನರ ಬಳಿ ದುಡ್ಡು ತೆಗೆದುಕೊಂಡಿದ್ದು ಜನರಿಗೆ ಸರ್ಕಾರಿ ಕಛೇರಿಗಳಿಗೆ ಅಲೆದಾಡಿಸುವುದು ಕಂಡುಬಂದರೆ ಅಧಿಕಾರಿಗಳ ಜೀವನ ಬಹಳಷ್ಟು ಕಷ್ಟವಾಗುತ್ತದೆ.


ಉದಯವಾಹಿನಿ ಚಿತ್ರ

ಒಂದು ಸ್ಥಳದಲ್ಲೆ ವಿಲೇವಾರಿ

ಒಟ್ಟಾರೆ 15 ಅರ್ಜಿ ದೂರುಗಳು ಬಂದಿವೆ ಅದರಲ್ಲಿ ಹೆಚ್ಚಾಗಿ ಕಂದಾಯ ಇಲಾಖೆ, ಪುರಸಭೆ, ಮೈನ್ಸ್, ಸ್ಲಂಬೋರ್ಡ್, ಗ್ರಾಮ ಪಂಚಾಯತಗೆ ಸಂಬಂಧಿಸಿದ ದೂರುಗಳು ಬಂದಿವೆ, ಇವೆಲ್ಲವೂ ದೂರುಗಳು ಕನಿಷ್ಠ ದಿನಗಳಲ್ಲಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಿ ಸಮಸ್ಯೆ ಬಗೆಹರಿಸಲಾಗುವುದು.

ಈ ಸಂದರ್ಭದಲ್ಲಿ ಲೋಕಾಯುಕ್ತ ಸಿಪಿಐ ರಾಜಶೇಖರ ಹಳಗೊಂದಿ, ಅಕ್ಕಮಹಾದೇವಿ ಸೇರಿದಂತೆ ತಹಶೀಲ್ದಾರ್ ಮಲ್ಲಿಕಾರ್ಜುನ ಅರಿಕೇರಿ, ತಾಲ್ಲೂಕಾ ಮಟ್ಟದ ಅಧಿಕಾರಿಗಳಾದ ಬಸವರಾಜ ಬೇನೂರ,ಡಾ.ಮಹ್ಮದ್ ಗಫಾರ,ರಾಜಕುಮಾರ, ವೀರಶೇಟ್ಟಿ ರಾಠೋಡ್, ಅನು ಸೋಯಾ ಚವ್ಹಾಣ, ಸೈಯದ್ ಜಾವೀದ್ ಪಟೆಲ, ನಿಂಗಮ್ಮಾ ಬೀರಾದಾರ, ದೇವಿಂದ್ರಪ್ಪಾ, ರವಿ ಕುಮಾರ, ಸುಭಾಷ್ ನಿಡಗುಂದಾ, ರವಿಶಂಕರರೆಡ್ಡಿ ಮುತ್ತಂಗಿ, ಹಣಮಂತ ಪೂಜಾರಿ, ಉಲ್ಲಾಸಕುಮಾರ ಕೆರೋಳ್ಳಿ, ನಾಗಪ್ಪ, ರಂಗಣ್ಣ ಪೂಜಾರಿ, ಕೆಎಂ ಬಾರಿ, ಶಾಮರಾವ ರಾಠೋಡ್, ವಿಠ್ಠಲ ಕುಸಾಳೆ, ಸೇರಿದಂತೆ ಸಾರ್ವಜನಿಕರು ಅಹವಾಲು ಅರ್ಜಗಳು ಸಲ್ಲಿಸಿ ನೋವು ತೋಡಿಕೊಂಡು ಕ್ಷೇತ್ರದ ಸಮಸ್ಯೆಗಳಾದ ಆಕ್ರಮ ಕೇಂಪು ಮಣ್ಣು ಸಾಗಾಟ, ಆಕ್ರಮ ಗಣಿಗಾರಿಕೆ, ಆಕ್ರಮ ಸವಾಳು ಸಾಗಾಟ ಮಾಡುತ್ತಿರುವುದು ಲೋಕಾಯುಕ್ತ ಅಧಿಕಾರಿಗಳ ಎದುರುಗಡೆ ಹೇಳಿದರು.

> **ಒಂದು ಅರ್ಜಿ ಪೆಂಚನಪಳ್ಳಿ ಗ್ರಾಮದ ರೇಣುಕಾ ಎಂಬುವರ ಸಮಸ್ಯೆ ಕಳೆದ ಆರು ತಿಂಗಳಿಂದ ಸರ್ವೇ ಮಾಡಿ ನಮೂನೆ 10ಫಾರಂ ಕೊಡುತ್ತಿಲ್ಲಾ ಎಂದು ದೂರು ಸಲ್ಲಿಸಿದರು ಸ್ಥಳದಲ್ಲೇ ಫಾರಂ ನಂಬರ್ 10ನೀಡಿ ಪರಿಹರಿಸಲಾಗಿದೆ**
> -ಗೀತಾ, ಲೋಕಾಯುಕ್ತ ಡಿವೈಎಸ್ಪಿ

# ಕಾನೂನು ಎಲ್ಲರಿಗೂ ಒಂದೇ ಆಗಬೇಕು

## ದರ್ಶನ್ ಸಿನಿಮಾ ಬ್ಯಾನ್ ಮಾಡುವಂತೆ ಮಾಜಿ ಶಾಸಕ ಎ.ಟಿ ರಾಮಸ್ವಾಮಿ ಆಗ್ರಹ

• ಉದಯವಾಹಿನಿ, ಹಾಸನ

ವಾಲ್ಮೀಕಿ ನಿಗಮದ ಹಣ ಲೂಟಿಕೋರರ ಪಾಲಾಗಿದ್ದು ಇದರ ಹಿಂದೆ ದೊಡ್ಡ ಶಕ್ತಿಯೇ ಅಡಗಿದ್ದು ಈ ಕುರಿತು ಸಮಗ್ರ ತನಿಖೆಯಾಗಬೇಕು ಎಂದು ರಾಮಸ್ವಾಮಿ ಒತ್ತಾಯಿಸಿದರು.ಪ್ರಜ್ವಲ್ ಅಶ್ಲೀಲ ವಿಡಿಯೋ ಎನ್ನಲಾದ ಪ್ರಕರಣದಲ್ಲಿ ಆರೋಪಿಯಾಗಿದ್ದಾರೆ ನ್ಯಾಯಾಂಗ ವ್ಯವಸ್ಥೆ ಸಮಗ್ರ ತನಿಖೆ ನಡೆಸುವ ಮೂಲಕ ಅವರು ಅಪರಾಧಿಯೇ ಎಂದು ಸಾಬೀತು ಮಾಡಬೇಕು. ಇಂತಹ ಪ್ರಕರಣಗಳಲ್ಲಿ ರಾಜಕೀಯ ಬೆರೆಸುವುದು ಸೂಕ್ತವಲ್ಲ, ಕಾನೂನು ಎಲ್ಲರಿಗೂ ಒಂದೇ ಆಗಬೇಕು, ಬಾಯಲ್ಲಿ ಮಾತ್ರ ಹೇಳದೆ ಅನುಷ್ಠಾನಕ್ಕೆ ತರಬೇಕು.

ಈ ಪ್ರಕರಣದಲ್ಲಿ ಸಿಲುಕಿ ನೊಂದವರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಹಾಗೂ ರೇಣುಕಾ ಸ್ವಾಮಿ ಹತ್ಯೆ ಪ್ರಕರಣದಲ್ಲಿಯೂ ಕುಟುಂಬಕ್ಕೆ ಸರ್ಕಾರ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಚಿತ್ರದುರ್ಗದ ರೇಣುಕಾ ಸ್ವಾಮಿ ಹತ್ಯೆ ಪ್ರಕರಣ ಸಂಬಂಧ ಆರೋಪಿಯಾಗಿರುವ ನಟ ದರ್ಶನ್ ಸಿನಿಮಾಗಳನ್ನು ಬ್ಯಾನ್ ಮಾಡಬೇಕು ಎಂದು ಮಾಜಿ ಶಾಸಕ ಎ.ಟಿ. ರಾಮಸ್ವಾಮಿ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು



ಉದಯವಾಹಿನಿ ಚಿತ್ರ

ಉರಿದವರು ಬೂದಿ ಆಗಲೇಬೇಕು ಉರಿದವರು ಒಂದಲ್ಲ ಒಂದು ದಿನ ನಾಶ ಆಗುತ್ತಾರೆ ಎನ್ನುವುದಕ್ಕೆ ನಟ ದರ್ಶನ್ ಸ್ಪಷ್ಟ ಉದಾಹರಣೆಯಾಗಿದ್ದಾರೆ.

ಇವರನ್ನು ಚಲನ ಚಿತ್ರ ವಾಣಿಜ್ಯ ಮಂಡಳಿಯಿಂದ ಹೊರದಬ್ಬ ಬೇಕು, ಇವರ ಸಿನಿಮಾಗಳನ್ನು ಬ್ಯಾನ್ ಮಾಡಬೇಕು ಎಂದು ಆಗ್ರಹಿಸಿದರು.

ನಟ ದರ್ಶನ್ ಮಾಡಿರುವ ಘನ ಘೋರ ಅಪರಾಧಗಳನ್ನು ನಾವೆಲ್ಲರೂ ಖಂಡಿಸಲೇಬೇಕು, ಚಿತ್ರದುರ್ಗದ ರೇಣುಕಾ ಸ್ವಾಮಿಯನ್ನು ಸಿನಿಮಾ ಶೈಲಿಯಲ್ಲಿ ಅಪಹರಣ ಮಾಡಿ ಬೆಂಗಳೂರಿಗೆ ಕರೆತಂದು ಹತ್ಯೆ ಮಾಡಿದ್ದಾರೆ. ಓರ್ವ ನಟನಾದವನು ನಾಡಿನ ಕಲೆ ಸಂಸ್ಕೃತಿ ಸಂಪ್ರದಾಯವನ್ನು ಎತ್ತಿ ಹಿಡಿಯಬೇಕಿತ್ತು, ಆದರೆ ಮೇರು ನಟ ಎಂದು ಹೆಸರು ಪಡೆದಿದ್ದ ದರ್ಶನ್ ಹಾಗೂ ಅವರ ಪಟಾಲಂಗಳು ಹತ್ಯೆ ಮಾಡಿರುವುದು ನೋಡಿ ಧಿಗ್ಭ್ರಮೆಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಪ್ರಸಿದ್ಧ ಸಿನಿಮಾ ನಟರು ಪ್ರಖ್ಯಾತರಾಗಬೇಕು ಆದರೆ ಕುಖ್ಯಾತರಾಗಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದ ರಾಮಸ್ವಾಮಿಯವರು ಮೇರು ನಟಯುವ ರಾಜಕಾರಣಿ ಕೊಲೆ ಅತ್ಯಾಚಾರದಲ್ಲಿ ಭಾಗಿಯಾಗಿರುವುದು ಕನ್ನಡ ನಾಡಿಗೆ ಶೋಭೆ ತರಲ್ಲ; ಈ ಪ್ರಕರಣ ನಾಡಿನ ಸಂಸ್ಕೃತಿ ಮೇಲೆ ದೊಡ್ಡ ಪೆಟ್ಟು ಬಿದ್ದಂತಾಗಿದೆ. ಚಲನಚಿತ್ರ ವಾಣಿಜ್ಯ ಮಂಡಳಿ ಇತರೆ ಸಂಘಟನೆಗಳಿರಬಹುದು ಅವರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

> **ಸರ್ಕಾರ ಪೊಲೀಸ್ ಇಲಾಖೆ ದರ್ಶನ್ ಮೇಲೆ ಕಠಿಣ ಕ್ರಮ ಕೈಗೊಳ್ಳ ಬೇಕು ಹಿಂದೆ ಹಲವು ದೇಶದ್ರೋಹಿ ಕೋಟಾ ನೋಟು ಮುದ್ರಣ ದಂತಹ ಪ್ರಕರಣಗಳಲ್ಲೂ ಖುಲಾಸೆಯಾಗಿರುವ ಸನ್ನಿವೇಶನಗಳನ್ನು ಕಂಡಿದ್ದೇವೆ ಸರ್ಕಾರ ಮತ್ತು ಇಲಾಖೆಗಳು ಕಾನೂನು ಕ್ರಮದ ಜೊತೆಗೆ ಎಷ್ಟು ಜನಕ್ಕೆ ಶಿಕ್ಷೆಯಾಯಿತು ಎನ್ನುವುದನ್ನು ಗಮನಿಸಬೇಕು. ಈ ರೀತಿಯ ಪ್ರಕರಣಗಳಲ್ಲಿ ಶೀಘ್ರ ಶಿಕ್ಷೆಯಾದರೆ ಮಾತ್ರ ಸಮಾಜಕ್ಕೆ ಉತ್ತಮ ಸಂದೇಶ ರವಾನಿಯಾಗುತ್ತದೆ ಎಂದರು.**

# ಮಿನಿ ನ್ಯೂಸ್

## ಮಾರಿಯಮ್ಮ, ಉಚ್ಚಂಗಿ ದೇವಿಗೆ ಸ್ವರ್ಣ ಗದ್ದುಗೆ ಸಮರ್ಪಣೆ ಸಂಕಲ್ಪ

• ಉದಯವಾಹಿನಿ, ಕಾಪು

ಪ್ರಥಮ ಹಂತದಲ್ಲಿ ಸುಮಾರು 32 ಕೋಟಿ ರೂಪಾಯಿ ವೆಚ್ಚದಲ್ಲಿ ಸಂಪೂರ್ಣ ಶಿಲಾಮಯವಾಗಿ, ಆಕರ್ಷಕವಾದ ಇಳಕಲ್ ಕೆಂಪು ಶಿಲೆಯಿಂದ ನಿರ್ಮಾಣಗೊಳ್ಳುತ್ತಿರುವ ಕಾಪು ಶ್ರೀ ಹೊಸ ಮಾರಿ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಳ್ಳಲಿರುವ ಮಾರಿಯಮ್ಮ ಮತ್ತು ಉಚ್ಚಂಗಿ ದೇವಿಗೆ ಸಮರ್ಪಿಸಲ್ಪಡುವ ಸ್ವರ್ಣ ಗದ್ದುಗೆ ನಿರ್ಮಾಣಕ್ಕೆ ಸ್ವರ್ಣ ಸಮರ್ಪಣೆಗೆ ಜೂ.25 ರಿಂದ ಅವಕಾಶ ಮಾಡಿಕೊಡಲಾಗುವುದು ಎಂದು ಕಾಪು ಶ್ರೀ ಹೊಸಮಾರಿಗುಡಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಕೆ.ವಾಸುದೇವ ಶೆಟ್ಟಿ ಹೇಳಿದರು.

ಕಾಪು ಹೊಸ ಮಾರಿಗುಡಿ ದೇವಸ್ಥಾನ ಅಭಿವೃದ್ಧಿ ಸಮಿತಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಕ್ಷೇತ್ರದ ತಂತ್ರಿ ಬ್ರಹ್ಮಶ್ರೀ ವಿದ್ವಾನ್ ಕು ಮಾರಗುರು ತಂತ್ರಿ, ಆರ್ಚಕ ವೇ.ಮೂ. ಕೆ. ಶ್ರೀನಿವಾಸ ತಂತ್ರಿ, ಅವರ ನೇತೃತ್ವದಲ್ಲಿ, ಶಿಲಾ ಸೇವೆ, ಶಿಲಾ ಕಂಬ ಸಮರ್ಪಿಸಿದ ದಾನಿ ಗಳು, ಭಕ್ತರು, ಗಣ್ಯರ ಉಪಸ್ಥಿತಿಯಲ್ಲಿ ಜೂ. 25 ರಂದು ಬೆಳಿಗ್ಗೆ 9.09 ಕ್ಕೆ ಸ್ವರ್ಣ ಗೌರಿ ಪೂಜೆ ನೆರವೇರಿಸಿ, ಬಳಿಕ ಸ್ವರ್ಣ ಸ ಮರ್ಪಣಾ ಸಮಾರಂಭಕ್ಕೆ ಚಾಲನೆ ನೀಡಲಾಗುವುದು ಎಂದರು. ರಮೇಶ್ ಹೆಗ್ಡೆ ಕಲ್ಯ, ಯೋಗೀಶ್ ಶೆಟ್ಟಿ ಬಾಲಾಜಿ, ರತ್ನಾ ಕರ ಶೆಟ್ಟಿ ನಡಿಕೆರೆ, ಪ್ರಸನ್ನ ಆಚಾರ್ಯ, ರವಿ ಭಟ್ ಮಂದಾರ ಇನ್ನಿತರರಿದ್ದರು.

## ಅಕ್ಕಿ ಕಳ್ಳರನ್ನು ಬಂಧಿಸಿ ಭರ್ಜರಿ ಬೇಟೆ

• ಉದಯವಾಹಿನಿ, ಕಲಬುರಗಿ

ಅಕ್ರಮವಾಗಿ ವಾಹನದಲ್ಲಿ ಸಾಗಿಸುತ್ತಿದ್ದ ಸುಮಾರು 150 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ಶಹಾಬಾದ ನಗರದ ಪೊಲೀಸರು ವಶಪಡಿಸಿಕೊಂಡಿದ್ದಾರೆ.ಪಡಿತರ ಅಕ್ಕಿ ವಿತರಿಸದೇ ಅಕ್ರಮವಾಗಿ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದ ಡಿವೈಎಸ್‌ಪಿ ಶಂಕರಗೌಡ ಪಾಟೀಲ ಹಾಗೂ ಪಿಐ ನಟರಾಜ ಲಾಡೆ ಅವರು ವಾಹನವನ್ನು ನಗರದ ವಾಡಿ ವೃತ್ತದಲ್ಲಿ ವಶಪಡಿಸಿಕೊಂಡಿದ್ದಾರೆ. ಅಲ್ಲದೇ ಲಾರಿ ಚಾಲಕನನ್ನು ವಶಕ್ಕೆ ತೆಗೆದುಕೊಂಡಿದ್ದಾರೆ. ಟ್ರಕ್ನಲ್ಲಿ ಸುಮಾರು150 ಕ್ವಿಂಟಾಲ್ ಪಡಿತರ ಅಕ್ಕಿಯ ಚೀಲವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಶಹಾಬಾದನ ಜುನ್ನೈದ್ ಎಂಬಾತ ಶಹಾಬಾದದಿಂದ ಉಮರ್ಗಾ ಕಡೆ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಎಂದು ತಿಳಿದು ಬಂದಿದೆ. ಉಮರ್ಗಾ ಅಕ್ಕಿ ಗೋಡಾನ ಮಾಲೀಕನ ವಿರುದ್ಧ ಶಹಬಾದ ನಗರ ಪೊಲೀಸ್ ಠಾಣೆಯಲ್ಲಿ ದೂರ ದಾಖಲಾಗಿದೆ. ಈ ಕಾರ್ಯಚರಣೆಯಲ್ಲಿ ಪಿಎಸ್‌ಐ ಶಿವರಾಯ, ಸಿಬ್ಬಂದಿ ಗುಂಡಪ್ಪ, ಶ್ರೀಕಾಂತ್ ಉಪಳಪ್ಪ ಮತ್ತು ಆಹಾರ ಇಲಾಖೆಯ ನಿರ್ದೇಶಕರಾದ ಶ್ರೀಕಾಂತ್ ಮತ್ತು ಮಂಜು ಉಪಸ್ಥಿತರಿದ್ದರು.

## ದ್ವೇಷದ ರಾಜಕಾರಣಕ್ಕೆ ಬೆಲೆ ತೆರಬೇಕಾಗುತ್ತದೆ: ಜಗದೀಶ್ ಶೆಟ್ಟರ್

• ಉದಯವಾಹಿನಿ, ಬೆಳಗಾವಿ

ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದ ಹಿಂದೆ ಬಹಳ ದೊಡ್ಡ ರಾಜಕೀಯ ಷಡ್ಯಂತ್ರ ಇದೆ ಎಂದು ನೂತನ ಸಂಸದ, ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಗಂಭೀರ ಆರೋಪ ಮಾಡಿದರು.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಈಗ ಇಕ್ಕಟ್ಟಿನಲ್ಲಿದೆ. ಸಚಿವ ನಾಗೇಂದ್ರ ಅವರು ಹಗರಣದ ಆರೋಪದ ಕಾರಣದಿಂದ ರಾಜೀನಾಮೆ ನೀಡಿದ್ದಾರೆ. ಇಂತಹ ತಪ್ಪುಗಳನ್ನು ಮುಚ್ಚಿಕೊಳ್ಳಲು ದೊಡ್ಡ ನಾಯಕರ ವಿರುದ್ಧ ಪ್ರಕರಣ ದಾಖಲಿಸುವ ಕ್ರಮಕ್ಕೆ ಕಾಂಗ್ರೆಸ್ ಮುಂದಾಗಿದೆ ಎಂದರು.

## ಸೈನಿಕ ಹುಳುಗಳ ನಿಯಂತ್ರಣ ಹೇಗೆ?

• ಉದಯವಾಹಿನಿ, ಶಿವಮೊಗ್ಗ

ಮಾಗಿ ಉಳುಮೆ, ಬೇಗ ಬಿತ್ತನೆ, ಪರ್ಯಾಯ ಬೆಳೆ ಪದ್ಧತಿ ಹಾಗೂ ರಸಾಯನಿಕ ಸಿಂಪರಣೆ ಮೂಲಕ ಸೈನಿಕ ಹುಳುಗಳನ್ನು ನಿಯಂತ್ರಣ ಮಾಡಬಹುದು ಎಂದು ಕೃಷಿ ವಿಶ್ವವಿದ್ಯಾನಿಲಯದಿಂಧ ಕೀಟಶಾಸ್ತ್ರ ವಿಜ್ಞಾನಿ ಗಳಾದ ಡಾ. ಶ್ರೀ ಶರಣಬಸಪ್ಪ.ಎಸ್. ದೇಶಮುಖ್ ಅವರು ತಿಳಿಸಿದರು. 2018 ರಿಂದ ಈಚೆಗೆ ಮುಸುಕಿನಜೋಳ ಬೆಳೆಯಲ್ಲಿ ಪಾಲ್ ಸೈನಿಕ ಹುಳುವಿನ ಬಾದೆ ಹೆಚ್ಚಾಗಿದೆ. ಈ ಹುಳುವು 20–25 ದಿನಗಳ ಜೀವನ ಚಕ್ರ ಹೊಂದಿದ್ದು, ಏಕ ಬೆಳೆಯಲ್ಲೇ ಇದರ ಮೂರು ಹಂತಗಳು ಕಾಣಿಸಿಕೊಂಡು ಎಲೆಗಳನ್ನು, ಸುಳಿಗಳನ್ನು ತಿಂದು ರಂಧ್ರಗಳನ್ನು ಮಾಡಿ ಇಕ್ಕೆಗಳನ್ನು ಎಲೆಯ ಮೇಲೆಯ ಬಿಡುತ್ತದೆ. ಬೆಳೆಯ 45 ದಿನಗಳವರೆಗೆ ಈ ಹುಳು ಕಾಣಿಸಿಕೊಂಡು ಶೇ.70–80 ರ ವರೆಗೆ ಇಳುವರಿ ನಷ್ಟಕ್ಕೆ ಕಾರಣವಾಗುತ್ತದೆ. ರೈತರು ಪರ್ಯಾಯ ಬೆಳೆ ಪದ್ಧತಿ ರಸಾಯನಿಕ ಸಿಂಪರಣೆ ಮೂಲಕ ನಿಯಂತ್ರಿಸಲು ಸಾಧ್ಯವಾಗುತ್ತದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

**ವೃಷಭ** ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ.

**ಮಿಥುನ** ಕನಸಿನ ಚಿಂತೆಗಳನ್ನು ಬಿಟ್ಟು ನಿಮ್ಮ ಪ್ರೀತಿಪಾತ್ರ ಸಂಗಾತಿಯ ಜೊತೆಯಿರಿ. ಸಮಯಲಿಕ್ಕೆ ಸರಿಯಾಗಿ ಕೆಲಸವನ್ನು ಪೂರ್ಣಗೊಳಿಸಿ ಬೇಗ ಮನೆಗೆ ಹೋಗುವುದು ಇಂದು ನಿಮಗೆ ಉತ್ತಮವಾಗಲಿದೆ.

**ಕರ್ಕಾಟಕ** ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು.

**ಸಿಂಹ** ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು.

**ಕನ್ಯಾ** ನಿಮ್ಮ ಸ್ನೇಹಿತರು ನಿಮಗೆ ಅವರ ಅವಶ್ಯಕತೆ ಅತ್ಯಂತ ಹೆಚ್ಚಿದ್ದಾಗ ನಿಮ್ಮನ್ನು ನಿರಾಸೆಗೊಳಿಸಬಹುದು. ಇದುವರೆಗೂ ಒಂಟಿಯಾಗಿ ಇರುವವರು ಇಂದು ಯಾರೋ ವಿಶೇಷ ಭೇಟಿಯಾಗುವ ಸಾಧ್ಯತೆ ಇದೆ.

**ತುಲಾ** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ.

**ವೃಶ್ಚಿಕ** ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ. ಮತ್ತು ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು.

**ಧನಸ್ಸು** ನಿಮಗೆ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು. ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ.

**ಮಕರ** ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು.

**ಕುಂಭ** ನಿಮ್ಮ ಹತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

**ಮೀನ** ನೀವು ಸಾಮಾಜಿಕ ಕಾರ್ಯಗಳು ಮತ್ತು ಸಮಾರಂಭಗಳಲ್ಲಿ ಭಾಗವಹಿಸಿದಲ್ಲಿ ಸ್ನೇಹಿತರು ಮತ್ತು ಹೊಸ ಪರಿಚಯಸ್ಥರನ್ನು ಪಡೆಯುತ್ತೀರಿ. ನಿಮ್ಮ ಸಂಗಾತಿಯ ಜೊತೆ ಹೊರಹೋಗುವಾಗ ಸಭ್ಯತೆಯಿಂದ ವರ್ತಿಸಿ.

# ಪೌರಕಾರ್ಮಿಕರ ಅಹವಾಲು ಆಲಿಸಿದ ಎಂ.ವೆಂಕಟೇಶನ್

## 6 ತಿಂಗಳೊಳಗೆ ನಿವೇಶನ ಗುರುತಿಸಿಕೊಡುವ ಹಾಗೂ ಅದೇ ನಿವೇಶನದಲ್ಲಿ ಒಂದೂವರೆ ವರ್ಷದೊಳಗೆ ಮನೆ ಕಟ್ಟಿಸಿಕೊಡುವ ಭರವಸೆ

• **ಉದಯವಾಹಿನಿ ಹೊಸಪೇಟೆ**

ಸಫಾಯಿ ಕರ್ಮಚಾರಿ ರಾಷ್ಟ್ರೀಯ ಆಯೋಗದ ಅಧ್ಯಕ್ಷ ಎಂ.ವೆಂಕಟೇಶನ್ ಅವರು ಶುಕ್ರವಾರ ನಗರದಲ್ಲಿ ಪೌರಕಾರ್ಮಿಕರ ಅಹವಾಲುಗಳನ್ನು ಆಲಿಸಿದ್ದು, ಆರು ತಿಂಗಳೊಳಗೆ ನಿವೇಶನ ಗುರುತಿಸಿಕೊಡುವ ಹಾಗೂ ಅದೇ ನಿವೇಶನದಲ್ಲಿ ಒಂದೂವರೆ ವರ್ಷದೊಳಗೆ ಮನೆ ಕಟ್ಟಿಸಿಕೊಡುವ ಭರವಸೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸುವುದಕ್ಕೆ ಮೊದಲಾಗಿ ಇಲ್ಲಿನ ಅಂಬೇಡ್ಕರ್ ವೃತ್ತ ಸಮೀಪದ ಇಂದಿರಾನಗರ, ಶಾಂತಿನಗರ ಪ್ರದೇಶಗಳಿಗೆ ಭೇಟಿ ನೀಡಿದ ಅವರು, ಪೌರಕಾರ್ಮಿಕರು ವಾಸಿಸುತ್ತಿರುವ ಪ್ರದೇಶ, ಅವರ ವಸತಿ ಸಮಸ್ಯೆಗಳ ಕುರಿತು ಖುದ್ದು ಮಾಹಿತಿ ಪಡೆದರು. ಮಳೆ ಬಿರುಸಿನಿಂದ ಸುರಿದಾಗ ಅವರ ಮನೆಗಳಿಗೆ ನೀರು ನುಗ್ಗುತ್ತಿರುವ ಸಮಸ್ಯೆ ಸಹಿತ ಪೌರಕಾರ್ಮಿಕರು ಎದುರಿಸುತ್ತಿರುವ ಇತರ ಹಲವು ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಬಳಿಕ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸಿದ ಎಂ.ವೆಂಕಟೇಶನ್ ಅವರು ಜಿಲ್ಲಾ ಎಲ್ಲಾ ತಾಲ್ಲೂಕುಗಳಿಂದ ಬಂದ ಪೌರಕಾರ್ಮಿಕರು, ಹೊರಗುತ್ತಿಗೆ ನೌಕರರರು, ಹೊರಗುತ್ತಿಗೆ ಏಜೆನ್ಸಿಗಳ ಮಾಲೀಕರೊಂದಿಗೆ ಸಭೆ ನಡೆಸಿದರು. ಏಜೆನ್ಸಿಗಳ ಮಾಲೀಕರನ್ನು ಹೊರಗೆ ಕಳುಹಿಸಿ ಪೌರಕಾರ್ಮಿಕರ ಅಹವಾಲುಗಳನ್ನು ಆಲಿಸಿದರು.

> ನಮ್ಮ ಮಕ್ಕಳು ಸಹ ಸಫಾಯಿ ಕರ್ಮಚಾರಿಗಳಾಗಿ ಮುಂದುವರಿಯಬಾರದು ಎಂಬ ಸಂಕಲ್ಪವನ್ನು ನೀವೆಲ್ಲ ಮಾಡಬೇಕು. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಅವರು ಬೇರೆ ಉದ್ಯೋಗಕ್ಕೆ ಹೋಗುವಂತೆ ವ್ಯವಸ್ಥೆ ಮಾಡಿಕೊಳ್ಳಬೇಕು. ಸರ್ಕಾರದ ಸೌಲಭ್ಯ ಬಳಸಿಕೊಂಡು ಮಕ್ಕಳನ್ನು ಓದಿಸಿ ಅವರನ್ನು ಬೇರೆ ವೃತ್ತಿಗೆ ಕಳುಹಿಸಬೇಕೇ ಹೊರತು ನಿಮ್ಮಂತೆ ಪೌರಕಾರ್ಮಿಕರಾಗಿ, ಕಸ ಎತ್ತುವ ವೃತ್ತಿ ಮಾಡದಂತೆ ನೋಡಿಕೊಳ್ಳಿ
> -ವೆಂಕಟೇಶನ್


ಉದಯವಾಹಿನಿ ಚಿತ್ರ

**ಸಫಾಯಿ ಕರ್ಮಚಾರಿಗಳ ಸಮೀಕ್ಷೆ ನಡೆಸಬೇಕು**

ಅವರಿಗೆ ಸರಿಯಾಗಿ ಉಪಾಹಾರ ನೀಡಲಾಗುತ್ತಿದೆಯೇ? ಸಂಬಳ ನಿಗದಿತ ಸಮಯಕ್ಕೆ ಬರುತ್ತಿದೆಯೇ? ಆರೋಗ್ಯ ವಿಮೆ ಮಾಡಿಸಲಾಗಿದೆಯೇ? ಶೂ, ರೈನ್ ಕೋಟ್ ಕೊಟ್ಟಿದ್ದಾರೆಯೇ ಎಂಬುದಾಗಿ ಹಲವು ಪ್ರಶ್ನೆಗಳನ್ನು ಕೇಳಿ ತಿಳಿದುಕೊಂಡರು.

ನಿಮ್ಮ ಸಮಸ್ಯೆಗಳನ್ನು ಹೇಳಿ ಎಂದು ಅವರು ಮತ್ತೆ ಕೇಳಿದಾಗ ಪೌರ ಕಾರ್ಮಿಕ ಮಹಿಳೆಯೊಬ್ಬರು ವಸತಿ ಸಮಸ್ಯೆಯ ಬಗ್ಗೆ ಗಮನ ಸೆಳೆದರು. ಅದಕ್ಕೆ ಸ್ಪಂದಿಸಿದ ಜಿಲ್ಲಾ ನಗರ ಯೋಜನಾ ನಿರ್ದೇಶಕ ಮನೋಹರ್, 'ನಾನು ಈಗಾಗಲೇ ಈ ಕುರಿತು ಯೋಜನೆ ರೂಪಿಸಿದ್ದೇನೆ, ವರ್ಗಾವಣೆ ಆಗಿದ್ದಕ್ಕೆ ಯೋಜನೆ ಸ್ವಲ್ಪ ವಿಳಂಬವಾಗಿದೆ, ಆರು ತಿಂಗಳಲ್ಲಿ ನಿವೇಶನ ಗುರುತಿಸಿಕೊಡಲಾಗುವುದು, ಒಂದೂವರೆ ವರ್ಷದೊಳಗೆ ಅದೇ ನಿವೇಶನದಲ್ಲಿ ಮನೆ ನಿರ್ಮಿಸಿಕೊಡಲಾಗುವುದು' ಎಂದರು.

**ಅಗತ್ಯ ಇದ್ದರೆ ಕರೆ ಮಾಡಿ**

ಹೆಚ್ಚುವರಿ ಜಿಲ್ಲಾಧಿಕಾರಿ ಅನುರಾಧಾ ಜಿ., ಜಿಲ್ಲಾ ಪಂಚಾಯಿತಿ ಸಿಇಒ ಸದಾಶಿವ ಪ್ರಭು ಬಿ., ಉಪವಿಭಾಗಾಧಿಕಾರಿ ಮೊಹಮ್ಮದ್ ಅಲಿ ಅಕ್ರಂ ಷಾ, ಎಎಸ್‌ಪಿ ಸಲೀಂ ಪಾಷಾ, ನಗರಸಭೆ ಪೌರಾಯುಕ್ತ ಚಂದ್ರಪ್ಪ ಇತರರು ಇದ್ದರು. ತಮಿಳು ಮತ್ತು ಹಿಂದಿಯಲ್ಲಿ ಮಾತ್ರ ಮಾತನಾಡುತ್ತಿದ್ದ ಆಯೋಗದ ಅಧ್ಯಕ್ಷರ ಮಾತನ್ನು ಕನ್ನಡಕ್ಕೆ ಅನವಾದಿಸುವ ಕೆಲಸ ನಡೆಯಿತು. ಆಯೋಗದ ಅಧ್ಯಕ್ಷರು ತಮ್ಮ ಫೋನ್ ನಂಬರ್ ಅನ್ನು ಎಲ್ಲರಿಗೂ ಕೊಟ್ಟು, ಅಗತ್ಯ ಇದ್ದರೆ ಕರೆ ಮಾಡಿ ಕಷ್ಟ ಹೇಳಿಕೊಳ್ಳಬಹುದು ಎಂದು ಸೂಚಿಸಿದರು.

ಆಯೋಗದ ಅಧ್ಯಕ್ಷರು ಮತ್ತೆ ಅದನ್ನು ಪುನರುಚ್ಚರಿಸಿ, ನಿವೇಶನ ಸಿಕ್ಕಿದ್ದರ ಬಗ್ಗೆ ತಮಗೆ ಆರು ತಿಂಗಳೊಳಗೆ ಪತ್ರ ಬರೆದು ತಿಳಿಸಬೇಕು, ಸಿಗದಿದ್ದರೂ ತಿಳಿಸಬೇಕು, ಒಂದೂವರೆ ವರ್ಷದೊಳಗೆ ಮನೆ ಆಗದಿದ್ದರೆ ತಿಳಿಸಬೇಕು ಎಂದು ಸೂಚಿಸಿದರು.

ಪೌರಕಾರ್ಮಿಕರ ಪರವಾಗಿ ಮಾತನಾಡಿದ ಮಾದಿಗ ಸಮುದಾಯದ ಮುಖಂಡ ಸ್ಲಂ ರಾಮಚಂದ್ರ, ಸಫಾಯಿ ಕರ್ಮಚಾರಿಗಳ ವಿಚಾರದಲ್ಲಿ ರಾಷ್ಟ್ರೀಯ ನೀತಿ ರೂಪಿಸಬೇಕು, ಸಫಾಯಿ ಕರ್ಮಚಾರಿಗಳ ಸಮೀಕ್ಷೆ ನಡೆಸಬೇಕು, ನಿವೇಶನ, ಮನೆ ಒದಗಿಸಬೇಕು, ಪುನರ್ವಸತಿ ಪ್ಯಾಕೇಜ್‌ಗೆ ನೀಡುವ ಮೊತ್ತವನ್ನು 10 ಲಕ್ಷದಿಂದ 30 ಲಕ್ಷಕ್ಕೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ಕೇವಲ ನಗರ ಪ್ರದೇಶಗಳ ಪೌರ ಕಾರ್ಮಿಕರ ಅಹವಾಲು ಆಲಿಸಿದರೆ ಸಾಲದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸಫಾಯಿ ಕರ್ಮಚಾರಿಗಳ ಕಷ್ಟವನ್ನೂ ಆಲಿಸುವ ಕೆಲಸ ಆಯೋಗದಿಂದ ನಡೆಯಬೇಕು, ಹಾಗಿದ್ದರೆ ಮಾತ್ರ ಎಲ್ಲಾ ಸಫಾಯಿ ಕರ್ಮಚಾರಿಗಳ ಜೀವನ ಸುಗಮವಾಗಬಹುದು' ಎಂದರು.

## ಕಾನೂನು ಸೇವಾ ಸಮಿತಿಯಿಂದ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ

• **ಉದಯವಾಹಿನಿ ಸಿರುಗುಪ್ಪ**

ನಗರದ ಶಾಂತಿನಿಕೇತನ ವಿದ್ಯಾಮಂದಿರ ಪ್ರೌಢಶಾಲೆಯ ಸಭಾಂಗಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕಾರ್ಮಿಕ ಇಲಾಖೆ ಹಾಗೂ ಪೋಲೀಸ್ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಜೆ.ಎಮ್.ಎಫ್.ಸಿ ನ್ಯಾಯಾಧೀಶರಾದ ಹಾಜಿ ಹುಸೇನ್ ಸಾಬ್ ಯಾದವಾಡ ಅವರು ಉದ್ಘಾಟಿಸಿದರು.

ಸಂವಿಧಾನದಲ್ಲಿನ ಎಲ್ಲಾ ಕಾಯ್ದೆಗಳನ್ನು ದೇಶದ ಪ್ರತಿಯೊಬ್ಬ ನಾಗರೀಕರು ಪಾಲಿಸಬೇಕಾಗಿದೆ. ನಮ್ಮೆಲ್ಲರ ಹಿತವನ್ನು ಕಾಪಾಡುವುದು ಸರ್ಕಾರದ ಮುಖ್ಯ ಕರ್ತವ್ಯವಾಗಿರುತ್ತದೆ. ಅದರಂತೆ ಮಕ್ಕಳ ಶೈಕ್ಷಣಿಕ ಹಕ್ಕನ್ನು ನಾವೆಲ್ಲಾ ಕಾಪಾಡಬೇಕಾದರೆ ಬಾಲ ಕಾರ್ಮಿಕ ಪದ್ಧತಿಯನ್ನು ತಡೆಗಟ್ಟಬೇಕಾಗಿದೆಂದು ತಿಳಿಸಿದರು. ಸಹಾಯಕ ಸರ್ಕಾರಿ ಅಭಿಯೋಜಕಿ ಶಾರದ ಅವರು ಮಾತನಾಡಿ ಸುಶಿಕ್ಷಿತ ಪ್ರಜೆಗಳಿಂದ ಮಾತ್ರ ಸದೃಡ ದೇಶ ಕಟ್ಟಲು ಸಾಧ್ಯವಾಗಿದ್ದು, ಮಕ್ಕಳು ಸಹ ಬದುಕುವ ಹಕ್ಕು, ಶಿಕ್ಷಣ ಹಕ್ಕು ಇದೆ. ಆದ್ದರಿಂದ ಚಿಕ್ಕಂದಿನಿಂದಲೇ ಅವರನ್ನು ಕಾರ್ಮಿಕರನ್ನಾಗಿಸಿದಲ್ಲಿ ಮುಂದೆ ಅದೇ ನಡೆಸಬೇಕಾಗುತ್ತದೆಂದರು.



ಉದಯವಾಹಿನಿ ಚಿತ್ರ

> ಜೂನ್ 12ನೇ ತಾರೀಖನ್ನು ವಿಶ್ವ ಬಾಲ ಕಾರ್ಮಿಕ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಮಕ್ಕಳಿಗೆ ಸೂಕ್ತ ಶಿಕ್ಷಣ ದೊರೆಯಬೇಕಾಗಿದೆ. ಆದ್ದರಿಂದ ನಾವೆಲ್ಲಾ ಮಕ್ಕಳನ್ನು ಕೆಲಸದಲ್ಲಿ ತೊಡಗಿಸಿ ಉತ್ಪನ್ನಗಳ ತಯಾರಿಸುವ ಕಂಪನಿಗಳನ್ನು ನಾವೆಲ್ಲಾ ವಿರೋಧಿಸಬೇಕು
> -ಮಂಜುನಾಥ ತೊಂಡಿಹಾಳ, ಸಿರುಗುಪ್ಪ ವೃತ್ತ ಕಾರ್ಮಿಕ ನಿರೀಕ್ಷಕ

ಹಿರಿಯ ಪ್ಯಾನಲ್ ವಕೀಲರಾದ ಎನ್.ಅಬ್ದುಲ್ ಸಾಬ್ ಅವರು ಮಾತನಾಡಿ ಇಂದಿಗೂ ದಿನನಿತ್ಯ ಕೃಷಿ ಚಟುವಟಿಕೆಗಳ ಕಾರ್ಯಕ್ಕಾಗಿ ಮಿನಿ ವ್ಯಾನ್‌ಗಳಲ್ಲಿ ಆಟೋ ಟೆಂಪೋಗಳಲ್ಲಿ ಹೋಗುತ್ತಿದ್ದು, ಇವನ್ನೆಲ್ಲಾ ತಡೆಗಟ್ಟಬೇಕಾದರೆ ಎಲ್ಲಾ ವಲಯಗಳು ಒಟ್ಟಿಗೆ ಕೆಲಸ ಮಾಡಬೇಕೆಂದರು.

ಇದೇ ವೇಳೆ ಬಿ.ಇ.ಓ ಗುರಪ್ಪ, ಪೋಲೀಸ್ ಉಪನಿರೀಕ್ಷಕ ತಿಮ್ಮಣ್ಣ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎಸ್.ಮಂಜುನಾಥಗೌಡ, ವಕೀಲರಾದ ಟಿ.ವೆಂಕಟೇಶ್‌ನಾಯ್ಕ್, ಮಲ್ಲಿಗೌಡ, ಶಾಂತಿನಿಕೇತನ ವಿದ್ಯಾಮಂದಿರ ಪ್ರೌಢಶಾಲಾ ಅಧ್ಯಕ್ಷ ಕೆ.ಕೃಷ್ಣ, ಶಿಶು ಅಭಿವೃದ್ಧಿ ಯೋಜನೆ ಇಲಾಖೆ ಮೇಲ್ವಿಚಾರಕಿ ಹೇಮಾವತಿ ಹಾಗೂ ಇನ್ನಿತರರು ಇದ್ದರು.

## ವಾಲ್ಮೀಕಿ ನಿಗಮದ ಹಗರಣ ಮುಚ್ಚಿಹಾಕಲು ಪೋಕ್ಸೊ ಪ್ರಕರಣಕ್ಕೆ ಜೀವ: ಬಿ.ವೈ.ರಾಘವೇಂದ್ರ

• **ಉದಯವಾಹಿನಿ ಶಿವಮೊಗ್ಗ**

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣ ಮುಚ್ಚಿಹಾಕಲು ಬಿ.ಎಸ್. ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣಕ್ಕೆ ಸರ್ಕಾರ ಮರುಜೀವ ನೀಡಿದೆ' ಎಂದು ಶಿವಮೊಗ್ಗ ಸಂಸದ, ಯಡಿಯೂರಪ್ಪ ಅವರ ಪುತ್ರ ಬಿ.ವೈ.ರಾಘವೇಂದ್ರ ಆರೋಪಿಸಿದರು.



'ಪೋಕ್ಸೊ ಪ್ರಕರಣದಲ್ಲಿ ಹುರುಳಿಲ್ಲ. ಬಿ ರಿಪೋರ್ಟ್ ಹಾಕಬೇಕಾದ ಪ್ರಕರಣದಲ್ಲಿ ಯಡಿಯೂರಪ್ಪ ಅವರ ವಿರುದ್ಧ ಜಾಮೀನು ರಹಿತ ಬಂಧನ ವಾರಂಟ್ ಜಾರಿಯಾಗಿದೆ. ಈ ವಿಚಾರದಲ್ಲಿ ಸಿಐಡಿ ತನಿಖೆಯೂ ಮುಗಿದಿತ್ತು. ಆದರೆ, ಈಚೆಗೆ ಎಐಸಿಸಿ ನಾಯಕ ರಾಹುಲ್ ಗಾಂಧಿ ಬೆಂಗಳೂರಿಗೆ ಬಂದು ಹೋದ ಮೇಲೆ ಈ ಬೆಳವಣಿಗೆ ನಡೆದಿದೆ ಎಂದು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದರು. ಪ್ರಕರಣದಲ್ಲಿ ಹುರುಳಿಲ್ಲ ಎಂದು ಸ್ವತಃ ಗೃಹ ಸಚಿವರೇ ಈ ಹಿಂದೆ ಹೇಳಿದ್ದರು. ಆದರೆ, ಈಗ ಯಡಿಯೂರಪ್ಪ ಅವರನ್ನು ಬಂಧಿಸಲು ಹೊರಟಿದ್ದಾರೆ.

ರಾಜಕೀಯ ಕಾರಣಕ್ಕಾಗಿ ಈ ಹಿಂದೆಯೂ ನಮ್ಮ ಕುಟುಂಬಕ್ಕೆ ತೊಂದರೆ ಕೊಡುವ ಪ್ರಯತ್ನ ನಡೆದಿದೆ. ಯಡಿಯೂರಪ್ಪ ಅವರ ವಿರುದ್ಧ ಪೋಕ್ಸೊ ಅಡಿ ದೂರು ಕೊಟ್ಟಿದ್ದ ಮಹಿಳೆ ಈ ಹಿಂದೆ ಹಲವರ ವಿರುದ್ಧ ದೂರು ದಾಖಲಿಸಿದ್ದಾರೆ ಎಂಬುದನ್ನು ಗಮನಿಸಬೇಕು. ನ್ಯಾಯಾಲಯದಲ್ಲಿ ನಮಗೆ ನ್ಯಾಯ ದೊರಕಲಿದೆ' ಎಂದು ಹೇಳಿದರು.

## ನೀಟ್-ಯುಜಿ ಹಗರಣದ ನ್ಯಾಯಾಂಗ ತನಿಖೆಗೆ ಆಗ್ರಹ

• **ಉದಯವಾಹಿನಿ ಸಿರುಗುಪ್ಪ**

ನೀಟ್ ಮತ್ತು ಯುಜಿ ಹಗರಣದ ಕುರಿತು ನ್ಯಾಯ ಒದಗಿಸುವಂತೆ ಘೋಷಣೆಗಳನ್ನು ಕೂಗುತ್ತಾ ನಗರದ ತಾಲ್ಲೂಕು ಕ್ರೀಡಾಂಗಣದಿಂದ ತಹಶೀಲ್ದಾರ ಕಛೇರಿವರೆಗೆ ಆಗಮಿಸಿದ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟುಡೆಂಟ್ಸ್ ಆರ್ಗನೈಸೇಷನ್ ವತಿಯಿಂದ ಪ್ರಧಾನ ಮಂತ್ರಿಗಳಿಗೆ ಶಿರಸ್ಥೆದಾರ ಸಿದ್ದಾರ್ಥ್ ಅವರ ಮೂಲಕ ಮನವಿ ಸಲ್ಲಿಸಲಾಯಿತು.

ಜಿಲ್ಲಾ ಉಪಾಧ್ಯಕ್ಷೆ ಶಾಂತಿ ಮಾತನಾಡಿ ರಾಜ್ಯ ಮಟ್ಟದಲ್ಲಿ ನಡೆಯುತ್ತಿದ್ದ ಪ್ರವೇಶ ಪರೀಕ್ಷೆಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿದೆಂಬ ನೆಪವೊಡ್ಡಿ ವೈದ್ಯರು, ಉಪನ್ಯಾಸಕರು ಮತ್ತು ತಜ್ಞರಿದ್ದ ಹೆಚ್‌ಸಿಎಮ್‌ಐ ಅನ್ನು ರದ್ದಪಡಿಸಿ ಸಂಬಂದವಿಲ್ಲದ ಕಾರ್ಪೋರೇಟ್ ಮನೆತನದ ಒಡೆಯರನ್ನೊಳಗೊಂಡ ಸಮಿತಿಯಾದ ಎನ್‌ಎಮ್‌ಸಿಯನ್ನು ಕೇಂದ್ರ ಸರ್ಕಾರದಿಂದ ಜಾರಿಗೊಳಿಸಲಾಗಿದೆ.

ಆಗ ನಡೆಯುತ್ತಿದ್ದ ಭ್ರಷ್ಟಾಚಾರದ ತನಿಖೆ ನಡೆಸಿ ಸಂಬಂಧಿಸಿದವರಿಗೆ ಸೂಕ್ತ ಶಿಕ್ಷೆ ವಿಧಿಸಬೇಕೇ ಹೊರತು ಪರೀಕ್ಷಾ ಪದ್ಧತಿಯನ್ನು ಬದಲಾಯಿಸುವುದು ಪರಿಹಾರವಲ್ಲ ಎಂದು ನಮ್ಮ ಸಂಘಟನೆಯಿಂದ ಆಕ್ಷೇಪಿಸಲಾಗಿತ್ತು.



ಉದಯವಾಹಿನಿ ಚಿತ್ರ

ಪರೀಕ್ಷೆಗೆ ಮುನ್ನವೇ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಲಂಚ ಕೊಡುವ ಕೋಟ್ಯಾಧಿಪತಿ ಮಕ್ಕಳಿಗೆ ವೈದ್ಯಕೀಯ ಸೀಟ್ ಮಾರಾಟವಾಗುತ್ತಿವೆ. ಆದರೂ ಸಮರ್ಪಕ ತನಿಖೆ ನಡೆಸಿಲ್ಲ ಎಂಬ ಆರೋಪವೂ ಇದೆ. ಇದರಿಂದಾಗಿ ವರ್ಷಗಳಗಟ್ಟಲೇ ಪ್ರಾಮಾಣಿಕವಾಗಿ ಓದಿ ನೂರಾರು ಕನಸುಗಳನ್ನು ಕಂಡ ಅಮಾಯಕ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಂಚನೆಯಾಗಿದ್ದು ನಿಷ್ಪಕ್ಷಪಾತವಾದ ನ್ಯಾಯಾಂಗ ತನಿಖೆ ನಡೆಸುವಂತೆ ಆಗ್ರಹಿಸಿದರು.

ಇದೇ ವೇಳೆ ಎ.ಐ.ಡಿ.ಎಸ್.ಓ ಜಿಲ್ಲಾ ಖಜಾಂಚಿ ಅನುಪಮ, ಕಾರ್ಯಕರ್ತರಾದ ಕೃಷ್ಣ, ಹೊನ್ನೂರಸ್ವಾಮಿ ಹಾಗೂ ನೂರಾರು ವಿದ್ಯಾರ್ಥಿಗಳು ಇದ್ದರು.

## ಸರ್ಕಾರಿ ಕಾಲೇಜಿನ ಕಲಾ ವಿಭಾಗದ ವಿದ್ಯಾರ್ಥಿಗಳ ದಾಖಲಾತಿ ಕುಸಿತ

• **ಉದಯವಾಹಿನಿ ಬೀದರ್**

ಹೋಬಳಿಯ ಹಾಲಹಳ್ಳಿ (ಕೆ) ಗ್ರಾಮದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ವರ್ಷದಿಂದ ವರ್ಷಕ್ಕೆ ಕಲಾ ವಿಭಾಗದ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ಕುಸಿಯುತ್ತಲೇ ಸಾಗಿದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ಸರ್ಕಾರ 2007-08 ರಲ್ಲಿ ಇಲ್ಲಿ ಪದವಿ ಪೂರ್ವ ಕಾಲೇಜು ಆರಂಭಿಸಿದೆ.

ಆದರೆ ಖಾಸಗಿ ಕಾಲೇಜುಗಳ ಹಾವಳಿ ಹಾಗೂ ಕಲಾ ವಿಭಾಗದ ಬಗ್ಗೆ ವಿದ್ಯಾರ್ಥಿಗಳಿಗೆ ಇರುವ ನಿರಾಸಕ್ತಿಯಿಂದ ದಾಖಲಾತಿಯಲ್ಲಿ ಇಳಿಕೆಯಾಗುತ್ತಿದೆ ಎನ್ನಲಾಗುತ್ತಿದೆ. ಪ್ರಸ್ತುತ ದಿನಗಳಲ್ಲಿ ಬಹುತೇಕ ವಿದ್ಯಾರ್ಥಿಗಳು ಕಲಾ ವಿಭಾಗ ಆಯ್ಕೆ ಮಾಡಲು ಮುಂದೆ ಬರುತ್ತಿಲ್ಲ. ದಾಖಲಾತಿ ಪಡೆದರೂ ಕಾಲೇಜಿಗೆ ಬರುವುದಿಲ್ಲ. ಅಲ್ಲದೇ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಿಗೆ ಹೋಗಲು ಬಸ್ ವ್ಯವಸ್ಥೆ ಇರುವುದರಿಂದ ಗ್ರಾಮದ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ವಿದ್ಯಾರ್ಥಿಗಳು ಈ ಕಾಲೇಜಿಗೆ ಪ್ರವೇಶ ಪಡೆಯಲು ಹಿಂದೇಟು ಹಾಕುತ್ತಿದ್ದಾರೆ. ಸದ್ಯ ಗ್ರಾಮದಲ್ಲಿ ಸುಸಜ್ಜಿತ ಕಟ್ಟಡ, ಎಲ್ಲಾ ವಿಷಯ ಬೋಧಿಸುವ ಉಪನ್ಯಾಸಕರಿದ್ದಾರೆ. ಹೀಗಾಗಿ ಸುತ್ತಮುತ್ತಲಿನ ಹಳ್ಳಿಗಳ ವಿದ್ಯಾರ್ಥಿಗಳು ಬರಲು ಬಸ್ ವ್ಯವಸ್ಥೆ ಕಲ್ಪಿಸಬೇಕು.


ಉದಯವಾಹಿನಿ ಚಿತ್ರ

> ಪ್ರಸ್ತುತ ದಿನಗಳಲ್ಲಿ ವಿಜ್ಞಾನ ವಿಭಾಗಕ್ಕೆ ಉತ್ತಮ ಭವಿಷ್ಯವಿದೆ ಎಂಬ ಪಾಲಕರ ಮನಸ್ಥಿತಿಯಿಂದ ವಿದ್ಯಾರ್ಥಿಗಳು ಕಲಾ ವಿಭಾಗ ಆಯ್ಕೆ ಮಾಡಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ
> -ಬಸವರಾಜ ಪಾಟೀಲ, ಸಾಮಾಜಿಕ ಕಾರ್ಯಕರ್ತ

ಸದ್ಯ ಬೀದರ್ ನಿಂದ ಸಂಗೋಳಗಿವರೆಗೆ ಬರುವ ಬಸ್ ಹಾಲಹಳ್ಳಿವರೆಗೆ ಬಂದು ಮರಳಿ ಹೋಗಬೇಕು. ಅಂದಾಗ ಮಾತ್ರ ದಾಖಲಾತಿ ಹೆಚ್ಚಳವಾಗುತ್ತದೆ' ಎಂದು ಗ್ರಾಮದ ಹಿರಿಯರಾದ ರವಿ ಗಂಗಶೆಟ್ಟಿ ತಿಳಿಸುತ್ತಾರೆ.

ಸರ್ಕಾರಿ ಪಿಯು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ವರ್ಷದಿಂದ ವರ್ಷಕ್ಕೆ ತೀವ್ರ ಕುಸಿತ ಕಾಣುತ್ತಿದೆ. ದುಬಲಗುಂಡಿ ಸರ್ಕಾರಿ ಪದವಿ ಪೂರ್ವ ಕಾಲೇಜು ಸೇರಿದಂತೆ ಜಿಲ್ಲೆಯ ಹತ್ತಾರು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಕೊರತೆ ಎದುರಾಗಿ, ಕಾಲೇಜುಗಳನ್ನೇ ಮುಚ್ಚಬೇಕಾದ ಸ್ಥಿತಿ ಬಂದೊದಗಿದೆ' ಎಬಿವಿಪಿಯ ರೇವಣಸಿದ್ಧ ಜಾಡರ್ ಕಳವಳ ವ್ಯಕ್ತಪಡಿಸುತ್ತಾರೆ.

## ಶಿಷ್ಯ ವೇತನಕ್ಕೆ ಅರ್ಜಿ ಆಹ್ವಾನ

• **ಉದಯವಾಹಿನಿ ಶಿವಮೊಗ್ಗ**

2024-25ನೇ ಸಾಲಿಗೆ ಆಡಳಿತ ನ್ಯಾಯಾಧಿಕರಣ ಯೋಜನೆಯಡಿ ಶಿವಮೊಗ್ಗ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಕಾನೂನು ಪದವೀಧರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ 08 ಅಭ್ಯರ್ಥಿಗಳಿಗೆ ಶಿಷ್ಯ ವೇತನ ನೀಡುವ ಸಲುವಾಗಿ ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಮಾತ್ರ ಆನ್ಲೈನ್ನಲ್ಲಿ www.twd.karnataka.gov.in ಜಾಲತಾಣದ ಮೂಲಕ ಜೂನ್ 18 ರಿಂದ ಜುಲೈ 31 ರೊಳಗಾಗಿ ಅರ್ಜಿ ಸಲ್ಲಿಸಿ, ಅರ್ಜಿ ಪ್ರತಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ಶಿವಮೊಗ್ಗ ಇಲ್ಲಿಗೆ ಆಗಸ್ಟ್ 02 ರ ಒಳಗಾಗಿ ಸಲ್ಲಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಸ್ ಜಿ ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯನ್ನು ಖುದ್ದಾಗಿ ಅಥವಾ ದೂ. ಸಂ.: 08182-279222 / 9482762350 ಗಳನ್ನು ಸಂಪರ್ಕಿಸುವುದು ಎಂದು ಪ್ರಕಟಣೆ ತಿಳಿಸಿದೆ.

## ಮುಮ್ಮಿಗಟ್ಟಿ ಗ್ರಾಮಕ್ಕೆ ಜಿಲ್ಲಾ ಆರೋಗ್ಯಾಧಿಕಾರಿ ಭೇಟಿ

• **ಉದಯವಾಹಿನಿ ಧಾರವಾಡ**


ಉದಯವಾಹಿನಿ ಚಿತ್ರ

ಧಾರವಾಡ ತಾಲ್ಲೂಕಿನ ಮುಮ್ಮಿಗಟ್ಟಿ ಗ್ರಾಮದಲ್ಲಿ ಡೆಂಗ್ಯೂ ಶಂಕಿತ ಬಾಲಕಿ ಸಾವು ಪ್ರಕರಣ ಹಾಗೂ ಡೆಂಗ್ಯೂ ಶಂಕಿತ 7 ಪ್ರಕರಣಗಳ ಪತ್ತೆಯಿಂದಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ನಿರ್ದೇಶನದ ಮೇರೆಗೆ ಇಂದು ಬೆಳಿಗ್ಗೆ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ ಮತ್ತು ಉಪವಿಭಾಗಾಧಿಕಾರಿ ಶಾಲಂ ಹುಸೇನ ಅವರು ಮುಮ್ಮಿಗಟ್ಟಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಡಿಎಚ್‌ಓ ಡಾ. ಶಶಿ ಪಾಟೀಲ ಹಾಗೂ ತಾಲ್ಲೂಕು ವೈದ್ಯಾಧಿಕಾರಿ ಡಾ.ಕೆ.ಎನ್. ತನುಜಾ ಅವರ ನೇತೃತ್ವದ ಆಶಾ ಕಾರ್ಯಕರ್ತೆಯರ ತಂಡ ಗ್ರಾಮದಲ್ಲಿ ಹೆಚ್ಚು ಜ್ವರ ಪೀಡತರ ಓಣಿಗಳಿಗೆ ಭೇಟಿ ನೀಡಿ, ಮನೆಯಲ್ಲಿನ ಕುಟುಂಬದವರ ಅಭಿಪ್ರಾಯ ಸಂಗ್ರಹಿಸಿತು.ಸುಮಾರು 21 ಜನ ಆಶಾ ಕಾರ್ಯಕರ್ತೆರು ಗ್ರಾಮದ ಪ್ರತಿ ಮನೆಗೆ ಹೋಗಿ ಆರೋಗ್ಯ ಸಮೀಕ್ಷೆ ಮಾಡಿ, ಡೆಂಗ್ಯೂ, ಚಿಕನ್‌ಗೂನ್ಯ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಮುಮ್ಮಿಗಟ್ಟಿ ಗ್ರಾಮ ಪಂಚಾಯತ ಅಧ್ಯಕ್ಷೆ ಸುವರ್ಣಾ ಕೊಟ್ರಿ, ಉಪಾಧ್ಯಕ್ಷ ವಿಠ್ಠಲ ಬಟ್ಟಂಗಿ, ಗ್ರಾಮಪಂಚಾಯತ್ ಅಭಿವೃದ್ಧಿ ಅಧಿಕಾರಿ ಪರಶುರಾಮ ಕವಲೂರ ಮತ್ತು ಆರೋಗ್ಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಔರಾದನಲ್ಲಿ 5.49 ಕೋಟಿಯ ಅಭಿವೃದ್ಧಿ ಕೆಲಸಗಳಿಗೆ ಚಾಲನೆ

• **ಉದಯವಾಹಿನಿ ಔರಾದ**

ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ಜೂ.12ರಂದು ಔರಾದ ಪಟ್ಟಣದಲ್ಲಿ ನ್ಯಾಯಾಲಯ ಕಟ್ಟಡ ಸೇರಿದಂತೆ ನಾನಾ ಕಾಮಗಾರಿಗಳನ್ನು ಪರಿಶೀಲಿಸಿದರು. ಜೊತೆಗೆ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಚಾಲನೆ ನೀಡಿದರು. ಪಟ್ಟಣದ ದೇಶಮುಖ ಗಲ್ಲಿ, ಟೀಚರ್ಸ್ ಕಾಲೋನಿ ಸೇರಿದಂತೆ ಹಲವೆಡೆ ಸಂಚರಿಸಿ ಅಂಗನವಾಡಿ ಕಟ್ಟಡ, ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಹೆಚ್ಚುವರಿ ಕೋಣೆಗಳು, ಸೋಲಾರ ಪ್ಯಾನೆಲ್, ಸೋಲಾರ್ ಪ್ಯಾನಲ್, ಆರ್.ಓ ಪ್ಲಾಂಟ್, ಎಪಿಎಂಸಿ ಯಾರ್ಡ್ ಬಳಿ ಸಿಸಿ ರಸ್ತೆ, ಪಾಲಿಟೆಕ್ನಿಕ್ ಕಾಲೇಜು ಕಟ್ಟಡ, ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯದಲ್ಲಿ ಅಭಿವೃದ್ಧಿ ವಿವಿಧ ಕೆಲಸಗಳು, ಪದವಿ ಕಾಲೇಜಿನಲ್ಲಿ ಉನ್ನತೀಕರಣ ಕೆಲಸ, ಶೌಚಾಲಯ, ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಅಲ್ಲದೇ ಸರ್ಕಾರಿ ಆಸ್ಪತ್ರೆಯಲ್ಲಿ ಪೀಠೋಪಕರಣ, ಇತರೆ ಉಪಕರಣಗಳ ಅಳವಡಿಕೆ, ಟೀಚರ್ಸ್ ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಉನ್ನತೀಕರಣ ಕೆಲಸ ಹಾಗೂ ಆರ್.ಓ ಪ್ಲಾಂಟ್ ಅಳವಡಿಸುವುದು ಒಳಗೊಂಡು ಪಟ್ಟಣದಲ್ಲಿ 5.49 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಔರಾದ(ಬಿ) ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ನಿರಂತರ ಪ್ರಯತ್ನ ವಹಿಸುತ್ತಿದ್ದು, ಜನತೆಯ ಬೇಡಿಕೆಯ ಅನುಸಾರ ವಿವಿಧ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.


ಉದಯವಾಹಿನಿ ಚಿತ್ರ

**ಅಭಿವೃದ್ಧಿಗಾಗಿ ನಿರಂತರ ಪ್ರಯತ್ನ**

ಸಾರ್ವಜನಿಕರ ಹಿತದೃಷ್ಟಿಯಿಂದ ನಡೆಯುತ್ತಿರುವ ಎಲ್ಲಾ ಕೆಲಸಗಳನ್ನು ಕಾಲಮಿತಿಯಲ್ಲಿ ಮತ್ತು ಗುಣಮಟ್ಟದಿಂದ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಹಾಗೂ ಮುಖಂಡರು ಇದ್ದರು.

## ಹಲವು ವರ್ಷಗಳಿಂದ ಹೆಸ್ಕಾಂನಿಂದ ರಿಲೀವ್ ಆಗದ ಅಧಿಕಾರಿ

• **ಶಿವರಾಜಕುಮಾರ ವಾಲಿಕಾರ**

• **ಉದಯವಾಹಿನಿ ಇಂಡಿ**

ಇಂಡಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ವ್ಯಾಪ್ತಿಯ ಇಂಡಿ ವಿಭಾಗದಲ್ಲಿ 2016 ರಿಂದ 2024ರ ಅವಧಿಯ ಅನ್ವಯವಾಗುವಂತೆ ಇಂಡಿ ಹೆಸ್ಕಾಂನ ವಿಭಾಗದ ಸಂಗಮನಾಥ ಮೇಡೆಗಾರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ (ವಿ )ಹೇಸ್ಕಾಂ ಕಾ ಮತ್ತು ಪಾ ಉಪಾ ವಿಭಾಗ ಇಂಡಿ ಇವರು ಸುಮಾರು 9ವರ್ಷಗಳಿಂದ ಇಂಡಿ ಹೇಸ್ಕಾಂ ಅಲ್ಲಿ ಕಾರ್ಯನಿರ್ವಹಿಸುತ್ತಿದಾರೆ.


ಉದಯವಾಹಿನಿ ಚಿತ್ರ

ಯಾವುದೇ ಅಧಿಕಾರಿಗಳಾಗಲಿ 2-3 ವರ್ಷಗಳಾದ ಮೇಲೆ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುವದು ಕಾನೂನು ಬಾಹಿರ್ ಇಂಡಿ ಹೇಸ್ಕಾಂ 9ವರ್ಷ ಇಂಡಿಯಲ್ಲಿ ಕಾರ್ಯನಿರ್ವಹಿಸಲು ಕಾರಣವೇನು ಎಂದು ಸಾರ್ವಜನಿಕರ ಮತ್ತು ಸಂಘಟನಾಕಾರರ ಪ್ರಶ್ನೆಯಾಗಿದೆ. ಇವರು 9 ವರ್ಷಗಳ ಕಾಲ ಒಂದೇ ಕಡೆ ಕೆಲಸ ಮಾಡುತ್ತಿದರು ಇವರ ಮೇಲಧಿಕಾರಿಗಳು ಕಣ್ಣುಮುಚ್ಚಿ ಕುಳಿತು ಕೊಡಿರೋದು ವಿಪರ್ಯಾಸವೇ ಸರಿ...!

> ಇಂಡಿ ಹೇಸ್ಕಾಂ ನಿಂದ ಸಂಗಮನಾಥ ಸಹಾಯಕ ಕಾರ್ಯನಿರ್ವಾಹಕ ಇವರಿಗೆ ಬೇರೆ ಕಡೆ ವರ್ಗಾವಣೆ ಮಾಡಬೇಕು 9 ವರ್ಷಗಳ ಕಾಲ ಇವರು ಮಾಡಿರುವ ಪ್ರತಿಯೊಂದ ಕೆಲಸ ಏನ್ ಏನ್ ಆಗಿದೆ ಅದರ ಮಾಹಿತಿ ಕೊಡಬೇಕು ಇಲ್ಲವಾದಲ್ಲಿ ಅವರ ವಿರುದ್ಧ ಮತ್ತು ಮೇಲಧಿಕಾರಿಗಳ ವಿರುದ್ಧ ಇಂಡಿ ಹೇಸ್ಕಾಂ ಎದುರುಗಡೆ ಧರಣಿ ಕುಡುತೇವೆ.
> -ಶಿವು ಮಲಕಗೊಂಡ, ಕರವೇ, ಇಂಡಿ ತಾಲ್ಲೂಕು ಅಧ್ಯಕ್ಷ

## ದರ್ಶನ್ ಕೃತ್ಯಕ್ಕೆ ಭುಗಿಲೆದ್ದ ಆಕ್ರೋಶ

• **ಉದಯವಾಹಿನಿ ಕಲಬುರಗಿ**


ಉದಯವಾಹಿನಿ ಚಿತ್ರ

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಕೇಸ್‌ನಲ್ಲಿ ಈಗಾಗಲೇ ನಟ ದರ್ಶನ್ ಸೇರಿ ಹಲವು ಸಹಚರ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೊಲೆ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸಿ ರಾಜ್ಯಾದ್ಯಂತ ಅನೇಕ ಹೋರಾಟಗಳು ನಡೆಯುತ್ತಿವೆ.

ಇದರ ಭಾಗವಾಗಿ ಇಂದು ಮೈಸೂರು, ಹಾಸನ ಸೇರಿದಂತೆ ನಟ ದರ್ಶನ್ ವಿರುದ್ದ ಕಲಬುರಗಿ ನಗರದ ಎಸ್‌ವಿಪಿ ವೃತ್ತದಲ್ಲೂ ಭಾರೀ ಪ್ರತಿಭಟನೆ ಕೈಗೊಳ್ಳಲಾಗಿದೆ.

ಜಿಲ್ಲಾ ಜಂಗಮ ಸಮಾಜದಿಂದ ಎಸ್‌ವಿಪಿ ಸರ್ಕಲ್‌ನಿಂದ ಜಿಲ್ಲಾಧಿಕಾರಿ ಕಚೇರಿಯವರೆಗೂ ಪ್ರತಿಭಟನೆ ಮಾಡಿ ಆಕ್ರೋಶ ಹೊರಹಾಕಲಾಯಿತು.

ಈ ವೇಳೆ ದರ್ಶನ್ ಭಾವಚಿತ್ರಕ್ಕೆ ಬೆಂಕಿ ಹಚ್ಚಿ, ಫೋಟೋಗೆ ಚಪ್ಪಲಿಯಿಂದ ಹೊಡೆದು ಪ್ರತಿಭಟನಾಕಾರರು ಸಿಡಿದೆದ್ದರು. ಆರೋಪಿ ದರ್ಶನ್ ಗ್ಯಾಂಗ್ ವಿರುದ್ದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸುವ ಮೂಲಕ ಕೊಲೆ ಆರೋಪಿಗಳನ್ನು ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿದರು.

# ಯಡಿಯೂರಪ್ಪ ವಿರುದ್ಧ ರಾಜಕೀಯ ದ್ವೇಷದ ಪ್ರಶ್ನೆಯೇ ಇಲ್ಲ

## ಅಪ್ರಾಪ್ತ ವಯಸ್ಸಿನ ಮಕ್ಕಳ ಮೇಲೆ ದೌರ್ಜನ್ಯವಾದರೆ ಅದಕ್ಕೆ ಪೋಕ್ಸೋ ಕಾಯ್ದೆ ಅನ್ವಯ ಮಾಡಲಾಗುತ್ತದೆ: ಎಂ.ಬಿ. ಪಾಟೀಲ

• **ಉದಯವಾಹಿನಿ ಹುಬ್ಬಳ್ಳಿ**

ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ವಿರುದ್ಧ ರಾಜಕೀಯ ದ್ವೇಷದ ಪ್ರಶ್ನೆಯೇ ಇಲ್ಲ. ಅವರ ವಿರುದ್ಧ ಪೋಕ್ಸೋ ಕಾಯ್ದೆ ಅಡಿ ಪ್ರಕರಣ ದಾಖಲಾಗಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಪ್ರಾಪ್ತ ವಯಸ್ಸಿನ ಮಕ್ಕಳ ಮೇಲೆ ದೌರ್ಜನ್ಯವಾದರೆ ಅದಕ್ಕೆ ಪೋಕ್ಸೋ ಕಾಯ್ದೆ ಅನ್ವಯ ಮಾಡಲಾಗುತ್ತದೆ. ಈ ಆಯಕ್ಟ್ ಅತ್ಯಂತ ಗಂಭೀರವಾದದ್ದು. ಹೀಗಾಗಿ ಯಾವುದೇ ಸರ್ಕಾರ ಇದರಲ್ಲಿ ಹಸ್ತಕ್ಷೇಪ ಮಾಡಲು ಬರಲ್ಲ ಎಂದರು.

ರಾಜ್ಯದಲ್ಲಿ ಚಿತ್ರದುರ್ಗ ಮುರುಘಾಮಠದ ಸ್ವಾಮಿಗಳ ಪ್ರಕರಣ ಗಮನಿಸಿದ್ದೀರಿ. ಪೋಕ್ಸೋ ಕಾಯ್ದೆಯಡಿ ತನ್ನದೇ ಆದ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ. ಹೈಕೋರ್ಟ್ ವಾರಂಟ್ ಜಾರಿ ಮಾಡಿದೆ. ಅದರ ನಿರ್ದೇಶನ ಇರಬೇಕಾದರೆ ಕಾಂಗ್ರೆಸ್, ಬಿಜೆಪಿಯ ಪ್ರಶ್ನೆ ಬರಲ್ಲ. ಇದರಲ್ಲಿ ಯಡಿಯೂರಪ್ಪ ತಪ್ಪಿತಸ್ಥರು ಹೌದೋ ಅಲ್ಲವೋ ಅನ್ನುವುದನ್ನು ನ್ಯಾಯಾಲಯ ನಿರ್ಧರಿಸುತ್ತದೆ. ಸಂತ್ರಸ್ತೆಯೇ ನ್ಯಾಯಾಧೀಶರ ಎದುರು ಹೇಳಿಕೆ ಕೊಟ್ಟಿದ್ದಾರೆ. ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದರು.

ಮೂವರು ಡಿಸಿಎಂ ಹುದ್ದೆ ಸೃಷ್ಟಿ ವಿಚಾರವನ್ನು ಪಕ್ಷದ ಆಂತರಿಕ ವಲಯದಲ್ಲಿ ಚರ್ಚಿಸುತ್ತೇವೆ. ಬಹಿರಂಗವಾಗಿ ಈ ಕುರಿತು ಚರ್ಚಿಸಲು ಆಗಲ್ಲ. ಈಗಾಗಲೇ ಪಕ್ಷದ ಆಂತರಿಕ ವೇದಿಕೆಯಲ್ಲಿ ನಮ್ಮ ವಿಚಾರ ತಿಳಿಸಿದ್ದೇವೆ. ಮುಂದೆಯೂ ಅಗತ್ಯವಿದ್ದಲ್ಲಿ ಅಭಿಪ್ರಾಯ ತಿಳಿಸುತ್ತೇವೆ ಎಂದರು.

ಬಂಧಿತ ನಟ ದರ್ಶನ್‌ಗೆ ರಾಜ ಮರ್ಯಾದೆಯ ಪ್ರಶ್ನೆಯೇ ಇಲ್ಲ. ಆರೋಪಿ ಆರೋಪಿಯೇ. ಆರೋಪ ಸಾಬೀತಾದರೆ ಅವರಿಗೆ ಶಿಕ್ಷೆ ಆಗುತ್ತದೆ. ದರ್ಶನ್ ಕೃಷಿ ಇಲಾಖೆ ರಾಯಭಾರಿಯಾಗಿ ಮುಂದುವರೆಯುವ ಪ್ರಶ್ನೆಯೇ ಇಲ್ಲ. ಇಂತಹ ಘಟನೆಯಾದ ನಂತರ ರಾಯಭಾರಿಯಾಗಿ ಮುಂದುವರಿಸಲು ಆಗಲ್ಲ ಎಂದರು.

**ಸರ್ಕಾರ ಹಸ್ತಕ್ಷೇಪ ಮಾಡಲ್ಲ**



ಲೋಕಸಭೆಯಲ್ಲಿ ಲೀಡ್ ತಂದು ಕೊಡದ ಸಚಿವರ ತಲೆದಂಡ ಎನ್ನುವುದು ಮಾಧ್ಯಮಗಳ ಸೃಷ್ಟಿ. ಎಲ್ಲರೂ ಗಂಭೀರವಾಗಿ ಚುನಾವಣೆ ಮಾಡಿ ಎಂದು ಸೂಚಿಸಲಾಗಿತ್ತು. ಚುನಾವಣೆಯಲ್ಲಿ ಸೋಲಿನ ಕುರಿತು ಪಕ್ಷದ ವೇದಿಕೆಯಲ್ಲಿ ಆತ್ಮಾವಲೋಕನ ಮಾಡಿಕೊಳ್ಳುತ್ತೇವೆ ಎಂದರು.

ಲೋಕಸಭೆ ಚುನಾವಣೆ ನಂತರ ಕಾಂಗ್ರೆಸ್ ಸರ್ಕಾರ ಪತನವೆಂಬ ಬಿಜೆಪಿ ನಾಯಕರ ಹೇಳಿಕೆಗೆ ಕಿಡಿಕಾರಿದ ಅವರು, ಮೊದಲು ಅವರಿಗೆ ಮಹಾರಾಷ್ಟ್ರದಲ್ಲಿ ತಮ್ಮ ಸರ್ಕಾರ ಉಳಿಸಿಕೊಳ್ಳಲು ಹೇಳಿ. ನಮ್ಮ ಸರ್ಕಾರ ಪತನಗೊಳಿಸಬೇಕಾದರೆ 60 ಶಾಸಕರ ಅಗತ್ಯವಿದೆ. ಬಿಜೆಪಿಯ ಒಬ್ಬರು ಶಾಸಕರು ನಮ್ಮ ಜೊತೆಗಿದ್ದಾರೆ. ಜೆಡಿಎಸ್‌ನ ಬಹಳಷ್ಟು ಶಾಸಕರು ನಮ್ಮ ಪಕ್ಷ ಸೇರ್ಪಡೆಗೆ ಸಿದ್ಧರಾಗಿದ್ದಾರೆ. ನಮ್ಮಲ್ಲಿ 60 ಶಾಸಕರು ರಾಜೀನಾಮೆ ಕೊಟ್ಟು ಚುನಾವಣೆ ಎದುರಿಸಬೇಕಾಗುತ್ತದೆ ಇದೇನು ಹುಡುಗಾಟನಾ? ಒಬ್ಬ ಶಾಸಕರೂ ಬಿಜೆಪಿಗೆ ಹೋಗುವ ಪ್ರಶ್ನೆಯೇ ಇಲ್ಲ ಎಂದರು.

**ಸಿಎಂ ಖುರ್ಚಿ ಖಾಲಿ ಇಲ್ಲ**

ಗ್ಯಾರಂಟಿಗಳ ಕುರಿತು ಚರ್ಚೆ ಮಾಡುತ್ತೇವೆ. ಅವುಗಳನ್ನು ರದ್ದು ಮಾಡುವ ಪ್ರಸ್ತಾವನೆ ನಮ್ಮ ಬಳಿ ಸದ್ಯಕ್ಕಿಲ್ಲ. ಸಿಎಂ ಯಾರು ಆಗಬೇಕು ಅನ್ನುವುದನ್ನು ಪಕ್ಷ ತೀರ್ಮಾನಿಸುತ್ತದೆ. ಸಿಎಂ ಆಗಲು ಶಾಸಕರ ಬೆಂಬಲ ಬೇಕು. ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಕೈಗೊಳ್ಳುತ್ತದೆ. ಸದ್ಯಕ್ಕೆ ಆ ಪ್ರಶ್ನೆ ಉದ್ಭವಿಸಲ್ಲ. ಆ ಸ್ಥಾನದಲ್ಲಿ ಸಿದ್ದರಾಮಯ್ಯ ಇದ್ದು, ಸಿಎಂ ಖುರ್ಚಿ ಖಾಲಿ ಇಲ್ಲ ಎಂದರು.

> ಎಚ್.ಡಿ. ಕುಮಾರಸ್ವಾಮಿ ಕೇಂದ್ರ ಕೈಗಾರಿಕಾ ಸಚಿವರಾಗಿದ್ದಾರೆ. ರಾಜ್ಯದ ಕೆಲ ಬೇಡಿಕೆಗಳನ್ನು ಶೀಘ್ರವಾಗಿ ಅವರಿಗೆ ಸಲ್ಲಿಸಲಾಗುತ್ತದೆ. ರಾಜ್ಯಕ್ಕೆ ಮಹತ್ವದ ಖಾತೆಗಳು ಸಿಕ್ಕಿರುವುದರಿಂದ ನಮ್ಮ ರಾಜ್ಯಕ್ಕೂ ಒಂದಷ್ಟು ನೆರವಾಗಲಿದೆ
> -ಎಂ.ಬಿ. ಪಾಟೀಲ, ಕೈಗಾರಿಕಾ ಸಚಿವ

# ಅಮೆರಿಕದ ಒಹಾಯೋ ನೈಟ್ ಕ್ಲಬ್‌ನಲ್ಲಿ ಆಗಂತುಕನಿಂದ ಗುಂಡಿನ ಮಳೆ

## ನೈಟ್ ಕ್ಲಬ್‌ನಲ್ಲಿ ಮೊದಲಿಗೆ ಮಾತಿನ ಚಕಮಕಿ ನಡೆಸಿದ ದುಷ್ಕರ್ಮಿ, ಬಳಿಕ ಪಿಸ್ತೂಲ್ ತೆಗೆದು ಏಕಾಏಕಿ ಜನರ ಮೇಲೆ ಗುಂಡಿನ ದಾಳಿ



**ಬಂಧನಕ್ಕೆ ಪೊಲೀಸರ ಬಲೆ**

**ಅಮೆರಿಕ:** ವಿಶ್ವದ ದೊಡ್ಡಣ್ಣ ಅಮೆರಿಕ ದೇಶದಲ್ಲಿ ಮತ್ತೊಂದು ಸಾಮೂಹಿಕ ಗುಂಡಿನ ದಾಳಿ ಪ್ರಕರಣ ನಡೆದಿದೆ. ಒಹಾಯೋ ನಗರದ ನೈಟ್ ಕ್ಲಬ್ ಒಂದರಲ್ಲಿ ಸೇರಿದ್ದ ಜನರ ಮೇಲೆ ಆಗಂತುಕನೊಬ್ಬ ಏಕಾಏಕಿ ಗುಂಡಿನ ದಾಳಿ ನಡೆಸಿದ್ದಾನೆ. ಇದೀಗ ಲಭ್ಯವಾದ ಮಾಹಿತಿ ಪ್ರಕಾರ ಇಬ್ಬರು ಸಾವನ್ನಪ್ಪಿದ್ದು, ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಅಮೆರಿಕದ ಒಹಾಯೋದ ಸ್ಥಳೀಯ ಕಾಲ ಮಾನ ಶುಕ್ರವಾರ ಬೆಳಗ್ಗೆ ಈ ಘಟನೆ ನಡೆದಿದೆ. ಗುಂಡಿನ ದಾಳಿ ನಡೆದ ಕೂಡಲೇ ಪುರುಷನೊಬ್ಬ ಸ್ಥಳದಲ್ಲೇ ಸಾವನ್ನಪ್ಪಿದ. ಮತ್ತೊಬ್ಬರು ಆಸ್ಪತ್ರೆಗೆ ರವಾನಿಸುವ ಮಾರ್ಗ ಮಧ್ಯೆ ಕೊನೆಯುಸಿರೆಳೆದರು ಎಂದು ಪೊಲೀಸರು ತಿಳಿಸಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರಿಗೆ ಆಸ್ಪತ್ರೆಯ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ಹೇಳಿದ್ದಾರೆ. ಒಹಾಯೋದ ಸ್ಥಳೀಯ 10ಟಿವಿಯಲ್ಲಿ ಈ ಕುರಿತಾಗಿ ಸಮಗ್ರ ಮಾಹಿತಿ ಲಭ್ಯವಾಗಿದೆ. ಅವ್ಲೋನ್ ಡ್ಯಾನ್ಸ್ ಕ್ಲಬ್ ಎಂಬ ನೈಟ್ ಕ್ಲಬ್, ಒಹಾಯೋದ ಡೌನ್‌ಟೌನ್ ಕೊಲಂಬಸ್‌ನಲ್ಲಿ ಇದೆ. ಈ ಕ್ಲಬ್‌ನಲ್ಲಿ ಇಂಥಾದ್ದೊಂದು ದುರ್ಘಟನೆ ನಡೆದಿದೆ. ಒಹಾಯೋದ ಸ್ಥಳೀಯ ಕಾಲಮಾನ ಬೆಳಗಿನ ಜಾವ 1.45ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ತಿಳಿದು ಬಂದಿದೆ. ಗುಂಡಿನ ದಾಳಿ ನಡೆಸಿದ ವ್ಯಕ್ತಿ ಯಾರು ಎಂದು ಇನ್ನೂ ಪತ್ತೆಯಾಗಿಲ್ಲ. ದಾಳಿ ಕೋರ ಘಟನಾ ಸ್ಥಳದಿಂದ ಪರಾರಿಯಾಗಿದ್ದು, ಆತನ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ. ಮೃತ ಇಬ್ಬರು 20 ರಿಂದ 40 ವರ್ಷದವರು ಎಂಬ ಮಾಹಿತಿಯಷ್ಟೇ ಲಭ್ಯವಾಗಿದೆ. ಗಾಯಗೊಂಡಿರುವ ಇಬ್ಬರ ಆರೋಗ್ಯ ಸ್ಥಿತಿ ಸುಧಾರಿಸುತ್ತಿದೆ ಎಂದು ವೈದ್ಯರು ಮಾಹಿತಿ ನೀಡಿದ್ದಾರೆ.

ಒಹಾಯೋದ ರಾಜ್ಯ ವಿಶ್ವ ವಿದ್ಯಾಲಯದ ವ್ಯಾಪ್ತಿಗೆ ಬರುವ ವೆಕ್ಸ್‌ನರ್ ಆರೋಗ್ಯ ಕೇಂದ್ರದಲ್ಲಿ ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಪೊಲೀಸರ ಪ್ರಾಥಮಿಕ ತನಿಖೆ ವೇಳೆ ಹಲವು ಮಹತ್ವದ ಸಂಗತಿಗಳು ಬಯಲಾಗಿವೆ. ನೈಟ್ ಕ್ಲಬ್‌ನಲ್ಲಿ ಮೊ ದಲಿಗೆ ಮಾತಿನ ಚಕಮಕಿ ನಡೆಯಿತು. ಈ ವೇಳೆ ವ್ಯಕ್ತಿಯೊಬ್ಬ ತನ್ನಲ್ಲಿದ್ದ ಪಿಸ್ತೂಲ್ ತೆಗೆದು ಏಕಾಏಕಿ ಜನರ ಮೇಲೆ ಗುಂಡಿನ ದಾಳಿ ನಡೆಸಿದ ಎಂದು ಪ್ರತ್ಯಕ್ಷದರ್ಶಿಗಳು ಪೊಲೀಸರಿಗೆ ತಿಳಿಸಿದ್ದಾರೆ. ಸದ್ಯದ ಮಟ್ಟಿಗೆ ಘಟನೆಗೆ ಸಂಬಂಧಿಸಿದಂತೆ ಯಾರನ್ನೂ ಬಂಧನ ಮಾಡಲಾಗಿಲ್ಲ. ಆರೋಪಿಯ ಪತ್ತೆಗೆ ಪೊಲೀಸರು ಮುಂದಾಗಿದ್ದಾರೆ.

ಕಳೆದ ಬುಧವಾರ ಕೂಡಾ ಇಲಿನಾಯ್ಸ್ ರಾಜ್ಯದಲ್ಲಿ ಸಾಮೂಹಿಕ ಗುಂಡಿನ ದಾಳಿ ನಡೆದಿತ್ತು. ಈ ಘಟನೆಯಲ್ಲಿ ಮೂವರು ಪೊಲೀಸ್ ಅಧಿಕಾರಿಗಳು ಗಂಭೀರವಾಗಿ ಗಾಯಗೊಂಡಿದ್ದರು. ಗುಂಡಿನ ದಾಳಿ ನಡೆಸಿದ್ದ ಆರೋಪಿ ಕೂಡಾ ಪೊಲೀಸರ ಪ್ರತಿ ದಾಳಿ ವೇಳೆ ಗಾಯಗೊಂಡಿದ್ದ.

### ಅಮೆರಿಕ ರಾಜ್ಯದಲ್ಲಿ ಪದೇ ಪದೇ ಸಾಮೂಹಿಕ ಗುಂಡಿನ ದಾಳಿ

**ಅಮೆರಿಕ ದೇಶದಲ್ಲಿ ಕಾನೂನು ಪ್ರಕಾರ ಜನ ಸಾಮಾನ್ಯರು ಶಸ್ತ್ರಾಸ್ತ್ರ ಹೊಂದಬಹುದು. ಆತ್ಮ ರಕ್ಷಣೆ ಹಾಗೂ ವನ್ಯ ಜೀವಿಗಳಿಂದ ರಕ್ಷಣೆ ಪಡೆಯಲು ಶಸ್ತ್ರಾಸ್ತ್ರ ಹೊಂದಬಹುದಾಗಿದ್ದು, ಸರ್ಕಾರ ನೀಡಿರುವ ಈ ಅವಕಾಶವನ್ನು ದುರ್ಬಳಕೆ ಮಾಡಿಕೊಳ್ಳುವ ಪ್ರಸಂಗಗಳು ಆಗಾಗ ನಡೆಯುತ್ತಲೇ ಇವೆ. ದುಷ್ಕರ್ಮಿಗಳು ಭಯೋತ್ಪಾದಕರ ರೀತಿ ಸಾರ್ವಜನಿಕ ಸ್ಥಳಗಳಲ್ಲೇ ರಕ್ತದೋಕುಳಿ ಹರಿಸುತ್ತಿದ್ದಾರೆ.**

**ಅಮೆರಿಕ ದೇಶದಲ್ಲಿ ಬಂದೂಕು ಹಾಗೂ ಪಿಸ್ತೂಲನ್ನು ಖರೀದಿಸುವುದು, ಮನೆಯಲ್ಲಿ ಇಟ್ಟುಕೊಳ್ಳುವುದು ಅಪರಾಧವಲ್ಲ. ಆತ್ಮ ರಕ್ಷಣೆ ಹಾಗೂ ಕಾಡು ಪ್ರಾಣಿಗಳಿಂದ ರಕ್ಷಣೆ ಪಡೆಯಲು, ಕಳ್ಳಕಾಕರ ಕಾಟದಿಂದ ತಪ್ಪಿಸಿಕೊಳ್ಳಲು ಜನರು ಬಳಸಬಹುದಾಗಿದೆ. ಆದರೆ, ಸರ್ಕಾರದ ಈ ನಿಯಮವನ್ನು ದುಷ್ಕರ್ಮಿಗಳು ದುರ್ಬಳಕೆ ಮಾಡಿಕೊಳ್ಳುತ್ತಾರೆ. ಜನ ಸಮೂಹದ ಮೇಲೆ ಗುಂಡಿನ ದಾಳಿ ನಡೆಯುವ ಹಲವು ಪ್ರಕರಣಗಳು ಅಮೆರಿಕದಲ್ಲಿ ವರದಿಯಾಗುತ್ತಲೇ ಇರುತ್ತದೆ. ಇದೀಗ ಇಂಥಾ ದುಷ್ಕೃತ್ಯಗಳ ಸರಣಿಗೆ ಹೊಸ ಘಟನೆಯೊಂದು ಸೇರ್ಪಡೆ ಆಗಿದೆ.**

# ಜಿ7 ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಇಟಲಿ ತಲುಪಿದ ಪ್ರಧಾನಿ ಮೋದಿ



**ಇಟಲಿ:** ಮಹತ್ವದ ಜಿ 7 ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಅವರು ಇಟಲಿಯ ಅಪುಲಿಯಾಗೆ ಆಗಮಿಸಿದರು. ಅಪುಲಿಯಾದಲ್ಲಿರುವ ಬ್ರಿಂಡಿಸಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಪ್ರಧಾನಿ ಮೋದಿ ಅವರನ್ನು ಇಟಲಿಯಲ್ಲಿನ ಭಾರತದ ರಾಯಭಾರಿ ವಾಣಿ ರಾವ್ ಮತ್ತು ಇತರ ಅಧಿಕಾರಿಗಳು ಬರಮಾಡಿಕೊಂಡರು.

ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು ಜಿ7 ಶೃಂಗಸಭೆಯಲ್ಲಿ ಭಾಗವಹಿಸಲು ಇಟಲಿಯ ಬ್ರಿಂಡಿಸಿ ವಿಮಾನ ನಿಲ್ದಾಣಕ್ಕೆ ತಡ ರಾತ್ರಿ ಆಗಮಿಸಿದ್ದಾರೆ. ಇದು ಖುಷಿಯ ವಿಚಾರ. ಅಪುಲಿಯಾದಲ್ಲಿ ಶೃಂಗಸಭೆಯಲ್ಲಿ ಅವರು ಭಾಗಿಯಾಗಲಿದ್ದು, ಅಲ್ಲಿ ಅವರು ವಿಶ್ವ ನಾಯಕರೊಂದಿಗೆ ಹಲವು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ ಎಂದು ಭಾರತದ ದೇಶಾಂಗ ವ್ಯವಹಾರಗಳ ಸಚಿವಾಲಯದ ಅಧಿಕೃತ ವಕ್ತಾರ ರಣಧೀರ್ ಜೈಸ್ವಾಲ್ ವಿಡಿಯೋ ಮೂಲಕ ಖಚಿತಪಡಿಸಿದ್ದಾರೆ.

ಇಂದು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಹಾಗೂ ಪ್ರಧಾನಿ ಮೋದಿ ನಡುವೆ ದ್ವಿಪಕ್ಷೀಯ ಮಾತುಕತೆಗಳು ನಡೆಯಲಿವೆ. ಸತತ ಮೂರನೇ ಅವಧಿಗೆ ಅಧಿಕಾರ ವಹಿಸಿಕೊಂಡ ನಂತರ ಪ್ರಧಾನಿ ಮೋದಿಯವರ ಮೊದಲ ವಿದೇಶ ಪ್ರವಾಸ ಇದಾಗಿದೆ. ಬೋರ್ಗೊ ಎಗ್ನಾಜಿಯಾದ ಐಷಾರಾಮಿ ರೆಸಾರ್ಟ್‌ನಲ್ಲಿ ನಡೆಯುತ್ತಿರುವ ಜಿ7 ಶೃಂಗಸಭೆಯಲ್ಲಿ ವಿಶ್ವದ ಗಣ್ಯ ನಾಯಕರ ಜೊತೆಗೆ ಜನರ ಜೀವನ ಸುಧಾರಿಸುವ ಹಾಗೂ ಕೃತಕ ಬುದ್ಧಿಮತ್ತೆ, ಶಕ್ತಿ, ಆಫ್ರಿಕಾ-ಮೆಡಿಟರೇನಿಯನ್ ವಿಷಯ ಸೇರಿದಂತೆ ಹಲವು ವಿಚಾರಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಈ ವೇಳೆ ಇಟಾಲಿಯನ್ ಪ್ರಧಾನಿ ಜಾರ್ಜಿಯಾ ಮೆಲೋನಿ, ಪೋಪ್ ಫ್ರಾನ್ಸಿಸ್ ಅವರು ಸಹ ಇರಲಿದ್ದಾರೆ. ಅಪುಲಿಯಾದಲ್ಲಿ ಶೃಂಗಸಭೆಯಲ್ಲಿ ಅವರು ಭಾಗಿಯಾಗಲಿದ್ದು, ಅಲ್ಲಿ ಅವರು ವಿಶ್ವ ನಾಯಕರೊಂದಿಗೆ ಹಲವು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ ಎಂದು ಭಾರತದ ದೇಶಾಂಗ ವ್ಯವಹಾರಗಳ ಸಚಿವಾಲಯದ ಅಧಿಕೃತ ವಕ್ತಾರ ರಣಧೀರ್ ಜೈಸ್ವಾಲ್ ವಿಡಿಯೋ ಮೂಲಕ ಖಚಿತಪಡಿಸಿದ್ದಾರೆ.

ಜೂನ್ 13-15 ರವರೆಗೆ ಇಟಲಿಯ ಅಪುಲಿಯಾ ಪ್ರದೇಶದ ಐಷಾರಾಮಿ ಬೋರ್ಗೊ ಎಗ್ನಾಜಿಯಾ ರೆಸಾರ್ಟ್‌ನಲ್ಲಿ ಜಿ7 ಶೃಂಗಸಭೆ ನಡೆಯುತ್ತಿದ್ದು, ಅಮೆರಿಕ ಅಧ್ಯಕ್ಷ ಜೋ ಬೈಡನ್, ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್, ಜಪಾನ್ ಪ್ರಧಾನಿ ಯಮಿಯೊ ಕಿಶಿದಾ, ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಸೇರಿದಂತೆ ಇಟಲಿ ಆಫ್ರಿಕಾ, ದಕ್ಷಿಣ ಅಮೆರಿಕ ಮತ್ತು ಇಂಡೋ-ಪೆಸಿಫಿಕ್ ಪ್ರದೇಶದ 11 ಅಭಿವೃದ್ಧಿಶೀಲ ರಾಷ್ಟ್ರಗಳ ನಾಯಕರನ್ನು ಜಿ7 ಶೃಂಗಸಭೆಯಲ್ಲಿ ಭಾಗವಹಿಸಲು ಆಹ್ವಾನಿಸಿದೆ. ಜಿ7 ಯುಎಸ್, ಯುಕೆ,ಫ್ರಾನ್ಸ್, ಇಟಲಿ, ಜರ್ಮನಿ, ಕೆನಡಾ ಹಾಗೂ ಜಪಾನ್ ಅನ್ನು ಒಳಗೊಂಡಿದೆ. ಭಾರತವಲ್ಲದೆ ಆಫ್ರಿಕಾ, ದಕ್ಷಿಣ ಅಮೆರಿಕ ಹಾಗೂ ಇಂಡೋ ಪೆಸಿಫಿಕ್ ಪ್ರದೇಶದ 11 ಅಭಿವೃದ್ಧಿಶೀಲ ರಾಷ್ಟ್ರಗಳ ನಾಯಕರನ್ನು ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಇಟಲಿ ಆಹ್ವಾನಿಸಿದೆ.


ಕಳೆದ ವರ್ಷ ಮೇ ತಿಂಗಳಲ್ಲಿ ಹಿರೋಷಿಮಾದಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಮೋದಿ ಭಾಗವಹಿಸಿದ್ದರು.

### ಪ್ರಧಾನಿ ಟ್ವೀಟ್

**ಜಿ7 ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಇಟಲಿಗೆ ಆಗಮಿಸಲಾಗಿದೆ. ವಿಶ್ವ ನಾಯಕರೊಂದಿಗೆ ದ್ವಿಪಪಕ್ಷೀಯ ಚರ್ಚೆಗಳಲ್ಲಿ ತೊಡಗಿಸಿಕೊಳ್ಳಲು ಎದುರು ನೋಡುತ್ತಿದ್ದೇನೆ. ನಾವೆಲ್ಲರೂ ಒಟ್ಟಾಗಿ, ಜಾಗತಿಕ ಸವಾಲುಗಳನ್ನು ಎದುರಿಸಲು ಮತ್ತು ಉಜ್ವಲ ಭವಿಷ್ಯಕ್ಕಾಗಿ ಅಂತಾರಾಷ್ಟ್ರೀಯ ಸಹಕಾರವನ್ನು ಬೆಳೆಸುವ ಗುರಿಯನ್ನು ಹೊಂದಿದ್ದೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಸಹ ಟ್ವೀಟ್ ಮಾಡಿಕೊಂಡಿದ್ದಾರೆ.**

# J & K ಭದ್ರತೆ ಪರಿಶೀಲಿಸಿದ ಅಮಿತ್ ಶಾ: ಉನ್ನತ ಮಟ್ಟದ ಸಭೆ ನಾಳೆ

**ನವದೆಹಲಿ:** ಯಾತ್ರಿಗಳಿದ್ದ ಬಸ್ ಮೇಲಿನ ಗುಂಡಿನ ದಾಳಿ ಸೇರಿದಂತೆ ಭಯೋತ್ಪಾದಕರ ಹಲವು ಕೃತ್ಯಗಳಿಗೆ ಸಾಕ್ಷಿಯಾದ ಜಮ್ಮು ಹಾಗೂ ಕಾಶ್ಮೀರದಲ್ಲಿನ ಭದ್ರತೆಯ ಪರಿಸ್ಥಿತಿಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಕ್ರವಾರ ಪರಿಶೀಲಿಸಿದರು. ಇದಕ್ಕೆ ಸಂಬಂಧಿಸಿದಂತೆ ಜೂನ್ 16ರಂದು ಉನ್ನತ ಮಟ್ಟದ ಸಭೆ ಕರೆದಿದ್ದಾರೆ. ಸಭೆಯಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋಭಾಲ್, ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಸೇನೆ ಹಾಗೂ ಸಿಆರ್‌ಪಿಎಫ್‌ನ ಉನ್ನತಮಟ್ಟ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.



ಭಯೋತ್ಪಾದಕರ ದಾಳಿಯ ನಂತರದಲ್ಲಿ ಜಮ್ಮು, ಕಾಶ್ಮೀರದಲ್ಲಿನ ಪರಿಸ್ಥಿತಿ ಕುರಿತು ಅಧಿಕಾರಿಗಳು ಶಾ ಅವರಿಗೆ ಮಾಹಿತಿ ನೀಡಿದರು ಎಂದು ಮೂಲಗಳು ತಿಳಿಸಿವೆ. ಜಮ್ಮು, ಕಾಶ್ಮೀರದ ರಯೀಸ್, ಕಥುವಾ ಹಾಗೂ ದೊಡಾ ಜಿಲ್ಲೆಯಲ್ಲಿ ಭಯೋತ್ಪಾದಕ ಕೃತ್ಯಗಳು ಕಳೆದ ಕೆಲ ದಿನಗಳಲ್ಲಿ ನಡೆದಿವೆ. ಇದರಲ್ಲಿ ಒಂಭತ್ತು ಯಾತ್ರಿಗಳು ಮೃತಪಟ್ಟು, ಒಬ್ಬರು ಸಿಆರ್‌ಪಿಎಫ್ ಯೋಧ ಹುತಾತ್ಮರಾಗಿದ್ದಾರೆ.

ದಾಳಿಯಲ್ಲಿ ಏಳು ಭದ್ರತಾ ಸಿಬ್ಬಂದಿ ಒಳಗೊಂಡು ಹಲವರು ಗಾಯಗೊಂಡಿದ್ದಾರೆ. ಭದ್ರತಾ ಸಿಬ್ಬಂದಿಯ ಪ್ರತಿ ದಾಳಿಯಲ್ಲಿ ಪಾಕಿಸ್ತಾನದ ಇಬ್ಬರು ಭಯೋತ್ಪಾದಕರು ಹತರಾಗಿದ್ದಾರೆ. ಕಥುವಾ ಜಿಲ್ಲೆಯಲ್ಲಿ ಭಾರೀ ಸಂಖ್ಯೆಯಲ್ಲಿ ಸಂಗ್ರಹಿಸಿಡಲಾಗಿದ್ದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ.

# ಭಾರತದ ಚುನಾವಣೆಯನ್ನು ಹಾಡಿಹೊಗಳಿದ ಅಮೆರಿಕ



**ವಾಷಿಂಗ್ಟನ್:** ಭಾರತದ ಚುನಾವಣೆಯನ್ನು ಹೊಗಳಿರುವ ಅಮೆರಿಕ ಇತಿಹಾಸದಲ್ಲಿ ಯಾವುದೇ ಸಮಯದಲ್ಲಿ ಯಾವುದೇ ದೇಶದಲ್ಲಿ ಚುನಾವಣಾ ಆಯೋಗ ನಡೆಸಿರುವ ಅತಿದೊಡ್ಡ ಕಸರತ್ತು ಎಂದು ಬಣ್ಣಿಸಿದೆ. ಲೋಕಸಭೆಯ ಎಲ್ಲಾ 543 ಸದಸ್ಯರನ್ನು ಆಯ್ಕೆ ಮಾಡಲು ಏಳು ಹಂತಗಳಲ್ಲಿ ಏಪ್ರಿಲ್ 19 ರಿಂದ ಜೂನ್ 1 ರವರೆಗೆ ಭಾರತದಲ್ಲಿ ಸಾರ್ವತ್ರಿಕ ಚುನಾವಣೆಗಳನ್ನು ನಡೆಸಲಾಯಿತು.

ಭಾರತೀಯ ಜನತಾ ಪಕ್ಷ (ಬಿಜೆಪಿ) ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತಕ ಒಕ್ಕೂಟ (ಎನ್‌ಡಿಎ) ಚುನಾವಣೆಯಲ್ಲಿ ಜಯಗಳಿಸಿತು ಮತ್ತು ನರೇಂದ್ರ ಮೋದಿ ಅವರು ಜೂನ್ 9 ರಂದು ದಾಖಲೆಯ ಮೂರನೇ ಅವಧಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಭಾರತದಲ್ಲಿ ನಡೆದ ಚುನಾವಣೆಯನ್ನು ನಾವು ಸಂಭ್ರಮಿಸುತ್ತೇವೆ; ಇದು ಇತಿಹಾಸದಲ್ಲಿ ಯಾವುದೇ ದೇಶದಲ್ಲಿ ಚುನಾವಣಾ ಫ್ರಾಂಚೈಸಿ ನಡೆಸುವ ಅತಿದೊಡ್ಡ ಕಸರತ್ತು ಎಂದು ವಿದೇಶಾಂಗ ಇಲಾಖೆ ವಕ್ತಾರ ವ್ಯಾಥ್ಯೂ ಮಿಲ್ಲರ್ ತಮ ದೈನಂದಿನ ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಇತ್ತೀಚಿನ ಚುನಾವಣಾ ಫಲಿತಾಂಶಗಳು, ಭಾರತೀಯ ಸಂಸತ್ತಿನಲ್ಲಿ ಮುಸ್ಲಿಮರ ಪ್ರಾತಿನಿಧ್ಯದ ಪ್ರಶ್ನೆಗೆ ಅವರು ಅದನ್ನು ಭಾರತದ ಜನರು ನಿರ್ಧರಿಸಬೇಕು ಎಂದು ಪ್ರತಿಪಾದಿಸಿದರು. ಈ ವರ್ಷ ಲೋಕಸಭೆ ಚುನಾವಣೆಯಲ್ಲಿ ದೇಶಾದ್ಯಂತ 24 ಮುಸ್ಲಿಂ ಅಭ್ಯರ್ಥಿಗಳು ಗೆದ್ದಿದ್ದಾರೆ, ಆದರೆ ಯಾರೂ ಭಾರತೀಯ ಜನತಾ ಪಕ್ಷದಿಂದ (ಬಿಜೆಪಿ) ಗೆದ್ದಿಲ್ಲ.

# ಅಮಿತ್ ಶಾ ಧಮ್ಕಿ; ವಿಡಿಯೋ ಕುರಿತು ಸೌಂದರರಾಜನ್ ಸ್ಪಷ್ಟನೆ



**ಚೆನ್ನೈ:** ಕೇಂದ್ರ ಗಹ ಸಚಿವರೊಂದಿಗಿನ ಸಂವಾದದ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ನಂತರ ಪಕ್ಷದ ಹಿರಿಯ ನಾಯಕ ಅಮಿತ್ ಶಾ ಅವರು ರಾಜಕೀಯ ಮತ್ತು ಕ್ಷೇತ್ರ ಕಾರ್ಯಗಳನ್ನು ತೀವ್ರವಾಗಿ ನಿರ್ವಹಿಸುವಂತೆ ಕೇಳಿಕೊಂಡರು ಎಂದು ಬಿಜೆಪಿ ನಾಯಕಿ ತಮಿಳಿಸೈ ಸೌಂದರರಾಜನ್ ಹೇಳಿದ್ದಾರೆ.

ಟಿಡಿಪಿ ನಾಯಕ ಚಂದ್ರಬಾಬು ನಾಯ್ಡು ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸಮಾರಂಭದಲ್ಲಿ ಶಾ ಅವರು ಸೌಂದರರಾಜನ್ ಅವರೊಂದಿಗೆ ಬೆರಳಿನಿಂದ ಸನ್ನೆ ಮಾಡುತ್ತಾ ಮಾತನಾಡುತ್ತಿರುವ ವಿಡಿಯೋ ಭಾರಿ ವೈರಲ್ ಆಗಿತ್ತು. ಕೆಲವರು ಶಾ ಅವರ ಈ ಧೋರಣೆಗೆ ಆಕ್ರೋಶ ವ್ಯಕ್ತಪಡಿಸಿದ್ದರು ಹೀಗಾಗಿ ಅದಕ್ಕೆ ಸಮರ್ಥನೆ ನೀಡಿರುವ ಮಾಜಿ ರಾಜ್ಯಪಾಲೆ ಸೌಂದರರಾಜನ್ ಅವರು ಲೋಕಸಭೆ ಚುನಾವಣೆ ಫಲಿತಾಂಶಗಳ ಘೋಷಣೆಯ ನಂತರ ಮೊದಲ ಬಾರಿಗೆ ಶಾ ಅವರನ್ನು ಭೇಟಿಯಾದರು ಮತ್ತು ಇಬ್ಬರೂ ಚುನಾವಣೆಯ ನಂತರದ ಅನುಸರಣೆಯ ಬಗ್ಗೆ ಮಾತನಾಡುತ್ತಿದ್ದೇವು ಅಷ್ಟೆ ಎಂದು ಎಕ್ಸ್ ಮಾಡಿದ್ದಾರೆ. ಸೌಂದರರಾಜನ್ ಅವರು ದಕ್ಷಿಣ ಚೆನ್ನೈ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದರು. ಅವರು ಡಿಎಂಕೆಯ ತಮಿಳಚಿ ತಂಗಪಾಂಡಿಯನ್ ವಿರುದ್ಧ ಚುನಾವಣೆಯಲ್ಲಿ ಸೋತರು. ಬಿಜೆಪಿಯ ತಮಿಳುನಾಡು ಘಟಕದಲ್ಲಿ ಪಕ್ಷದೊಳಗಿನ ಕಲಹದ ವದಂತಿಗಳ ಹಿನ್ನೆಲೆಯಲ್ಲಿ ಅವರ ಈ ಹೇಳಿಕೆ ಮಹತ್ವ ಪಡೆದುಕೊಂಡಿದೆ.

**2024 ರ ಚುನಾವಣೆಯ ನಂತರ ಮೊದಲ ಬಾರಿಗೆ ಗಹ ಸಚಿವ ಅಮಿತ್ ಶಾ ಜಿ ಅವರನ್ನು ಭೇಟಿಯಾದಾಗ ಅವರು ಪೋಸ್ಟ್ ಪೋಲ್ ಫಾಲೋ ಅಪ್, ಎದುರಿಸುತ್ತಿರುವ ಸವಾಲುಗಳ ಬಗ್ಗೆ ಕೇಳಲು ನನ್ನೊಂದಿಗೆ ಮಾತನಾಡಿದರು ಎಂದಿದ್ದಾರೆ. ಸಮಯದ ಕೊರತೆಯಿಂದಾಗಿ ಹೆಚ್ಚಿನ ಕಾಳಜಿಯಿಂದ, ಅವರು ರಾಜಕೀಯ ಮತ್ತು ಕ್ಷೇತ್ರದ ಕೆಲಸವನ್ನು ತೀವ್ರವಾಗಿ ಕೈಗೊಳ್ಳಲು ಸಲಹೆ ನೀಡಿದರು, ಇದು ಭರವಸೆ ನೀಡುತ್ತದೆ. ಇದು ಎಲ್ಲಾ ಅನಗತ್ಯ ಊಹಾಪೋಹಗಳಿಗೆ ಸ್ಪಷ್ಟೀಕರಣವಾಗಿದೆ ಎಂದು ಅವರು ಹೇಳಿದರು.**

# ಜಮೀನು ಒತ್ತುವರಿ ಆರೋಪದಲ್ಲಿ ಮಾಜಿ ಕ್ರಿಕೆಟಿಗ ಯೂಸಫ್ ಪಠಾಣ್‌ಗೆ ನೊಟೀಸ್



**ವಡೋದರಾ:** ನಾಗರಿಕರ ಜಮೀನನ್ನು ಒತ್ತುವರಿ ಮಾಡಿದ ಆರೋಪದ ಮೇಲೆ ಗುಜರಾತ್‌ನ ಬಿಜೆಪಿ ಆಡಳಿತದ ವಡೋದರಾ ಮುನ್ಸಿಪಲ್ ಕಾರ್ಪೊರೇಷನ್ (ವಿಎಂಸಿ) ಭಾರತದ ಮಾಜಿ ಕ್ರಿಕೆಟಿಗ ಮತ್ತು ಹೊಸದಾಗಿ ಚುನಾಯಿತ ತಣಮೂಲ ಕಾಂಗ್ರೆಸ್ (ಟಿ ಎಂಸಿ) ಲೋಕಸಭಾ ಸಂಸದ ಯೂಸುಫ್ ಪಠಾಣ್ ಅವರಿಗೆ ನೋಟಿಸ್ ಕಳುಹಿಸಿದೆ. ಜೂನ್ 6 ರಂದು ಪಠಾಣ್ ಅವರಿಗೆ ನೋಟಿಸ್ ನೀಡಲಾಗಿದ್ದು, ಬಿಜೆಪಿಯ ಮಾಜಿ ಕಾರ್ಪೊರೇಟರ್ ವಿಜಯ್ ಪವಾರ್ ಅವರು ಈ ವಿಷಯವನ್ನು ಹೈಲೈಟ್ ಮಾಡಿದ ನಂತರ ವಿಎಂಸಿಯ ಸ್ಥಾಯಿ ಸಮಿತಿ ಅಧ್ಯಕ್ಷ ಶೀತಲ್ ಮಿಸ್ತ್ರಿ ಅವರು ಮಾಧ್ಯಮಗಳಿಗೆ ಈ ಮಾಹಿತಿ ನೀಡಿದರು. ಜೂನ್ 4 ರಂದು ಫಲಿತಾಂಶ ಪ್ರಕಟವಾದ ಲೋಕಸಭೆ ಚುನಾವಣೆಯಲ್ಲಿ ಮಾಜಿ ಆಲ್‌ರೌಂಡರ್ ಪಠಾಣ್ ಬಹರಂಪುರ ಕ್ಷೇತ್ರದಿಂದ ಗೆದ್ದಿದ್ದಾರೆ.ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯ್ ಪವಾರ್, 2012ರಲ್ಲಿ ಪಠಾಣ್‌ಗೆ ನಿವೇಶನ ಮಾರಾಟ ಮಾಡುವ ವಿಎಂಸಿ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರ ತಿರಸ್ಕರಿಸಿದ್ದರೂ, ಹೊಸದಾಗಿ ಆಯ್ಕೆಯಾದ ಸಂಸದರು ಕಾಂಪೌಂಡ್ ಗೋಡೆ ನಿರ್ಮಿಸಿ ನಿವೇಶನವನ್ನು ಒತ್ತುವರಿ ಮಾಡಿದ್ದಾರೆ ಎಂದು ಆರೋಪಿಸಿದ್ದರು.

ಯೂಸುಫ್ ಪಠಾಣ್ ಅವರ ಮೇಲೆ ನನಗೆ ಯಾವುದೇ ದ್ವೇಷವಿಲ್ಲ. ಟಿಪಿ 22 ರ ಅಡಿಯಲ್ಲಿ ತನದಲ್ಜಾ ಪ್ರದೇಶದಲ್ಲಿನ ಪ್ಲಾಟ್ ವಿಎಂಸಿ ಒಡೆತನದ ವಸತಿ ಪ್ಲಾಟ್ ಆಗಿದೆ. 2012 ರಲ್ಲಿ ಪಠಾಣ್ ಅವರು ವಿಎಂಸಿಯಿಂದ ಈ ನಿವೇಶನವನ್ನು ಕೇಳಿದ್ದರು ಏಕೆಂದರೆ ಆ ಸಮಯದಲ್ಲಿ ನಿರ್ಮಾಣ ಹಂತದಲ್ಲಿದ್ದ ಅವರ ಮನೆ, ಆ ಪ್ಲಾಟ್‌ನ ಪಕ್ಕದಲ್ಲಿ ಅವರು ಪ್ರತಿ ಚದರ ಮೀಟರ್‌ಗೆ ಸುಮಾರು 57,000 ರೂ. ಗಳಾಗಿತ್ತು. ಆಗ ವಿಎಂಸಿ ಪ್ರಸ್ತಾವನೆಗೆ ಒಪ್ಪಿಗೆ ನೀಡಿದ್ದು, ಸಾಮಾನ್ಯ ಮಂಡಳಿ ಸಭೆಯಲ್ಲಿ ಅಂಗೀಕಾರ ಪಡೆಯಲಾಗಿದೆ. ಆದರೆ, ಅಂತಹ ವಿಷಯಗಳಲ್ಲಿ ಅಂತಿಮ ಅಧಿಕಾರವಾಗಿರುವ ರಾಜ್ಯ ಸರ್ಕಾರ ಅನುಮೋದನೆ ನೀಡಲಿಲ್ಲ ಎಂದು ಪವಾರ್ ಹೇಳಿದರು. ಇತ್ತೀಚೆಗೆ, ಅವರು ಕಾಂಪೌಂಡ್ ಗೋಡೆಯನ್ನು ನಿರ್ಮಿಸುವ ಬಗ್ಗೆ ನಮಗೆ ಕೆಲವು ಪ್ರಾತಿನಿಧ್ಯಗಳು ಬಂದವು. ಹೀಗಾಗಿ ಜೂನ್ 6ರಂದು ಪಠಾಣ್ ಅವರಿಗೆ ನೋಟಿಸ್ ನೀಡಿ ಎಲ್ಲಾ ಅತಿಕ್ರಮಣಗಳನ್ನು ತೆರವುಗೊಳಿಸುವಂತೆ ಹೇಳಿದ್ದೆವು.

ನಾವು ಒಂದೆರಡು ವಾರಗಳ ಕಾಲ ಕಾಯುತ್ತೇವೆ, ನಂತರ ನಾವು ಮುಂದಿನ ಕ್ರಮವನ್ನು ನಿರ್ಧರಿಸುತ್ತೇವೆ. ಈ ಭೂಮಿ ವಿಎಂಸಿಗೆ ಸೇರಿದ್ದು, ಅದನ್ನು ವಾಪಸ್ ಪಡೆಯುತ್ತೇವೆ ಎಂದು ಮಿಸ್ತ್ರಿ ಪ್ರತಿಪಾದಿಸಿದರು.

**ಪ್ರಸ್ತಾವನೆ ತಿರಸ್ಕೃತಗೊಂಡಿದ್ದರೂ ವಿಎಂಸಿಯವರು ನಿವೇಶನದ ಸುತ್ತ ಬೇಲಿ ಹಾಕಿಲ್ಲ.ಆಗ ಪಠಾಣ್ ಅವರು ನಿವೇಶನವನ್ನು ಒತ್ತುವರಿ ಮಾಡಿಕೊಂಡು ಸುತ್ತಲೂ ಕಾಂಪೌಂಡ್ ಗೋಡೆ ನಿರ್ಮಿಸಿರುವುದು ಗೊತ್ತಾಯಿತು.ಹೀಗಾಗಿ ನಗರಸಭೆಗೆ ತನಿಖೆ ನಡೆಸುವಂತೆ ಕೋರಿದ್ದೇನೆ,ಪಠಾಣ್ ಅವರಿಗೆ 978 ಚದರ ಮೀಟರ್ ವಿಸ್ತೀರ್ಣದ ನಿವೇಶನವನ್ನು ಮಾರಾಟ ಮಾಡಲು ರಾಜ್ಯ ಸರ್ಕಾರ ಅನುಮೋದನೆ ನೀಡದಿರಲು ಕಾರಣವಾದ ಘಟನೆಗಳ ಅನುಕ್ರಮವನ್ನು ಮಿಸ್ತ್ರಿ ದೃಢಪಡಿಸಿದರು, ಆಪಾದಿತ ಅತಿಕ್ರಮಣಕ್ಕಾಗಿ ಅವರಿಗೆ ನೋಟಿಸ್ ನೀಡಲಾಗಿದೆ -ಪವಾರ್**

# ಶಾಸಕ ಸ್ಥಾನದಿಂದ ರಾಜ್ ಕುಮಾರ್ ಆನಂದ್ ಅನರ್ಹಗೊಳಿಸಿ

**ನವದೆಹಲಿ:** ದೆಹಲಿ ಶಾಸಕ ಸ್ಥಾನದಿಂದ ರಾಜ್‌ಕುಮಾರ್ ಆನಂದ್ ಅವರನ್ನು ಅನರ್ಹಗೊಳಿಸಿ ವಿಧಾನಸಭೆಯ ಅಧ್ಯಕ್ಷರಾದ ರಾಮ್ ನಿವಾಸ್ ಗೋಯಲ್ ಆದೇಶಿಸಿದ್ದಾರೆ.

ಎಎಪಿ ಸರ್ಕಾರದಲ್ಲಿ ಸಾಮಾಜಿಕ ಕಲ್ಯಾಣ ಸಚಿವರಾಗಿದ್ದ ರಾಜ್, ಬಹುಜನ ಸಮಾಜ ಪಕ್ಷಕ್ಕೆ (ಬಿಎಸ್‌ಪಿ) ಸೇರಲು ಸಚಿವ ಸ್ಥಾನ ಮತ್ತು ಎಎಪಿ ಪಕ್ಷಕ್ಕೆ ರಾಜೀನಾಮೆ ನೀಡಿದ್ದರು. 'ಈ ಸಂಬಂಧ ನೀಡಲಾಗಿದ್ದ ನೋಟಿಸ್‌ಗೆ ಜೂನ್ 10ರ ಒಳಗೆ ಉತ್ತರಿಸುವಂತೆ ಸೂಚಿಸಲಾಗಿತ್ತು.

ಆದರೆ, ಅವರು ಯಾವುದೇ ಉತ್ತರ ನೀಡಿರಲಿಲ್ಲ. ಜೂನ್ 11ರಂದು ಖುದ್ದು ಹಾಜರಾತಿಗೂ ಸೂಚಿಸಲಾಗಿತ್ತು. ಅಂದೂ ಹಾಜರಾಗದ ಕಾರಣ ಜೂನ್ 14ಕ್ಕೆ ಹಾಜರಾಗುವಂತೆ ಸೂಚಿಸಿ ಮತ್ತೊಂದು ಅವಕಾಶ ನೀಡಲಾಗಿತ್ತು.

ಶುಕ್ರವಾರ ಸಹ ರಾಜ್ ಹಾಜರಾಗದ ಹಿನ್ನೆಲೆಯಲ್ಲಿ ಶಾಸಕ ಸ್ಥಾನದಿಂದ ಅನರ್ಹಗೊಳಿಸಲಾಗಿದೆ'ಎಂದು ಗೋಯಲ್ ತಿಳಿಸಿದ್ದಾರೆ. 2020ರ ವಿಧಾನಸಭೆ ಚುನಾವಣೆಯಲ್ಲಿ ದೆಹಲಿಯ ಪಟೇಲ್ ನಗರ ಮೀಸಲು ಕ್ಷೇತ್ರದಿಂದ ಜಯಗಳಿಸಿದ್ದ ಅವರು, ಭ್ರಷ್ಟಾಚಾರ ಮತ್ತು ದಲಿತ ನಾಯಕರ ನಿರ್ಲಕ್ಷ್ಯದ ಆರೋಪ ಮಾಡಿ ಪಕ್ಷದಿಂದ ಹೊರ ನಡೆದಿದ್ದರು.

# ಆಂಧ್ರಪ್ರದೇಶ ಡಿಸಿಎಂ ಆಗಿ ಪವನ್ ಕಲ್ಯಾಣ್ ನೇಮಕ

## ನಾಯ್ಡು ಪುತ್ರ, ನಾರಾ ಲೋಕೇಶ್‌ಗೆ ಐಟಿ ಖಾತೆ, ಸಂಪುಟದ ಅತಿ ಕಿರಿಯ ಸಚಿವೆ ಅನಿತಾಗೆ ಗೃಹ ಖಾತೆ



**ಪ್ರಾವಿತ್ಯತೆಗೆ ಧಕ್ಕೆ ತರುವ ಕೆಲಸ**

**ಅಮರಾವತಿ:** ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಶುಕ್ರವಾರ ಸಂಪುಟ ಸಚಿವರಿಗೆ ಖಾತೆ ಹಂಚಿಕೆ ಮಾಡಿದ್ದು, ನಟ, ಜನ ಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಅವರನ್ನು ಉಪಮುಖ್ಯ ಮಂತ್ರಿಯಾಗಿ ನೇಮಿಸಿದ್ದಾರೆ. ಡಿಸಿಎಂ ಪವನ್ ಕಲ್ಯಾಣ್‌ಗೆ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಗ್ರಾಮೀಣ ನೀರು ಸರಬರಾಜು, ಅರಣ್ಯ ಹಾಗೂ ಪರಿಸರ ಖಾತೆ ನೀಡಲಾಗಿದೆ.

ಚಂದ್ರಬಾಬು ನಾಯ್ಡು ಪುತ್ರ ನಾರಾ ಲೋಕೇಶ್ ಅವರಿಗೆ ಮಾನವ ಸಂಪನ್ಮೂಲ, ಐಟಿ, ಮಾಹಿತಿ ತಂತ್ರಜ್ಞಾನ ಸಚಿವಾಲಯದ ಹೊಣೆ ನೀಡಿದ್ದಾರೆ. ಕಿಂಜರಾಪು ಅಚ್ಚನ್ನಾಯ್ಡು ಅವರಿಗೆ ಕೃಷಿ, ಸಹಕಾರ, ಮಾರುಕಟ್ಟೆ, ಪಶು ಸಂಗೋಪನೆ, ಹೈನುಗಾರಿಕೆ ಸಚಿವಾಲಯ, ಅನಿತಾ ವಂಗಲಪುಡಿ ಅವರಿಗೆ ಗೃಹ, ವಿಪತ್ತು ನಿರ್ವಹಣೆ ಸಚಿವಾಲಯದ ಹೊಣೆ ನೀಡಲಾಗಿದೆ.

ಸತ್ಯಕುಮಾರ್ ಯಾದವ್ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವೈದ್ಯಕೀಯ ಶಿಕ್ಷಣ, ಎನ್ ಮೊಹಮ್ಮದ್ ಫಾರೂಕ್ ಅವರಿಗೆ ಸಾಮಾಜಿಕ ನ್ಯಾಯ, ಅಲ್ಪಸಂಖ್ಯಾತ ವ್ಯವಹಾರ, ಡಾ. ನಿಮ್ಮಲ ರಾಮನಾಯ್ಡು ಅವರಿಗೆ ಜಲಸಂಪನ್ಮೂಲ, ಪಯ್ಯಾವುಳ ಕೇಶವ ಅವರಿಗೆ ಹಣಕಾಸು, ಯೋಜನೆ, ವಾಣಿಜ್ಯ ತೆರಿಗೆ ಮತ್ತು ಶಾಸಕಾಂಗ, ಅನಗನಿ ಸತ್ಯಪ್ರಸಾದ್ ಅವರಿಗೆ ಕಂದಾಯ, ನೋಂದಣಿ, ಡಾ. ದೋಲ ಶ್ರೀ ಬಾಲ ವೀರಾಂಜನೇಯ ಸ್ವಾಮಿ ಅವರಿಗೆ ಸಾಮಾಜ ಕಲ್ಯಾಣ, ಕೊಲುಸು ಪಾ ರ್ಥ ಸಾರಥಿ ಅವರಿಗೆ ವಸತಿ, ಮಾಹಿತಿ ಹಾಗೂ ಸಾರ್ವಜನಿಕ ಸಂಪರ್ಕ, ಗುಮ್ಮಡಿ ಸಂಧ್ಯಾ ರಾಣಿ ಅವರಿಗೆ ಮಹಿಳಾ, ಮಕ್ಕಳ ಅಭಿವೃದ್ಧಿ, ಆದಿವಾಸಿ ಕಲ್ಯಾಣ, ಎಸ್. ಸವಿತಾ ಅವರಿಗೆ ಹಿಂದುಳಿದ ವರ್ಗಗಳ ಕಲ್ಯಾಣ, ಜವಳಿ, ಕೈಮಗ್ಗ, ವಾಸುಮ ಶೆಟ್ಟಿ ಸುಭಾಷ್ ಅವರಿಗೆ ಕಾರ್ಮಿಕ ಕಲ್ಯಾಣ, ವೈದ್ಯಕೀಯ ವಿಮಾ ಸೇವೆ ಖಾತೆ ನೀಡಲಾಗಿದೆ.

ಆಂಧ್ರ ಪ್ರದೇಶ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮರು ದಿನ ಗುರುವಾರ ಎನ್. ಚಂದ್ರಬಾಬುನಾಯ್ಡು ಅವರು ತಿರುಪತಿಗೆ ಭೇಟಿ ನೀಡಿ ತಿಮ್ಮಪ್ಪನ ದರ್ಶನ ಪಡೆದರು. ಕುಟುಂಬ ಸಮೇತ ತಿರುಪತಿಗೆ ತೆರಳಿ ತಿಮ್ಮಪ್ಪನಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದ ನಾಯ್ಡು, ನಂತರ ಮಾಧ್ಯಮಗಳ ಜತೆ ಮಾತನಾಡಿದರು. 'ತಿರುಪತಿಯ ವೆಂಕಟೇಶ್ವರ ನಮ್ಮ ಕುಲದೈವ. ಭ್ರಷ್ಟಾಚಾರ ಮುಕ್ತ ಶುದ್ಧ ಆಡಳಿತದ ಹೆಜ್ಜೆ ಇಲ್ಲಿಂದಲೇ ಆರಂಭವಾಗಲಿದೆ' ಎಂದು ನಾಯ್ಡು ಹೇಳಿದರು.

ಹಿಂದಿನ ಸಿಎಂ ಜಗನ್ ಮೋಹನ್ ರೆಡ್ಡಿ ಆಡಳಿತಾವಧಿಯಲ್ಲಿ ತಿರುಮಲ ತಿರುಪತಿ ದೇವಸ್ಥಾನಂ (ಟಿಟಿಡಿ)ನಲ್ಲಿ ಅಕ್ರಮಗಳು ನಡೆದಿರುವ ಆರೋಪಗಳು ಕೇಳಿ ಬಂದಿವೆ' ಎಂದ ನಾಯ್ಡು, 'ತಿರುಮಲದಲ್ಲಿ ಹಿಂದೂ ಧರ್ಮದ ರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನೆಗೆ ನಮ್ಮ ಸರಕಾರ ಕಟಿಬದ್ಧವಾಗಿದೆ' ಎಂದರು.

**ಆಂಧ್ರ ಪ್ರದೇಶದಲ್ಲಿ ಟಿಡಿಪಿ - ಜನ ಸೇನಾ - ಬಿಜೆಪಿ ಸಾರಥ್ಯದ ಎನ್‌ಡಿಎ ಸರ್ಕಾರದ ದರ್ಬಾರ್ ಶುರುವಾಗಿದೆ. ಎನ್‌ಡಿಎ ಸರ್ಕಾರವಾದರೂ ಟಿಡಿಪಿ ಮುಖ್ಯಸ್ಥ ಹಾಗೂ ಸಿಎಂ ಚಂದ್ರಬಾಬು ನಾಯ್ಡು ಅವರೇ ಡ್ರೈವರ್ ಸೀಟ್‌ನಲ್ಲಿ ಕುಳಿತಿದ್ದಾರೆ. ಜನ ಸೇನಾ ಪಕ್ಷದ ಮುಖ್ಯಸ್ಥ ಪವನ್ ಕಲ್ಯಾಣ್ ಅವರನ್ನು ಡಿಸಿಎಂ ಮಾಡಿರುವ ನಾಯ್ಡು, ತಮ್ಮ ಪುತ್ರ ನಾರಾ ಲೋಕೇಶ್‌ಗೆ ಐಟಿ ಸಚಿವ ಪಟ್ಟ ನೀಡಿದ್ದಾರೆ.**

**ಗಾಂಜಾ, ಮದ್ಯ, ಮಾಂಸ ಅಂತೆಲ್ಲಾ ಹಿಂದಿನ ಸರಕಾರವು ಕ್ಷೇತ್ರದ ಪ್ರಾವಿತ್ಯತೆಗೆ ಧಕ್ಕೆ ತರುವ ಕೆಲಸ ಮಾಡಿತ್ತು ಎಂದು ದೂರಿದ ನಾಯ್ಡು ಅವರು 'ಲಡ್ಡು ಪ್ರಸಾದದ ಗುಣಮಟ್ಟ ಕಾಯ್ದುಕೊಳ್ಳುವುದರ ಜತೆಗೆ ದರ ಹೆಚ್ಚಿಸದಂತೆ ನಮ್ಮ ಸರಕಾರ ಕ್ರಮ ಕೈಗೊಳ್ಳಲಿದೆ. ದರ್ಶನ ಟಿಕೆಟ್ ಕಾಳ ಸಂತೆಯಲ್ಲಿ ಮಾರಾಟವಾಗುವುದಕ್ಕೆ ಕಡಿವಾಣ ಹಾಕಲಿದೆ' ಎಂದು ಹೇಳಿದರು.**

# ಮಿನಿ ನ್ಯೂಸ್

## ನೀಟ್ ಪರೀಕ್ಷಾ ಅಕ್ರಮ : 2 ವಾರಗಳಲ್ಲಿ ಪ್ರತಿಕ್ರಿಯೆ ನೀಡುವಂತೆ ಸೂಚನೆ

**ನವದೆಹಲಿ:** ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ನೀಟ್ ಪರೀಕ್ಷೆಯಲ್ಲಿನ(ನೀಟ್‌ಯುಜಿ-2024) ಇತರ ಅಕ್ರಮಗಳ ಆರೋಪಗಳ ಕುರಿತು ಸಿಬಿಐ ತನಿಖೆಗೆ ಕೋರಿ ಸಲ್ಲಿಸಿದ ಮನವಿಯ ಕುರಿತು ಸುಪ್ರೀಂಕೋರ್ಟ್ ಇದು ಕೇಂದ್ರ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆಗೆ ನೋಟಿಸ್ ಜಾರಿ ಮಾಡಿ ಎರಡು ವಾರಗಳಲ್ಲಿ ಪ್ರತಿಕ್ರಿಯೆ ನೀಡುವಂತೆ ಸೂಚಿಸಿದೆ.

ತಪ್ಪು ನಿರ್ವಹಣೆಯಿಂದಾಗಿ ಪರೀಕ್ಷೆಯನ್ನು ಪೂರ್ಣಗೊಳಿಸಲು ಸಮಯ ನೀಡದ 1,563 ವಿದ್ಯಾರ್ಥಿಗಳಿಗೆ ಗ್ರೇಸ್ ಅಂಕಗಳನ್ನು ನೀಡುವ ತನ್ನ ಹಿಂದಿನ ಯೋಜನೆಯನ್ನು ಹಿಂತೆಗೆದುಕೊಳ್ಳುವ ನಿರ್ಧಾರವನ್ನು ಈ ಬೆಳವಣಿಗೆ ಅನುಸರಿಸುತ್ತದೆ. ಈ ಅಭ್ಯರ್ಥಿಗಳಿಗೆ ಮರು ಪರೀಕ್ಷೆ ನಡೆಸಲಾಗುವುದು ಎಂದು ಎನ್‌ಟಿಎ ನ್ಯಾಯಾಲಯಕ್ಕೆ ತಿಳಿಸಿದೆ.

ವಿಚಾರಣೆಯ ಸಂದರ್ಭದಲ್ಲಿ ವಕೀಲರಾದ ಕನು ಅಗರ್ವಾಲ್ ಅವರು ನ್ಯಾಯಮೂರ್ತಿಗಳಾದ ವಿಕ್ರಮ್‌ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠಕ್ಕೆ, ಎನ್‌ಟಿಎ ಜೂನ್ 4ರಂದು ಗ್ರೇಸ್ ಮಾರ್ಕ್ ನಿರ್ಧಾರವನ್ನು ಹಿಂಪಡೆದಿದ್ದು, ಜೂನ್ 23 ರಂದು ಮರು ಪರೀಕ್ಷೆಯನ್ನು ನಡೆಸಲಿದೆ. ಮರು ಪರೀಕ್ಷೆಯ ಫಲಿತಾಂಶವನ್ನು ಜೂ.30ರಂದು ಪ್ರಕಟಿಸಲಾಗುವುದು, ಜುಲೈ 6ರಂದು ಪ್ರಾರಂಭವಾಗುವ ಕೌನ್ಸಿಲಿಂಗ್ ಪ್ರಕ್ರಿಯೆಗೆ ಅಡ್ಡಿಯಾಗದಂತೆ ನೋಡಿಕೊಳ್ಳಲಾಗುವುದು ಎಂದು ಹೇಳಿದ್ದಾರೆ.

## ದೇಶ ತೊರೆಯಲು ಹೊರಟವರನ್ನು ಬಂಧಿಸಲಾಗಿದೆ: ಉಕ್ರೇನ್

**ಕೀವ್:** ದೇಶದಿಂದ ಪಲಾಯನ ಮಾಡಲು ಯತ್ನಿಸಿದ ಹಲವರನ್ನು ಬಂಧಿಸಿರುವುದಾಗಿ ಉಕ್ರೇನ್ ಗಡಿ ಭದ್ರತಾ ಪಡೆ ಶುಕ್ರವಾರ ತಿಳಿಸಿದೆ. ರಷ್ಯಾ ವಿರುದ್ಧ ಹೋರಾಟ ನಡೆಸಲು ದೇಶದ ನಾಗರಿಕರನ್ನು ಕಡ್ಡಾಯವಾಗಿ ಸೇನೆಗೆ ನೋಂದಣಿ ಮಾಡಿಕೊಳ್ಳುವ ಕಾನೂನನ್ನು ಉಕ್ರೇನ್ ಕಳೆದ ತಿಂಗಳು ಜಾರಿಗೊಳಿಸಲಾಗಿದೆ. ರಷ್ಯಾ ಸೇನೆ ಆಕ್ರಮಣ ಆರಂಭಿಸಿದಾಗಿನಿಂದ ಉಕ್ರೇನ್‌ನ 18 ರಿಂದ 60 ವರ್ಷದ ಪುರುಷರಿಗೆ ದೇಶದಿಂದ ಹೊರ ಹೋಗಲು ನಿರ್ಬಂಧ ವಿಧಿಸಲಾಗಿದೆ. ಒಡೆಶಾ ಪ್ರಾಂತ್ಯದಲ್ಲಿರುವ ಗಡಿ ಭದ್ರತಾ ಸಿಬ್ಬಂದಿ, ಉಕ್ರೇನ್‌ನ 12 ಪ್ರಾಂತ್ಯಗಳಿಗೆ ಸೇರಿದ 41 ನಾಗರಿಕರನ್ನು ಮಾಲ್ಡೊವಾ, ರೊಮಾನಿಯಾ ಗಡಿಗಳಲ್ಲಿ ಪತ್ತೆ ಮಾಡಿದ್ದಾರೆ ಎಂದು ಹೇಳಿಕೆ ಬಿಡುಗಡೆ ಮಾಡಲಾಗಿದೆ. ನೆರೆಯ ಹಂಗೇರಿಗೆ ಪಲಾಯನ ಮಾಡಲು ಯತ್ನಿಸಿದ್ದ ಉಕ್ರೇನ್‌ನ 38 ಮಂದಿಯನ್ನು ಭದ್ರತಾ ಸಿಬ್ಬಂದಿ ಫೆಬ್ರುವರಿಯಲ್ಲಿ ತಡೆದಿದ್ದರು. ರಷ್ಯಾ ಸೇನೆ, 2022ರ ಫೆಬ್ರುವರಿಯಿಂದ ಉಕ್ರೇನ್ ಮೇಲೆ ಆಕ್ರಮಣ ನಡೆಸುತ್ತಿದೆ.

## ಕೇರಳದತ್ತ ಹೊರಟ 45 ಭಾರತೀಯರ ಮೃತದೇಹ ಹೊತ್ತ ವಿಮಾನ

**ನವದೆಹಲಿ:** ಕುವೈತ್‌ನಲ್ಲಿ ನಡೆದ ಅಗ್ನಿ ದುರಂತದಲ್ಲಿ ಮೃತಪಟ್ಟ 45 ಭಾರತೀಯರ ಮೃತದೇಹಗಳನ್ನು ಹೊತ್ತ ವಾಯುಪಡೆಯ ವಿಶೇಷ ವಿಮಾನ ಕೇರಳದತ್ತ ಹೊರಟಿದೆ. ಬೆಳಿಗ್ಗೆ 11 ಗಂಟೆಗೆ ಕೊಚ್ಚಿ ವಿಮಾನ ನಿಲ್ದಾಣಕ್ಕೆ ವಿಮಾನ ಬಂದಿಳಿಯಲಿದ್ದು ಬಳಿಕ ವಿಮಾನ ದೆಹಲಿಗೆ ತೆರಳಲಿದೆ. ಮೃತದೇಹಗಳನ್ನು ಸ್ವದೇಶಕ್ಕೆ ತರುವ ನಿಟ್ಟಿನಲ್ಲಿ ಕುವೈತ್‌ಗೆ ತೆರಳಿದ್ದ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿ ವ ಕೀರ್ತಿವರ್ಧನ್ ಸಿಂಗ್ ಅವರು ಅದೇ ವಿಮಾನದಲ್ಲಿದ್ದಾರೆ ಎಂದು ವರದಿ ತಿಳಿಸಿದೆ. ಈ ಕುರಿತು ಕುವೈತ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದೆ. ದುರಂತದಲ್ಲಿ 23 ಮಂದಿ ಕೇರಳದವರು ಹಾಗೂ ತಮಿಳುನಾಡಿನ 7, ಉತ್ತರಪ್ರದೇಶದ ಮೂವರು, ಒಡಿಶಾದ ಇಬ್ಬರು ಮತ್ತು ಬಿಹಾರ, ಪಂಜಾಬ್, ಕರ್ನಾಟಕ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಜಾರ್ಖಂಡ್, ಹರಿಯಾಣದ ಒಬ್ಬರು ಮೃತಪಟ್ಟಿದ್ದರು. ಘಟನೆಯಲ್ಲಿ ಗಾಯಗೊಂಡ 33 ಜನರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಸುರಕ್ಷಿತವಾಗಿದ್ದಾರೆ ಎಂದು ವರದಿಯಾಗಿದೆ.

## ನಾಗುರ ಕಾರ್ಖಾನೆ ಸ್ಫೋಟ; 6 ಸಾವು ನಿರ್ದೇಶಕ, ವ್ಯವಸ್ಥಾಪಕ ಸೆರೆ

**ನಾಗುರ:** ಇಲ್ಲಿನ ಕಾರ್ಖಾನೆಯೊಂದರಲ್ಲಿ ಗುರುವಾರ ಸ್ಫೋಟ ಸಂಭವಿಸಿದ್ದು, ಆರು ಕಾರ್ಮಿಕರು ಮೃತಪಟ್ಟಿದ್ದಾರೆ. ಈ ಸಂಬಂಧ ಕಾರ್ಖಾನೆಯ ನಿರ್ದೇಶಕ, ವ್ಯವಸ್ಥಾಪಕರನ್ನು ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ. ಚಾಮುಂಡಿ ಎಕ್ಸ್‌ಪ್ಲೋಸಿವ್ಸ್ ಪ್ರೈವೇಟ್ ಲಿಮಿಟೆಡ್ ಕಾರ್ಖಾನೆ ನಿರ್ದೇಶಕ ಜಯ್ ಖೇಮ್ಕಾ ಹಾಗೂ ವ್ಯವಸ್ಥಾಪಕ ಸಾಗರ್ ದೇಶಮುಖ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನಾಗುರ ಸಮೀಪದ ಧಾಮ್ನಾ ಗ್ರಾಮದಲ್ಲಿರುವ ಸ್ಫೋಟಕ ತಯಾರಿಕಾ ಕಾರ್ಖಾನೆಯಲ್ಲಿ ಗುರುವಾರ ಮಧ್ಯಾಹ್ನ 1ರ ಸುಮಾರಿಗೆ ಸ್ಫೋಟ ಸಂಭವಿಸಿತ್ತು. ಗಾಯಗೊಂಡಿದ್ದ 9 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇವರಲ್ಲಿ ಐವರು ಮಹಿಳೆಯರು ಮತ್ತು ಒಬ್ಬ ಪುರುಷ ಚಿಕಿತ್ಸೆ ವೇಳೆ ಮೃತಪಟ್ಟಿದ್ದಾರೆ ಎಂದು ಪೊಲೀಸರು ಈಗಾಗಲೇ ಮಾಹಿತಿ ನೀಡಿದ್ದಾರೆ. ಸ್ಫೋಟ ಸಂಭವಿಸಿದಾಗ, ಸಂತ್ರಸ್ತರು ಪ್ಯಾಕಿಂಗ್ ವಿಭಾಗದಲ್ಲಿದ್ದರು ಎನ್ನಲಾಗಿದೆ. ನಿರ್ದೇಶಕ, ವ್ಯವಸ್ಥಾಪಕರ ವಿರುದ್ಧ ಐಪಿಸಿಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಗುರುವಾರ ರಾತ್ರಿಯೇ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು ಎಂದು ಹಿಂಗಾ ಪೊಲೀಸ್ ಠಾಣೆ ಅಧಿಕಾರಿಗಳು ತಿಳಿಸಿದ್ದಾರೆ.

## ಕೇಜ್ರಿವಾಲ್ ಆಪ್ತ ಬಿಭವ್ ಜಾಮೀನು ಕುರಿತು ಪೊಲೀಸರ ನಿಲುವೇನು?

**ನವದೆಹಲಿ:** ಆಮ್ ಆದ್ಮಿ ಪಕ್ಷದ (ಎಎಪಿ) ರಾಜ್ಯಸಭೆ ಸದಸ್ಯ ಸ್ವಾತಿ ಮಾಲಿವಾಲ್ ಅವರ ಮೇಲಿನ ಹಲ್ಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಬಿಭವ್ ಕುಮಾರ್ ಅವರು ಜಾಮೀನು ಕೋರಿ ಸಲ್ಲಿಸಿರುವ ಅರ್ಜಿಯ ವಿಚಾರದಲ್ಲಿ ಪೊಲೀಸರ ನಿಲುವು ಏನು ಎಂದು ದೆಹಲಿ ಹೈಕೋರ್ಟ್ ಶುಕ್ರವಾರ ಪ್ರಶ್ನಿಸಿದೆ. ಬಿಭವ್ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅಮಿತ್ ಶರ್ಮಾ ನೇತೃತ್ವದ ರಜಾ ಕಾಲದ ನ್ಯಾಯಪೀಠ, ಪ್ರಕರಣದ ಸದ್ಯದ ಸ್ಥಿತಿ ಕುರಿತು ವರದಿ ನೀಡುವಂತೆ ಮತ್ತು ಜಾಮೀನು ನೀಡುವ ಕುರಿತು ನಿಲುವನ್ನು ಸ್ಪಷ್ಟಪಡಿಸುವಂತೆ ಪೊಲೀಸರಿಗೆ ನೋಟಿಸ್ ನೀಡಿದೆ.

ಸದ್ಯ ನ್ಯಾಯಾಂಗ ಬಂಧನದಲ್ಲಿರುವ ಬಿಭವ್, ಜಾಮೀನು ಕೋರಿ ತೀಸ್ ಹಜ್ಹಾರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ್ದ ನ್ಯಾಯಾಲಯ, ಬಂಧಿತರ ವಿರುದ್ಧದ ಆರೋಪ ಗಂಭೀರ ಮತ್ತು ಆತಂಕಕಾರಿ ಎನ್ನುವ ಮೂಲಕ ಜಾಮೀನು ನೀಡಲು ಜೂನ್ 7ರಂದು ನಿರಾಕರಿಸಿತ್ತು. ಅದಕ್ಕೂ ಮೊದಲು ಮೇ 27ರಂದು ಸೆಷನ್ಸ್ ನ್ಯಾಯಾಲಯವು ಬಿಭವ್ ಅವರ ಜಾಮೀನು ಅರ್ಜಿಯನ್ನು ವಜಾ ಮಾಡಿತ್ತು.

www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail. com
ಉದಯ UV ವಾಹಿನಿ






# ಭಾರತದ ಅಭ್ಯಾಸ ರದ್ದು!

## ಕೆನಡಾ ವಿರುದ್ಧದ ಪಂದ್ಯ ನಡೆಯುವುದು ಡೌಟ್

ಪ್ಲೋರಿಡಾದಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಬಿರುಗಾಳಿ ಸಹಿತ ಭಾರಿ ಮಳೆಯಾಗುತ್ತಿದೆ. ಇದರಿಂದಾಗಿ ಟೀಂ ಇಂಡಿಯಾದ ಅಭ್ಯಾಸವನ್ನು ರದ್ದುಗೊಳಿಸಲಾಗಿದೆ. ಅಲ್ಲದೆ ಇದೀಗ ಭಾರತ ಮತ್ತು ಕೆನಡಾ ನಡುವಿನ ಪಂದ್ಯದ ಮೇಲೂ ಮಳೆಯ ಛಾಯೆ ಆವರಿಸಿದೆ. ಟಿ20 ವಿಶ್ವಕಪ್‌ನಲ್ಲಿ ಸತತ ಮೂರು ಪಂದ್ಯಗಳನ್ನು ಗೆದ್ದು ಸೂಪರ್ 8 ಸುತ್ತಿಗೆ ಅರ್ಹತೆ ಪಡೆದುಕೊಂಡಿರುವ ಟೀಂ ಇಂಡಿಯಾ ತನ್ನ ಕೊನೆಯ ಲೀಗ್ ಪಂದ್ಯವನ್ನು ಕೆನಡಾ ವಿರುದ್ಧ ಪ್ಲೋರಿಡಾದಲ್ಲಿ ಆಡಬೇಕಾಗಿದೆ. ಇದಕ್ಕಾಗಿ ಇಡೀ ತಂಡ ಈಗಾಗಲೇ ಪ್ಲೋರಿಡಾ ತಲುಪಿದೆ ಟೀಂ ಇಂಡಿಯಾ ಈಗಾಗಲೇ ಸೂಪರ್-8ಗೆ ಅರ್ಹತೆ ಪಡೆದಿರುವ ಕಾರಣ ಈ ಸುತ್ತಿನಲ್ಲಿ 3 ಬಲಿಷ್ಠ ತಂಡಗಳನ್ನು ಎದುರಿಸಬೇಕಾಗಿದೆ. ಹೀಗಾಗಿ ತಂಡವನ್ನು ಇನ್ನಷ್ಟು ಬಲಪಡಿಸಲು ಅಭ್ಯಾಸ ಹಾಗೂ ಕೆನಡಾ ವಿರುದ್ಧದ ಪಂದ್ಯ ಅತ್ಯವಶ್ಯಕವಾಗಿದೆ. ಆದರೆ ಪ್ಲೋರಿಡಾದಲ್ಲಿನ ಕೆಟ್ಟ ಹವಾಮಾನದಿಂದಾಗಿ ಕೆನಡಾ ವಿರುದ್ಧದ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾ ಮಾಡಬೇಕಾಗಿದ್ದ ಅಭ್ಯಾಸವನ್ನು ರದ್ದುಗೊಳಿಸಲಾಗಿದೆ. ಹಾಗೆಯೇ ಪಂದ್ಯಕ್ಕೂ ಮಳೆಯ ಕಾರ್ಮೋಡ ಆವರಿಸಿದೆ.

**ಪ್ಲೋರಿಡಾದಲ್ಲಿ ಭಾರಿ ಮಳೆ:** ವಾಸ್ತವವಾಗಿ, ಪ್ಲೋರಿಡಾದಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಬಿರುಗಾಳಿ ಸಹಿತ ಭಾರಿ ಮಳೆಯಾಗುತ್ತಿದೆ. ಇದರಿಂದಾಗಿ ಟೀಂ ಇಂಡಿಯಾದ ಅಭ್ಯಾಸವನ್ನು ರದ್ದುಗೊಳಿಸಲಾಗಿದೆ. ಅಲ್ಲದೆ ಇದೀಗ ಭಾರತ ಮತ್ತು ಕೆನಡಾ ನಡುವಿನ ಪಂದ್ಯದ ಮೇಲೂ ಮಳೆಯ ಛಾಯೆ ಆವರಿಸಿದೆ.



**ಪ್ಲೋರಿಡಾ ಭಾರಿ ಮಳೆ**

### ಟೀಂ ಇಂಡಿಯಾ ಸಿದ್ಧತೆಗೆ ಹಿನ್ನಡೆ

**ಸೂಪರ್-8ಸುತ್ತಿನಲ್ಲಿ ಟೀಂ ಇಂಡಿಯಾ ಯಾವ ತಂಡಗಳನ್ನು ಎದುರಿಸಲಿದೆ ಎಂಬುದು ಈಗಾಗಲೇ ಬಹುತೇಕ ಖಚಿತಗೊಂಡಿದೆ. ಟೀಂ ಇಂಡಿಯಾ ಮುಂದಿನ ಸುತ್ತಿನಲ್ಲಿ ಅಫ್ಘಾನಿಸ್ತಾನ, ಆಸ್ಟ್ರೇಲಿಯಾ ಮತ್ತು ಬಾಂಗ್ಲಾದೇಶ ತಂಡವನ್ನು ಎದುರಿಸುವ ಸಾಧ್ಯತೆಗಳಿವೆ. ಇಂತಹ ಪರಿಸ್ಥಿತಿಯಲ್ಲಿ ಟೀಂ ಇಂಡಿಯಾಗೆ ಪ್ರತಿಯೊಂದು ಅಭ್ಯಾಸ ಮತ್ತು ಪ್ರತಿಯೊಂದು ಪಂದ್ಯವೂ ಬಹಳ ಮುಖ್ಯವಾಗುತ್ತದೆ. ಆದರೆ ಇದೀಗ ಟೀಂ ಇಂಡಿಯಾದ ಅಭ್ಯಾಸವೇ ರದ್ದಾಗಿದೆ, ಇಂತಹ ಪರಿಸ್ಥಿತಿಯಲ್ಲಿ ಕೆನಡಾ ಜೊತೆಗಿನ ಪಂದ್ಯವೂ ರದ್ದಾದರೆ ಸೂಪರ್ -8ಕ್ಕೂ ಮುನ್ನ ಟೀಂ ಇಂಡಿಯಾದ ಸಿದ್ಧತೆಗೆ ದೊಡ್ಡ ಪೆಟ್ಟು ಬೀಳಬಹುದು.**

ಭಾರತ ಮತ್ತು ಕೆನಡಾ ನಡುವಿನ ಈ ಪಂದ್ಯವು ಜೂನ್ 15 ರಂದು ಪ್ಲೋರಿಡಾದಲ್ಲಿ ನಡೆಯಲಿದೆ. ಆದರೆ ಪ್ಲೋರಿಡಾ ಹವಾಮಾನ ಇಲಾಖೆ ಮುಂದಿನ 2 ದಿನಗಳ ಕಾಲ ಮಳೆ ಮತ್ತು ಚಂಡಮಾರುತದ ಎಚ್ಚರಿಕೆ ನೀಡಿದೆ. ಹೀಗಾಗಿ ಭಾರತ ಕೊನೆಯ ಲೀಗ್ ಪಂದ್ಯ ನಡೆಯುವುದು ಅನುಮಾನವಾಗಿದೆ.

## ಪಾಕಿಸ್ತಾನಕ್ಕೆ ಹೋಗುತ್ತಾ ಟೀಂ ಇಂಡಿಯಾ?

2025 ರಲ್ಲಿ ನಡೆಯಲ್ಲಿರುವ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ ಆತಿಥ್ಯ ವಹಿಸುತ್ತಿದೆ. ಆದರೆ, ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಬಂಧವನ್ನು ಗಮನಿಸಿದರೆ, ಈ ಐಸಿಸಿ ಟೂರ್ನಿಯಲ್ಲಿ ಟೀಂ ಇಂಡಿಯಾ ಭಾಗವಹಿಸುವ ಬಗ್ಗೆ ಅನುಮಾನವಿದೆ. ಬಿಸಿಸಿಐ ಕೂಡ ಈ ಬಗ್ಗೆ ತನ್ನ ನಿಲುವನ್ನು ಇದುವರೆಗೆ ಸ್ಪಷ್ಟಪಡಿಸದಿದ್ದರೂ, ಟೀಂ ಇಂಡಿಯಾವನ್ನು ಪಾಕಿಸ್ತಾನಕ್ಕೆ ಕಳುಹಿಸುವುದು, ಬಿಡುವುದು, ಭಾರತ ಸರ್ಕಾರಕ್ಕೆ ಬಿಟ್ಟಿದ್ದು ಎಂಬ ಸಂದೇಶವನ್ನು ಈಗಾಗಲೇ ನೀಡಿದೆ.




ಮತ್ತೊಂದೆಡೆ, ಈ ಪಂದ್ಯಾವಳಿಗಾಗಿ ಭಾರತ ತಂಡವು ಪಾಕಿಸ್ತಾನಕ್ಕೆ ಪ್ರವಾಸ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಪಿಸಿಬಿ ಇನ್ನಿಲ್ಲದ ಪ್ರಯತ್ನವನ್ನು ಮಾಡುತ್ತಿದೆ. ಇದಕ್ಕೆ ಪೂರಕವಾಗಿ ಟಿ20 ವಿಶ್ವಕಪ್ ಪಂದ್ಯದ ನಡುವೆ ಎರಡೂ ಕ್ರಿಕೆಟ್ ಮಂಡಳಿಗಳು ಈ ವಿಷಯಕ್ಕೆ ಸಂಬಂಧಿಸಿದಂತೆ ಸಭೆ ನಡೆಸಿವೆ ಎಂದು ವರದಿಯಾಗಿದೆ.

ಬಿಸಿಸಿಐ ಮತ್ತು ಪಿಸಿಬಿ ಅಧಿಕಾರಿಗಳು ಒಟ್ಟಾಗಿ ಚಾಂಪಿಯನ್ಸ್ ಟ್ರೋಫಿ 2025 ರ ಸಮಸ್ಯೆಯನ್ನು ಪರಿಹರಿಸಲು ಪ್ರಯತ್ನಿಸಿದ್ದಾರೆ ಎಂದು ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ. ವರದಿಯ ಪ್ರಕಾರ, ಎರಡೂ ಮಂಡಳಿಗಳು ಅಮೆರಿಕದಲ್ಲಿ ಸಭೆ ನಡೆಸಿದರೂ ಯಾವುದೇ ಫಲಿತಾಂಶ ಹೊರ ಬಂದಿಲ್ಲ ಎಂದು ಪಿಸಿಬಿ ಅಧಿಕಾರಿಗಳು ತಿಳಿಸಿದ್ದಾರೆ. ವರದಿಯ ಪ್ರಕಾರ, ಟೀಂ ಇಂಡಿಯಾವನ್ನು ಪಾಕಿಸ್ತಾನಕ್ಕೆ ಕಳುಹಿಸುವಂತೆ ಬಿಸಿಸಿಐಗೆ ಮನವರಿಕೆ ಮಾಡಲು ಪಿಸಿಬಿ ಎಲ್ಲಾ ಪ್ರಯತ್ನಗಳನ್ನು ಮಾಡಿದೆ ಆದರೆ ಈ ನಿರ್ಧಾರವು ಸಂಪೂರ್ಣವಾಗಿ ಸರ್ಕಾರದ ಮೇಲೆ ಅವಲಂಬಿತವಾಗಿದೆ ಎಂದು ಬಿಸಿಸಿಐ ಹೇಳಿದೆ. ಚಾಂಪಿಯನ್ಸ್ ಟ್ರೋಫಿ ಆಡಲು ಟೀಂ ಇಂಡಿಯಾ, ಪಾಕಿಸ್ತಾನಕ್ಕೆ ಹೋಗಬೇಕೇ ಅಥವಾ ಬೇಡವೇ ಎಂಬ ಅಂತಿಮ ನಿರ್ಧಾರವನ್ನು ಭಾರತ ಸರ್ಕಾರ ತೆಗೆದುಕೊಳ್ಳುತ್ತದೆ ಎಂದು ಬಿಸಿಸಿಐ ಸಭೆಯಲ್ಲಿ ತಿಳಿಸಿದೆ ಎಂದು ವರದಿಯಾಗಿದೆ.

## ಯಾರದು ಸೆಹ್ವಾಗ್? ಬಾಂಗ್ಲಾ ಆಟಗಾರ ಶಕೀಬ್ ಉದ್ಧಟತನ

ಬಾಂಗ್ಲಾದೇಶ ತಂಡದ ಮಾಜಿ ನಾಯಕ ಶಕೀಬ್ ಅಲ್ ಹಸನ್ ತಮ್ಮ ಆಲ್ ರೌಂಡರ್ ಆಟದಿಂದ ಕ್ರಿಕೆಟ್ ಲೋಕದಲ್ಲಿ ಎಷ್ಟು ಹೆಸರು ಮಾಡಿದ್ದಾರೋ, ತಮ್ಮ ವಿವಾದಾತ್ಮಕ ಹೇಳಿಕೆಗಳಿಂದಲೂ ಅಷ್ಟೇ ಸದಾ ಚರ್ಚೆಯಲ್ಲಿರುತ್ತಾರೆ. ಶಕೀಬ್ ಅಲ್ ಹಸನ್ ಸುತ್ತ ಒಂದಿಲ್ಲೊಂದು ವಿವಾದಗಳು ಸದಾ ತಳುಕು ಹಾಕಿಕೊಂಡಿರುತ್ತವೆ. ಅದು ಕ್ರಿಕೆಟ್ ಮೈದಾನವಾಗಿರಬಹುದು ಅಥವಾ ಮೈದಾನದಿಂದ ಹೊರಗಿರಬಹುದು. ಅಂಪೈರ್ ನಿರ್ಧಾರದ ವಿರುದ್ಧ ಗರಂ ಆಗಿ ಶಕೀಬ್, ವಿಕೆಟ್‌ಗಳನ್ನು ಕಿತ್ತು ಬಿಸಾಡಿದ್ದ ವಿಡಿಯೋ ಭಾರಿ ವೈರಲ್ ಆಗಿತ್ತು. ಆ ನಂತರ ಶಕೀಬ್ ನಡೆಯ ಬಗ್ಗೆ ಎಲ್ಲೆಡೆ ವಿರೋಧ ವ್ಯಕ್ತವಾಗಿತ್ತು. ಆ ಬಳಿಕ ವಿವಾದಗಳಿಂದ ಕೊಂಚ ಅಂತರ ಕಾಯ್ದುಕೊಂಡಿದ್ದ ಶಕೀಬ್ ಇದೀಗ ಟೀಂ ಇಂಡಿಯಾದ ಮಾಜಿ ಸ್ಫೋಟಕ ಬ್ಯಾಟ್ಸ್‌ಮನ್ ವೀರೇಂದ್ರ ಸೆಹ್ವಾಗ್ ಬಗ್ಗೆ ನೀಡಿರುವ ಅಸಡ್ಡೆಯ ಪ್ರತಿಕ್ರಿಯೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ.



**ಯಾರದು ಸೆಹ್ವಾಗ್; ಶಕೀಬ್ ಉದ್ಧಟತನ:** ವಾಸ್ತವವಾಗಿ ಜೂನ್ 13 ರಂದು ಬಾಂಗ್ಲಾದೇಶ ಮತ್ತು ನೆದರ್ಲ್ಯಾಂಡ್ಸ್ ನಡುವೆ ವಿಶ್ವಕಪ್ ಪಂದ್ಯ ನಡೆದಿತ್ತು. ಈ ಪಂದ್ಯವನ್ನು ಬಾಂಗ್ಲಾದೇಶ 25 ರನ್‌ಗಳಿಂದ ಗೆದ್ದುಕೊಂಡಿತು. ಈ ಪಂದ್ಯದಲ್ಲಿ ಶಕೀಬ್ ಅಲ್ ಹಸನ್ ಅದ್ಭುತ ಇನ್ನಿಂಗ್ಸ್ ಆಡುವ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

ಈ ಪಂದ್ಯದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶಕೀಬ್ ಬಳಿ ಭಾರತದ ಮಾಜಿ ಕ್ರಿಕೆಟಿಗ ವೀರೇಂದ್ರ ಸೆಹ್ವಾಗ್ ನೀಡಿದ್ದ ಹೇಳಿಕೆಯೊಂದನ್ನು ಉಲ್ಲೇಖಿಸಿ ವರದಿಗಾರರು ಶಕೀಬ್ ಬಳಿ ಅಭಿಪ್ರಾಯ ಕೇಳಿದರು.

ಇದಕ್ಕೆ ಅಸಡ್ಡೆಯ ಉತ್ತರ ನೀಡಿದ ಶಕೀಬ್, ''ಯಾರು'' ಎಂದು ಉತ್ತರಿಸಿದರು. ಇದೀಗ ಅದರ ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ.




## ಗುಂಪು ಹಂತದಲ್ಲೇ ಪಯಣ ಮುಗಿಸಿದ ಕಿವೀಸ್..!

ಮಾಜಿ ಚಾಂಪಿಯನ್ ಶ್ರೀಲಂಕಾ ತಂಡ 2024 ರ ಟಿ20 ವಿಶ್ವಕಪ್‌ನಿಂದ ಈಗಾಗಲೇ ಹೊರಬಿದ್ದಿದೆ. ಇದೀಗ ಗ್ರೂಪ್ ಹಂತದಲ್ಲೇ ಹೊರಬಿದ್ದ ತಂಡಗಳ ಪಟ್ಟಿಗೆ ಬಲಿಷ್ಠ ನ್ಯೂಜಿಲೆಂಡ್ ಹೆಸರು ಕೂಡ ಸೇರ್ಪಡೆಯಾಗಿದೆ. ಈ ಟೂರ್ನಿಯಲ್ಲಿ ನ್ಯೂಜಿಲೆಂಡ್ ತಂಡ ಕೇವಲ 2 ಪಂದ್ಯಗಳನ್ನಾಡಿದ್ದು, ಎರಡರಲ್ಲೂ ಸೋಲು ಕಂಡಿದೆ. ಈ ಸೋಲು ತಂಡಕ್ಕೆ ಗ್ರೂಪ್ ಹಂತದಿಂದ ಹೊರಬರುವ ದಾರಿ ತೋರಿಸಿದೆ.

ಟೂರ್ನಿಯಲ್ಲಿ ಕಿವೀಸ್ ಪಡೆ ಇನ್ನೂ 2 ಪಂದ್ಯಗಳನ್ನು ಆಡಬೇಕಿದೆ. ಆದರೆ ಸೂಪರ್-8 ತಲುಪುವ ತಂಡದ ಎಲ್ಲಾ ಮಾರ್ಗಗಳು ಮುಚ್ಚಿವೆ. ನ್ಯೂಜಿಲೆಂಡ್ ತಂಡದಲ್ಲಿ ಹಲವು ಅನುಭವಿ ಆಟಗಾರರಿದ್ದರೂ, ಇಡೀ ತಂಡ ನಿರಾಶಾದಾಯಕ ಪ್ರದರ್ಶನ ನೀಡಿತು. ಹೀಗಾಗಿಯೇ ಪಂದ್ಯಾವಳಿಯ ಮೊದಲ ಹಂತದಿಂದಲೇ ತಂಡ ಹೊರಗುಳಿಯಬೇಕಾಯಿತು.

ಇಲ್ಲಿಯವರೆಗೆ, ಭಾರತವನ್ನು ಹೊರತುಪಡಿಸಿ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ, ವೆಸ್ಟ್ ಇಂಡೀಸ್ ಮತ್ತು ಅಫ್ಘಾನಿಸ್ತಾನ ತಂಡಗಳು ಮುಂದಿನ ಸುತ್ತಿಗೆ ತಮ್ಮ ಸ್ಥಾನವನ್ನು ಖಚಿತಪಡಿಸಿವೆ. ಆದರೆ ನ್ಯೂಜಿಲೆಂಡ್‌ನಂತಹ ಬಲಿಷ್ಠ ತಂಡ ಸೂಪರ್-8 ರೇಸ್‌ನಿಂದ ಹೊರಗುಳಿದಿದೆ.

ಟಿ20 ವಿಶ್ವಕಪ್ ಇತಿಹಾಸದಲ್ಲಿ ಕಿವೀಸ್ ತಂಡ ಇದೇ ಮೊದಲ ಬಾರಿಗೆ ಗುಂಪು ಹಂತದಿಂದ ಹೊರಗುಳಿದಿದೆ. ಹಾಗೆಯೇ 1987 ರ ನಂತರ



ನ್ಯೂಜಿಲೆಂಡ್ ತಂಡವು ಇದೇ ಮೊದಲ ಬಾರಿಗೆ ಐಸಿಸಿ ವೈಟ್ ಬಾಲ್ ಪಂದ್ಯಾವಳಿಯಲ್ಲಿ ಗುಂಪು ಹಂತದಿಂದಲೇ ನಿರ್ಗಮಿಸಿದ ಬೇಡದ ದಾಖಲೆ ಬರೆದಿದೆ. ಇದಕ್ಕೂ ಮೊದಲು, 1987 ರ ಏಕದಿನ ವಿಶ್ವಕಪ್‌ನಲ್ಲಿ ನ್ಯೂಜಿಲೆಂಡ್ ಗುಂಪು ಹಂತದಿಂದಲೇ ಹೊರಬಿದ್ದಿತ್ತು. ಸಿ ಗುಂಪಿನಲ್ಲಿರುವ ನ್ಯೂಜಿಲೆಂಡ್ ತಂಡ ಆಡಿರುವ 2 ಪಂದ್ಯಗಳಲ್ಲಿ ಎರಡೂ ಪಂದ್ಯಗಳನ್ನು ಸೋತಿದೆ. ನ್ಯೂಜಿಲೆಂಡ್ ತನ್ನ ಮೊದಲ ಪಂದ್ಯವನ್ನು ಅಫ್ಘಾನಿಸ್ತಾನ ವಿರುದ್ಧ ಆಡಿತು. ಈ ಪಂದ್ಯದಲ್ಲಿ, ಇಡೀ ತಂಡ 15.2 ಓವರ್‌ಗಳಲ್ಲಿ 75 ರನ್‌ಗಳಿಗೆ ಆಲ್ ಔಟಾಗಿ 84 ರನ್‌ಗಳಿಂದ ಪಂದ್ಯವನ್ನು ಕಳೆದುಕೊಂಡಿತ್ತು. ಇದಾದ ಬಳಿಕ ಎರಡನೇ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ನೀಡಿದ 149 ರನ್ ಗುರಿ ಬೆನ್ನಟ್ಟಿದ ಕಿವೀಸ್ 9 ವಿಕೆಟ್ ನಷ್ಟಕ್ಕೆ 136 ರನ್ ಗಳಿಸಲಷ್ಟೇ ಶಕ್ತವಾಯಿತು. ನ್ಯೂಜಿಲೆಂಡ್ ಹೊರತಾಗಿ, ಸಿ ಗುಂಪಿನಲ್ಲಿ ಅಫ್ಘಾನಿಸ್ತಾನ, ವೆಸ್ಟ್ ಇಂಡೀಸ್, ಪಪುವಾ ನ್ಯೂಗಿನಿಯಾ ಮತ್ತು ಉಗಾಂಡಾ ತಂಡಗಳು ಸೇರಿವೆ.

## ಗಂಡಸರನ್ನು ನಂಬಲು ಭಯವಾಗುತ್ತದೆ



ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಕಳೆದ ವರ್ಷ ನಟಿಸಿದ 'ಅನಿಮಲ್' ಸಿನಿಮಾ ಸೂಪರ್ ಸಕ್ಸಸ್ ಕಂಡಿತ್ತು. ಈ ಚಿತ್ರದ ರಣ್‌ಬೀರ್ ಮತ್ತು ರಶ್ಮಿಕಾ ಪಾತ್ರದ ಬಗ್ಗೆ ಪಾಸಿಟಿವ್ ಮತ್ತು ನೆಗೆಟಿವ್ ಕಾಮೆಂಟ್ ಎರಡು ಬಂದಿತ್ತು. ಇದೀಗ ಸೋಷಿಯಲ್ ಮೀಡಿಯಾದಲ್ಲಿ ಹೀರೋ ರಣ್‌ವಿಜಯ್ ಅಕ್ರಮ ಸಂಬಂಧದ ಬಗ್ಗೆ ಅಭಿಮಾನಿಯೊಬ್ಬರು ಕಾಮೆಂಟ್ ಮಾಡಿ ಇಂತಹ ಗಂಡಸರನ್ನು ಕಂಡರೆ ಭಯವಾಗುತ್ತದೆ ಎಂದಿದ್ದಾರೆ. ಆ ಅಭಿಮಾನಿಗೆ ರಶ್ಮಿಕಾ ಸಲಹೆ ನೀಡಿದ್ದಾರೆ.

'ಅನಿಮಲ್' ಸಿನಿಮಾದಲ್ಲಿ ನಾಯಕ ರಣ್‌ವಿಜಯ್ ಸಿಂಗ್ ಪತ್ನಿ ಗೀತಾಂಜಲಿ ಆಗಿ ರಶ್ಮಿಕಾ ಮಿಂಚಿದ್ದರು. ಇನ್ನು ರಣ್‌ವಿಜಯ್ ಸಿಂಗ್ ಮದುವೆ ಬಳಿಕ ಜೊಯಾ ರಿಯಾಜ್ ಜೊತೆ ಅಕ್ರಮ ಸಂಬಂಧ ಕೂಡ ಇಟ್ಟುಕೊಂಡಿರುತ್ತಾರೆ. ಇದಕ್ಕೆ ಸಂಬಂಧಿಸಿ ವಿಡಿಯೋವೊಂದನ್ನು ನೆಟ್ಟಿಗರೊಬ್ಬರು ಹಂಚಿಕೊಂಡಿದ್ದು, ಒಬ್ಬ ಗಂಡಸನ್ನು ನಂಬುವುದಕ್ಕಿಂತ ಭಯಂಕರವಾದದ್ದು ಮತ್ತೊಂದಿಲ್ಲ ಎಂದು ಕ್ಯಾಪ್ಷನ್ ಕೊಟ್ಟಿದ್ದಾರೆ.


ಈ ಕಾಮೆಂಟ್ ರಶ್ಮಿಕಾ ಮಂದಣ್ಣ ಗಮನಕ್ಕೂ ಬಂದಿದ್ದರು, ನೀವು ಹೇಳಿದ್ದಕ್ಕೆ ಸಣ್ಣ ಕರೆಕ್ಷನ್. ಒಬ್ಬ ಅವಿವೇಕಿ ಗಂಡಸನ್ನು ನಂಬಲು ಭಯವಾಗಬೇಕು. ಆದರೆ ಇಲ್ಲಿ ಸಾಕಷ್ಟು ಜನ ಒಳ್ಳೆಯ ಗಂಡಸರು ಕೂಡ ಇದ್ದಾರೆ. ಅಂತಹವರನ್ನು ನಂಬಿದರೆ ಅದು ಬಹಳ ಸ್ಪೆಷಲ್ ಎಂದು ರಶ್ಮಿಕಾ ಸಲಹೆ ನೀಡಿದ್ದಾರೆ.

## ರಶ್ಮಿಕಾ ಕೈಬಿಟ್ಟ ಚಿತ್ರಕ್ಕೆ ಶ್ರೀಲೀಲಾ ನಾಯಕಿ

ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣ ನಾಯಕಿಯಾಗಿ ನಟಿಸಬೇಕಿದ್ದ ಚಿತ್ರಕ್ಕೆ ಕನ್ನಡದ 'ಕಿಸ್' ನಟಿ ಹೀರೋಯಿನ್ ಆಗಿದ್ದಾರೆ. ರಶ್ಮಿಕಾ ಕೈಬಿಟ್ಟ ಚಿತ್ರಕ್ಕೆ ಶ್ರೀಲೀಲಾ ನಾಯಕಿಯಾಗಿ ಎಂಟ್ರಿ ಕೊಟ್ಟಿದ್ದಾರೆ. ನಟಿಯ ರಾಯಲ್ ಎಂಟ್ರಿಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಶ್ರೀಲೀಲಾ ಹುಟ್ಟುಹಬ್ಬದ (ಜೂನ್.14) ಸಂಭ್ರಮದಲ್ಲಿದ್ದಾರೆ. ನಟಿಯ ಜನ್ಮದಿನದಂದೇ 'ರಾಬಿನ್ ಹುಡ್' ಚಿತ್ರಕ್ಕೆ ಕಿಸ್ ನಟಿ ಹೀರೋಯಿನ್ ಎಂದು ಸ್ಪೆಷಲ್ ಟೀಸರ್ ರಿಲೀಸ್ ಮಾಡಿ ಅಧಿಕೃತ ಘೋಷಣೆ ಮಾಡಿದ್ದಾರೆ. ಕೆಂಪು ಬಣ್ಣದ ಉಡುಗೆಯಲ್ಲಿ ಸ್ಟೈಲೀಶ್ ಆಗಿ ವಿಮಾನದಿಂದ ನಟಿ ಇಳಿದು ಬರುತ್ತಿರುವ ಟೀಸರ್ ರಿವೀಲ್ ಮಾಡಿ ನಟಿಗೆ ಚಿತ್ರತಂಡ ಶುಭಕೋರಿದೆ. ಇನ್ನೂ 'ರಾಬಿನ್ ಹುಡ್' ಚಿತ್ರದ ಮೂಲಕ ನಿತಿನ್‌ಗೆ 2ನೇ ಬಾರಿ ಹೀರೋಯಿನ್ ಆಗಿ ನಟಿಸುತ್ತಿದ್ದಾರೆ.

ಈ ಹಿಂದೆ ರಶ್ಮಿಕಾ ಮಂದಣ್ಣ ನಾಯಕಿ ಎಂದು ಘೋಷಿಸಿದ್ದರು. ಆದರೆ ಡೇಟ್ಸ್ ಹೊಂದಾಣಿಕೆಯಿಂದ ನಟಿ ಸಿನಿಮಾದಿಂದ ಹೊರಬಂದಿದ್ದರು. ಈಗ ಅದೇ ಚಿತ್ರಕ್ಕೆ ಕನ್ನಡದ 'ಕಿಸ್' ನಟಿ ಆಯ್ಕೆಯಾಗಿದ್ದಾರೆ. ಆಕ್ಷನ್ ಕಮ್ ಕಾಮಿಡಿಯಾಗಿರುವ ಈ ಸಿನಿಮಾವನ್ನು ವೆಂಕಿ ಎಂಬುವವರು ನಿರ್ದೇಶನ ಮಾಡುತ್ತಿದ್ದಾರೆ. ಈ ವರ್ಷ ಡಿಸೆಂಬರ್ 20ರಂದು ಸಿನಿಮಾ ರಿಲೀಸ್ ಆಗುತ್ತಿದೆ. ಅಂದಹಾಗೆ, ಸೈಫ್ ಅಲಿ ಖಾನ್ ಪುತ್ರನ ಬಾಲಿವುಡ್ ಚಿತ್ರಕ್ಕೆ ಶ್ರೀಲೀಲಾ ನಾಯಕಿಯಾಗಿದ್ದಾರೆ. ರವಿತೇಜ ಹೊಸ ಚಿತ್ರಕ್ಕೆ ನಟಿ ಫೈನಲ್ ಆಗಿದ್ದಾರೆ. ಇತ್ತೀಚೆಗೆ ಮುಹೂರ್ತ ಕಾರ್ಯಕ್ರಮ ಕೂಡ ಅದ್ದೂರಿಯಾಗಿ ನಡೆದಿದೆ.





## ರುಹೀರ್ ಜೊತೆಗಿನ ಮದುವೆ ನನ್ನ ಆಯ್ಕೆ ಟ್ರೋಲಿಗರ ಬಾಯಿ ಮುಚ್ಚಿಸಿದ ಸೋನಾಕ್ಷಿ

ಬಾಲಿವುಡ್ ನಟಿ ಸೋನಾಕ್ಷಿ ಸಿನ್ಹಾ ಮನೆಯಲ್ಲಿ ಮದುವೆ ಸಂಭ್ರಮ ಮನೆ ಮಾಡಿದೆ. ಝುಹೀರ್ ಇಕ್ಬಾಲ್ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡಲು ನಟಿ ಸಜ್ಜಾಗಿದ್ದಾರೆ. ನಟಿಯ ಮದುವೆ ಬಗ್ಗೆ ಟ್ರೋಲ್ ಮಾಡಿದವರಿಗೆ ಖಡಕ್ ಆಗಿ ಉತ್ತರಿಸಿದ್ದಾರೆ. ಬಾಲಿವುಡ್ ನಟ ಝುಹೀರ್ ಜೊತೆ 'ದಬಾಂಗ್' ನಟಿ ಮದುವೆ ಆಗುತ್ತಿದ್ದಾರೆ ಎನ್ನುತ್ತಿದ್ದಂತೆ ಸೋನಾಕ್ಷಿರನ್ನು ಭಾರೀ ಟ್ರೋಲ್ ಮಾಡಲಾಗಿದೆ. ಅದಕ್ಕೆ ನಟಿ, ನನ್ನ ಮದುವೆ ನನ್ನ ಆಯ್ಕೆ ಎಂದು ಖಡಕ್ ಆಗಿ ಉತ್ತರ ನೀಡಿ ಟ್ರೋಲಿಗರ ಬಾಯಿ ಮುಚ್ಚಿಸಿದ್ದಾರೆ. ಜೂನ್ 23ರಂದು ಝುಹೀರ್ ಜೊತೆ ಸೋನಾಕ್ಷಿ ಸಿನ್ಹಾ ಮದುವೆಯಾಗುತ್ತಿದ್ದಾರೆ. ಮುಂಬೈನಲ್ಲಿ ನಡೆಯಲಿರುವ ಈ ಮದುವೆ ಬಾಲಿವುಡ್ ನಟ-ನಟಿಯರಿಗೆ ಸೋನಾಕ್ಷಿ ಆಹ್ವಾನ ನೀಡಿದ್ದಾರೆ.

ಕಳೆದ 7 ವರ್ಷಗಳಿಂದ ಝುಹೀರ್ ಜೊತೆ ನಟಿ ಡೇಟಿಂಗ್ ಮಾಡುತ್ತಿದ್ದಾರೆ. ಈಗ ಹಸೆಮಣೆ ಏರೋಕೆ ನಟಿ ರೆಡಿಯಾಗಿದ್ದಾರೆ.



## ಗೌರಿಯ ಧೂಳ್ ಎಬ್ಬಿಸಾವ ಸಾಂಗ್

ಇಂದ್ರಜಿತ್ ಲಂಕೇಶ್ ನಿರ್ದೇಶನ, ನಾಯಕ ನಟ ಸಮರ್ಜಿತ್ ಲಂಕೇಶ್ ಹಾಗೂ ಸಾನ್ಯ ಅಯ್ಯರ್ ನಟಿಸಿರುವ ಗೌರಿ' ಚಿತ್ರದ ಧೂಳ್ ಎಬ್ಬಿಸಾವ..' ಹಾಡು ಹುಬ್ಬಳ್ಳಿಯಲ್ಲಿ ಅದ್ದೂರಿಯಾಗಿ ಬಿಡುಗಡೆಗೊಂಡಿದೆ. ಗಂಡು ಮೆಟ್ಟಿದ ನಾಡು ಹುಬ್ಬಳ್ಳಿಯ ಜವಾರಿ ಭಾಷಾ ಶೈಲಿಯ ಹಾಡಿಗೆ ನಾಯಕ ನಟ ಸಮರ್ಜಿತ್ ಲಂಕೇಶ್ ಹಾಗೂ ಖ್ಯಾತ ನಟಿ ಸಂಜನಾ ಆನಂದ್ ಜಬರ್ದಸ್ತ್ ಆಗಿ ನೃತ್ಯ ಮಾಡಿದ್ದಾರೆ.

ಅನಿರುದ್ಧ್ ಶಾಸ್ತ್ರೀ, ಅನನ್ಯ ಭಟ್ ಹಾಡಿರುವ ಈ ಹಾಡಿಗೆ ಶಿವು ಬೆರ್ಗಿಯವರು ಸಾಹಿತ್ಯ ಬರೆದು, ಸಂಗೀತ ಸಂಯೋಜಿಸಿದ್ದಾರೆ. ಭಜರಂಗಿ ಮೋಹನ್ ಈ ಹಾಡಿಗೆ ನೃತ್ಯ ಸಂಯೋಜಿಸಿದ್ದಾರೆ. ಈಗಾಗಲೇ ಧೂಳ್ ಎಬ್ಬಿಸಾವ..' ಸಾಂಗ್ ಸಖತ್ ವೈರಲ್ ಆಗುವ ಮೂಲಕ ಜನಮನ ಸೂರೆಗೊಂಡಿದೆ. ನೈಜ ಘಟನೆ ಆಧರಿಸಿ ದೊಡ್ಡ ಬಜೆಟ್‌ನಲ್ಲಿ ಸಿನಿಮಾ ಮಾಡಿದ್ದು, ಬೆಂಗಳೂರು, ಚಿಕ್ಕಮಗಳೂರು ಸೇರಿ ರಾಜ್ಯದ ವಿವಿಧೆಡೆ ಚಿತ್ರೀಕರಣ ಮಾಡಲಾಗಿದೆ. ಅಕ್ಕ ಗೌರಿಯ ಅವರ ಮೇಲಿನ ಅಭಿಮಾನದಿಂದ ಇಂದ್ರಜಿತ್ ಲಂಕೇಶ್ ಅವರು ಈ ಚಿತ್ರಕ್ಕೆ ಅಕ್ಕನ ಹೆಸರಿಟ್ಟಿದ್ದಾರೆ. ಯುವ ನಟ ಸಮರ್ಜಿತ್ ಲಂಕೇಶ್ ಹಾಗೂ ನಾಯಕಿ ಸಾನ್ಯಾ ಅಯ್ಯರ್ ಈ ಚಿತ್ರದ ಮೂಲಕ ಸ್ಯಾಂಡಲ್ ವುಡ್‌ಗೆ ಪ್ರವೇಶ ಮಾಡಿದ್ದಾರೆ. ಪ್ರಿಯಾಂಕ ಉಪೇಂದ್ರ, ವಸುಂಧರಾ ದಾಸ್, ಲೂಸ್ ಮಾದ ಯೋಗಿ, ಅಕುಲ್ ಬಾಲಾಜಿ, ಸಿಹಿ ಕಹಿ ಚಂದ್ರು, ಮುಖ್ಯಮಂತ್ರಿ ಚಂದ್ರು, ಕಾಂತಾರ ಖ್ಯಾತಿಯ ಮಾಲತಿ ಸುಧೀರ್, ಕೆಜಿಎಫ್ ಖ್ಯಾತಿಯ ಸಂಪತ್ ಮೈತ್ರೇಯ, ಚಂದುಗೌಡ ಸೇರಿದಂತೆ ಬಹುದೊಡ್ಡ ತಾರಾಗಣವೇ ಈ ಚಿತ್ರದಲ್ಲಿದೆ. ಇಂದ್ರಜಿತ್ ಲಂಕೇಶ್ ಅವರ ಪುತ್ರ ಸಮರ್ಜಿತ್ ಲಂಕೇಶ್ ಅವರು ಹೀರೊ ಆಗಿ ಚಿತ್ರರಂಗಕ್ಕೆ ಕಾಲಿಡುತ್ತಿದ್ದಾರೆ. ಇಂದ್ರಜಿತ್ ತಮ್ಮ ಮಗನ ಮೊದಲ ಸಿನಿಮಾಕ್ಕೆ 'ಗೌರಿ' ಎಂದು ಟೈಟಲ್ ಇಟ್ಟಿದ್ದಾರೆ. ಈ ಚಿತ್ರಕ್ಕೆ 'ಗೌರಿ' ಎನ್ನುವ ಶೀರ್ಷಿಕೆ ಇಟ್ಟಿದ್ದು ಏಕೆ ಎನ್ನುವ ಪ್ರಶ್ನೆಗೆ ಇಂದ್ರಜಿತ್ ಅವರು ಈ ಹಿಂದೆ ಉತ್ತರ ನೀಡಿದ್ದರು. ನನ್ನ ಅಕ್ಕನ ಮೇಲಿ ಪ್ರೀತಿ ಹಾಗೂ ಅಭಿಮಾನಕ್ಕಾಗಿ ಗೌರಿ ಎನ್ನುವ ಶೀರ್ಷಿಕೆ ಇಟ್ಟಿದ್ದೇನೆ ಎಂದಿದ್ದರು.

## ಸಿನಿಮಾ ಸುಲಭ ರಾಜಕೀಯ ಕಷ್ಟ



ಬಾಲಿವುಡ್ ನಟಿ ಕಂಗನಾ ರಣಾವತ್ ಸದ್ಯ ನೂತನ ಸಂಸದೆಯಾಗಿ ರಾಜಕೀಯದಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ ಸಿನಿಮಾ ಸುಲಭ, ರಾಜಕೀಯ ಕಷ್ಟವೆಂದು ಸಂದರ್ಶನವೊಂದರಲ್ಲಿ ನಟಿ ಮಾತನಾಡಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಮಂಡಿಯಲ್ಲಿ ಗೆದ್ದ ಕ್ವೀನ್ ಕಂಗನಾ ಇದೀಗ ನೂತನ ಸಂಸದೆಯಾಗಿ ಪಾಲಿಟಿಕ್ಸ್‌ನಲ್ಲಿ ಸದ್ದು ಮಾಡುತ್ತಿದ್ದಾರೆ. ಸಿನಿಮಾ, ರಾಜಕೀಯ ಕೆಲಸಗಳ ಬಗ್ಗೆ ಮುಕ್ತವಾಗಿ ನಟಿ ಮಾತನಾಡಿದ್ದಾರೆ.

ನನಗೆ ಇಷ್ಟ ಬಂದಿದ್ದನ್ನು ನಾನು ಮಾಡುತ್ತೇನೆ. ಚಿತ್ರೋದ್ಯಮದಲ್ಲಿ ನಟಿ. ಬರಹಗಾತಿ, ನಿರ್ದೇಶಕಿ ಮತ್ತು ನಿರ್ಮಾಪಕಿಯಾಗಿ ಗುರುತಿಸಿಕೊಂಡಿದ್ದೇನೆ. ನನ್ನ ರಾಜಕೀಯ ಜೀವನದಲ್ಲಿ ಇಲ್ಲಿನ ಜನರೊಂದಿಗೆ ನನ್ನನ್ನು ತೊಡಗಿಸಿಕೊಳ್ಳಬೇಕು. ರಾಜಕೀಯದಲ್ಲೇ ಮುಂದುವರೆಯುವ ಆಸೆಯಿದೆ ಎಂದು ನಟಿ ಮಾತನಾಡಿದ್ದಾರೆ.

ಹಾಗಂತ ನನ್ನ ಮೇಲೆ ಯಾವುದೇ ಒತ್ತಡವೂ ಇಲ್ಲ. ಆದರೂ ನನಗೆ ಅನಿಸಿದ ರೀತಿ ಸಿನಿಮಾದಲ್ಲಿ ನಟಿಯಾಗಿ ದುಡಿಯೋದು ರಾಜಕೀಯಕ್ಕಿಂತಲೂ ಸುಲಭ ಎಂದಿದ್ದಾರೆ. ರಾಜಕಾರಣ ವೈದ್ಯಕೀಯ ವೃತ್ತಿಯಂತೆ ಸ್ವಲ್ಪ ಕಷ್ಟಕರವಾಗಿದೆ ಎಂದಿದ್ದಾರೆ. ಆರೋಗ್ಯದಲ್ಲಿ ತೊಂದರೆಗೊಳಗಾದವರು ಮಾತ್ರ ನಿಮ್ಮ ಬಳಿ ಬರುತ್ತಾರೆ. ಆದರೆ ಸಿನಿಮಾ ನೋಡುವವರಿಗೆ ಮನರಂಜನೆಯ ಜೊತೆ ರಿಲೀಫ್ ಕೂಡ ಸಿಗಲಿದೆ. ಆದರೆ ರಾಜಕೀಯ ಹಾಗಲ್ಲ ಎಂದು ನಟಿ ಮಾತನಾಡಿದ್ದಾರೆ. ಅಂದಹಾಗೆ, ಕಂಗನಾ ನಟಿಸಿದ 'ಎಮರ್ಜೆನ್ಸಿ' ಸಿನಿಮಾ 2023ರಲ್ಲೇ ರಿಲೀಸ್ ಆಗಬೇಕಿತ್ತು. ಆದರೆ ಕಾರಣಾಂತರಗಳಿಂದ ಸಿನಿಮಾ ಮುಂದಕ್ಕೆ ಹೋಗಿತ್ತು. ಇದೀಗ 'ಎಮರ್ಜೆನ್ಸಿ' ರಿಲೀಸ್ ಡೇಟ್ ಅನೌನ್ಸ್ ಮಾಡುವವರೆಗೂ ಕಾದುನೋಡಬೇಕಿದೆ. ಮತ್ತೆ ಸಿನಿಮಾಗಳಲ್ಲಿ ನಟಿಸ್ತಾರಾ ಇಲ್ವಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಮೂಡಿದೆ.

## ಮಮ್ಮುಟ್ಟಿ ಸಿನಿಮಾದಲ್ಲಿ ನಟಿ ಸಮಂತಾ

ಸೌತ್ ನಟಿ ಸಮಂತಾ ಮಯೋಸಿಟೀಸ್ ಕಾಯಿಲೆಯಿಂದ ಬಳಲುತ್ತಿದ್ದರಿಂದ ನಟನೆಯಿಂದ ಅಂತರ ಕಾಯ್ದುಕೊಂಡಿದ್ದರು. ಇದೀಗ ಮತ್ತೆ ಹೊಸ ಸಿನಿಮಾಗಳಲ್ಲಿ ನಟಿಸಲು ರೆಡಿಯಾಗಿದ್ದಾರೆ. ಮಮ್ಮುಟ್ಟಿ ಸಿನಿಮಾದಲ್ಲಿ ನಟಿಸಲು ಸ್ಯಾಮ್ ಗೋಲ್ಡನ್ ಆಫರ್ ಗಿಟ್ಟಿಸಿಕೊಂಡಿದ್ದಾರೆ.

ಮಾಲಿವುಡ್ ಸೂಪರ್ ಸ್ಟಾರ್ ಮಮ್ಮುಟ್ಟಿ ಹೊಸ ಸಿನಿಮಾಗೆ ಸಮಂತಾ ನಾಯಕಿಯಾಗಿ ಆಯ್ಕೆ ಆಗಿದ್ದಾರೆ. ಅವರ ಪಾತ್ರಕ್ಕೆ ಪ್ರಾಮುಖ್ಯತೆ ಇದ್ದು, ನಟಿಸಲು ಗ್ರೀನ್ ಸಿಗ್ನಲ್ ನೀಡಿದ್ದಾರೆ. ಜೂನ್ 15ರಿಂದ ಚಿತ್ರೀಕರಣ ಪ್ರಾರಂಭವಾಗಲಿದೆ.

ಆಯಕ್ಷನ್ ಥ್ರಿಲರ್ ಕಥೆಯನ್ನು ಹೊಂದಿರುವ ಇನ್ನೂ ಹೆಸರಿಡದ ಚಿತ್ರಕ್ಕೆ ಖ್ಯಾತ ನಿರ್ದೇಶಕ ಗೌತಮ್ ವಾಸುದೇವ್ ಮೆನನ್ ನಿರ್ದೇಶನ ಮಾಡಲಿದ್ದಾರೆ ಎನ್ನಲಾಗಿದೆ. ಅಂದಹಾಗೆ, ಇತ್ತೀಚೆಗೆ ಮಮ್ಮುಟ್ಟಿ ಜೊತೆ ಜಾಹೀರಾತು ಚಿತ್ರೀಕರಣವೊಂದರಲ್ಲಿ ಸಮಂತಾ ನಟಿಸಿದ್ದರು. ಮುಮ್ಮುಟ್ಟಿ ಜೊತೆಗಿನ ಫೋಟೋ ಹಂಚಿಕೊಂಡು 'ನನ್ನ ನೆಚ್ಚಿನ ವ್ಯಕ್ತಿ' ಎಂದು ಬರೆದುಕೊಂಡಿದ್ದರು. ಈಗ ಅವರಿಗೆ ನಾಯಕಿಯಾಗಿ ನಟಿಸುತ್ತಿರೋದಕ್ಕೆ ಫ್ಯಾನ್ಸ್ ಸಂಭ್ರಮಿಸುತ್ತಿದ್ದಾರೆ. ಇಬ್ಬರ ಕಾಂಬಿನೇಷನ್ ಸಿನಿಮಾ ನೋಡೋಕೆ ಫ್ಯಾನ್ಸ್ ಕಾಯುತ್ತಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966